# ಪ್ರೇಷಿತರ ಕಾರ್ಯಕಲಾಪಗಳು

## ಮುನ್ನುಡಿ

"ಪ್ರೇಷಿತರ ಕರ್ಯಕಲಾಪಗಳು" ಎಂಬ ಬೈಬಲ್ಲಿನ ಈ ಭಾಗ ಲೂಕನು ಬರೆದ ಶುಭಸಂದೇಶವನ್ನು ಮುಂದುವರಿಸುತ್ತದೆ. ಯೇಸುಸ್ವಾಮಿಯ ಆದಿಭಕ್ತಾದಿಗಳು ಪವಿತ್ರಾತ್ಮರನ್ನು ಪಡೆದು ಜೆರುಸಲೇಮ್, ಜುದೇಯ, ಸಮಾರಿಯ ಹಾಗೂ ಅಂದಿನ ಜಗತ್ತಿನ ಕಟ್ಟಕಡೆಗೂ ಹೋಗಿ ಶುಭಸಂದೇಶವನ್ನು ಸಾರಿದರು. ಈ ಧರ್ಮಪ್ರಚಾರದ ವಿವರಣೆಯೇ ಈ ಕೃತಿಯ ಧ್ಯೇಯ. ಕ್ರೈಸ್ತಧರ್ಮ ಮೊತ್ತಮೊದಲು ಯೆಹೂದ್ಯರಲ್ಲಿ ಕಾಣಿಸಿಕೊಂಡಿತು. ಕ್ರಮೇಣ ವಿಶ್ವಧರ್ಮವಾಗಿ ಮಾರ್ಪಟ್ಟಿತು. ಇದು ರೋಮ್ ಚಕ್ರಾಧಿಪತ್ಯಕ್ಕೆ ಆತಂಕವಾಗಿರಲಿಲ್ಲ, ಅಪಾಯಕರವಾಗಿರಲಿಲ್ಲ. ಸನಾತನ ಯೆಹೂದ್ಯ ಧರ್ಮಕ್ಕಾದರೋ ಅದು ಸಿದ್ಧಮುಡಿಯಾಗಿತ್ತು, ಮುಗ್ಧ ಮುಕುಟವಾಗಿತ್ತು. ಈ ವಿಷಯವನ್ನು ಓದುಗರಿಗೆ ಮನದಟ್ಟು ಮಾಡಿಕೊಡಲು ಲೇಖಕನು ಯತ್ನಿಸಿದ್ದಾನೆ.

ಯೇಸುಸ್ವಾಮಿಯನ್ನು ಕುರಿತಾದ ಶುಭಸಂದೇಶವು ಹಬ್ಬಿಹರಡಿದಂತೆಲ್ಲಾ ಅಲ್ಲಲ್ಲೇ ಕ್ರೈಸ್ತಸಭೆಗಳನ್ನು ಸ್ಥಾಪಿಸಲಾಯಿತು. ಈ ದಿಸೆಯಲ್ಲಿ ಪ್ರೇಷಿತರು ಕೈಗೊಂಡ ಕಾರ್ಯಕಲಾಪಗಳನ್ನು ಮೂರು ಭಾಗವಾಗಿ ವಿಂಗಡಿಸಬಹುದು: 1. ಯೇಸುಸ್ವಾಮಿ ಸ್ವರ್ಗಾರೋಹಣವಾದ ನಂತರ ಜೆರುಸಲೇಮಿನಲ್ಲಿ ಕ್ರೈಸ್ತಧರ್ಮ ಪ್ರಚಾರದ ಆರಂಭ. 2. ಪಾಲೆಸ್ತೈನ್ ನಾಡಿನ ಇತರ ಭಾಗಗಳಿಗೆ ಅದರ ವಿಸ್ತರಣೆ. 3. ಭೂಮಧ್ಯ ಸಮುದ್ರದ ಜಗತ್ತಿಗೂ ರೋಮ್ ನಗರದವರೆಗೂ ಅದರ ಪ್ರಚಾರ.

ಈ ಪುಸ್ತಕದಲ್ಲಿ ಗಮನಿಸಬಹುದಾದ ಒಂದು ಮುಖ್ಯಾಂಶವೆಂದರೆ, ಪವಿತ್ರಾತ್ಮ ಅವರ ಚೈತನ್ಯ, 'ಪಂಚಾಶತ್ತಮ' ಹಬ್ಬದ ದಿನ ಪವಿತ್ರಾತ್ಮ ಅವರು ಭಕ್ತಾದಿಗಳ ಮೇಲೆ ಪ್ರಬಲವಾಗಿ ಇಳಿದು ಬರುತ್ತಾರೆ; ಪ್ರೇಷಿತರ ನಡೆನುಡಿಗಳಲ್ಲಿ ಅವರ ಪ್ರಭಾವವನ್ನು ಗುರುತಿಸಬಹುದಾಗಿದೆ; ಕ್ರೈಸ್ತ ಭಕ್ತಾದಿಗಳಿಗೂ ಅವರ ಮುಂದಾಳುಗಳಿಗೂ ಅವರೇ ಸ್ಫೂರ್ತಿದಾಯಕರು ಹಾಗೂ ಮಾರ್ಗದರ್ಶಕರು ಎಂಬುದು ಮನನವಾಗುತ್ತದೆ. ಇದರಲ್ಲಿ ಕೊಡಲಾಗಿರುವ ಹಲವಾರು ಉಪದೇಶ–ಉಪನ್ಯಾಸಗಳಲ್ಲಿ ಆದಿಕ್ರೈಸ್ತ ಸಂಕ್ಷಿಪ್ತವಾಗಿ ಅಡಗಿದೆ. ಅದು ಆದಿಭಕ್ತಾದಿಗಳಲ್ಲಿ ಹಾಗೂ ಅವರ ಅನ್ಯೋನ್ಯ ಜೀವನದಲ್ಲಿ ಎಂತಹ ಅಮೋಘ ಪರಿಣಾಮವನ್ನು ಬೀರಿತ್ತೆಂಬುದನ್ನು ಇದರಲ್ಲಿ ಬಣ್ಣಿಸಲಾಗಿರುವ ಐತಿಹಾಸಿಕ ಘಟನೆಗಳು ಎತ್ತಿತೋರಿಸುತ್ತವೆ.

**ಪರಿವಿಡಿ**


| | | |
|---|---|---|
| ಧರ್ಮಪ್ರಚಾರಕ್ಕೆ ಸಿದ್ಧತೆ | – | 1.1 – 1.26 |
| ಯೇಸುಸ್ವಾಮಿಯ ಅಂತಿಮ ಆಜ್ಞೆ ಹಾಗೂ ವಾಗ್ದಾನ | – | 1.1 – 1.14 |
| ಯೂದನ ಸ್ಥಾನಕ್ಕೆ ಮತ್ತೀಯನ ಆಯ್ಕೆ | – | 1.15 – 1.26 |
| ಜೆರುಸಲೇಮಿನಲ್ಲಿ ಶುಭಸಂದೇಶಕ್ಕೆ ಸಾಕ್ಷ್ಯ | – | 2.1 – 8.3 |
| ಜುದೇಯ ಹಾಗೂ ಸಮಾರಿಯದಲ್ಲಿ ಸಾಕ್ಷ್ಯ | – | 8.4 – 12.25 |
| ಪೌಲನ ಸೇವಾವೃತ್ತಿ | – | 13.1 – 28.31 |

| | | |
|---|---|---|
| ಧರ್ಮಪ್ರಚಾರಕ್ಕಾಗಿ ಕೈಗೊಂಡ ಮೊದಲನೆಯ ಪ್ರಯಾಣ | – | 14.1 – 14.28 |
| ಜೆರುಸಲೇಮಿನಲ್ಲಿ ಸಮ್ಮೇಳನ | – | 15.1 – 15.35 |
| ಧರ್ಮಪ್ರಚಾರಕ್ಕಾಗಿ ಕೈಗೊಂಡ ಎರಡನೆಯ ಪ್ರಯಾಣ | – | 15.36 – 18.22 |
| ಧರ್ಮಪ್ರಚಾರಕ್ಕಾಗಿ ಕೈಗೊಂಡ ಮೂರನೆಯ ಪ್ರಯಾಣ | – | 18.23 – 21.16 |
| ಜೆರುಸಲೇಮಿನಲ್ಲಿ ಸೆಜರೇಯದಲ್ಲಿ ಹಾಗೂ ರೋಮಿನಲ್ಲಿ ಪೌಲನ ಸೆರೆವಾಸ | – | 21.17 – 28.31 |

### ಪೀಠಿಕೆ

**1** [1-2]ಸನ್ಮಾನ್ಯ ಥೆಯೊಫಿಲನೇ, ಯೇಸುಸ್ವಾಮಿ ಸ್ವರ್ಗಕ್ಕೆ ಆರೋಹಣವಾದ ದಿನದವರೆಗೆ ಮಾಡಿದ
ಕಾರ್ಯಗಳನ್ನೂ ನೀಡಿದ ಬೋಧನೆಗಳನ್ನೂ ಕುರಿತು ನನ್ನ ಮೊದಲನೆಯ ಪುಸ್ತಕದಲ್ಲಿ ಬರೆದಿದ್ದೇನೆ.
ಸ್ವರ್ಗಾರೋಹಣಕ್ಕೆ ಮೊದಲು ಪ್ರೇಷಿತರನ್ನಾಗಿ ತಾವು ಆರಿಸಿಕೊಂಡಿದ್ದವರಿಗೆ ಪವಿತ್ರಾತ್ಮ ಅವರ ಮುಖಾಂತರ
ಉಪದೇಶ ಮಾಡಿದರು. [3]ತಮ್ಮ ಮರಣದ ನಂತರ ಅವರು ನಲವತ್ತು ದಿನಗಳವರೆಗೆ ಆ ಪ್ರೇಷಿತರಿಗೆ
ಪ್ರತ್ಯಕ್ಷರಾದರು. ತಾವು ಜೀವಂತವಾಗಿರುವುದನ್ನು ವಿವಿಧ ರೀತಿಯಲ್ಲಿ ಸ್ಪಷ್ಟಪಡಿಸಿದರು. ದೇವರ
ಸಾಮ್ರಾಜ್ಯವನ್ನು ಕುರಿತು ಅವರಿಗೆ ಬೋಧಿಸಿದರು. [4]ಒಮ್ಮೆ ಅವರೆಲ್ಲರೂ ಒಂದುಗೂಡಿದ್ದ ಸಂದರ್ಭದಲ್ಲಿ,
"ನೀವು ಜೆರುಸಲೇಮನ್ನು ಬಿಟ್ಟು ಹೋಗಬೇಡಿ; ನಾನು ನಿಮಗೆ ತಿಳಿಸಿದಂತೆ ನನ್ನ ಪಿತನು ವಾಗ್ದಾನ
ಮಾಡಿರುವ ವರಕ್ಕಾಗಿ ಕಾದುಕೊಂಡಿರಿ. [5]ಏಕೆಂದರೆ, ಯೊವಾನ್ನನು ನೀರಿನಿಂದ ಸ್ನಾನದೀಕ್ಷೆ ಕೊಡುತ್ತಿದ್ದನು;
ಆದರೆ ಇನ್ನು ಕೆಲವೇ ದಿನಗಳಲ್ಲಿ ನೀವು ಪವಿತ್ರಾತ್ಮ ಅವರಿಂದ ದೀಕ್ಷಾಸ್ನಾನ ಪಡೆಯುವಿರಿ," ಎಂದು
ಆಜ್ಞಾಪಿಸಿದರು.

### ಯೇಸುಸ್ವಾಮಿಯ ಸ್ವರ್ಗಾರೋಹಣ

6 ಮತ್ತೊಮ್ಮೆ ಯೇಸುಸ್ವಾಮಿ ತಮ್ಮೊಡನೆ ಇದ್ದಾಗ ಪ್ರೇಷಿತರು, "ಪ್ರಭೂ, ನೀವು ಇದೀಗಲೇ
ಇಸ್ರಯೇಲ್ ಜನರ ರಾಜ್ಯವನ್ನು ಪುನರ್ ಸ್ಥಾಪಿಸುವಿರೋ?" ಎಂದು ಕೇಳಿದರು. [7]ಯೇಸು ಪ್ರತ್ಯುತ್ತರವಾಗಿ,
"ಸಮಯ ಸಂದರ್ಭಗಳು ನನ್ನ ಪಿತನ ಸ್ವಾಧೀನದಲ್ಲಿವೆ. ಅವುಗಳನ್ನು ತಿಳಿಯುವುದು ನಿಮ್ಮ ಕೆಲಸವಲ್ಲ.
[8]ಆದರೆ ಪವಿತ್ರಾತ್ಮ ಅವರು ನಿಮ್ಮ ಮೇಲೆ ಬಂದಾಗ ನೀವು ಶಕ್ತಿಯುತರಾಗುವಿರಿ. ಆಗ ನೀವು
ಜೆರುಸಲೇಮಿನಲ್ಲೂ ಜುದೇಯದಲ್ಲೂ ಸಮಾರಿಯದಲ್ಲೂ ಭೂಲೋಕದ ಕಟ್ಟಕಡೆಯವರೆಗೂ ನನಗೆ
ಸಾಕ್ಷಿಗಳಾಗುವಿರಿ," ಎಂದರು. [9]ಇದನ್ನು ಹೇಳಿದ ಮೇಲೆ ಪ್ರೇಷಿತರು ನೋಡುತ್ತಿದ್ದಂತೆಯೇ, ಯೇಸು
ಸ್ವರ್ಗಾರೋಹಣವಾದರು. ಮೇಘವೊಂದು ಕವಿದು ಅವರನ್ನು ಕಣ್ಮರೆಮಾಡಿತು.

10 ಹೀಗೆ ಮೇಲೇರುತ್ತಿದ್ದ ಯೇಸುಸ್ವಾಮಿಯನ್ನು ನೋಡುತ್ತಿದ್ದ ಪ್ರೇಷಿತರ ದೃಷ್ಟಿ ಇನ್ನೂ ಆಕಾಶದತ್ತ
ನಾಟಿತ್ತು. ಆಗ ಬಿಳಿಯ ವಸ್ತ್ರ ಧರಿಸಿದ್ದ ವ್ಯಕ್ತಿಗಳಿಬ್ಬರು ಇದ್ದಕ್ಕಿದ್ದಂತೆ ಅವರ ಪಕ್ಕದಲ್ಲಿ ನಿಂತರು.
[11]"ಗಲಿಲೇಯದ ಜನರೇ, ನೀವು ಆಕಾಶವನ್ನು ದಿಟ್ಟಿಸಿ ನೋಡುತ್ತಾ ನಿಂತಿರುವುದೇಕೆ? ಸ್ವರ್ಗಾರೋಹಣರಾದ
ಈ ಯೇಸು ನಿಮ್ಮ ಬಳಿಯಿಂದ ಹೇಗೆ ಸ್ವರ್ಗಕ್ಕೆ ಏರಿ ಹೋಗುವುದನ್ನು ಕಂಡಿರೋ ಹಾಗೆಯೇ ಅವರು
ಹಿಂದಿರುಗಿ ಬರುವರು," ಎಂದು ಹೇಳಿದರು.

### ಮತ್ತೀಯನ ಆಯ್ಕೆ

12 ಅನಂತರ ಪ್ರೇಷಿತರು ಓಲಿವ್ ತೋಪಿನ ಗುಡ್ಡದಿಂದ ಸುಮಾರು ಒಂದು ಕಿಲೊಮೀಟರು
ದೂರದಲ್ಲಿರುವ ಜೆರುಸಲೇಮಿಗೆ ಹಿಂದಿರುಗಿದರು. [13]ಅವರು ಯಾರಾರೆಂದರೆ: ಪೇತ್ರ, ಯೊವಾನ್ನ,
ಯಕೋಬ, ಅಂದ್ರೆಯ, ಫಿಲಿಪ್ಪ, ತೋಮ, ಬಾರ್ತಲೊಮಾಯ, ಮತ್ತಾಯ, ಅಲ್ಫಾಯನ ಮಗ ಯಕೋಬ,
ದೇಶಾಭಿಮಾನಿ ಆದ ಸಿಮೋನ ಮತ್ತು ಯಕೋಬನ ಮಗ ಯೂದ. ಇವರೆಲ್ಲರು ಪಟ್ಟಣವನ್ನು ಸೇರಿದ್ದೇ,

ಮೇಲ್ಮಾಳಿಗೆಯಲ್ಲಿದ್ದ ತಮ್ಮ ಕೊಠಡಿಗೆ ಹೋದರು. 14ಅಲ್ಲಿ ಅವರು ಒಮ್ಮನಸ್ಸಿನಿಂದ ಪ್ರಾರ್ಥನೆಯಲ್ಲಿ
ನಿರತರಾಗುತ್ತಿದ್ದರು. ಕೆಲವು ಮಹಿಳೆಯರೂ ಯೇಸುವಿನ ತಾಯಿ ಮರಿಯಳೂ ಯೇಸುವಿನ ಸಹೋದರರೂ
ಅವರೊಡನೆ ಇದ್ದರು.

15 ಸ್ವಲ್ಪ ದಿನಗಳ ನಂತರ ಸುಮಾರು ನೂರ ಇಪ್ಪತ್ತು ಮಂದಿ ಭಕ್ತವಿಶ್ವಾಸಿಗಳು ಸಭೆಸೇರಿದ್ದರು.
ಆಗ ಪೇತ್ರನು ಎದ್ದು ನಿಂತು ಹೀಗೆಂದನು: 16"ಪ್ರಿಯ ಸಹೋದರರೇ, ಯೇಸುವನ್ನು ಬಂಧಿಸಿದವರಿಗೆ
ಮುಂದಾಳಾಗಿದ್ದವನು ಯೂದನು. ಅವನ ವಿಷಯವಾಗಿ ಪವಿತ್ರಾತ್ಮ ಅವರು ದಾವೀದನ ಮುಖಾಂತರ
ಮುಂತಿಳಿಸಿದ ವಾಕ್ಯ ನೆರವೇರಲೇಬೇಕಾಗಿತ್ತು. 17ಈ ಯೂದನು ನಮ್ಮಲ್ಲಿ ಒಬ್ಬನಾಗಿದ್ದವನು, ನಾವು
ಕೈಗೊಂಡಿರುವ ಸೇವೆಯಲ್ಲಿ ಭಾಗಿಯಾಗಲು ಆಯ್ಕೆಯಾಗಿದ್ದನು.

18 ("ಇವನು ತನ್ನ ನೀಚ ಕೃತ್ಯದಿಂದ ಪಡೆದ ಹಣದಿಂದ ಒಂದು ಹೊಲವನ್ನು ಕೊಂಡುಕೊಂಡ.
ಆದರೆ ಅದರಲ್ಲೇ ಪ್ರಾಣಕಳೆದುಕೊಂಡ. ತಲೆಕೆಳಗಾಗಿ ಬಿದ್ದು, ಹೊಟ್ಟೆ ಬಿರಿದು, ಕರುಳೆಲ್ಲಾ ಹೊರಬಂದು
ಸತ್ತುಹೋದ. 19ಈ ವಿಷಯ ಜೆರುಸಲೇಮಿನ ನಿವಾಸಿಗಳಿಗೆಲ್ಲಾ ತಿಳಿಯಿತು. ಆ ಜಮೀನನ್ನು ತಮ್ಮ
ಭಾಷೆಯಲ್ಲಿ 'ಅಖೆಲ್ದಾಮ' ಅಂದರೆ 'ನೆತ್ತರನೆಲ' ಎಂದು ಕರೆಯಲಾರಂಭಿಸಿದರು) 20'ಅವನ ಮನೆ
ಹಾಳಾಗಲಿ, ಅದು ಪಾಳುಬೀಳಲಿ,' ಎಂದೂ, 'ಅವನ ಸ್ಥಾನ ಇನ್ನೊಬ್ಬನದಾಗಲಿ,' ಎಂದೂ
ಕೀರ್ತನಾಗ್ರಂಥದಲ್ಲಿ ಬರೆಯಲಾಗಿದೆ.

21 "ಆದುದರಿಂದ ಪ್ರಭು ಯೇಸುವಿನ ಪುನರುತ್ಥಾನಕ್ಕೆ ನಮ್ಮೊಡನೆ ಸಾಕ್ಷಿಯಾಗಿರಲು ಒಬ್ಬನನ್ನು
ನಾವು ಆರಿಸಬೇಕಾಗಿದೆ. ಅಂಥವನು ಯೇಸುವಿನ ಸೇವಾಸಂಚಾರದಲ್ಲೆಲ್ಲಾ ನಮ್ಮೊಡನೆ ಇದ್ದವನಾಗಿರಬೇಕು.
22ಅಂದರೆ, ಸ್ನಾನಿಕ ಯೊವಾನ್ನನು ಸ್ನಾನದೀಕ್ಷೆಯನ್ನು ಕುರಿತು ಬೋಧಿಸಿದ ದಿನದಿಂದ ಯೇಸುವಿನ
ಸ್ವರ್ಗಾರೋಹಣದ ದಿನದವರೆಗೂ ನಮ್ಮ ಸಂಗಡ ಇದ್ದವನಾಗಿರಬೇಕು."

23 ಆಗ ಬಾರ್ನಬ ಎಂದು ಹೆಸರಿಸಲಾದ ಜೋಸೆಫ್ (ಇವನನ್ನು ಯುಸ್ತ ಎಂದೂ
ಕರೆಯುತ್ತಿದ್ದರು.) ಮತ್ತು ಮತ್ತೀಯ ಎಂಬ ಇಬ್ಬರ ಹೆಸರನ್ನು ಸೂಚಿಸಲಾಯಿತು. 24–25ಅನಂತರ ಎಲ್ಲರೂ
ಪ್ರಾರ್ಥನೆ ಮಾಡುತ್ತಾ, "ಸರ್ವೇಶ್ವರಾ, ನೀವು ಸರ್ವರ ಅಂತರಂಗಗಳನ್ನು ಅರಿತಿರುವಿರಿ. ಯೂದನು ತನ್ನ
ಪ್ರೇಷಿತ ಸ್ಥಾನದಿಂದ ಭ್ರಷ್ಟನಾದ, ತನಗೆ ತಕ್ಕುದಾದ ಸ್ಥಳಕ್ಕೆ ತೆರಳಿದ. ಈ ಸೇವಾಸ್ಥಾನಕ್ಕೆ ಇವರಿಬ್ಬರಲ್ಲಿ ನೀವು
ಆರಿಸಿದವನು ಯಾರೆಂದು ನಮಗೆ ತೋರಿಸಿರಿ," ಎಂದರು. ಅನಂತರ ಚೀಟುಹಾಕಿದರು. ಅದು ಮತ್ತೀಯನ
ಪರವಾಗಿತ್ತು. ಅವನನ್ನು ಹನ್ನೊಂದು ಮಂದಿಯೊಡನೆ ಪ್ರೇಷಿತಸ್ಥಾನಕ್ಕೆ ಸೇರಿಸಿಕೊಳ್ಳಲಾಯಿತು.

## ಪವಿತ್ರಾತ್ಮರ ಆಗಮನ

**2** ಪಂಚಾಶತ್ತಮ ಹಬ್ಬದ ದಿನ ಭಕ್ತವಿಶ್ವಾಸಿಗಳೆಲ್ಲರೂ ಒಂದು ಸ್ಥಳದಲ್ಲಿ ಸಭೆಸೇರಿದ್ದರು. 2ಥಕ್ಕನೆ ಬಲವಾದ
ಬಿರುಗಾಳಿ ಬೀಸುತ್ತಿದೆಯೋ ಎಂಬಂತೆ ಶಬ್ದವೊಂದು ಆಕಾಶದಿಂದ ಕೇಳಿ ಬಂತು. ಅದು ಅವರು ಕುಳಿತಿದ್ದ
ಮನೆಯಲ್ಲೆಲ್ಲಾ ಮಾರ್ದನಿಸಿತು. 3ಅಲ್ಲದೆ ಅಗ್ನಿಜ್ವಾಲೆಗಳು ಕೆನ್ನಾಲಿಗೆಯಂತೆ ಕಾಣಿಸಿಕೊಂಡವು. ಅವು ವಿಂಗಡ
ವಿಂಗಡವಾಗಿ ಪ್ರತಿಯೊಬ್ಬರ ಮೇಲೂ ನೆಲೆಸಿದವು. 4ಅವರೆಲ್ಲರೂ ಪವಿತ್ರಾತ್ಮಭರಿತರಾದರು. ಆ ಆತ್ಮ
ಪ್ರೇರಣೆಯಿಂದ ಬೇರೆ ಬೇರೆ ಭಾಷೆಗಳಲ್ಲಿ ಮಾತನಾಡತೊಡಗಿದರು.

5 ಅದೇ ಸಮಯದಲ್ಲಿ ವಿಶ್ವದ ಎಲ್ಲಾ ದೇಶಗಳಿಂದ ಧರ್ಮನಿಷ್ಠ ಯೆಹೂದ್ಯರು ಜೆರುಸಲೇಮಿಗೆ
ಬಂದು ತಂಗಿದರು. 6ಆ ಶಬ್ದವನ್ನು ಕೇಳಿದ್ದೇ, ಜನರ ದೊಡ್ಡ ಗುಂಪು ಸೇರಿತು. ಭಕ್ತಾದಿಗಳು
ಮಾತನಾಡುತ್ತಿದ್ದುದನ್ನು ತಮ್ಮ ತಮ್ಮ ಭಾಷೆಗಳಲ್ಲೇ ಕೇಳಿದ ಜನರು ದಿಗ್ಭ್ರಮೆಗೊಂಡರು. 7ಅವರೆಲ್ಲರೂ
ವಿಸ್ಮಿತರಾಗಿ, "ಹೀಗೆ ಮಾತನಾಡುವ ಇವರೆಲ್ಲಾ ಗಲಿಲೇಯದವರಲ್ಲವೇ? 8ನಮ್ಮಲ್ಲಿ ಪ್ರತಿಯೊಬ್ಬನೂ ಇವರು
ಮಾತನಾಡುತ್ತಿರುವುದನ್ನು ತನ್ನ ತನ್ನ ಮಾತೃಭಾಷೆಯಲ್ಲೇ ಕೇಳುತ್ತಿರುವುದು ಹೇಗೆ? 9ನಮ್ಮಲ್ಲಿ
ಪಾರ್ಥಿಯರು, ಮೀಡಿಯರು ಮತ್ತು ಎಲಾಮಿನವರೂ, ಮೆಸಪೊಟೇಮಿಯ, ಜುದೇಯ ಮತ್ತು
ಕಪ್ಪದೋಸಿಯದವರೂ ಇದ್ದಾರೆ. ಪೊಂತ ಮತ್ತು ಏಷ್ಯದವರೂ, 10ಫ್ರಿಜಿಯ ಮತ್ತು ಪಾಂಫಿಲಿಯದವರೂ

ಇದ್ದಾರೆ. ಈಜಿಪ್ಟ್ ಮತ್ತು ಸಿರೇನಿನ ಬಳಿಯಲ್ಲಿರುವ ಲಿಬಿಯ ಪ್ರಾಂತ್ಯದವರೂ ಸೇರಿದ್ದಾರೆ. ಅದಲ್ಲದೆ ನಮ್ಮಲ್ಲಿ ಕೆಲವರು ರೋಮ್‌ನಿಂದ ಬಂದಿದ್ದಾರೆ. [11]ಯೆಹೂದ್ಯರೂ ಯೆಹೂದ್ಯ ಧರ್ಮಾವಲಂಬಿಗಳೂ ಆದ ಅನ್ಯರೂ, ಕ್ರೇಟ ಮತ್ತು ಅರೇಬಿಯದವರೂ ಇಲ್ಲಿದ್ದಾರೆ. ದೇವರ ಮಹತ್ಕಾರ್ಯಗಳನ್ನು ಕುರಿತು ಇವರು ಮಾತನಾಡುತ್ತಿರುವುದನ್ನು ನಾವೆಲ್ಲರೂ ನಮ್ಮ ನಮ್ಮ ಭಾಷೆಗಳಲ್ಲೇ ಕೇಳುತ್ತಿದ್ದೇವಲ್ಲಾ!" ಎಂದು ಅಚ್ಚರಿಯನ್ನು ವ್ಯಕ್ತಪಡಿಸಿದರು. [12]ಸರ್ವರೂ ಭ್ರಮೆಗೊಂಡು, ಇದರ ಅರ್ಥವಾದರೂ ಏನೆಂದು ಒಬ್ಬರನ್ನು ಒಬ್ಬರು ವಿಸ್ಮಯದಿಂದ ವಿಚಾರಿಸತೊಡಗಿದರು.

13 ಕೆಲವರಾದರೋ, "ಇವರು ಕುಡಿದು ಮತ್ತರಾಗಿದ್ದಾರೆ," ಎಂದು ಪರಿಹಾಸ್ಯ ಮಾಡಿದರು.

### ಪೇತ್ರನ ಪ್ರಬೋಧನೆ

14 ಆಗ ಪೇತ್ರನು ಇತರ ಹನ್ನೊಂದು ಮಂದಿ ಪ್ರೇಷಿತರೊಡನೆ ಎದ್ದುನಿಂತು, ಜನ ಸಮೂಹವನ್ನು ಉದ್ದೇಶಿಸಿ, ಗಟ್ಟಿಯಾದ ಧ್ವನಿಯಿಂದ ಹೀಗೆಂದು ಪ್ರಬೋಧಿಸಿದನು: "ಯೆಹೂದ್ಯ ಸ್ವಜನರೇ, ಜೆರುಸಲೇಮಿನ ಸಕಲ ನಿವಾಸಿಗಳೇ, ನನಗೆ ಕಿವಿಗೊಡಿ. ಈ ಘಟನೆಯ ಅರ್ಥ ನಿಮಗೆ ಮನದಟ್ಟಾಗಲಿ. [15]ನೀವು ಭಾವಿಸಿದಂತೆ ಈ ಜನರು ಕುಡಿದು ಮತ್ತರಾಗಿಲ್ಲ; ಈಗ ಇನ್ನೂ ಬೆಳಿಗ್ಗೆ ಒಂಭತ್ತುಗಂಟೆ. [16]ಈ ಘಟನೆಯನ್ನು ಕುರಿತು ಪ್ರವಾದಿ ಯೋವೇಲ ಹೇಳಿರುವುದನ್ನು ಕೇಳಿ: ದೇವರು ಹೀಗೆನ್ನುತ್ತಾರೆ:

17 ಸುರಿಸುವೆನು ಸರ್ವರ ಮೇಲೂ
ಎನ್ನಾತ್ಮವನು ಅಂತಿಮ ದಿನಗಳಲಿ;
ಪ್ರವಾದಿಸುವರಾಗ ನಿಮ್ಮ ಕುವರ ಕುವರಿಯರು;
ದಿವ್ಯದರ್ಶನ ಪಡೆವರು ನಿಮ್ಮ ಯುವಜನರು
ಕನಸು ಕಾಣುವರು ನಿಮ್ಮ ವಯೋವೃದ್ಧರು.
18 ಸುರಿಸುವೆನು ಎನ್ನ ದಾಸದಾಸಿಯರ ಮೇಲೂ
ಎನ್ನಾತ್ಮವನು ಆ ದಿನಗಳಲಿ,
ಪ್ರವಾದಿಸುವರಾಗ, ಅವರು;
19 ಎಸಗುವೆನು ಆಗಸದಲಿ ಅದ್ಭುತಗಳನು,
ಮಾಡುವೆನು ಭುವಿಯಲಿ
ಮಹತ್ಕಾರ್ಯಗಳನು;
ಕಾಣುವುದಾಗ ಕಿಚ್ಚು, ಕಪ್ಪೊಗೆ, ನೆತ್ತರು.
20 ರವಿ ಕಪ್ಪಾಗುವನು, ಶಶಿ ಕಡುಗೆಂಪಾಗುವನು.
ಪ್ರಭುವಿನ ಮಹಿಮಾದಿನಕ್ಕೆ ಮುನ್ನ
ಸಂಭವಿಸುವುವು ಇವೆಲ್ಲಾ.
21 ಪ್ರಭುವಿನ ನಾಮಸ್ಮರಣೆ ಮಾಡುವವರೆಲ್ಲ
ಪಡೆಯುವರಾಗ ಜೀವೋದ್ಧಾರ.

22 "ಇಸ್ರಯೇಲ್ ಬಾಂಧವರೇ, ನನ್ನ ಮಾತುಗಳನ್ನು ಆಲಿಸಿರಿ. ನಜರೇತಿನ ಯೇಸುಸ್ವಾಮಿ ದೈವನಿಯಮಿತ ವ್ಯಕ್ತಿ ಎಂಬುದನ್ನು ದೇವರೇ ಅವರ ಮುಖಾಂತರ ನಡೆಸಿದ ಅದ್ಭುತ ಕಾರ್ಯಗಳಿಂದ, ಮಹತ್ಕಾರ್ಯಗಳಿಂದ ಹಾಗೂ ಸೂಚಕಕಾರ್ಯಗಳಿಂದ ನಿಮಗೆ ಸ್ಪಷ್ಟಪಡಿಸಲಾಗಿದೆ. ಇದು ನಿಮಗೆ ತಿಳಿದಿರುವ ವಿಷಯ.
[23]ದೇವರು ತಮ್ಮ ಸ್ಥಿರಸಂಕಲ್ಪದಲ್ಲಿ ಹಾಗೂ ಭವಿಷ್ಯತ್ ಜ್ಞಾನದಲ್ಲಿ ಯೇಸು ನಿಮ್ಮ ವಶವಾಗಬೇಕೆಂದು ಈ ಮೊದಲೇ ನಿರ್ಧರಿಸಿದ್ದರು. ನೀವು ಅವರನ್ನು ಪರಕೀಯರ ಕೈಗೊಪ್ಪಿಸಿ, ಶಿಲುಬೆಗೆ ಹಾಕಿಸಿ, ಕೊಲ್ಲಿಸಿದಿರಿ.
[24]ಆದರೆ ದೇವರು ಅವರನ್ನು ಮೃತ್ಯುಶೂಲೆಯಿಂದ ಬಿಡಿಸಿ ಎಬ್ಬಿಸಿದರು. ಕಾರಣ – ಅವರನ್ನು ಬಂಧಿಸಿಡುವುದು ಮೃತ್ಯುವಿಗೆ ಅಸಾಧ್ಯವಾಗಿತ್ತು.
[25]ಅವರನ್ನು ಕುರಿತು ದಾವೀದನು ಹೀಗೆಂದಿದ್ದಾನೆ:

'ಪ್ರಭು ಇಹನು ಎನ್ನ ಕಣ್ಮುಂದೆ ಸತತ

ನಾ ಹೆದರದಂತೆ ಆತನಿಹನು ಎನ್ನ ಹತ್ತಿರ.
26 ಇದಕಾರಣ ಹರ್ಷಿಸಿತು ಎನ್ನ ಹೃದಯ
ತುಳುಕಿತು ಸಂತಸ ಎನ್ನ ನಾಲಗೆಯಿಂದ.
ನಂಬಿ ನಿರೀಕ್ಷೆಯಿಂದಿರುವುದು ಎನ್ನ
ಮರ್ತ್ಯದೇಹ.
27 ಏಕೆನೆ, ದೂಡಲಾರೆ ಪಾತಾಳಕ್ಕೆ ನೀನೆನ್ನ
ಜೀವಾತ್ಮವನು,
ಕೊಳೆಯಬಿಡಲಾರೆ ನೀನೊಲಿದಾತನನು.
28 ಅಮರ ಜೀವಮಾರ್ಗವನೆನಗೆ
ತೋರ್ಪಡಿಸಿದೆ
ನಿನ್ನ ಶ್ರೀ ಸಾನ್ನಿಧ್ಯ ಸಂತಸದಿಂದೆನ್ನ
ಭರಿತನಾಗಿಸುವೆ.'

29 "ಪ್ರಿಯ ಸಹೋದರರೇ, ಪಿತಾಮಹ ದಾವೀದರಸನ ವಿಷಯದಲ್ಲಿ ನಾನು ನಿಮಗೆ ಸ್ಪಷ್ಟವಾಗಿ
ಮಾತನಾಡಬೇಕಾಗಿದೆ. ಆತನು ಮೃತನಾದನು; ಆತನನ್ನು ಸಮಾಧಿಮಾಡಲಾಯಿತು. ನಿಮಗೆಲ್ಲರಿಗೆ
ತಿಳಿದಿರುವಂತೆ ಆತನ ಸಮಾಧಿ ನಮ್ಮ ಮಧ್ಯೆ ಇಂದಿನವರೆಗೂ ಇದೆ.
30 ಆತನೊಬ್ಬ ಪ್ರವಾದಿಯೂ ಆಗಿದ್ದ.
ತನ್ನ ಸಂತತಿಯಲ್ಲೇ ಒಬ್ಬನನ್ನು ಅರಸನನ್ನಾಗಿ ಮಾಡುವುದಾಗಿ ದೇವರು ಮಾಡಿದ್ದ ವಾಗ್ದಾನವನ್ನು ಆತನು
ಮರೆತಿರಲಿಲ್ಲ.
31 ಹೀಗಿರುವಲ್ಲಿ ಕ್ರಿಸ್ತಯೇಸುವಿನ ಪುನರುತ್ಥಾನವನ್ನು ಮುಂಚಿತವಾಗಿ ಅರಿತು ಅದರ
ವಿಷಯವಾಗಿ ಹೀಗೆಂದು ಪ್ರವಾದನೆ ಮಾಡಿದ:
'ಆತನನನ್ನು ಪಾತಾಳಕ್ಕೆ ದೂಡಲಿಲ್ಲ;
ದೇಹ ಕೊಳೆತುಹೋಗಲು ಬಿಡಲಿಲ್ಲ.'
32 ಈ ಯೇಸುವನ್ನೇ ದೇವರು ಪುನರುತ್ಥಾನಗೊಳಿಸಿದ್ದಾರೆ; ಈ ಘಟನೆಗೆ ನಾವೆಲ್ಲರೂ ಸಾಕ್ಷಿಗಳಾಗಿದ್ದೇವೆ.
33 ಯೇಸು, ದೇವರ ಬಲಪಾರ್ಶ್ವಕ್ಕೆ ಆರೋಹಿತರಾದರು. ಅವರು ತಮ್ಮ ಪಿತ ವಾಗ್ದಾನ ಮಾಡಿದ ಪವಿತ್ರಾತ್ಮ
ಅವರನ್ನು ಪಡೆದು, ನಮ್ಮ ಮೇಲೆ ಸುರಿಸಿದ ಆ ವರವನ್ನೇ ನೀವು ಈಗ ನೋಡುತ್ತಿರುವುದು ಹಾಗೂ
ಕೇಳುತ್ತಿರುವುದು.
34–35 ಸ್ವರ್ಗಾರೋಹಣ ಆದವನು ದಾವೀದನಲ್ಲ; ಆದರೂ ಆತನು ಹೀಗೆಂದಿದ್ದಾನೆ:
'ನಿನ್ನ ಶತ್ರುಗಳನ್ನು ನಾನು
ನಿನ್ನ ಪಾದಪೀಠವಾಗಿ ಮಾಡುವತನಕ
ನನ್ನ ಬಲಗಡೆಯಲ್ಲಿ ಆಸೀನನಾಗಿರು
ಎಂದು ನನ್ನ 'ಪ್ರಭು'ವಿಗೆ ಸರ್ವೇಶ್ವರ
ಹೇಳಿದ್ದಾರೆ.'

36 "ಇಸ್ರಯೇಲಿನ ಜನರೆಲ್ಲರಿಗೆ ಇದು ನಿಸ್ಸಂದೇಹವಾಗಿ ತಿಳಿದಿರಲಿ: ನೀವು ಶಿಲುಬೆಗೇರಿಸಿದ ಈ ಯೇಸುಸ್ವಾಮಿಯನ್ನೇ ದೇವರು ಪ್ರಭುವನ್ನಾಗಿಯೂ ಅಭಿಷಿಕ್ತ ಲೋಕೋದ್ಧಾರಕನನ್ನಾಗಿಯೂ ನೇಮಿಸಿದ್ದಾರೆ."

37 ಇದನ್ನು ಕೇಳಿದ ಆ ಜನರ ಹೃದಯದಲ್ಲಿ ಅಲಗು ನೆಟ್ಟಂತಾಯಿತು. ಅವರು ಪ್ರೇಷಿತರನ್ನು ಉದ್ದೇಶಿಸಿ, "ಸಹೋದರರೇ, ಈಗ ನಾವು ಮಾಡಬೇಕಾದುದು ಏನು?" ಎಂದು ಕೇಳಿದರು.

38 ಅದಕ್ಕೆ ಪೇತ್ರನು, "ನಿಮ್ಮಲ್ಲಿ ಪ್ರತಿ ಒಬ್ಬನೂ ಪಶ್ಚಾತ್ತಾಪಪಟ್ಟು, ಪಾಪಕ್ಕೆ ವಿಮುಖನಾಗಿ ದೇವರಿಗೆ
ಅಭಿಮುಖನಾಗಲಿ; ಯೇಸುಕ್ರಿಸ್ತರ ನಾಮದಲ್ಲಿ ದೀಕ್ಷಾಸ್ನಾನವನ್ನು ಪಡೆಯಲಿ. ಇದರಿಂದ ನೀವು
ಪಾಪಕ್ಷಮೆಯನ್ನು ಪಡೆಯುವಿರಿ; ದೇವರ ವರವಾದ ಪವಿತ್ರಾತ್ಮರನ್ನು ಹೊಂದುವಿರಿ.
39 ಈ ವಾಗ್ದಾನವನ್ನು
ನಿಮಗೆ ಮಾತ್ರವಲ್ಲ, ನಿಮ್ಮ ಸಂತತಿಗೂ ದೂರ ಇರುವ ಎಲ್ಲರಿಗೂ ಮತ್ತು ಸರ್ವೇಶ್ವರನಾದ ದೇವರು ತಮ್ಮತ್ತ
ಆಹ್ವಾನಿಸುವ ಪ್ರತಿಯೊಬ್ಬನಿಗೂ ಮಾಡಲಾಗಿದೆ," ಎಂದನು.

40 ಪೇತ್ರನು ಅವರಿಗೆ ಹಲವಾರು ವಿಧದಲ್ಲಿ ಮನವಿಮಾಡಿದನು. 'ಈ ದುಷ್ಟ ಪೀಳಿಗೆಯಿಂದ ನಿಮ್ಮನ್ನು ಸಂರಕ್ಷಿಸಿಕೊಳ್ಳಿ,' ಎಂದು ಎಚ್ಚರಿಸಿದನು. [41]ಅವನ ಬೋಧನೆಯನ್ನು ಅಂಗೀಕರಿಸಿದ ಅನೇಕರು ದೀಕ್ಷಾಸ್ನಾನ ಪಡೆದರು. ಅಂದೇ ಸುಮಾರು ಮೂರು ಸಾವಿರ ಜನರು ಸಭೆಯನ್ನು ಸೇರಿಕೊಂಡರು. [42]ಅಂದಿನಿಂದ ಅವರು ಪ್ರೇಷಿತರ ಬೋಧನೆಯನ್ನು ಕೇಳುವುದರಲ್ಲಿ ನಿರತರಾಗಿದ್ದರು; ಅನ್ಯೋನ್ಯವಾಗಿ ಬಾಳುತ್ತಿದ್ದರು; ರೊಟ್ಟಿ ಮುರಿಯುವ ಸಹಭೋಜನದಲ್ಲಿ ಪಾಲ್ಗೊಳ್ಳುತ್ತಿದ್ದರು ಹಾಗೂ ಪ್ರಾರ್ಥನಾಕೂಟಗಳಲ್ಲಿ ಭಾಗವಹಿಸುತ್ತಿದ್ದರು.

**ಭಕ್ತರ ಸಭಾಜೀವನ**

43 ಪ್ರೇಷಿತರ ಮುಖಾಂತರ ಅನೇಕ ಅದ್ಭುತ ಕಾರ್ಯಗಳೂ ಸೂಚಕಕಾರ್ಯಗಳೂ ನಡೆಯುತ್ತಿದ್ದವು. ಇವನ್ನು ಕಂಡು ಜನರು ಭಯಭ್ರಾಂತರಾಗುತ್ತಿದ್ದರು. [44]ಭಕ್ತವಿಶ್ವಾಸಿಗಳೆಲ್ಲರೂ ಅನ್ಯೋನ್ಯವಾಗಿ ಬಾಳುತ್ತಿದ್ದರು. ತಮ್ಮಲ್ಲಿದ್ದುದನ್ನು ಹುದುವಾಗಿ ಹಂಚಿಕೊಳ್ಳುತ್ತಿದ್ದರು. [45]ತಮ್ಮ ತಮ್ಮ ಆಸ್ತಿಪಾಸ್ತಿಯನ್ನು ಮಾರಿ ಬಂದ ಹಣವನ್ನು ಅವರವರ ಅವಶ್ಯಕತೆಗೆ ತಕ್ಕಂತೆ ಎಲ್ಲರಿಗೂ ಹಂಚುತ್ತಿದ್ದರು. [46]ದಿನಂಪ್ರತಿ ಅವರು ಒಮ್ಮನಸ್ಸಿನಿಂದ ದೇವಾಲಯದಲ್ಲಿ ಸಭೆ ಸೇರುತ್ತಿದ್ದರು. ತಮ್ಮ ಮನೆಗಳಲ್ಲಿ ರೊಟ್ಟಿಮುರಿಯುವ ಸಹಭೋಜನವನ್ನು ಏರ್ಪಡಿಸಿ ಸಂತೋಷದಿಂದಲೂ ಸಹೃದಯದಿಂದಲೂ ಭಾಗವಹಿಸುತ್ತಿದ್ದರು. [47]ದೇವರನ್ನು ಸ್ತುತಿಸುತ್ತಾ ಸಕಲರಿಗೆ ಅಚ್ಚುಮೆಚ್ಚಾಗಿ ಬಾಳುತ್ತಿದ್ದರು. ಜೀವೋದ್ಧಾರವನ್ನು ಹೊಂದುತ್ತಿದ್ದವರನ್ನೆಲ್ಲಾ ಪ್ರಭು ಈ ಸಭೆಗೆ ದಿನೇದಿನೇ ಸೇರಿಸಿಕೊಳ್ಳುತ್ತಿದ್ದರು.

**ನಿಂತು ನೆಗೆದಾಡಿದ ಹುಟ್ಟುಕುಂಟ**

**3** ಒಂದು ದಿನ ಮಧ್ಯಾಹ್ನ ಮೂರು ಗಂಟೆಯ ಸಮಯ. ಅದು ಪ್ರಾರ್ಥನಾವೇಳೆ, ಪೇತ್ರ ಮತ್ತು ಯೊವಾನ್ನ ಮಹಾದೇವಾಲಯಕ್ಕೆ ಹೋದರು. [2]'ಸುಂದರ ದ್ವಾರ' ಎಂದು ಕರೆಯಲಾದ ಬಾಗಿಲ ಬಳಿ ಹುಟ್ಟುಕುಂಟನೊಬ್ಬ ಇದ್ದನು. ಅವನನ್ನು ಪ್ರತಿದಿನ ಹೊತ್ತುತಂದು ಈ ದ್ವಾರದ ಬಳಿ ಬಿಡಲಾಗುತ್ತಿತ್ತು. ಅವನು ದೇವಾಲಯಕ್ಕೆ ಬರುತ್ತಿದ್ದ ಜನರಿಂದ ಭಿಕ್ಷೆ ಬೇಡುತ್ತಿದ್ದನು. [3]ಪೇತ್ರ ಮತ್ತು ಯೊವಾನ್ನ ದೇವಾಲಯದೊಳಗೆ ಹೋಗುತ್ತಿರುವುದನ್ನು ಅವನು ಕಂಡನು. ತನಗೆ ಏನಾದರೂ ಭಿಕ್ಷೆ ಕೊಡಬೇಕೆಂದು ಬೇಡಿದನು. [4]ಅವರು ಕುಂಟನನ್ನು ತದೇಕ ದೃಷ್ಟಿಯಿಂದ ಈಕ್ಷಿಸಿದರು. ಪೇತ್ರನು, "ಎಲ್ಲಿ, ನಮ್ಮನ್ನು ನೋಡು," ಎಂದನು. [5]ಕುಂಟನು ಅವರಿಂದ ಭಿಕ್ಷೆಯನ್ನು ಅಪೇಕ್ಷಿಸುತ್ತಾ ಅವರನ್ನೇ ನೋಡಿದನು. [6]ಆದರೆ ಪೇತ್ರನು, "ಹಣಕಾಸೇನೂ ನನ್ನಲ್ಲಿಲ್ಲ, ನನ್ನಲ್ಲಿ ಇರುವುದನ್ನು ನಿನಗೆ ಕೊಡುತ್ತೇನೆ; ನಜರೇತಿನ ಯೇಸುಕ್ರಿಸ್ತರ ಹೆಸರಿನಲ್ಲಿ ನಾನು ಆಜ್ಞಾಪಿಸುತ್ತೇನೆ, ಎದ್ದು ನಡೆ" ಎನ್ನುತ್ತಾ, [7]ಅವನ ಬಲಗೈಯನ್ನು ಹಿಡಿದು ನಿಲ್ಲಲು ಸಹಾಯ ಮಾಡಿದನು. ಆ ಕ್ಷಣವೇ ಕುಂಟನ ಅಂಗಾಲು ಮುಂಗಾಲುಗಳು ಬಲಗೊಂಡವು. [8]ಅವನು ಜಿಗಿದುನಿಂತು ಅತ್ತಿತ್ತ ನಡೆದಾಡಲು ಪ್ರಾರಂಭಿಸಿದನು. ಅನಂತರ ಅವನು ಕುಣಿಯುತ್ತಾ ನಡೆಯುತ್ತಾ ದೇವರನ್ನು ಕೊಂಡಾಡುತ್ತಾ ಅವರೊಡನೆಯೇ ದೇವಾಲಯದೊಳಗೆ ಹೋದನು. [9]ಅವನು ಹೀಗೆ ನಡೆಯುವುದನ್ನೂ ದೇವರನ್ನು ಕೊಂಡಾಡುವುದನ್ನೂ ಜನಸಮೂಹ ನೋಡಿತು. [10]ದೇವಾಲಯದ ಸುಂದರದ್ವಾರದ ಬಳಿ ಕುಳಿತು ಭಿಕ್ಷೆ ಬೇಡುತ್ತಿದ್ದವನು ಇವನೇ ಎಂದು ಜನರು ಗುರುತು ಹಚ್ಚಿದರು. ಅವನಿಗೆ ಸಂಭವಿಸಿದ್ದನ್ನು ಕಂಡು ಬೆಕ್ಕಸಬೆರಗಾದರು.

**ಪೇತ್ರನ ಪ್ರವಚನ**

11 'ಸೊಲೊಮೋನನ ಮಂಟಪ'ದಲ್ಲಿ ಪೇತ್ರ ಮತ್ತು ಯೊವಾನ್ನರ ಜೊತೆ ಆ ಭಿಕ್ಷುಕನು ಇನ್ನೂ ನಿಂತಿದ್ದನು. ಆಶ್ಚರ್ಯಭರಿತರಾದ ಜನರು ಅಲ್ಲಿಗೆ ಓಡಿಬಂದರು. [12]ಇದನ್ನು ನೋಡಿ ಪೇತ್ರನು ಇಂತೆಂದನು: "ಇಸ್ರಯೇಲಿನ ಜನರೇ, ಈ ಘಟನೆಯಿಂದ ನೀವೇಕೆ ಆಶ್ಚರ್ಯಚಕಿತರಾಗಿದ್ದೀರಿ? ನಮ್ಮನ್ನೇಕೆ ಎವೆಯಿಕ್ಕದೆ ನೋಡುತ್ತಿದ್ದೀರಿ? ನಮ್ಮ ಸ್ವಂತ ಶಕ್ತಿಯಿಂದಾಗಲೀ ಭಕ್ತಿಯಿಂದಾಗಲೀ, ಈ ಮನುಷ್ಯನು ನಡೆಯುವಂತೆ

ನಾವು ಮಾಡಿದೆವೆಂದು ಭಾವಿಸುತ್ತೀರೋ? 13ಪಿತಾಮಹ ಅಬ್ರಹಾಮ, ಇಸಾಕ ಮತ್ತು ಯಕೋಬರ
ದೇವರು, ಅಂದರೆ ನಮ್ಮ ಪೂರ್ವಜರ ದೇವರು, ತಮ್ಮ ದಾಸ ಯೇಸುವಿನ ಮಹಿಮೆಯನ್ನು ಬೆಳಗಿಸಿದ್ದಾರೆ.
ನೀವಾದರೋ ಅವರನ್ನು ಅಧಿಕಾರಿಗಳ ಕೈಗೊಪ್ಪಿಸಿದಿರಿ. ರಾಜ್ಯಪಾಲ ಪಿಲಾತನು ಅವರನ್ನು ಬಿಡುಗಡೆ
ಮಾಡಲು ನಿರ್ಧರಿಸಿದಾಗ ಕೂಡ ಅವನ ಸಮ್ಮುಖದಲ್ಲೇ ಅವರನ್ನು ಧಿಕ್ಕರಿಸಿದಿರಿ. 14ಯೇಸು ಪುನೀತರು
ಹಾಗೂ ಸತ್ಯಸ್ವರೂಪರು. ಆದರೂ ನೀವು ಅವರನ್ನು ನಿರಾಕರಿಸಿ, ಒಬ್ಬ ಕೊಲೆಗಡುಕನನ್ನೇ ನಿಮಗೆ
ಬಿಟ್ಟುಕೊಡುವಂತೆ ಪಿಲಾತನನ್ನು ಬೇಡಿಕೊಂಡಿರಿ. 15ಜೀವದೊಡೆಯನನ್ನು ನೀವು ಕೊಂದುಹಾಕಿದಿರಿ;
ದೇವರು ಅವರನ್ನು ಪುನರುತ್ಥಾನಗೊಳಿಸಿದರು. ಇದಕ್ಕೆ ನಾವೇ ಸಾಕ್ಷಿಗಳು. 16ನಿಮ್ಮ ಕಣ್ಣೆದುರಿಗಿರುವ ಈ
ಮನುಷ್ಯನು ಯಾರೆಂದು ನಿಮಗೆ ಗೊತ್ತಿದೆ. ಯೇಸುವಿನ ನಾಮದಿಂದಲೇ, ಆ ನಾಮದ ಮೇಲಿಟ್ಟ
ವಿಶ್ವಾಸದಿಂದಲೇ, ಈತನು ಶಕ್ತಿಪಡೆದಿದ್ದಾನೆ. ಯೇಸುವಿನಲ್ಲಿಟ್ಟ ಆ ವಿಶ್ವಾಸವೇ ಈತನಿಗೆ, ನೀವೇ
ನೋಡುವಂತೆ, ಸಂಪೂರ್ಣ ಆರೋಗ್ಯವನ್ನು ದಯಪಾಲಿಸಿದೆ.

17 "ಸಹೋದರರೇ, ನೀವೂ ನಿಮ್ಮ ಅಧಿಕಾರಿಗಳೂ ತಿಳಿಯದೆ ಯೇಸುವಿಗೆ ಹೀಗೆ ಮಾಡಿದಿರೆಂದು
ನಾನು ಬಲ್ಲೆ. 18ಕ್ರಿಸ್ತಯೇಸು ಯಾತನೆಯನ್ನು ಅನುಭವಿಸಬೇಕೆಂದು ದೇವರು ಪ್ರವಾದಿಗಳೆಲ್ಲರ ಮುಖಾಂತರ
ಆಗಲೇ ಮುಂತಿಳಿಸಿದ್ದರು. ಆ ಪ್ರವಾದನೆಗಳನ್ನು ಈಗ ನೆರವೇರಿಸಿದ್ದಾರೆ. 19ಪಶ್ಚಾತ್ತಾಪಪಟ್ಟು ದೇವರಿಗೆ
ಅಭಿಮುಖರಾಗಿರಿ. ಅವರು ನಿಮ್ಮ ಪಾಪಗಳನ್ನು ಪರಿಹರಿಸುವರು. 20ಸರ್ವೇಶ್ವರನ ಸಾನ್ನಿಧ್ಯ ಸೌಭಾಗ್ಯವು
ನಿಮ್ಮದಾಗುವುದು; ನಿಮಗೋಸ್ಕರ ನೇಮಿತರಾದ ಉದ್ಧಾರಕ ಯೇಸುವನ್ನು ಕಳುಹಿಸುವರು. 21ಸಮಸ್ತವನ್ನೂ
ಪುನರ್‌ಸ್ಥಾಪನೆಗೊಳಿಸುವವರೆಗೆ ಕ್ರಿಸ್ತಯೇಸು ಸ್ವರ್ಗದಲ್ಲಿಯೇ ಇರಬೇಕಾಗಿದೆ. ಇದನ್ನು ದೇವರು ಪವಿತ್ರ
ಪ್ರವಾದಿಗಳ ಮುಖಾಂತರ ಬಹುಕಾಲಕ್ಕೆ ಹಿಂದೆಯೇ ಪ್ರಕಟಿಸಿದ್ದಾರೆ. 22'ಸರ್ವೇಶ್ವರನಾದ ದೇವರು ನನ್ನನ್ನು
ಕಳುಹಿಸಿದಂತೆಯೇ ನಿಮಗೊಬ್ಬ ಪ್ರವಾದಿಯನ್ನು ಕಳುಹಿಸುವರು. ಆತನು ನಿಮ್ಮ ಸ್ವಂತ
ಜನಾಂಗದವನಾಗಿರುವನು. ಆತನು ಹೇಳುವುದನ್ನೆಲ್ಲಾ ನೀವು ಕೇಳಬೇಕು. 23ಆ ಪ್ರವಾದಿಗೆ ಕಿವಿಗೊಡದವನು
ದೇವಜನರಿಂದ ದೂರವಾಗಿ ನಾಶವಾಗುತ್ತಾನೆ,' ಎಂದು ಮೋಶೆ ಹೇಳಿದ್ದಾನೆ. 24ಸಮುವೇಲನೂ ಅವನ
ನಂತರ ಬಂದ ಎಲ್ಲ ಪ್ರವಾದಿಗಳೂ ಈ ದಿನಗಳಲ್ಲಿ ನಡೆಯುತ್ತಿರುವುದನ್ನು ದೈವದತ್ತವಾಗಿ ಸಾರಿದ್ದಾರೆ.
25ದೇವರು ಪ್ರವಾದಿಗಳ ಮುಖಾಂತರ ಮಾಡಿದ ವಾಗ್ದಾನಗಳಿಗೂ ನಿಮ್ಮ ಪೂರ್ವಜರೊಂದಿಗೆ ಮಾಡಿದ
ಒಡಂಬಡಿಕೆಗೂ ನೀವು ಉತ್ತರಾಧಿಕಾರಿಗಳು; ಪೂರ್ವಜ ಅಬ್ರಹಾಮನಿಗೆ, 'ನಿನ್ನ ಸಂತತಿಯ ಮುಖಾಂತರ
ವಿಶ್ವದ ಎಲ್ಲಾ ಜನಾಂಗಗಳು ಧನ್ಯರಾಗುವರು' ಎಂದಿದ್ದಾರೆ ದೇವರು. 26ಅಂತೆಯೇ, ಅವರು ತಮ್ಮ
ದಾಸನನ್ನು ಎಬ್ಬಿಸಿದ್ದಾರೆ. ನಿಮ್ಮೆಲ್ಲರನ್ನು ದುರ್ಮಾರ್ಗದಿಂದ ದೂರಮಾಡಿ ಧನ್ಯರಾಗಿಸಲು ಅವರನ್ನು
ಮೊತ್ತಮೊದಲು ನಿಮ್ಮಲ್ಲಿಗೆ ಕಳುಹಿಸಿದ್ದಾರೆ."

## ನ್ಯಾಯಸಭೆಯ ಮುಂದೆ ಪೇತ್ರ ಮತ್ತು ಯೊವಾನ್ನ

**4** ಪೇತ್ರ ಮತ್ತು ಯೊವಾನ್ನ ಜನರನ್ನು ಉದ್ದೇಶಿಸಿ ಇನ್ನೂ ಮಾತನಾಡುತ್ತಿದ್ದರು. ಆಗ ಯಾಜಕರೂ
ಮಹಾದೇವಾಲಯದ ದಳಪತಿಗಳೂ ಸದ್ದುಕಾಯರೂ ಅಲ್ಲಿಗೆ ಬಂದರು. 2ಯೇಸುವಿನ ಪುನರುತ್ಥಾನದ
ಆಧಾರದ ಮೇಲೆ ಮೃತರಾದ ಎಲ್ಲರೂ ಪುನರುತ್ಥಾನ ಹೊಂದುವರು ಎಂದು ಈ ಇಬ್ಬರು ಪ್ರೇಷಿತರು
ಬೋಧಿಸುತ್ತಿದ್ದರು. 3ಇದನ್ನು ಕೇಳಿ ಸಿಟ್ಟುಗೊಂಡಿದ್ದ ಅವರು ಪೇತ್ರ, ಯೊವಾನ್ನರನ್ನು ಬಂಧಿಸಿದರು. ಆಗಲೇ
ಹೊತ್ತು ಮೀರಿದ್ದರಿಂದ ಮಾರನೆಯ ದಿನದವರೆಗೆ ಅವರನ್ನು ಸೆರೆಮನೆಯಲ್ಲಿಟ್ಟರು. 4ಆದರೆ ಪ್ರೇಷಿತರ
ಬೋಧನೆಯನ್ನು ಕೇಳಿದ ಅನೇಕರು ವಿಶ್ವಾಸಿಗಳಾದರು. ಭಕ್ತವಿಶ್ವಾಸಿಗಳ ಸಂಖ್ಯೆ ಸುಮಾರು ಐದು ಸಾವಿರಕ್ಕೆ
ಏರಿತು.

5 ಮಾರನೆಯ ದಿನ ಯೆಹೂದ್ಯ ಅಧಿಕಾರಿಗಳೂ ಪ್ರಮುಖರೂ ಧರ್ಮಶಾಸ್ತ್ರಿಗಳೂ
ಜೆರುಸಲೇಮಿನಲ್ಲಿ ಸಭೆ ಸೇರಿದರು. 6ಪ್ರಧಾನ ಯಾಜಕ ಅನ್ನಾ, ಹಾಗೂ ಕಾಯಫ, ಯೊವಾನ್ನ,
ಅಲೆಕ್ಸಾಂಡರ್ ಮತ್ತು ಪ್ರಧಾನ ಯಾಜಕನ ಕುಟುಂಬದವರು ಆ ಸಭೆಯಲ್ಲಿ ಹಾಜರಿದ್ದರು. 7ಪ್ರೇಷಿತರನ್ನು

ಸಭೆಯ ಮುಂದೆ ನಿಲ್ಲಿಸಿ, "ಇದೆಲ್ಲವನ್ನು ನೀವು ಯಾರ ಹೆಸರಿನಲ್ಲಿ ಮತ್ತು ಯಾವ ಅಧಿಕಾರದಿಂದ ಮಾಡಿದಿರಿ?" ಎಂದು ಪ್ರಶ್ನಿಸಿದರು.

8 ಪೇತ್ರನು ಪವಿತ್ರಾತ್ಮಭರಿತನಾಗಿ ಹೀಗೆಂದು ಉತ್ತರಕೊಟ್ಟನು: "ಜನರ ಅಧಿಕಾರಿಗಳೇ, ಪ್ರಮುಖರೇ,
[9]ನಾವು ಒಬ್ಬ ಕುಂಟನಿಗೆ ಮಾಡಿದ ಸತ್ಕಾರ್ಯದ ಬಗ್ಗೆ, ಅವನು ಸ್ವಸ್ಥನಾದುದು ಹೇಗೆಂದು ನೀವು ನಮ್ಮನ್ನು
ಇಂದು ಪ್ರಶ್ನಿಸುತ್ತಿರುವಿರಿ. [10]ನಿಮಗೂ ಇಸ್ರಯೇಲಿನ ಎಲ್ಲಾ ಜನರಿಗೂ ಈ ವಿಷಯ ತಿಳಿದಿರಲಿ: ನಜರೇತಿನ
ಯೇಸುಕ್ರಿಸ್ತರ ನಾಮದ ಶಕ್ತಿಯಿಂದಲೇ ಈ ಮನುಷ್ಯನು ಪೂರ್ಣ ಗುಣಹೊಂದಿ ನಿಮ್ಮ ಮುಂದೆ
ನಿಂತಿದ್ದಾನೆ. [11]ನೀವು ಶಿಲುಬೆಗೇರಿಸಿ ಕೊಂದದ್ದು ಈ ಯೇಸುವನ್ನೇ. ದೇವರು ಅವರನ್ನು
ಪುನರುತ್ಥಾನಗೊಳಿಸಿದ್ದಾರೆ.

'ಮನೆಕಟ್ಟುವವರಾದ ನೀವು
ಬೇಡವೆಂದು ಮೂಲೆಗೆಸೆದ ಕಲ್ಲೇ
ಪ್ರಮುಖ ಮೂಲೆಗಲ್ಲಾಯಿತು'

ಎಂದು ಬರೆದಿರುವುದು ಇವರನ್ನು ಕುರಿತೇ.

12 ಇವರಿಂದಲ್ಲದೆ ಬೇರಾರಿಂದಲೂ ನಮಗೆ ಜೀವೋದ್ಧಾರವಿಲ್ಲ. ಇವರ ನಾಮವನ್ನು ಬಿಟ್ಟರೆ ಈ ಧರೆಯಲ್ಲಿರುವ ಬೇರೆ ಯಾವ ನಾಮದಿಂದಲೂ ನಾವು ಜೀವೋದ್ಧಾರ ಹೊಂದುವಂತಿಲ್ಲ."

13 ಅವಿದ್ಯಾವಂತರು ಹಾಗೂ ಜನ ಸಾಮಾನ್ಯರು ಆಗಿದ್ದರೂ, ಇವರು ಇಷ್ಟು
ಧೈರ್ಯಶಾಲಿಗಳಾಗಿರುವುದನ್ನು ಕಂಡು ಸಭೆಯ ಸದಸ್ಯರು ಚಕಿತರಾದರು; ಯೇಸುವಿನ ಸಂಗಡಿಗರೆಂದು
ಇವರ ಗುರುತುಹಚ್ಚಿದರು. [14]ಗುಣಹೊಂದಿದ್ದ ಆ ಮನುಷ್ಯನು ಪೇತ್ರ ಮತ್ತು ಯೊವಾನ್ನರ ಜೊತೆ
ನಿಂತಿರುವುದನ್ನು ಕಂಡು ನಿರುತ್ತರರಾದರು. [15]ಸಭಾಕೂಟದಿಂದ ಪ್ರೇಷಿತರನ್ನು ಹೊರಗೆ ಕಳುಹಿಸಿ ತಮ್ಮೊಳಗೇ
ಚರ್ಚಿಸಲಾರಂಭಿಸಿದರು: [16]"ಇವರನ್ನು ಏನು ಮಾಡೋಣ? ಇವರು ಮಾಡಿರುವ ಅಪರೂಪ ಅದ್ಭುತ
ಜೆರುಸಲೇಮಿನ ಸರ್ವರಿಗೂ ತಿಳಿದು ಹೋಗಿದೆ. ಅದನ್ನು ಅಲ್ಲಗಳೆಯುವಂತಿಲ್ಲ. [17]ಆದರೂ, ಈ ಸಮಾಚಾರ
ಜನರಲ್ಲಿ ಮತ್ತಷ್ಟು ಹರಡದಂತೆ ಇನ್ನು ಮೇಲೆ ಯಾರ ಬಳಿಯಲ್ಲೂ ಯೇಸುವಿನ ಹೆಸರೆತ್ತದಂತೆ ಇವರಿಗೆ
ಎಚ್ಚರಿಕೆ ಕೊಡೋಣ," ಎಂದುಕೊಂಡರು.

18 ಅನಂತರ ಪ್ರೇಷಿತರನ್ನು ಒಳಕ್ಕೆ ಕರೆದು, "ಇನ್ನು ಮುಂದೆ ಯೇಸುವಿನ ಹೆಸರೆತ್ತಿ
ಮಾತನಾಡಬಾರದು, ಬೋಧಿಸಕೂಡದು," ಎಂದು ಕಟ್ಟಪ್ಪಣೆ ಮಾಡಿದರು. [19]ಆಗ ಪೇತ್ರ ಮತ್ತು
ಯೊವಾನ್ನರು, "ನಾವು ದೇವರಿಗೆ ವಿಧೇಯರಾಗಬೇಕೋ? ನಿಮಗೆ ವಿಧೇಯರಾಗಬೇಕೋ? ದೇವರ
ದೃಷ್ಟಿಯಲ್ಲಿ ಯಾವುದು ಸರಿ? ನೀವೇ ನಿರ್ಣಯಿಸಿರಿ. [20]ನಾವಂತೂ ಕಣ್ಣಾರೆ ಕಂಡು, ಕಿವಿಯಾರೆ ಕೇಳಿದ
ವಿಷಯವನ್ನು ಕುರಿತು ಮೌನದಿಂದಿರಲಾಗದು," ಎಂದು ಬದಲು ನುಡಿದರು. [21]ನಡೆದ ಅದ್ಭುತಕ್ಕಾಗಿ
ಜನರೆಲ್ಲರೂ ದೇವರನ್ನು ಕೊಂಡಾಡುತ್ತಿದ್ದರು. ಇದನ್ನು ಅರಿತ ಆ ಸಭಾಸದಸ್ಯರಿಗೆ ಪ್ರೇಷಿತರನ್ನು ಶಿಕ್ಷಿಸುವ
ಮಾರ್ಗ ತೋಚದೆ ಹೋಯಿತು. ಆದುದರಿಂದ ಅವರನ್ನು ಇನ್ನೂ ಅಧಿಕವಾಗಿ ಎಚ್ಚರಿಸಿ ಕಳುಹಿಸಿಬಿಟ್ಟರು.
[22]ಈ ಅದ್ಭುತದಿಂದ ಗುಣಹೊಂದಿದ ಆ ವ್ಯಕ್ತಿಗೆ ನಲವತ್ತು ವರ್ಷ ಮೀರಿತ್ತು.

### ಧೈರ್ಯಸ್ಥೈರ್ಯಕ್ಕಾಗಿ ಭಕ್ತರ ಪ್ರಾರ್ಥನೆ

23 ಪೇತ್ರ ಮತ್ತು ಯೊವಾನ್ನ ಬಂಧನದಿಂದ ಬಿಡುಗಡೆಹೊಂದಿದ ಮೇಲೆ ವಿಶ್ವಾಸಿಗಳಿಗೆ
ಭೇಟಿಯಿತ್ತರು. ಮುಖ್ಯ ಯಾಜಕರು ಹಾಗೂ ಪ್ರಜಾ ಪ್ರಮುಖರು ತಮಗೆ ಹೇಳಿದ್ದನ್ನು ಅವರಿಗೆ
ವರದಿಮಾಡಿದರು. [24]ಈ ಸಮಾಚಾರವನ್ನು ಕೇಳಿದ ಕೂಡಲೇ ಭಕ್ತಾದಿಗಳು ಏಕಕಂಠದಿಂದ ದೇವರನ್ನು
ಪ್ರಾರ್ಥಿಸುತ್ತಾ ಹೀಗೆಂದರು:

"ಪ್ರಭುವೇ, ಇಹಪರಗಳನ್ನೂ ಸಮುದ್ರ
ಸಾಗರಗಳನ್ನೂ
ಅವುಗಳಲ್ಲಿರುವ ಸಮಸ್ತವನ್ನೂ
ಸೃಷ್ಟಿಸಿದವರು ನೀವೇ.

25–26 ಸರ್ವೇಶ್ವರನಿಗೂ ಆತ
ಅಭಿಷೇಕಿಸಿದವನಿಗೂ ವಿರುದ್ಧ
'ಅನ್ಯಧರ್ಮಿಯರೇಕೆ ರೋಷಭರಿತರಾದರು?
ಜನರೇಕೆ ವ್ಯರ್ಥ ಒಳಸಂಚು ಹೂಡಿದರು?
ಲೋಕಾಧಿಪತಿಗಳೇಕೆ ಸನ್ನದ್ಧರಾದರು?
ಜನನಾಯಕರೇಕೆ ಸಮಾಲೋಚಿಸಿದರು?'
ಎಂದು ನಮ್ಮ ಪಿತಾಮಹ ಹಾಗೂ ನಿಮ್ಮ ದಾಸನಾದ ದಾವೀದನ ಬಾಯಿಂದ ನುಡಿಸಿದಿರಿ.

27 "ಅಂತೆಯೇ, ನಿಮ್ಮ ಪರಮಪೂಜ್ಯ ದಾಸ ಯೇಸುವಿನ ವಿರುದ್ಧ ಹೆರೋದನು ಮತ್ತು
ಪೊಂತ್ಸಿಯುಸ್ ಪಿಲಾತನು ಅನ್ಯಧರ್ಮದವರೊಡನೆ ಹಾಗೂ ಇಸ್ರಯೇಲಿನ ಜನರೊಡನೆ ಸೇರಿ ಈ
ಪಟ್ಟಣದಲ್ಲೇ ಸಮಾಲೋಚನೆ ಮಾಡಿದರು. [28]ನೀವು ಸಂಯೋಜಿಸಿದ್ದು ಹಾಗೂ ಸಂಕಲ್ಪಿಸಿದ್ದು
ಈಡೇರುವಂತೆ ಅವರು ಹೀಗೆ ವರ್ತಿಸಿದರು. [29]ಪ್ರಭುವೇ, ಇಗೋ, ಇವರು ನಮ್ಮನ್ನು ಬೆದರಿಸುತ್ತಿದ್ದಾರೆ;
ನಿಮ್ಮ ಸಂದೇಶವನ್ನು ಧೈರ್ಯವಾಗಿ ಸಾರಲು ಶರಣರಾದ ನಮಗೆ ನೆರವು ನೀಡಿರಿ. [30]ಸ್ವಸ್ಥಪಡಿಸುವ ನಿಮ್ಮ
ಅಮೃತ ಹಸ್ತವನ್ನು ಚಾಚಿರಿ; ನಿಮ್ಮ ಪರಮ ಪೂಜ್ಯ ದಾಸ ಯೇಸುವಿನ ನಾಮದಲ್ಲಿ ಅದ್ಭುತಗಳೂ
ಸೂಚಕಕಾರ್ಯಗಳೂ ಜರುಗುವಂತಾಗಲಿ."

31 ಹೀಗೆ ಪ್ರಾರ್ಥನೆ ಮಾಡಿದಾಗ ಅವರು ನೆರೆದಿದ್ದ ಸ್ಥಳ ಕಂಪಿಸಿತು. ಅವರೆಲ್ಲರೂ
ಪವಿತ್ರಾತ್ಮಭರಿತರಾದರು; ದೇವರ ಶುಭಸಂದೇಶವನ್ನು ಧೈರ್ಯವಾಗಿ ಸಾರತೊಡಗಿದರು.

## ಭಕ್ತರ ಅನ್ಯೋನ್ಯ ಜೀವನ

32 ಭಕ್ತವಿಶ್ವಾಸಿಗಳು ಒಗ್ಗಟ್ಟಿನಿಂದಲೂ ಒಮ್ಮನಸ್ಸಿನಿಂದಲೂ ಬಾಳುತ್ತಿದ್ದರು. ಯಾರೂ ತಮ್ಮ
ಸೊತ್ತನ್ನು ತನ್ನದೇ ಎಂದು ಭಾವಿಸದೆ ಹುದುವಾಗಿ ಹಂಚಿಕೊಳ್ಳುತ್ತಿದ್ದರು. [33]ಪ್ರೇಷಿತರು ಪ್ರಭು ಯೇಸುವಿನ
ಪುನರುತ್ಥಾನಕ್ಕೆ ಬಹು ಸಾಮರ್ಥ್ಯದಿಂದ ಸಾಕ್ಷಿಕೊಡುತ್ತಿದ್ದರು. ಜನರು ಅವರೆಲ್ಲರನ್ನು ಗೌರವದಿಂದ
ಕಾಣುತ್ತಿದ್ದರು. [34]ಅವರಲ್ಲಿ ಕೊರತೆಯಿದ್ದವರು ಒಬ್ಬರೂ ಇರಲಿಲ್ಲ. [35]ಕಾರಣ – ಹೊಲಗದ್ದೆ, ಮನೆಮಾರು
ಇದ್ದವರೆಲ್ಲರೂ ಅವುಗಳನ್ನು ವಿಕ್ರಯಿಸಿ, ಬಂದ ಹಣವನ್ನು ತಂದು ಪ್ರೇಷಿತರಿಗೆ ಪಾದಕಾಣಿಕೆಯಾಗಿ
ಒಪ್ಪಿಸುತ್ತಿದ್ದರು. ಇವರು ಅದನ್ನು ಪ್ರತಿ ಒಬ್ಬರಿಗೂ ಅವರವರ ಅವಶ್ಯಕತೆಗೆ ತಕ್ಕಂತೆ ಹಂಚುತ್ತಿದ್ದರು.

36 ಜೋಸೆಫ್ ಎಂಬ ಲೇವಿಯನು ಅವರ ಸಂಗಡ ಇದ್ದನು. ಇವನ ಹುಟ್ಟೂರು ಸೈಪ್ರಸ್. ಇವನಿಗೆ
'ಬಾರ್ನಬ' (ಎಂದರೆ ಪ್ರೋತ್ಸಾಹಪುತ್ರ) ಎಂದು ಪ್ರೇಷಿತರು ಹೆಸರಿಟ್ಟಿದ್ದರು. [37]ಇವನು ತನ್ನ ಜಮೀನನ್ನು
ಮಾರಿ ಬಂದ ಹಣವನ್ನು ಪ್ರೇಷಿತರಿಗೆ ಪಾದ ಕಾಣಿಕೆಯಾಗಿ ಒಪ್ಪಿಸಿದನು.

## ಅನನೀಯ ಮತ್ತು ಸಫೈರ

**5** ಅನನೀಯ ಮತ್ತು ಸಫೈರ ಎಂಬ ದಂಪತಿಗಳಿದ್ದರು. ಇವರು ತಮ್ಮ ಆಸ್ತಿಯೊಂದನ್ನು ಮಾರಿದರು.
[2]ಬಂದ ಹಣದಲ್ಲಿ ಒಂದು ಭಾಗವನ್ನು ಅನನೀಯನು, ತನ್ನ ಪತ್ನಿಯ ಸಮ್ಮತಿಪಡೆದು, ಬಚ್ಚಿಟ್ಟುಕೊಂಡನು.
ಉಳಿದುದನ್ನು ಪ್ರೇಷಿತರಿಗೆ ಪಾದಕಾಣಿಕೆಯಾಗಿ ಒಪ್ಪಿಸಿದನು. [3]ಆಗ ಪೇತ್ರನು, "ಅನನೀಯಾ, ನಿನ್ನ ಆಸ್ತಿಯ
ವಿಕ್ರಯದಿಂದ ಬಂದ ಹಣದ ಒಂದು ಭಾಗವನ್ನು ಬಚ್ಚಿಟ್ಟುಕೊಂಡು, ನೀನು ಪವಿತ್ರಾತ್ಮ ಅವರಿಗೆ ಏಕೆ
ವಂಚನೆಮಾಡಿದೆ? ನಿನ್ನ ಹೃದಯದಲ್ಲಿ ಪಿಶಾಚಿಗೇಕೆ ಎಡೆಮಾಡಿಕೊಟ್ಟೆ? [4]ಮಾರುವುದಕ್ಕೆ ಮೊದಲು ಆಸ್ತಿ
ನಿನಗೇ ಸೇರಿತ್ತು; ಮಾರಿದ ನಂತರವೂ ಅದರ ಹಣ ನಿನ್ನದೇ ಆಗಿತ್ತು. ಹೀಗಿರುವಲ್ಲಿ ಇಂಥಾ ದುಷ್ಟ
ಯೋಚನೆಮಾಡಲು ನೀನೇಕೆ ಮನಸ್ಸು ಮಾಡಿದೆ? ನೀನು ಸುಳ್ಳಾಡಿರುವುದು ಮನುಷ್ಯರಿಗಲ್ಲ, ದೇವರಿಗೆ,"
ಎಂದನು. [5]ಈ ಮಾತುಗಳನ್ನು ಕೇಳಿದಾಕ್ಷಣವೇ ಅನನೀಯನು ಸತ್ತುಬಿದ್ದನು. [6]ಆಗ ಕೆಲವು ಯುವಕರು
ಬಂದು ಅವನ ಶವವನ್ನು ಬಟ್ಟೆಯಲ್ಲಿ ಸುತ್ತಿ ಹೊತ್ತುಕೊಂಡು ಹೋಗಿ ಸಮಾಧಿ ಮಾಡಿದರು.

7 ಸುಮಾರು ಮೂರು ಗಂಟೆಗಳ ನಂತರ ಅವನ ಪತ್ನಿ ಅಲ್ಲಿಗೆ ಬಂದಳು. ಅಲ್ಲಿ ಸಂಭವಿಸಿದ್ದೇನೂ
ಆಕೆಗೆ ತಿಳಿದಿರಲಿಲ್ಲ. [8]ಪೇತ್ರನು ಆಕೆಯನ್ನು ನೋಡಿ, "ನೀನು ಮತ್ತು ನಿನ್ನ ಪತಿ ಆಸ್ತಿ ಮಾರಿ ಪಡೆದ ಹಣದ
ಮೊತ್ತ ಇಷ್ಟೇ ಏನು?" ಎಂದು ಕೇಳಿದನು. ಆಕೆ, "ಹೌದು, ಇಷ್ಟೇ" ಎಂದು ಉತ್ತರಕೊಟ್ಟಳು. [9]ಪೇತ್ರನು,
"ನೀನೂ ನಿನ್ನ ಪತಿಯೂ ಸರ್ವೇಶ್ವರನ ಆತ್ಮವನ್ನು ಪರೀಕ್ಷಿಸಲು ಹವಣಿಸಿದಿರೋ? ಇಗೋ, ನಿನ್ನ
ಪತಿಯನ್ನು ಸಮಾಧಿಮಾಡಿಬಂದವರ ಕಾಲಿನ ಸಪ್ಪಳ. ಅವರು ಬಾಗಿಲ ಬಳಿಯಲ್ಲೇ ಇದ್ದಾರೆ. ಅವರು
ನಿನ್ನನ್ನೂ ಹೊತ್ತುಕೊಂಡು ಹೋಗುವರು," ಎಂದನು. [10]ಆ ಕ್ಷಣವೇ ಆಕೆಯೂ ಸತ್ತು ಅವನ ಕಾಲಬಳಿ
ಬಿದ್ದಳು. ಒಳಗೆ ಬಂದ ಯುವಕರು ಆಕೆಯೂ ಸತ್ತುಬಿದ್ದಿರುವುದನ್ನು ಕಂಡು ಆಕೆಯನ್ನು ಹೊತ್ತುಕೊಂಡು
ಹೋಗಿ ಪತಿಯ ಪಕ್ಕದಲ್ಲೇ ಸಮಾಧಿ ಮಾಡಿದರು. [11]ಇಡೀ ಧರ್ಮಸಭೆಯೂ ಇದನ್ನು ಕೇಳಿದ ಎಲ್ಲರೂ
ಭಯಭ್ರಾಂತರಾದರು.

## ಅದ್ಭುತ ಕಾರ್ಯಗಳು

12 ಜನರೆಲ್ಲರ ಕಣ್ಮುಂದೆ ಅನೇಕ ಅದ್ಭುತ ಕಾರ್ಯಗಳೂ ಸೂಚಕಕಾರ್ಯಗಳೂ ಪ್ರೇಷಿತರ
ಮುಖಾಂತರ ನಡೆಯುತ್ತಿದ್ದವು. ಭಕ್ತವಿಶ್ವಾಸಿಗಳೆಲ್ಲರೂ ಸೊಲೊಮೋನನ ಮಂಟಪದಲ್ಲಿ ಸಭೆ ಸೇರುತ್ತಿದ್ದರು.
[13]ಹೊರಗಿನವರು ಅವರನ್ನು ಬಹಳವಾಗಿ ಹೊಗಳುತ್ತಿದ್ದರೂ ಅವರ ಸಂಗಡ ಸೇರಲು ಯಾರಿಗೂ
ಧೈರ್ಯವಿರಲಿಲ್ಲ. [14]ಆದರೂ ಪ್ರಭುವನ್ನು ವಿಶ್ವಾಸಿಸುತ್ತಿದ್ದ ಸ್ತ್ರೀಪುರುಷರ ಸಂಖ್ಯೆ ಅಧಿಕವಾಗುತ್ತಾ ಬಂದಿತು.
[15]ಪೇತ್ರನು ಹಾದುಹೋಗುವಾಗ ಆತನ ನೆರಳಾದರೂ ಕೆಲವರ ಮೇಲೆ ಬೀಳಲೆಂದು ಜನರು ರೋಗಿಗಳನ್ನು
ಹಾಸಿಗೆ ಅಥವಾ ಡೋಲಿಗಳ ಸಮೇತ ಹೊತ್ತುತಂದು ಹಾದಿಗಳಲ್ಲಿ ಮಲಗಿಸುತ್ತಿದ್ದರು. [16]ಜೆರುಸಲೇಮಿನ
ಸುತ್ತಮುತ್ತಲಿನ ಊರುಗಳಿಂದಲೂ ರೋಗಿಗಳನ್ನು ಮತ್ತು ಪಿಶಾಚಿಪೀಡಿತರನ್ನು ಜನರು ತರುತ್ತಿದ್ದರು;
ಎಲ್ಲರೂ ಸ್ವಸ್ಥರಾಗುತ್ತಿದ್ದರು.

## ಪ್ರೇಷಿತರಿಗೆ ಹಿಂಸೆ

17 ಇಂತಿರಲು ಪ್ರಧಾನ ಯಾಜಕನೂ ಅವನ ಸಂಗಡವಿದ್ದ ಸ್ಥಳೀಯ ಸದ್ದುಕಾಯರೂ ಪ್ರೇಷಿತರ
ಬಗ್ಗೆ ತೀವ್ರ ಅಸೂಯೆಪಟ್ಟು ಅವರ ವಿರುದ್ಧ ಕ್ರಮ ಕೈಗೊಳ್ಳಲು ನಿರ್ಧರಿಸಿದರು. [18]ಪ್ರೇಷಿತರನ್ನು ಬಂಧಿಸಿ
ಊರ ಸೆರೆಯಲ್ಲಿಟ್ಟರು. [19]ಆ ರಾತ್ರಿಯೇ ಪ್ರಭುವಿನ ದೂತನೊಬ್ಬನು ಸೆರೆಮನೆಯ ದ್ವಾರಗಳನ್ನು ತೆರೆದು
ಪ್ರೇಷಿತರನ್ನು ಹೊರಕ್ಕೆ ತಂದನು. [20]"ಹೋಗಿರಿ, ಮಹಾದೇವಾಲಯದಲ್ಲಿ ನಿಂತು ಈ ನವಜೀವದ ಬಗ್ಗೆ
ಜನರಿಗೆ ಬೋಧಿಸಿರಿ," ಎಂದನು. [21]ಅದರಂತೆ ಪ್ರೇಷಿತರು ಮುಂಜಾವದಲ್ಲೇ ದೇವಾಲಯವನ್ನು ಪ್ರವೇಶಿಸಿ
ಬೋಧಿಸಲಾರಂಭಿಸಿದರು. ಇತ್ತ ಪ್ರಧಾನ ಯಾಜಕನೂ ಅವನ ಸಂಗಡಿಗರೂ ಜೊತೆಗೂಡಿ ಯೆಹೂದ್ಯ
ಪ್ರಮುಖರನ್ನೊಳಗೊಂಡ ಶ್ರೇಷ್ಠ ನ್ಯಾಯಸಭೆಯನ್ನು ಕರೆದರು. ಅನಂತರ ಪ್ರೇಷಿತರನ್ನು ಆ ಸಭೆಯ ಮುಂದೆ
ಕರೆತರುವಂತೆ ಸೆರೆಮನೆಯ ಅಧಿಕಾರಿಗಳಿಗೆ ಆಜ್ಞೆಯಿತ್ತರು. [22]ಈ ಅಧಿಕಾರಿಗಳು ಸೆರೆಮನೆಗೆ ಬಂದಾಗ ಅಲ್ಲಿ
ಪ್ರೇಷಿತರನ್ನು ಕಾಣಲಿಲ್ಲ. ಹಿಂದಿರುಗಿ ಹೋಗಿ ನ್ಯಾಯಸಭೆಗೆ ಈ ವಿಷಯವನ್ನು ವರದಿಮಾಡಿದರು; [23]"ನಾವು
ಸೆರೆಮನೆಗೆ ಹೋದಾಗ ಅದಕ್ಕೆ ಹಾಕಿದ್ದ ಬೀಗಮುದ್ರೆಯೇನೋ ಭದ್ರವಾಗಿತ್ತು. ಪಹರೆಯವರು ದ್ವಾರದಲ್ಲಿ
ಕಾವಲಿದ್ದರು. ಆದರೆ ದ್ವಾರವನ್ನು ತೆರೆದು ನೋಡಿದಾಗ ಒಳಗೆ ಯಾರನ್ನೂ ನಾವು ಕಾಣಲಿಲ್ಲ," ಎಂದು
ತಿಳಿಸಿದರು. [24]ದೇವಾಲಯದ ದಳಪತಿ ಮತ್ತು ಮುಖ್ಯ ಯಾಜಕರು ಇದನ್ನು ಕೇಳಿ
ಇದರಿಂದೇನಾಗುವುದೋ ಎಂದು ಕಳವಳಗೊಂಡರು. [25]ಅಷ್ಟರಲ್ಲಿ ಒಬ್ಬನು ಅಲ್ಲಿಗೆ ಬಂದು, "ಇಗೋ,
ನೀವು ಸೆರೆಮನೆಯಲ್ಲಿ ಇಟ್ಟವರು ದೇವಾಲಯದಲ್ಲಿ ನಿಂತು ಜನರಿಗೆ ಬೋಧಿಸುತ್ತಿದ್ದಾರೆ." ಎಂದನು. [26]ಆಗ
ಆ ದಳಪತಿ ಅಧಿಕಾರಿಗಳೊಡನೆ ಹೋಗಿ ಪ್ರೇಷಿತರನ್ನು ಕರೆದುಕೊಂಡು ಬಂದನು. ಜನರು ತಮ್ಮ ಮೇಲೆ
ಕಲ್ಲುತೂರಬಹುದೆಂಬ ಭಯದಿಂದ ಪ್ರೇಷಿತರ ಮೇಲೆ ಅವರು ಯಾವ ಬಲಪ್ರಯೋಗವನ್ನೂ ಮಾಡಲಿಲ್ಲ.

27 ಪ್ರೇಷಿತರನ್ನು ಕರೆತಂದು ನ್ಯಾಯಸಭೆಯ ಮುಂದೆ ನಿಲ್ಲಿಸಲಾಯಿತು. ಪ್ರಧಾನ ಯಾಜಕನು
ಅವರನ್ನು ಉದ್ದೇಶಿಸಿ, [28]"ಆ ವ್ಯಕ್ತಿಯ ಹೆಸರಿನಲ್ಲಿ ಉಪದೇಶ ಮಾಡಕೂಡದು ಎಂದು ನಿಮಗೆ ಕಟ್ಟಪ್ಪಣೆ
ಮಾಡಿದೆವು. ಆದರೂ ನೀವು ಮಾಡಿರುವುದೇನು? ನಿಮ್ಮ ಬೋಧನೆ ಜೆರುಸಲೇಮ್ ಆದ್ಯಂತ ಹಬ್ಬಿಹರಡಿದೆ.

ಅಷ್ಟು ಮಾತ್ರವಲ್ಲ, ಆ ವ್ಯಕ್ತಿಯ ಕೊಲೆಗೆ ನಮ್ಮನ್ನೇ ಹೊಣೆಗಾರರನ್ನಾಗಿ ಮಾಡಬೇಕೆಂದಿರುವಿರಿ," ಎಂದು ಆಪಾದಿಸಿದನು.

29 ಅದಕ್ಕೆ ಪ್ರತ್ಯುತ್ತರವಾಗಿ ಪೇತ್ರ ಮತ್ತು ಉಳಿದ ಪ್ರೇಷಿತರು, "ನಾವು ವಿಧೇಯರಾಗಬೇಕಾದದ್ದು ದೇವರಿಗೆ, ಮಾನವರಿಗಲ್ಲ. [30]ನೀವು ಶಿಲುಬೆಗೇರಿಸಿ ಕೊಂದು ಹಾಕಿದ ಯೇಸುಸ್ವಾಮಿಯನ್ನು ನಮ್ಮ ಪಿತೃಗಳ ದೇವರು ಜೀವಕ್ಕೆ ಎಬ್ಬಿಸಿದ್ದಾರೆ. [31]ದೇವರು ಅವರನ್ನು ತಮ್ಮ ಬಲಪಾರ್ಶ್ವಕ್ಕೆ ಏರಿಸಿ ಮುಂದಾಳನ್ನಾಗಿಯೂ ಲೋಕೋದ್ಧಾರಕನನ್ನಾಗಿಯೂ ನೇಮಿಸಿದ್ದಾರೆ. ಇಸ್ರಯೇಲಿನ ಜನರು ಪಶ್ಚಾತ್ತಾಪಪಟ್ಟು ದೇವರಿಗೆ ಅಭಿಮುಖರಾಗಿ ಪಾಪಕ್ಷಮೆಯನ್ನು ಪಡೆಯಲು ಇವರ ಮುಖಾಂತರ ಅವಕಾಶವನ್ನು ಕಲ್ಪಿಸಿ ಕೊಟ್ಟಿದ್ದಾರೆ. [32]ಈ ಘಟನೆಗಳಿಗೆ ನಾವು ಸಾಕ್ಷಿಗಳು; ನಾವು ಮಾತ್ರವಲ್ಲ, ದೈವೇಚ್ಛೆಯಂತೆ ನಡೆಯುವವರಿಗೆ ದೇವರು ದಯಪಾಲಿಸುವ ಪವಿತ್ರಾತ್ಮ ಅವರು ಕೂಡ ಸಾಕ್ಷಿಯಾಗಿದ್ದಾರೆ," ಎಂದನು.

## ಗಮಲಿಯೇಲನ ಮಧ್ಯಸ್ಥಿಕೆ

33 ಇದನ್ನು ಕೇಳಿದ ಸಭಾಸದಸ್ಯರು ಕ್ರೋಧಭರಿತರಾಗಿ ಪ್ರೇಷಿತರನ್ನು ಕೊಲ್ಲಬೇಕೆಂದಿದ್ದರು. [34]ಆಗ ಆ ಸಭಾಸದಸ್ಯರಲ್ಲಿ ಒಬ್ಬನಾದ ಗಮಲಿಯೇಲ್ ಎಂಬ ಫರಿಸಾಯನು ಅಲ್ಲಿದ್ದನು. ಅವನೊಬ್ಬ ಗೌರವಾನ್ವಿತ ಮತ್ತು ಧರ್ಮಪಂಡಿತ. ಅವನು ಎದ್ದು ನಿಂತು ಪ್ರೇಷಿತರನ್ನು ಸ್ವಲ್ಪ ಹೊತ್ತು ಸಭೆಯಿಂದ ಹೊರಗೆ ಕಳುಹಿಸುವಂತೆ ಹೇಳಿ [35]ಸಭೆಯನ್ನುದ್ದೇಶಿಸಿ, "ಇಸ್ರಯೇಲ್ ಸಬಾಸದಸ್ಯರೇ, ಇವರ ವಿರುದ್ಧ ನೀವು ಕೈಗೊಳ್ಳಬೇಕೆಂದಿರುವ ಕ್ರಮದ ಬಗ್ಗೆ ಎಚ್ಚರಿಕೆಯಿಂದಿರಿ. [36]ಸ್ವಲ್ಪ ಕಾಲಕ್ಕೆ ಹಿಂದೆ ತೈದ ಎಂಬವನಿದ್ದ. ತಾನೊಬ್ಬ ಮಹಾಪುರುಷನು ಎಂದು ಹೇಳಿಕೊಳ್ಳುತ್ತಿದ್ದ. ಸುಮಾರು ನಾನೂರು ಮಂದಿ ಅವನ ಅನುಯಾಯಿಗಳಾದರು. ಅವನ ಕೊಲೆಯಾದದ್ದೇ, ಅವನನ್ನು ಹಿಂಬಾಲಿಸಿದವರೆಲ್ಲರೂ ಚದರಿಹೋದರು. ಅವನ ಪಕ್ಷ ನಿರ್ನಾಮವಾಯಿತು. [37]ಅನಂತರ ಜನಗಣತಿಯ ಕಾಲದಲ್ಲಿ ಗಲಿಲೇಯದ ಯೂದ ಎಂಬವನು ಪ್ರಸಿದ್ಧಿಗೆ ಬಂದ. ತನ್ನೆಡೆಗೆ ಹಲವರನ್ನು ಆಕರ್ಷಿಸಿಕೊಂಡ. ಅವನೂ ಹತನಾದ. ಹಿಂಬಾಲಕರೆಲ್ಲರೂ ಚದುರಿಹೋದರು. [38]ಆದುದರಿಂದ ನಾನು ನಿಮಗೆ ಹೇಳುವುದೇನೆಂದರೆ: ಈ ವ್ಯಕ್ತಿಗಳ ಗೊಡವೆಗೆ ಹೋಗಬೇಡಿ; ಇವರನ್ನು ಸುಮ್ಮನೆ ಬಿಟ್ಟುಬಿಡಿ. ಇವರ ಯೋಜನೆ ಅಥವಾ ಕಾರ್ಯ ಮಾನವಕಲ್ಪಿತವಾಗಿದ್ದರೆ ಅದರಷ್ಟಕ್ಕೆ ಅದೇ ನಾಶವಾಗುವುದು. [39]ಇದು ದೈವಸಂಕಲ್ಪವಾಗಿದ್ದರೆ ಅವರನ್ನು ನಾಶಮಾಡಲು ನಿಮ್ಮಿಂದಾಗದು. ನೀವು ದೇವರಿಗೆ ವಿರುದ್ಧ ಹೋರಾಡಿದಂತೆ ಆದೀತು," ಎಂದು ಹೇಳಿದನು.

ಸಭಾಸದಸ್ಯರು ಗಮಲಿಯೇಲನ ಸಲಹೆಯನ್ನು ಅಂಗೀಕರಿಸಿದರು. [40]ಪ್ರೇಷಿತರನ್ನು ಒಳಗೆ ಕರೆದು, ಚಾವಟಿಯಿಂದ ಹೊಡೆದು, ಇನ್ನು ಮೇಲೆ ಯೇಸುವಿನ ಹೆಸರಿನಲ್ಲಿ ಬೋಧಿಸಬಾರದೆಂದು ಕಟ್ಟಪ್ಪಣೆಮಾಡಿ ಅವರನ್ನು ಬಿಟ್ಟುಬಿಟ್ಟರು. [41]ಯೇಸುವಿನ ನಾಮಕ್ಕೋಸ್ಕರ ಅಪಮಾನವನ್ನು ಅನುಭವಿಸುವ ಅರ್ಹತೆಯನ್ನು ಪಡೆದೆವೆಂದು ಪ್ರೇಷಿತರು ಸಂತೋಷಭರಿತರಾಗಿ ನ್ಯಾಯಸಭೆಯಿಂದ ಹೊರಬಂದರು. [42]ಯೇಸುವೇ ಲೋಕೋದ್ಧಾರಕನೆಂದು ಪ್ರತಿದಿನ ದೇವಾಲಯದಲ್ಲೂ ಮನೆಮನೆಗಳಲ್ಲೂ ಉಪದೇಶಿಸುವುದರಲ್ಲಿ ಹಾಗೂ ಸಾರುವುದರಲ್ಲಿ ನಿರತರಾದರು.

## ಸಪ್ತ ಸಹಾಯಕರು

**6** ಇತ್ತ ಭಕ್ತವಿಶ್ವಾಸಿಗಳ ಸಂಖ್ಯೆ ಹೆಚ್ಚುತ್ತಾ ಬಂದಿತು. ಆಗ ಗ್ರೀಕ್ ಮಾತನಾಡುತ್ತಾ ಇದ್ದವರ ಹಾಗೂ ಸ್ಥಳೀಯ ಭಾಷೆ ಮಾತನಾಡುತ್ತಿದ್ದವರ ನಡುವೆ ಭಿನ್ನಾಭಿಪ್ರಾಯ ಉಂಟಾಯಿತು. ದಿನನಿತ್ಯ ಮಾಡುವ ದೀನದಲಿತರ ಸೇವೆಯಲ್ಲಿ ತಮ್ಮ ಕಡೆಯ ವಿಧವೆಯರನ್ನು ಅಲಕ್ಷ್ಯಮಾಡಲಾಗುತ್ತಿದೆ ಎಂದು ಗ್ರೀಕರು ಗೊಣಗುಟ್ಟಿದರು. [2]ಆಗ ಹನ್ನೆರಡು ಮಂದಿ ಪ್ರೇಷಿತರು ಭಕ್ತವಿಶ್ವಾಸಿಗಳ ಸಭೆಯನ್ನು ಕರೆದು, "ನಾವು ದೇವರ ವಾಕ್ಯದ ಬೋಧನೆಯನ್ನು ಅವಗಣಿಸಿ ಊಟೋಪಚಾರಗಳ ಸೇವೆಯಲ್ಲಿ ಮಗ್ನರಾಗಿ ಇರುವುದು ಸರಿಯಲ್ಲ. [3]ಆದುದರಿಂದ ಸಹೋದರರರೇ, ಪವಿತ್ರಾತ್ಮಭರಿತರೂ ಜ್ಞಾನಸಂಪನ್ನರೂ ಸನ್ಮಾನಿತರೂ ಆಗಿರುವ ಏಳು

ವ್ಯಕ್ತಿಗಳನ್ನು ನಿಮ್ಮಿಂದ ಆರಿಸಿಕೊಳ್ಳಿ. ನಾವು ಅವರಿಗೆ ಈ ಜವಾಬ್ದಾರಿಯನ್ನು ವಹಿಸುತ್ತೇವೆ. 4ನಾವಾದರೋ
ಪ್ರಾರ್ಥನೆಯಲ್ಲೂ ವಾಕ್ಯೋಪದೇಶದಲ್ಲೂ ನಿರತರಾಗುತ್ತೇವೆ," ಎಂದರು.
5 ಪ್ರೇಷಿತರ ಈ ಸಲಹೆಯನ್ನು ಇಡೀ ಸಭೆ ಅನುಮೋದಿಸಿತು. ಅಂತೆಯೇ ಅಗಾಧ ವಿಶ್ವಾಸ
ಉಳ್ಳವನೂ ಪವಿತ್ರಾತ್ಮಭರಿತನೂ ಆದ ಸ್ತೇಫನ, ಫಿಲಿಪ್ಪ, ಪ್ರೊಖೋರ, ನಿಕನೋರ, ತಿಮೋನ, ಪರ್ಮೇನ
ಮತ್ತು ಯೆಹೂದ್ಯ ಮತಾವಲಂಬಿಯಾದ ಅಂತಿಯೋಕ್ಯದ ನಿಕೊಲಾಯ ಎಂಬ ಏಳು ಮಂದಿಯನ್ನು
ಆರಿಸಿಕೊಂಡರು. 6ಪ್ರೇಷಿತರ ಮುಂದೆ ಅವರನ್ನು ನಿಲ್ಲಿಸಿದರು. ಪ್ರೇಷಿತರು ಪ್ರಾರ್ಥನೆಮಾಡಿ ಅವರ ಮೇಲೆ
ಹಸ್ತನಿಕ್ಷೇಪ ಮಾಡಿದರು.
7 ದೇವರ ವಾಕ್ಯವು ಪ್ರವರ್ಧಿಸತೊಡಗಿತು. ವಿಶ್ವಾಸಿಗಳ ಸಂಖ್ಯೆ ಜೆರುಸಲೇಮಿನಲ್ಲಿ ಬಹಳವಾಗಿ
ಹೆಚ್ಚಿತು. ಬಹುಮಂದಿ ಯಾಜಕರೂ ಆ ವಿಶ್ವಾಸಕ್ಕೆ ಶರಣಾದರು.

### ಸ್ತೇಫನನ ಬಂಧನ

8 ಸ್ತೇಫನನು ದೈವಾನುಗ್ರಹದಿಂದಲೂ ಶಕ್ತಿಯಿಂದಲೂ ತುಂಬಿದ್ದನು. ಜನರ ಮಧ್ಯೆ ಅದ್ಭುತಗಳನ್ನೂ
ಸೂಚಕಕಾರ್ಯಗಳನ್ನೂ ಮಾಡುತ್ತಿದ್ದನು. 9ಆದರೆ ಕೆಲವರು ಸ್ತೇಫನನ ವಿರೋಧಿಗಳಾಗಿದ್ದರು. ಇವರು
'ಬಿಡುಗಡೆ ಹೊಂದಿದವರು' ಎಂಬವರ ಪ್ರಾರ್ಥನಾ ಮಂದಿರಕ್ಕೆ ಸೇರಿದವರು. ಸಿರೇನ್ ಮತ್ತು
ಅಲೆಕ್ಸಾಂಡ್ರಿಯದಿಂದ ಬಂದ ಯೆಹೂದ್ಯರೂ ಇದರ ಸದಸ್ಯರಾಗಿದ್ದರು. ಇವರೊಡನೆ ಸಿಲಿಸಿಯ ಹಾಗೂ
ಏಷ್ಯಾದ ಯೆಹೂದ್ಯರೂ ಸೇರಿ ಸ್ತೇಫನನೊಂದಿಗೆ ತರ್ಕ ಮಾಡತೊಡಗಿದರು. 10ಆದರೆ ಸ್ತೇಫನನ ಮಾತಿನಲ್ಲಿ
ಕಂಡುಬಂದ ಜ್ಞಾನವನ್ನೂ ಪವಿತ್ರಾತ್ಮ ಶಕ್ತಿಯನ್ನೂ ಎದುರಿಸಲು ಅವರಿಂದಾಗಲಿಲ್ಲ. 11ಆದುದರಿಂದ
ಕೆಲವರಿಗೆ ಲಂಚಕೊಟ್ಟು 'ಸ್ತೇಫನನು ಮೋಶೆಯನ್ನೂ ದೇವರನ್ನೂ ದೂಷಿಸುತ್ತಾನೆ; ಇದನ್ನು ನಾವು
ಕೇಳಿದ್ದೇವೆ' ಎಂದು ಹೇಳಿಸಿದರು. 12ಹೀಗೆ ಜನರನ್ನೂ ಪ್ರಮುಖರನ್ನೂ ನ್ಯಾಯಶಾಸ್ತ್ರಜ್ಞರನ್ನೂ
ಪ್ರಚೋದಿಸಿದರು. ಸ್ತೇಫನನನ್ನು ಬಂಧಿಸಿ ನ್ಯಾಯಸಭೆಯ ಮುಂದೆ ಎಳೆದು ತರುವಂತೆ ಮಾಡಿದರು.
13ಕೆಲವು ಸುಳ್ಳುಸಾಕ್ಷಿಗಳನ್ನು ನೇಮಿಸಿಕೊಂಡು ಅವರಿಂದ, 'ಇವನು ಯಾವಾಗಲೂ ನಮ್ಮ ಪವಿತ್ರ
ದೇವಾಲಯದ ವಿರುದ್ಧ ಹಾಗೂ ಮೋಶೆಯ ಧರ್ಮಶಾಸ್ತ್ರದ ವಿರುದ್ಧ ಮಾತನಾಡುತ್ತಾನೆ. 14ನಜರೇತಿನ ಆ
ಯೇಸು ಈ ಮಹಾದೇವಾಲಯವನ್ನು ನಾಶಗೊಳಿಸುವನೆಂದೂ ಮೋಶೆ ನಮಗೆ ವಿಧಿಸಿದ
ಸಂಪ್ರದಾಯಗಳನ್ನು ಬದಲಿಸುವನೆಂದೂ ಇವನು ಹೇಳಿರುತ್ತಾನೆ. ಇದನ್ನು ನಾವು ಕೇಳಿದ್ದೇವೆ,' ಎಂದು
ಹೇಳಿಸಿದರು. 15ನ್ಯಾಯಸಭೆಯಲ್ಲಿ ಕುಳಿತಿದ್ದವರೆಲ್ಲರೂ ಅವನ ಮುಖವನ್ನೇ ದಿಟ್ಟಿಸಿ ನೋಡಿದರು. ಅದು
ದೇವದೂತನ ಮುಖದಂತೆ ಕಂಗೊಳಿಸಿತು.

### ಸ್ತೇಫನನ ವ್ಯಾಖ್ಯಾನ

**7** ಪ್ರಧಾನಯಾಜಕನು, "ಇವರು ನಿನ್ನ ವಿರುದ್ಧ ಹೇಳುತ್ತಿರುವುದು ಸತ್ಯವೋ?" ಎಂದು ಸ್ತೇಫನನನ್ನು
ಕೇಳಿದನು. 2ಪ್ರತ್ಯುತ್ತರವಾಗಿ ಅವನು ಹೀಗೆಂದನು:
"ಭ್ರಾತೃಗಳೇ, ಪಿತೃಗಳೇ, ಕಿವಿಗೊಡಿ. ನಮ್ಮ ಪಿತಾಮಹ ಅಬ್ರಹಾಮನು ಹಾರಾನಿನಲ್ಲಿ
ವಾಸಮಾಡುವ ಮೊದಲು ಮೆಸಪಟೋಮಿಯದಲ್ಲಿ ಇದ್ದನು. ಆಗ ಮಹಿಮಾ ಸ್ವರೂಪರಾದ ದೇವರು
ಅವನಿಗೆ ದರ್ಶನವಿತ್ತರು. 3'ನೀನು ನಿನ್ನ ಬಂಧುಬಳಗವನ್ನೂ ತಾಯ್ನಾಡನ್ನೂ ಬಿಟ್ಟು ನಾನು ತೋರಿಸುವ
ನಾಡಿಗೆ ಹೋಗು,' ಎಂದರು. 4ಅಂತೆಯೇ ಅವನು ಕಸ್ದೀಯರ ನಾಡನ್ನು ಬಿಟ್ಟು ಹಾರಾನಿನಲ್ಲಿ
ವಾಸಮಾಡಿದನು; ಅವನ ತಂದೆಯ ಮರಣಾನಂತರ ದೇವರು ಅವನನ್ನು ನೀವು ವಾಸಮಾಡುತ್ತಿರುವ ಈ
ನಾಡಿಗೆ ಕರೆತಂದರು. 5ಆಗ ಇಲ್ಲಿ ಕಾಲಿಡುವಷ್ಟು ನೆಲವನ್ನು ಕೂಡ ದೇವರು ಅವನಿಗೆ ಸ್ವಾಸ್ಥ್ಯವಾಗಿ
ಕೊಡಲಿಲ್ಲ. ಸ್ವಂತ ಸೊತ್ತಾಗಿ ಅವನಿಗೂ ಅವನ ಬಳಿಕ ಅವನ ಸಂತತಿಗೂ ಕೊಡುವುದಾಗಿ
ವಾಗ್ದಾನಮಾಡಿದರಷ್ಟೆ. ಆಗ ಅಬ್ರಹಾಮನಿಗೆ ಮಕ್ಕಳೇ ಇರಲಿಲ್ಲ. 6ಇದಲ್ಲದೆ ದೇವರು ಅಬ್ರಹಾಮನಿಗೆ, 'ನಿನ್ನ

ಸಂತತಿಯವರು ಅನ್ಯದೇಶದಲ್ಲಿ ಗುಲಾಮರಾಗುವರು; ನಾನೂರು ವರ್ಷಗಳವರೆಗೆ ದಬ್ಬಾಳಿಕೆಗೆ
ಒಳಗಾಗುವರು. 7ಅವರಿಂದ ಗುಲಾಮಗಿರಿಯನ್ನು ಪಡೆಯುವ ಜನಾಂಗಕ್ಕೆ ನಾನು ದಂಡನೆ ವಿಧಿಸುವೆನು.
ಅನಂತರ ಅವರು ಅಲ್ಲಿಂದ ಹೊರಬಂದು ನನ್ನನ್ನು ಈ ಸ್ಥಳದಲ್ಲೇ ಆರಾಧಿಸುವರು,' ಎಂದರು. 8ಆಮೇಲೆ
ದೇವರು ಅಬ್ರಹಾಮನೊಡನೆ ಒಡಂಬಡಿಕೆಯನ್ನು ಮಾಡಿಕೊಂಡರು; ಆ ಒಡಂಬಡಿಕೆಯ ಚಿಹ್ನೆಯನ್ನಾಗಿ
ಸುನ್ನತಿಯನ್ನು ವಿಧಿಸಿದರು. ಅದರಂತೆ ಅಬ್ರಹಾಮನು ತನ್ನ ಮಗ ಇಸಾಕನಿಗೆ ಹುಟ್ಟಿದ ಎಂಟನೆಯ ದಿನ
ಸುನ್ನತಿಯನ್ನು ಮಾಡಿದನು. ಇಸಾಕನು ತನ್ನ ಮಗ ಯಕೋಬನಿಗೂ, ಯಕೋಬನು ತನ್ನ ಹನ್ನೆರಡು
ಮಕ್ಕಳಾದ ನಮ್ಮ ಪಿತಾಮಹರಿಗೂ ಹಾಗೆಯೇ ಮಾಡಿದನು.

9 "ಈ ಪಿತಾಮಹರು ಜೋಸೆಫನ ಮೇಲೆ ಮತ್ಸರ ತಾಳಿ ಅವನನ್ನು ಈಜಿಪ್ಟಿನವರಿಗೆ
ಗುಲಾಮನನ್ನಾಗಿ ಮಾರಿದರು. ಆದರೆ ದೇವರು ಅವನೊಂದಿಗೆ ಇದ್ದು, 10ಎಲ್ಲಾ ಆಪತ್ತು ವಿಪತ್ತುಗಳಿಂದ
ಅವನನ್ನು ಪಾರುಮಾಡಿದರು. ಅವನು ಈಜಿಪ್ಟಿನ ಅರಸ ಫರೋಹನ ಆಸ್ಥಾನಕ್ಕೆ ಬಂದಾಗ ದೇವರು ಅವನಿಗೆ
ಜ್ಞಾನಸಂಪನ್ನತೆಯನ್ನಿತ್ತು ಅರಸನ ಮೆಚ್ಚುಗೆಗೆ ಪಾತ್ರನಾಗುವಂತೆ ಅನುಗ್ರಹಿಸಿದರು. ಫರೋಹನು ಅವನನ್ನು
ರಾಜ್ಯಪಾಲನನ್ನಾಗಿಯೂ ಅರಮನೆಯ ಮೇಲ್ವಿಚಾರಕನನ್ನಾಗಿಯೂ ನೇಮಿಸಿದನು. 11ಈಜಿಪ್ಟ್ ಹಾಗೂ
ಕಾನಾನ್ ದೇಶಗಳಲ್ಲಿ ಕ್ಷಾಮ ತಲೆದೋರಿದಾಗ ಜನರು ಕಷ್ಟಸಂಕಟಗಳಿಗೆ ಒಳಗಾದರು. ನಮ್ಮ ಪೂರ್ವಜರು
ಆಹಾರವಿಲ್ಲದೆ ಅವಸ್ಥೆಪಟ್ಟರು. 12ಈಜಿಪ್ಟ್ ದೇಶದಲ್ಲಿ ಧಾನ್ಯ ಇರುವುದೆಂದು ಅರಿತು ಯಕೋಬನು, ಮೊದಲ
ಬಾರಿಗೆ ತನ್ನ ಪುತ್ರರನ್ನು ಅಲ್ಲಿಗೆ ಕಳುಹಿಸಿದನು. 13ಎರಡನೆಯ ಬಾರಿ ಅವರು ಬಂದಾಗ ಜೋಸೆಫನು ತನ್ನ
ಗುರುತನ್ನು ಸಹೋದರರಿಗೆ ತಿಳಿಸಿದನು. ಆಗ ಫರೋಹನಿಗೆ ಜೋಸೆಫನ ವಂಶದ ಪರಿಚಯವಾಯಿತು.
14ಅನಂತರ ತನ್ನ ತಂದೆ ಯಕೋಬನೂ ಅವನ ಬಂಧುಬಳಗದವರೂ ಈಜಿಪ್ಟಿಗೆ ಬರುವಂತೆ ಜೋಸೆಫನು
ಹೇಳಿಕಳುಹಿಸಿದನು. 15ಇವರ ಒಟ್ಟು ಸಂಖ್ಯೆ ಎಪ್ಪತ್ತೈದು. ಯಕೋಬನು ಈಜಿಪ್ಟಿಗೆ ಹೋದನು. ಅವನೂ
ನಮ್ಮ ಪಿತಾಮಹರೂ ಅಲ್ಲೇ ನಿಧನರಾದರು. 16ಅವರ ಅವಶೇಷಗಳನ್ನು ಮರಳಿ ಶೇಕೆಮಿಗೆ
ಕೊಂಡೊಯ್ಯಲಾಯಿತು. ಅಲ್ಲಿ ಹಾಮೋರ್ ಎಂಬವನ ಮಕ್ಕಳಿಂದ ಅಬ್ರಹಾಮನು ಕ್ರಯಕ್ಕೆ
ಕೊಂಡುಕೊಂಡಿದ್ದ ಸಮಾಧಿಯಲ್ಲಿ ಹೂಳಿದರು.

17 "ದೇವರು ಅಬ್ರಹಾಮನಿಗೆ ಮಾಡಿದ ವಾಗ್ದಾನವನ್ನು ನೆರವೇರಿಸುವ ಕಾಲವು ಸಮೀಪಿಸಿತು.
ಈಗಾಗಲೇ ಈಜಿಪ್ಟ್ ದೇಶದಲ್ಲಿ ನಮ್ಮ ಜನರ ಸಂಖ್ಯೆ ಅಧಿಕವಾಗಿ ಬೆಳೆದಿತ್ತು. 18ಕಡೆಗೆ ಜೋಸೆಫನನ್ನೇ
ಅರಿಯದ ಬೇರೊಬ್ಬ ಅರಸ ರಾಜ್ಯವಾಳಲಾರಂಭಿಸಿದನು. 19ಅವನು ನಮ್ಮ ಜನರೊಡನೆ ಕುಯುಕ್ತಿಯಿಂದ
ನಡೆದುಕೊಂಡನು. ಅವರ ಹಸುಳೆಗಳನ್ನು ನಿರ್ನಾಮ ಮಾಡಲು ಅವುಗಳನ್ನು ಹೊರಗೆ ಹಾಕಬೇಕೆಂದು
ಬಲಾತ್ಕಾರಮಾಡಿದನು. 20ಸುರಸುಂದರನಾದ ಮೋಶೆ ಜನಿಸಿದ್ದು ಈ ಸಂದರ್ಭದಲ್ಲೇ. ಅವನು ಮೂರು
ತಿಂಗಳವರೆಗೆ ಮನೆಯಲ್ಲೇ ಬೆಳೆದನು. 21ಅನಂತರ ಅವನನ್ನು ಮನೆಯಿಂದ ದೂರವಿಟ್ಟಿದ್ದಾಗ, ಫರೋಹನ
ಮಗಳು ಅವನನ್ನು ತನ್ನ ಪಾಲನೆಗೆ ತೆಗೆದುಕೊಂಡು ಸ್ವಂತ ಮಗನಂತೆ ಸಾಕಿದಳು. 22ಅವನು ಈಜಿಪ್ಟರ
ಸಕಲ ವಿದ್ಯೆಗಳಲ್ಲಿ ಪಾರಂಗತನಾಗಿ, ನಡೆಯಲ್ಲೂ ನುಡಿಯಲ್ಲೂ ಸಮರ್ಥನಾದನು.

23 "ಮೋಶೆಗೆ ನಲವತ್ತು ವರ್ಷ ವಯಸ್ಸು ಆಗಿದ್ದಾಗ ಅವನು ತನ್ನ ಸೋದರ ಇಸ್ರಯೇಲರನ್ನು
ಸಂದರ್ಶಿಸಲು ಇಷ್ಟಪಟ್ಟು ಹೊರಟನು. 24ಆಗ ಅವರಲ್ಲಿ ಒಬ್ಬನು ಈಜಿಪ್ಟಿನವನಿಂದ ಅನ್ಯಾಯವಾಗಿ
ಹಿಂಸೆಪಡುತ್ತಿರುವುದನ್ನು ಕಂಡನು. ಅವನ ಸಹಾಯಕ್ಕೆ ಹೋಗಿ ಈಜಿಪ್ಟಿನವನನ್ನು ಕೊಂದು
ಸೇಡುತೀರಿಸಿದನು. 25ಸ್ವಜನರ ಬಿಡುಗಡೆಗೆ ದೇವರು ತನ್ನನ್ನು ನೇಮಿಸಿರುವರು; ತನ್ನ ಸ್ವಂತ ಜನರು ಇದನ್ನು
ಅರ್ಥಮಾಡಿಕೊಳ್ಳುವರು ಎಂದು ಮೋಶೆ ಭಾವಿಸಿದ್ದನು. ಆದರೆ, ಅವರು ಅರ್ಥಮಾಡಿಕೊಳ್ಳಲಿಲ್ಲ.
26ಮಾರನೆಯ ದಿನ ಇಬ್ಬರು ಇಸ್ರಯೇಲರೇ ಜಗಳವಾಡುತ್ತಿರುವುದನ್ನು ಕಂಡನು. ಮೋಶೆ ಅವರನ್ನು
ಸಮಾಧಾನಗೊಳಿಸಲು ಪ್ರಯತ್ನಿಸಿದನು. ಅವರಿಗೆ, 'ಗೆಳೆಯರೇ, ನೀವು ಸಹೋದರರಲ್ಲವೆ? ಹೀಗೇಕೆ
ಕಿತ್ತಾಡುತ್ತಿದ್ದೀರಿ?' ಎಂದು ಸಮಾಧಾನಪಡಿಸಲು ಯತ್ನಿಸಿದನು. 27ಆಗ ಆಕ್ರಮಣ ಮಾಡುತ್ತಿದ್ದವನು
ಮೋಶೆಯನ್ನು ಹಿಂದಕ್ಕೆ ತಳ್ಳಿ, 'ನಮ್ಮ ನ್ಯಾಯತೀರಿಸಲು ನಿನಗೆ ಅಧಿಕಾರವನ್ನು ಕೊಟ್ಟವರು ಯಾರು? 28ನಿನ್ನೆ
ಈ ಈಜಿಪ್ಟಿನವನನ್ನು ಕೊಂದು ಹಾಕಿದಂತೆ ನನ್ನನ್ನೂ ಕೊಲ್ಲಬೇಕೆಂದಿರುವೆಯಾ?' ಎಂದು ಪ್ರಶ್ನಿಸಿದನು.

29ಇದನ್ನು ಕೇಳಿದ್ದೇ ಮೋಶೆ ಅಲ್ಲಿಂದ ಪಲಾಯನ ಮಾಡಿ ಮಿದ್ಯಾನರ ನಾಡಿನಲ್ಲಿ ಆಶ್ರಯ ಪಡೆದನು.
ಅಲ್ಲಿರುವಾಗ ಅವನಿಗೆ ಇಬ್ಬರು ಗಂಡು ಮಕ್ಕಳು ಹುಟ್ಟಿದರು.
30 "ನಾಲ್ವತ್ತು ವರ್ಷಗಳಾದ ಮೇಲೆ ಒಂದು ದಿನ ಸೀನಾಯಿ ಬೆಟ್ಟದ ಮರಳುಗಾಡಿನಲ್ಲಿ
ಉರಿಯುತ್ತಿದ್ದ ಪೊದೆಯೊಂದನ್ನು ಮೋಶೆ ಕಂಡನು. ಅದರಲ್ಲಿ ಒಬ್ಬ ದೇವದೂತನು ಕಾಣಿಸಿಕೊಂಡನು.
31ಇದನ್ನು ಕಂಡ ಮೋಶೆ ವಿಸ್ಮಿತನಾದನು. ಅದನ್ನು ಚೆನ್ನಾಗಿ ನೋಡಲೆಂದು ಹತ್ತಿರಕ್ಕೆ ಬಂದಾಗ, 32'ನಾನು
ನಿನ್ನ ಪಿತೃಗಳ ದೇವರು; ಅಬ್ರಹಾಮ, ಇಸಾಕ ಮತ್ತು ಯಕೋಬನ ದೇವರು ಆಗಿದ್ದೇನೆ' ಎಂದು
ಸರ್ವೇಶ್ವರನ ವಾಣಿ ಉಂಟಾಯಿತು. ಆಗ ಮೋಶೆ ಗಡಗಡನೆ ನಡುಗಿದನು. ಕಣ್ಣೆತ್ತಿ ನೋಡಲು
ಹಿಂಜರಿದನು. 33ಸರ್ವೇಶ್ವರ ಅವನಿಗೆ, 'ನಿನ್ನ ಪಾದರಕ್ಷೆಗಳನ್ನು ದೂರವಿಡು. ಏಕೆಂದರೆ ನೀನು ನಿಂತಿರುವ
ಸ್ಥಳ ಪವಿತ್ರವಾದುದು. 34ಈಜಿಪ್ಟಿನಲ್ಲಿರುವ ನನ್ನ ಜನರ ದುರವಸ್ಥೆ ನನಗೆ ತಿಳಿದೇ ಇದೆ. ಅವರ ಗೋಳನ್ನು
ಕೇಳಿ ಅವರನ್ನು ಬಿಡುಗಡೆಮಾಡಲು ಬಂದಿರುವೆನು. ಬಾ, ನಾನು ನಿನ್ನನ್ನು ಈಜಿಪ್ಟಿಗೆ ಕಳುಹಿಸುವೆನು,'
ಎಂದರು.
35 "ನಮ್ಮ ನ್ಯಾಯತೀರಿಸುವ ಅಧಿಕಾರವನ್ನು ನಿನಗೆ ಕೊಟ್ಟವರು ಯಾರು? ಎಂದು
ಇಸ್ರಯೇಲರಿಂದ ತಿರಸ್ಕೃತನಾದವನೇ ಆ ಮೋಶೆ. ಉರಿಯುವ ಪೊದೆಯಲ್ಲಿ ಕಾಣಿಸಿಕೊಂಡ ತಮ್ಮ ದೂತನ
ಮೂಲಕ ದೇವರು ಅಧಿಪತಿಯನ್ನಾಗಿಯೂ ವಿಮೋಚಕನನ್ನಾಗಿಯೂ ನೇಮಿಸಿದ್ದು ಇವನನ್ನೇ.
36ಈಜಿಪ್ಟಿನಲ್ಲೂ ಕೆಂಪು ಸಮುದ್ರದಲ್ಲೂ ನಲವತ್ತು ವರ್ಷಕಾಲ ಮರಳು ಬೆಂಗಾಡಿನಲ್ಲೂ ಅದ್ಭುತಗಳನ್ನು
ಹಾಗೂ ಸೂಚಕಕಾರ್ಯಗಳನ್ನು ಮಾಡಿ ಇಸ್ರಯೇಲರನ್ನು ಬಿಡುಗಡೆ ಮಾಡಿದವನು ಇವನೇ. 37'ದೇವರು
ನನ್ನನ್ನು ಕಳುಹಿಸಿದಂತೆ, ನಿಮ್ಮ ಜನಾಂಗದಿಂದಲೇ ಒಬ್ಬ ಪ್ರವಾದಿಯನ್ನು ಕಳುಹಿಸುವರು' ಎಂದು
ಇಸ್ರಯೇಲರಿಗೆ ತಿಳಿಸಿದವನು ಈ ಮೋಶೆಯೇ. 38ಇಸ್ರಯೇಲರು ಮರಳು ಗಾಡಿನಲ್ಲಿ ಸಭೆಸೇರಿದ್ದಾಗ, ಅವರ
ಮಧ್ಯೆ ಇದ್ದು, ಸೀನಾಯಿ ಬೆಟ್ಟದಲ್ಲಿ ಮಾತನಾಡಿದ ದೇವದೂತನೊಡನೆಯೂ ನಮ್ಮ ಪಿತೃಗಳೊಡನೆಯೂ
ಸಂಭಾಷಿಸಿದವನು ಇವನೇ. ನಮಗೀಯಲು ಜೀವೋಕ್ತಿಗಳನ್ನು ದೇವರಿಂದ ಪಡೆದವನು ಇವನೇ.
39 "ಆದರೆ ನಮ್ಮ ಪಿತೃಗಳು ಅವನಿಗೆ ವಿಧೇಯರಾಗಲು ನಿರಾಕರಿಸಿದರು. ಅವನನ್ನು ತಿರಸ್ಕರಿಸಿ
ಈಜಿಪ್ಟ್ ದೇಶಕ್ಕೆ ಹಿಂದಿರುಗಲು ಮನಸ್ಸು ಮಾಡಿದರು. 40ಅವರು ಆರೋನನಿಗೆ, 'ನಮ್ಮನ್ನು ಈಜಿಪ್ಟಿನಿಂದ
ಹೊರಗೆ ಕರೆದುಕೊಂಡು ಬಂದ ಆ ಮೋಶೆಗೆ ಏನಾಯಿತೋ ತಿಳಿಯದು. ನಮಗೆ ಮುಂದಾಳಾಗಿ
ಹೋಗಲು ಕೆಲವು ದೇವರುಗಳ ವಿಗ್ರಹಗಳನ್ನು ಮಾಡಿಕೊಡು,' ಎಂದರು. 41ಮಾತ್ರವಲ್ಲ, ಹೋರಿಕರುವಿನ
ಆಕಾರದ ವಿಗ್ರಹವೊಂದನ್ನು ಮಾಡಿ ಅದಕ್ಕೆ ಬಲಿಯನ್ನು ಕೊಟ್ಟು, ತಮ್ಮ ಕೈಕೃತಿಗಳಿಗಾಗಿ ಮೆರೆದಾಡಿದರು.
42ಆಗ ದೇವರು ಅವರಿಗೆ ವಿಮುಖರಾದರು. ಆಕಾಶದ ಗ್ರಹಗಳನ್ನೇ ಅವರು ಪೂಜಿಸಲೆಂದು ಬಿಟ್ಟುಬಿಟ್ಟರು.
ಇದನ್ನು ಕುರಿತೇ ಪ್ರವಾದಿಗಳ ಗ್ರಂಥದಲ್ಲಿ: 'ಓ ಇಸ್ರಯೇಲರೇ, ನೀವು ಮರಳುಗಾಡಿನಲ್ಲಿ ನಾಲ್ವತ್ತು ವರ್ಷಗಳ
ಕಾಲ ದಹನಬಲಿಗಳನ್ನು ಅರ್ಪಿಸಿದ್ದು ನನಗಲ್ಲ. 43ವಿಗ್ರಹಗಳನ್ನು ಮಾಡಿ ಪೂಜಿಸಿದಿರಿ; ಮೋಲೆಕ ದೇವನ
ಗುಡಾರವನ್ನೂ ನಕ್ಷತ್ರಾಧಿಪತಿಯಾದ ರೇಫಾ ದೇವತೆಯ ಪ್ರತಿಮೆಯನ್ನೂ ಹೊತ್ತುಕೊಂಡು ಹೋದಿರಿ.
ಆದುದರಿಂದ ನಾನು ನಿಮ್ಮನ್ನು ಬಾಬಿಲೋನಿನ ಆಚೆ ಗಡಿಪಾರು ಮಾಡುತ್ತೇನೆ,' ಎಂದು ಬರೆದಿದೆ.
44 "ದೇವಪ್ರಸನ್ನತೆಯ ಗುಡಾರವು ನಮ್ಮ ಪೂರ್ವಜರ ಬಳಿ ಮರಳುಗಾಡಿನಲ್ಲಿತ್ತು.
ಮೋಶೆಯೊಡನೆ ಮಾತನಾಡಿದ ದೇವರು ಅವನಿಗಿತ್ತ ಆಜ್ಞೆಯಂತೆ ಹಾಗೂ ತೋರಿಸಿದ ಆಕಾರದಂತೆ
ಅದನ್ನು ನಿರ್ಮಿಸಲಾಗಿತ್ತು. 45ಅನಂತರ ಬಂದ ನಮ್ಮ ಪಿತೃಗಳು ಅದನ್ನು ಸ್ವಾಸ್ಥ್ಯವಾಗಿ ಪಡೆದರು. ದೇವರು
ಅನ್ಯಜನಾಂಗಗಳನ್ನು ಓಡಿಸಿ ಸ್ವಾಧೀನಮಾಡಿಕೊಟ್ಟ ನಾಡಿಗೆ, ಅವರು ಯೆಹೋಶುವನ ಮುಖಂಡತ್ವದಲ್ಲಿ
ಹೋದಾಗ, ಈ ಗುಡಾರವನ್ನೂ ತೆಗೆದುಕೊಂಡು ಹೋದರು. ದಾವೀದನ ಕಾಲದವರೆಗೂ ಅದು ಅಲ್ಲೇ
ಇತ್ತು. 46ದೈವಾನುಗ್ರಹಕ್ಕೆ ಪಾತ್ರನಾದ ದಾವೀದನು ಯಕೋಬನ ದೇವರಿಗೆ ಆಲಯವೊಂದನ್ನು ಕಟ್ಟಲು
ಅಪ್ಪಣೆಯಾಗಬೇಕೆಂದು ಬೇಡಿಕೊಂಡನು. 47ಸಾಕ್ಷಾತ್ ಆ ಆಲಯವನ್ನು ಕಟ್ಟಿಸಿದವನು ಸೊಲೊಮೋನನು.
48ಆದರೆ ಪರಾತ್ಪರ ದೇವರು ಮಾನವ ನಿರ್ಮಿತ ಆಲಯಗಳಲ್ಲಿ ಮನೆಮಾಡುವುದಿಲ್ಲ. 49'ಸ್ವರ್ಗವೇ ನನ್ನ
ಸಿಂಹಾಸನ, ಭೂಮಿಯೇ ನನ್ನ ಪಾದಪೀಠ. ಇಂತಿರಲು, ನನ್ನಂಥವನಿಗೆ ಎಂಥ ಆಲಯವನ್ನು

ಕಟ್ಟಿಕೊಡುವಿರಿ? ನನ್ನ ವಿಶ್ರಾಂತಿಗೆ ತಕ್ಕ ಸ್ಥಳವಾದರೂ ಯಾವುದು? 50ಇವೆಲ್ಲವನ್ನೂ ನಿರ್ಮಿಸಿದವನು ನಾನೇ
ಅಲ್ಲವೇ?' ಎಂದು ಪ್ರಶ್ನಿಸುತ್ತಾರೆ ಸರ್ವೇಶ್ವರ, ಪ್ರವಾದಿಯ ಪ್ರವಚನವೊಂದರಲ್ಲಿ."
51 ಸ್ತೇಫನನು ಮುಂದುವರೆದು, "ಎಷ್ಟು ಹಟಮಾರಿಗಳು ನೀವು; ಎಂಥಾ ಕಠಿಣ ಹೃದಯಿಗಳು
ನೀವು; ದೇವರ ಸಂದೇಶಕ್ಕೆ ಎಷ್ಟು ಕಿವುಡರು ನೀವು! ನಿಮ್ಮ ಪೂರ್ವಜರಂತೆ ನೀವು ಸಹ ಪವಿತ್ರಾತ್ಮ
ಅವರನ್ನು ಯಾವಾಗಲೂ ಪ್ರತಿಭಟಿಸುತ್ತೀರಿ. 52ನಿಮ್ಮ ಪೂರ್ವಜರು ಹಿಂಸೆಗೆ ಗುರಿಪಡಿಸದ ಪ್ರವಾದಿ
ಯಾರಾದರೂ ಇದ್ದಾರೆಯೆ? ಸತ್ಯಸ್ವರೂಪನು ಬರಲಿದ್ದಾನೆಂದು ಮುಂತಿಳಿಸಿದವರನ್ನು ಅವರು
ಕೊಂದುಹಾಕಿದರು. ನೀವಾದರೋ, ಆ ಸತ್ಯಸ್ವರೂಪನನ್ನು ಹಿಡಿದುಕೊಟ್ಟು ಕೊಲೆಮಾಡಿಸಿದಿರಿ.
53ದೇವದೂತರ ಮೂಲಕ ಧರ್ಮಶಾಸ್ತ್ರವನ್ನು ಪಡೆದ ನೀವೇ ಅದಕ್ಕೆ ಅವಿಧೇಯರಾಗಿ ನಡೆದಿರಿ," ಎಂದನು.

### ಹುತಾತ್ಮನಾದ ಸ್ತೇಫನ

54 ಸ್ತೇಫನನ ಮಾತುಗಳನ್ನು ಕೇಳಿದ ನ್ಯಾಯಸಭೆಯ ಸದಸ್ಯರು ಅವನ ಮೇಲೆ
ಕೋಪೋದ್ರಿಕ್ತರಾದರು. ಕಟಕಟನೆ ಹಲ್ಲುಕಡಿದರು. 55ಆದರೆ ಸ್ತೇಫನನು ಪವಿತ್ರಾತ್ಮಭರಿತನಾಗಿ ಸ್ವರ್ಗದತ್ತ
ಕಣ್ಣೆತ್ತಿನೋಡಿ ದೇವರ ಮಹಿಮೆಯನ್ನೂ ಅವರ ಬಲಪಾರ್ಶ್ವದಲ್ಲಿ ನಿಂತಿರುವ ಯೇಸುವನ್ನೂ ಕಂಡು,
56"ಇಗೋ, ಆಕಾಶವು ತೆರೆದಿದೆ, ನರಪುತ್ರನು ದೇವರ ಬಲಪಾರ್ಶ್ವದಲ್ಲಿ ನಿಂತಿರುವುದನ್ನು ನಾನು
ನೋಡುತ್ತಿದ್ದೇನೆ," ಎಂದನು.
57 ಇದನ್ನು ಕೇಳಿದ ನ್ಯಾಯಸಭೆಯ ಸದಸ್ಯರು ಆರ್ಭಟಿಸಿದರು; ಕಿವಿಗಳನ್ನು ಮುಚ್ಚಿಕೊಂಡರು;
ಭರದಿಂದ ಅವನತ್ತ ಧಾವಿಸಿದರು. 58ಪಟ್ಟಣದಿಂದ ಹೊರಕ್ಕೆ ದಬ್ಬಿ ಅವನ ಮೇಲೆ ಕಲ್ಲು ತೂರಿದರು.
ಸಾಕ್ಷಿಕೊಟ್ಟವರು ತಮ್ಮ ಬಟ್ಟೆಬರೆಗಳನ್ನು ತರುಣ ಸೌಲನ ವಶದಲ್ಲಿ ಇಟ್ಟಿದ್ದರು. 59ಅವರು ತನ್ನ ಮೇಲೆ ಕಲ್ಲು
ಬೀರುತ್ತಿದ್ದಾಗ ಸ್ತೇಫನನು, "ಪ್ರಭು ಯೇಸುವೇ, ನನ್ನಾತ್ಮವನ್ನು ಸ್ವೀಕರಿಸಿ," ಎಂದು ಪ್ರಾರ್ಥಿಸಿದನು.
60ಅನಂತರ ಮೊಣಕಾಲೂರಿ, "ಪ್ರಭೂ, ಈ ಪಾಪವನ್ನು ಇವರ ಮೇಲೆ ಹೊರಿಸಬೇಡಿ," ಎಂದು ಧ್ವನಿಯೆತ್ತಿ
ಹೇಳುತ್ತಾ ಪ್ರಾಣಬಿಟ್ಟನು. ಸೌಲನು ಸ್ತೇಫನನ ಕೊಲೆಗೆ ಸಮ್ಮತಿಸಿದ್ದನು.

### ಸೌಲನ ಸೇಡು

**8** ಆ ದಿನವೇ ಜೆರುಸಲೇಮಿನ ಧರ್ಮಸಭೆಯ ವಿರುದ್ಧ ಕ್ರೂರ ಹಿಂಸೆ ಪ್ರಾರಂಭವಾಯಿತು. ಪ್ರೇಷಿತರ
ಹೊರತು ಇತರ ಭಕ್ತವಿಶ್ವಾಸಿಗಳು ಜುದೇಯ ಮತ್ತು ಸಮಾರಿಯ ಪ್ರಾಂತ್ಯಗಳಲ್ಲೆಲ್ಲಾ ಚದರಿ ಹೋದರು.
2ಕೆಲವು ಭಕ್ತಾದಿಗಳು ಸ್ತೇಫನನನ್ನು ಸಮಾಧಿಮಾಡಿ ಅವನಿಗಾಗಿ ಅತ್ತು ಗೋಳಾಡಿದರು. 3ಇತ್ತ ಸೌಲನು
ಧರ್ಮಸಭೆಯನ್ನು ನಾಶಪಡಿಸಲು ತೊಡಗಿದನು; ಮನೆಮನೆಗೂ ನುಗ್ಗಿ ಸ್ತ್ರೀಪುರುಷರೆನ್ನದೆ ಭಕ್ತರನ್ನು
ಎಳೆದುತಂದು ಸೆರೆಮನೆಗೆ ತಳ್ಳುತ್ತಿದ್ದನು.

### ಸಮಾರಿಯದಲ್ಲಿ ಶುಭಸಂದೇಶ

4 ಚದರಿ ಹೋದ ಭಕ್ತವಿಶ್ವಾಸಿಗಳು ಎಲ್ಲೆಲ್ಲೂ ಹೋಗಿ ಶುಭಸಂದೇಶವನ್ನು ಸಾರುತ್ತಿದ್ದರು.
5ಫಿಲಿಪ್ಪನು ಸಮಾರಿಯದ ಪ್ರಮುಖ ಪಟ್ಟಣ ಒಂದಕ್ಕೆ ಹೋಗಿ ಅಲ್ಲಿಯ ಜನರಿಗೆ ಯೇಸುವೇ ಅಭಿಷಿಕ್ತನಾದ
ಲೋಕೋದ್ಧಾರಕನೆಂದು ಸಾರಿದನು. 6ಜನಸಮೂಹವು ಅವನಿಗೆ ಕಿವಿಕೊಟ್ಟಿತು. ಅವನು ಮಾಡಿದ
ಅದ್ಭುತಕಾರ್ಯಗಳನ್ನು ಕಣ್ಣಾರೆ ಕಂಡಿತು; ಅವನ ಬೋಧನೆಯನ್ನು ಒಮ್ಮನಸ್ಸಿನಿಂದ ಸ್ವೀಕರಿಸಿತು.
7ಅನೇಕರನ್ನು ಹಿಡಿದಿದ್ದ ದೆವ್ವಗಳು ಅಬ್ಬರಿಸುತ್ತಾ ಅವರನ್ನು ಬಿಟ್ಟಗಲಿದವು; ಪಾರ್ಶ್ವವಾಯು ಪೀಡಿತರೂ
ಕುಂಟರೂ ಸ್ವಸ್ಥರಾದರು. 8ಇದರಿಂದ ಆ ಪಟ್ಟಣದಲ್ಲಿ ಉಂಟಾದ ಸಂತೋಷಕ್ಕೆ ಎಲ್ಲೆಯೇ ಇರಲಿಲ್ಲ.
9 ಆ ಪಟ್ಟಣದಲ್ಲಿ ಆಗ ಸಿಮೋನನೆಂಬ ಒಬ್ಬ ಮಂತ್ರವಾದಿ ಇದ್ದನು. ಅವನು ಸಮಾರಿಯದ
ಜನತೆಯನ್ನು ತನ್ನ ಮಾಯಮಂತ್ರಗಳಿಂದ ಮಂಕುಗೊಳಿಸಿದ್ದನು. ತಾನೊಬ್ಬ ಮಹಾಪುರುಷನೆಂದು

ಕೊಚ್ಚಿಕೊಳ್ಳುತ್ತಿದ್ದನು. [10]ಆ ಪಟ್ಟಣದವರೆಲ್ಲರೂ ಹಿರಿಯರು ಕಿರಿಯರು ಎನ್ನದೆ, ಅವನ ಮಾತಿಗೆ ಕಾತರದಿಂದ
ಕಿವಿಗೊಡುತ್ತಿದ್ದರು. 'ದೇವರ ಮಹಾಶಕ್ತಿ' ಇವನೇ ಎಂದುಕೊಳ್ಳುತ್ತಿದ್ದರು. [11]ಬಹುಕಾಲದಿಂದ ಇವನ
ಮಂತ್ರತಂತ್ರಗಳಿಗೆ ಮಾರುಹೋಗಿದ್ದ ಜನರು ಇವನ ಮಾತಿಗೆ ಬೆಲೆಕೊಡುತ್ತಿದ್ದರು. [12]ಆದರೆ ಫಿಲಿಪ್ಪನು
ದೇವರ ಸಾಮ್ರಾಜ್ಯ ಹಾಗೂ ಯೇಸುಕ್ರಿಸ್ತರ ಶುಭಸಂದೇಶವನ್ನು ಬೋಧಿಸಿದಾಗ ಅದರಲ್ಲಿ ವಿಶ್ವಾಸತಳೆದರು.
ಸ್ತ್ರೀಪುರುಷರೆನ್ನದೆ ದೀಕ್ಷಾಸ್ನಾನವನ್ನು ಪಡೆದರು. [13]ಸಿಮೋನನು ಕೂಡ ವಿಶ್ವಾಸವಿಟ್ಟನು. ದೀಕ್ಷಾಸ್ನಾನವನ್ನು
ಪಡೆದು ಫಿಲಿಪ್ಪನ ಸಂಗಡಿಗನಾದನು. ಫಿಲಿಪ್ಪನು ಮಾಡಿದ ಅದ್ಭುತ ಕಾರ್ಯಗಳನ್ನೂ
ಸೂಚಕಕಾರ್ಯಗಳನ್ನೂ ಕಂಡು ಬೆಕ್ಕಸಬೆರಗಾದನು.

14 ಸಮಾರಿಯದ ಜನರು ದೇವರ ವಾಕ್ಯವನ್ನು ಸ್ವೀಕರಿಸಿದ ಸಮಾಚಾರ ಪ್ರೇಷಿತರಿಗೆ ಮುಟ್ಟಿತು.
ಅವರು ಪೇತ್ರ ಮತ್ತು ಯೊವಾನ್ನರನ್ನು ಅಲ್ಲಿಗೆ ಕಳುಹಿಸಿದರು. [15]ಇವರು ಬಂದು ಆ ಜನರು ಪವಿತ್ರಾತ್ಮ
ಅವರ ವರವನ್ನು ಪಡೆಯಲೆಂದು ಅವರಿಗೋಸ್ಕರ ಪ್ರಾರ್ಥನೆಮಾಡಿದರು. [16]ಏಕೆಂದರೆ, ಅವರು ಪ್ರಭು
ಯೇಸುವಿನ ನಾಮದಲ್ಲಿ ದೀಕ್ಷಾಸ್ನಾನವನ್ನು ಪಡೆದಿದ್ದರೇ ಹೊರತು ಅವರಲ್ಲಿ ಯಾರ ಮೇಲೂ ಆ ವರವು
ಬಂದಿರಲಿಲ್ಲ. [17]ಪ್ರೇಷಿತರು ಅವರ ಮೇಲೆ ಹಸ್ತನಿಕ್ಷೇಪ ಮಾಡಲು ಅವರು ಪವಿತ್ರಾತ್ಮ ವರವನ್ನು ಪಡೆದರು.

18 ಪ್ರೇಷಿತರು ಹಸ್ತನಿಕ್ಷೇಪ ಮಾಡಿದಾಗ ಭಕ್ತರಿಗೆ ಪವಿತ್ರಾತ್ಮ ಪ್ರಧಾನವಾಗುವುದನ್ನು ಸಿಮೋನನು
ಕಂಡನು. ಪೇತ್ರ ಮತ್ತು ಯೊವಾನ್ನರಿಗೆ ಹಣವನ್ನು ನೀಡುತ್ತಾ, [19]"ನಾನೂ ಸಹ ಯಾರ ಮೇಲೆ ಕೈಯಿಟ್ಟರೂ
ಅವರು ಪವಿತ್ರಾತ್ಮ ಅವರ ವರವನ್ನು ಹೊಂದುವಂತಹ ಶಕ್ತಿಯನ್ನು ನನಗೂ ಕೊಡಿ," ಎಂದು
ಕೇಳಿಕೊಂಡನು.

20 ಅದಕ್ಕೆ ಪೇತ್ರನು, "ನಿನ್ನ ಹಣಕಾಸು ನಿನ್ನೊಂದಿಗೆ ಹಾಳಾಗಿಹೋಗಲಿ; ದೇವರ ವರವನ್ನು
ಹಣಕ್ಕೆ ಕೊಳ್ಳಬೇಕೆಂದಿರುವೆಯಾ? [21]ಈ ಕಾರ್ಯದಲ್ಲಿ ನಿನಗೆ ಭಾಗವೂ ಇಲ್ಲ, ಪಾಲೂ ಇಲ್ಲ. ದೇವರ
ದೃಷ್ಟಿಯಲ್ಲಿ ನಿನ್ನ ಹೃದಯವು ಸರಿಯಲ್ಲ. [22]ನಿನ್ನ ದುರಾಲೋಚನೆಗಾಗಿ ಪಶ್ಚಾತ್ತಾಪಪಡು; ನಿನ್ನ
ದುರುದ್ದೇಶವನ್ನು ಕ್ಷಮಿಸಲೆಂದು ಪ್ರಭುವನ್ನು ಪ್ರಾರ್ಥಿಸು; ಅವರು ಕ್ಷಮಿಸಬಹುದು. [23]ನೀನು
ದ್ವೇಷಾಸೂಯೆಯಿಂದ ತುಂಬಿರುವೆ; ಪಾಪಕ್ಕೆ ದಾಸನಾಗಿರುವೆ," ಎಂದನು.

24 ಆಗ ಸಿಮೋನನು, "ನೀವು ಹೇಳಿದ ಯಾವ ಕೇಡೂ ನನಗೆ ತಗಲದಂತೆ ನನಗಾಗಿ ನೀವೇ
ಪ್ರಭುವಿನಲ್ಲಿ ಪ್ರಾರ್ಥನೆಮಾಡಿ," ಎಂದು ಬೇಡಿಕೊಂಡನು.

25 ಪ್ರೇಷಿತರು ದೇವರ ವಾಕ್ಯವನ್ನು ಸಾಕ್ಷ್ಯಪೂರಿತವಾಗಿ ಬೋಧಿಸಿದ ಮೇಲೆ ಜೆರುಸಲೇಮಿಗೆ
ಮರಳಿದರು. ದಾರಿಯಲ್ಲಿ ಅವರು ಸಮಾರಿಯದ ಅನೇಕ ಹಳ್ಳಿಗಳಲ್ಲೂ ಶುಭಸಂದೇಶವನ್ನು ಸಾರಿದರು.

## ಫಿಲಿಪ್ ಮತ್ತು ಇಥಿಯೋಪಿಯದ ಅಧಿಕಾರಿ

26 ಅನಂತರ ದೇವದೂತನು ಫಿಲಿಪ್ಪನಿಗೆ, "ನೀನು ಎದ್ದು ದಕ್ಷಿಣಾಭಿಮುಖವಾಗಿ ಹೋಗು. ಅದು
ಜೆರುಸಲೇಮಿನಿಂದ ಗಾಜಕ್ಕೆ ಹೋಗುವ ಅರಣ್ಯಮಾರ್ಗ," ಎಂದನು. [27–28]ಅಂತೆಯೇ ಫಿಲಿಪ್ಪನು
ಹೊರಟನು. ಆಗ ಇಥಿಯೋಪಿಯದ ಕಂಚುಕಿಯೊಬ್ಬನು ಅದೇ ಮಾರ್ಗವಾಗಿ ಬರುತ್ತಿದ್ದನು. ಅವನು ಆ
ದೇಶದ ರಾಣಿ ಕಂದಾಕಿಯ ಕೋಶಾಧಿಕಾರಿ ಹಾಗೂ ಸಚಿವ. ದೇವಾರಾಧನೆಗೆಂದು ಜೆರುಸಲೇಮಿಗೆ ಹೋಗಿ
ಹಿಂದಿರುಗುತ್ತಿದ್ದನು. ಅವನು ತನ್ನ ರಥದಲ್ಲಿ ಕುಳಿತು ಯೆಶಾಯನ ಪ್ರವಾದನೆಯನ್ನು ಓದುತ್ತಿದ್ದನು.
[29]ಪವಿತ್ರಾತ್ಮರು ಫಿಲಿಪ್ಪನಿಗೆ, "ನೀನು ಮುಂದೆ ಹೋಗಿ ಆ ರಥದ ಜೊತೆಯಲ್ಲೇ ನಡೆ," ಎಂದು ತಿಳಿಸಿದರು.
[30]ಫಿಲಿಪ್ಪನು ಮುಂದಕ್ಕೆ ಧಾವಿಸಿ, ಅವನು ಯೆಶಾಯನ ಪ್ರವಾದನೆಯನ್ನು ಓದುತ್ತಿರುವುದನ್ನು
ಕೇಳಿಸಿಕೊಂಡನು. "ನೀವು ಓದುತ್ತಿರುವುದು ಅರ್ಥವಾಗುತ್ತಿದೆಯೇ?" ಎಂದು ಪ್ರಶ್ನಿಸಿದನು. [31]ಆ ಅಧಿಕಾರಿ
ಪ್ರತ್ಯುತ್ತರವಾಗಿ, "ಯಾರಾದರೂ ವಿವರಿಸಿದ ಹೊರತು ಇದು ನನಗೆ ಅರ್ಥವಾಗುವುದಾದರೂ ಹೇಗೆ?"
ಎಂದನು. ರಥವನ್ನು ಹತ್ತಿ ಕುಳಿತುಕೊಳ್ಳುವಂತೆ ಫಿಲಿಪ್ಪನನ್ನು ಆಹ್ವಾನಿಸಿದನು.
[32] ಅವನು ಓದುತ್ತಿದ್ದ ಪ್ರವಾದನೆ ಇದು:

"ವಧ್ಯಸ್ಥಾನಕ್ಕೆ ಒಯ್ದ ಕುರಿಯಂತೆ
ತುಪ್ಪಟ ಕತ್ತರಿಸುವವನ ಮುಂದಿರುವ

ಮೂಕ ಕುರಿಮರಿಯಂತೆ
ಆತನು ಬಾಯ್ದೆರೆಯಲಿಲ್ಲ.
33 ಆತನನ್ನು ಅವಮಾನಪಡಿಸಲಾಯಿತು,
ನ್ಯಾಯವನ್ನೇ ಆತನಿಗೆ ನಿರಾಕರಿಸಲಾಯಿತು,
ಆತನ ಸಂತತಿಯ ಮಾತೇಎತ್ತದಂತಾಯಿತು.
ಇದಕಾರಣ ಆತನ ಭೌತಿಕ ಜೀವವನ್ನೇ
ಮೊಟಕುಗೊಳಿಸಲಾಯಿತು."

34 ಆ ಅಧಿಕಾರಿ ಫಿಲಿಪ್ಪನಿಗೆ, "ಇಲ್ಲಿ ಪ್ರವಾದಿ ಯಾರನ್ನು ಕುರಿತು ಈ ಮಾತುಗಳನ್ನು ಹೇಳಿದ್ದಾನೆ.
ತನ್ನನ್ನು ಕುರಿತೋ ಅಥವಾ ಬೇರೆಯವರನ್ನು ಕುರಿತೋ, ಹೇಳಬಲ್ಲೆಯಾ?" ಎಂದು ಕೇಳಿದನು. 35ಆಗ
ಫಿಲಿಪ್ಪನು ಮರುತ್ತರವಾಗಿ, ಆ ಪ್ರವಾದನೆಯನ್ನೇ ಆಧಾರವಾಗಿ ತೆಗೆದುಕೊಂಡು, ಯೇಸುವಿನ
ಶುಭಸಂದೇಶವನ್ನು ಅವನಿಗೆ ಬೋಧಿಸಿದನು. 36ಅವರು ಪ್ರಯಾಣ ಮಾಡುತ್ತಾ ದಾರಿಯಲ್ಲಿ ನೀರಿದ್ದ ಒಂದು
ಸ್ಥಳಕ್ಕೆ ಬಂದರು. ಅದನ್ನು ಕಂಡ ಆ ಅಧಿಕಾರಿ, "ಇಲ್ಲಿ ನೀರಿದೆ. ನಾನು ದೀಕ್ಷಾಸ್ನಾನವನ್ನು ಪಡೆಯಲು
ಏನಾದರೂ ಅಭ್ಯಂತರವಿದೆಯೇ" ಎಂದನು. 37(ಫಿಲಿಪ್ಪನು, "ನೀವು ಹೃದಯಪೂರ್ವಕವಾಗಿ
ವಿಶ್ವಾಸಿಸುವುದಾದರೆ ದೀಕ್ಷಾಸ್ನಾನವನ್ನು ಪಡೆಯಬಹುದು," ಎಂದನು. "ಯೇಸುಕ್ರಿಸ್ತ ದೇವರ ಪುತ್ರ ಎಂದು
ನಾನು ವಿಶ್ವಾಸಿಸುತ್ತೇನೆ," ಎಂದು ಅಧಿಕಾರಿ ಪ್ರತ್ಯುತ್ತರವಿತ್ತನು).

38 ಅಧಿಕಾರಿಯ ಆಜ್ಞೆಯಂತೆ ರಥವನ್ನು ಅಲ್ಲಿಯೇ ನಿಲ್ಲಿಸಲಾಯಿತು. ಅವರಿಬ್ಬರೂ ನೀರಿಗೆ
ಇಳಿದರು. ಫಿಲಿಪ್ಪನು ಅಧಿಕಾರಿಗೆ ದೀಕ್ಷಾಸ್ನಾನವನ್ನು ಕೊಟ್ಟನು. 39ಅವರಿಬ್ಬರು ನೀರಿನಿಂದ ಮೇಲಕ್ಕೆ
ಬಂದೊಡನೆ ಪ್ರಭುವಿನ ಆತ್ಮವು ಫಿಲಿಪ್ಪನನ್ನು ಅಲ್ಲಿಂದ ಕೊಂಡೊಯ್ಯಿತು. ಆ ಅಧಿಕಾರಿ ಫಿಲಿಪ್ಪನನ್ನು ಪುನಃ
ಕಾಣಲಿಲ್ಲ; ಅವನು ಸಂತೋಷಭರಿತನಾಗಿ ಪ್ರಯಾಣವನ್ನು ಮುಂದುವರಿಸಿದನು. 40ಫಿಲಿಪ್ಪನಾದರೋ
ಆಜೋತ್ ಎಂಬಲ್ಲಿ ಕಾಣಿಸಿಕೊಂಡನು. ಅಲ್ಲಿಂದ ಸೆಜರೇಯವನ್ನು ತಲುಪುವವರೆಗೆ ಎಲ್ಲಾ ಊರುಗಳಲ್ಲೂ
ಶುಭಸಂದೇಶವನ್ನು ಸಾರುತ್ತಾ ಹೋದನು.

## ಪೌಲನಾಗಿ ಮಾರ್ಪಟ್ಟ ಸೌಲ

(ಪ್ರೇ.ಕಾ. 22.6–16; 26.12–18)

**9** ಇತ್ತ ಸೌಲನು ಯೇಸುಸ್ವಾಮಿಯ ಅನುಯಾಯಿಗಳಿಗೆ ಬೆದರಿಕೆ ಹಾಕುತ್ತಾ ಅವರನ್ನು
ಸಂಹರಿಸಬೇಕೆಂದಿದ್ದನು. 2ಈ ಹೊಸಮಾರ್ಗವನ್ನು ಅವಲಂಬಿಸುವವರು ಹೆಂಗಸರೇ ಆಗಿರಲಿ, ಗಂಡಸರೇ
ಆಗಿರಲಿ, ದಮಸ್ಕಸಿನಲ್ಲಿದ್ದರೆ ಅವರನ್ನು ಬಂಧಿಸಿ ಜೆರುಸಲೇಮಿಗೆ ಎಳೆದು ತರಬೇಕೆಂದಿದ್ದನು. ಇದಕ್ಕೆ
ಬೇಕಾದ ಪತ್ರಗಳನ್ನು ಕೇಳುವುದಕ್ಕಾಗಿ ಪ್ರಧಾನ ಯಾಜಕನ ಬಳಿಗೆ ಹೋದನು. ದಮಸ್ಕಸಿನಲ್ಲಿರುವ
ಪ್ರಾರ್ಥನಾ ಮಂದಿರದ ಅಧಿಕಾರಿಗಳಿಗೆ ತೋರಿಸಲು ಆ ಪತ್ರಗಳನ್ನು ಪಡೆದನು. 3ಅವನು ಅಲ್ಲಿಂದ
ಪ್ರಯಾಣ ಮಾಡುತ್ತಾ ದಮಸ್ಕಸ್ ಪಟ್ಟಣವನ್ನು ಸಮೀಪಿಸಿದನು. ಇದ್ದಕ್ಕಿದ್ದಂತೆ ಆಕಾಶದಿಂದ ಬೆಳಕೊಂದು
ಮಿಂಚಿ ಅವನ ಸುತ್ತಲೂ ಆವರಿಸಿತು. 4ಅವನು ನೆಲಕ್ಕುರುಳಿದನು. "ಸೌಲನೇ, ಸೌಲನೇ, ನನ್ನನ್ನೇಕೆ
ಹಿಂಸಿಸುತ್ತಿರುವೆ?" ಎಂಬ ವಾಣಿ ಅವನಿಗೆ ಕೇಳಿಸಿತು. 5ಆಗ ಅವನು, "ಪ್ರಭೂ, ನೀವಾರು?" ಎಂದನು.
"ನೀನು ಹಿಂಸೆಪಡಿಸುತ್ತ ಇರುವ ಯೇಸುವೇ ನಾನು. 6ನೀನೆದ್ದು ಪಟ್ಟಣಕ್ಕೆ ಹೋಗು, ಏನು ಮಾಡಬೇಕೆಂದು
ನಿನಗೆ ಅಲ್ಲಿ ತಿಳಿಸಲಾಗುವುದು," ಎಂದು ಆ ವಾಣಿ ಹೇಳಿತು. 7ಸೌಲನೊಡನೆ ಪ್ರಯಾಣ ಮಾಡುತ್ತಿದ್ದವರಿಗೆ
ಆ ವಾಣಿ ಕೇಳಿಸಿತೇ ಹೊರತು, ಯಾರೂ ಕಾಣಿಸಲಿಲ್ಲ. ಅವರು ಸ್ತಬ್ಧರಾದರು. 8ಸೌಲನು ಮೇಲಕ್ಕೆದ್ದು
ಕಣ್ಣರಳಿಸಿ ನೋಡಿದರೂ ಅವನಿಗೇನೂ ಕಾಣಿಸಲಿಲ್ಲ. ಆದುದರಿಂದ ಸಂಗಡಿಗರು ಅವನ ಕೈಹಿಡಿದು
ದಮಸ್ಕಸ್ ಪಟ್ಟಣಕ್ಕೆ ಕರೆದುಕೊಂಡು ಹೋದರು. 9ಮೂರು ದಿನಗಳವರೆಗೂ ಅವನಿಗೆ ಕಣ್ಣು ಕಾಣಿಸಲಿಲ್ಲ.
ಅಲ್ಲದೆ ಅದುವರೆಗೂ ಅವನು ಅನ್ನಪಾನಗಳನ್ನು ಮುಟ್ಟಲಿಲ್ಲ.

10 ದಮಸ್ಕಸಿನಲ್ಲಿ ಅನನೀಯ ಎಂಬ ಶಿಷ್ಯನಿದ್ದನು. ಪ್ರಭು ಅವನಿಗೆ ದರ್ಶನವಿತ್ತು, "ಅನನೀಯಾ"
ಎಂದು ಕರೆಯಲು ಅವನು, "ಸ್ವಾಮಿ, ಅಪ್ಪಣೆಯಾಗಲಿ," ಎಂದನು. 11ಪ್ರಭು ಅವನಿಗೆ, "ನೀನೆದ್ದು
'ನೇರಬೀದಿ' ಎಂಬ ಹಾದಿಗೆ ಹೋಗು; ತಾರ್ಸದ ಸೌಲ ಎಂಬ ವ್ಯಕ್ತಿಗಾಗಿ ಯೂದನ ಮನೆಯಲ್ಲಿ
ವಿಚಾರಿಸು. ಆ ಸೌಲನು ಪ್ರಾರ್ಥನೆಯಲ್ಲಿರುವುದನ್ನು ಕಾಣುವೆ. 12ಅಲ್ಲದೆ ಅನನೀಯ ಎಂಬವನು ತನ್ನ
ಬಳಿಗೆ ಬಂದು ತಾನು ಮರಳಿ ದೃಷ್ಟಿಯನ್ನು ಪಡೆಯುವಂತೆ ತನ್ನ ಮೇಲೆ ಹಸ್ತನಿಕ್ಷೇಪ ಮಾಡುವುದನ್ನು
ದರ್ಶನದಲ್ಲಿ ಕಂಡಿದ್ದಾನೆ," ಎಂದರು. 13ಅನನೀಯ ಪ್ರತ್ಯುತ್ತರವಾಗಿ, "ಪ್ರಭೂ, ಈ ಮನುಷ್ಯ
ಜೆರುಸಲೇಮಿನಲ್ಲಿ ತಮ್ಮ ಭಕ್ತರಿಗೆ ಎಷ್ಟು ಕೇಡು ಮಾಡಿದ್ದಾನೆಂಬುದನ್ನು ಅನೇಕರ ಬಾಯಿಂದ ಕೇಳಿದ್ದೇನೆ.
14ಅಷ್ಟು ಮಾತ್ರವಲ್ಲ, ತಮ್ಮ ನಾಮಸ್ಮರಣೆ ಮಾಡುವವರೆಲ್ಲರನ್ನು ಬಂಧಿಸಲು ಮುಖ್ಯಯಾಜಕರಿಂದ
ಅಧಿಕಾರವನ್ನು ಪಡೆದು ಇಲ್ಲಿಗೆ ಬಂದಿದ್ದಾನೆ," ಎಂದನು. 15ಪ್ರಭು ಅವನಿಗೆ, "ನೀನು ಹೋಗು, ನನ್ನ
ನಾಮವನ್ನು ಅನ್ಯಧರ್ಮದವರಿಗೂ ಅರಸರಿಗೂ ಇಸ್ರಯೇಲಿನ ಜನರಿಗೂ ಪ್ರಕಟಿಸಲು ನಾನು
ಆರಿಸಿಕೊಂಡಿರುವ ಸಾಧನ ಅವನು. 16ಅವನು ನನ್ನ ನಾಮದ ನಿಮಿತ್ತ ಎಷ್ಟು ಕಷ್ಟಕಾರ್ಪಣ್ಯಗಳನ್ನು
ಅನುಭವಿಸಬೇಕೆಂಬುದನ್ನು ನಾನೇ ಅವನಿಗೆ ತೋರಿಸುತ್ತೇನೆ," ಎಂದರು.

17 ಅಂತೆಯೇ ಅನನೀಯನು ಹೊರಟು ಆ ಮನೆಗೆ ಹೋದನು. ಸೌಲನ ಮೇಲೆ
ಹಸ್ತನಿಕ್ಷೇಪಮಾಡಿ, "ಸಹೋದರ ಸೌಲನೇ, ಪ್ರಭು ನನ್ನನ್ನು ನಿನ್ನ ಬಳಿಗೆ ಕಳುಹಿಸಿದ್ದಾರೆ. ನೀನು ಬರುವಾಗ
ದಾರಿಯಲ್ಲಿ ಕಾಣಿಸಿಕೊಂಡ ಯೇಸುಸ್ವಾಮಿಯೇ, ನೀನು ದೃಷ್ಟಿಯನ್ನು ಮರಳಿ ಪಡೆಯುವಂತೆಯೂ
ಪವಿತ್ರಾತ್ಮಭರಿತನಾಗುವಂತೆಯೂ ನನ್ನನ್ನು ಕಳುಹಿಸಿದ್ದಾರೆ," ಎಂದನು. 18ಆ ಕ್ಷಣವೇ ಸೌಲನ ಕಣ್ಣುಗಳಿಂದ
ಪರೆಯೊಂದು ಕಳಚಿಬಿದ್ದಿತು. ಅವನಿಗೆ ಪುನಃ ಕಣ್ಣು ಕಾಣತೊಡಗಿತು. ಎದ್ದು ದೀಕ್ಷಾಸ್ನಾನವನ್ನು ಪಡೆದನು.
19ತರುವಾಯ ಊಟಮಾಡಿದ ಮೇಲೆ ಅವನಿಗೆ ತ್ರಾಣ ಬಂದಿತು. ಸೌಲನು ಕೆಲವು ದಿನಗಳವರೆಗೆ
ದಮಸ್ಕಸಿನಲ್ಲಿ ಭಕ್ತವಿಶ್ವಾಸಿಗಳೊಡನೆ ಇದ್ದನು.

### ದಮಸ್ಕಸಿನಲ್ಲಿ ಸೌಲನ ವಾದ

20 ಅನಂತರ ಸೌಲನು ತಡಮಾಡದೆ ಯೆಹೂದ್ಯರ ಪ್ರಾರ್ಥನಾಮಂದಿರಗಳಿಗೆ ಹೋಗಿ ಯೇಸುವೇ
'ದೇವರ ಪುತ್ರ' ಎಂದು ಬೋಧಿಸಲು ಆರಂಭಿಸಿದನು. 21ಅವನ ಬೋಧನೆಯನ್ನು ಕೇಳಿದವರೆಲ್ಲರೂ
ಚಕಿತರಾದರು. "ಜೆರುಸಲೇಮಿನಲ್ಲಿ ಯೇಸುವಿನ ನಾಮಸ್ಮರಣೆ ಮಾಡುತ್ತಿದ್ದವರನ್ನು ಬಲಿಹಾಕುತ್ತಿದ್ದವನು
ಇವನೇ ಅಲ್ಲವೇ? ಅಂಥವರನ್ನು ಬಂಧಿಸಿ ಮುಖ್ಯಯಾಜಕರ ಬಳಿಗೆ ಎಳೆದೊಯ್ಯುವ ಉದ್ದೇಶದಿಂದಲೇ
ಅಲ್ಲವೆ ಇವನು ಇಲ್ಲಿಗೆ ಬಂದಿರುವುದು?" ಎಂದು ಪ್ರಶ್ನಿಸತೊಡಗಿದರು. 22ಸೌಲನಾದರೋ ಮತ್ತಷ್ಟು
ಸಾಮರ್ಥ್ಯದಿಂದ ಪ್ರಭು ಯೇಸುವೇ ಲೋಕೋದ್ಧಾರಕನೆಂದು ರುಜುವಾತುಪಡಿಸಿ ದಮಸ್ಕಸಿನ ಯೆಹೂದ್ಯರ
ಬಾಯಿಮುಚ್ಚಿಸಿದನು.

23 ಕೆಲವು ದಿನಗಳಾದ ಮೇಲೆ, ಯೆಹೂದ್ಯರು ಸೌಲನನ್ನು ಕೊಲ್ಲಲು ಒಳಸಂಚು ಮಾಡಿದರು.
24ಅದು ಸೌಲನಿಗೆ ತಿಳಿದು ಬಂದಿತು. ಅವರು ಅವನನ್ನು ಕೊಲ್ಲಲು ಹಗಲಿರುಳು ಪಟ್ಟಣದ ದ್ವಾರಗಳನ್ನು
ಕಾಯುತ್ತಿದ್ದರು. 25ಒಂದು ರಾತ್ರಿ ಸೌಲನ ಶಿಷ್ಯರು ಅವನನ್ನು ಕರೆದುಕೊಂಡು ಹೋಗಿ ಗೂಡೆಯೊಂದರಲ್ಲಿ
ಕೂರಿಸಿ ಗೋಡೆಯ ಮೇಲಿಂದ ಕೆಳಕ್ಕೆ ಇಳಿಸಿದರು.

### ಜೆರುಸಲೇಮಿನಲ್ಲಿ ಸೌಲ

26 ಸೌಲನು ಜೆರುಸಲೇಮಿಗೆ ಬಂದು ಭಕ್ತವಿಶ್ವಾಸಿಗಳನ್ನು ಸೇರಲು ಪ್ರಯತ್ನಿಸಿದನು. ಆದರೆ, ಅವರು
ಅವನು ಸಹ ಒಬ್ಬ ಭಕ್ತನೆಂದು ನಂಬದೆ ಅವನಿಗೆ ಭಯಪಟ್ಟರು. 27ಆಗ ಬಾರ್ನಬನು ಅವನನ್ನು ಪ್ರೇಷಿತರ
ಬಳಿಗೆ ಕರೆದುಕೊಂಡು ಹೋದನು. ಸೌಲನು ಪ್ರಭುವನ್ನು ಮಾರ್ಗದಲ್ಲಿ ದರ್ಶಿಸಿದ್ದನ್ನು ಅವರು
ಅವನೊಂದಿಗೆ ಮಾತನಾಡಿದ್ದನ್ನೂ ತಿಳಿಸಿದನು. ಅಲ್ಲದೆ ದಮಸ್ಕಸಿನಲ್ಲಿ ಧೈರ್ಯದಿಂದ ಯೇಸುವಿನ
ಹೆಸರಿನಲ್ಲಿ ಬೋಧಿಸಿದ್ದನ್ನೂ ಅವರಿಗೆ ವಿವರಿಸಿದನು. 28ಅಂದಿನಿಂದ ಸೌಲನು ಜೆರುಸಲೇಮಿನಲ್ಲಿ
ಅವರೊಡನೆ ಕಲೆತು ಪ್ರಭುವಿನ ಹೆಸರಿನಲ್ಲಿ ನಿರ್ಭಯವಾಗಿ ಬೋಧಿಸುತ್ತಿದ್ದನು. 29ಗ್ರೀಕ್ ಮಾತನಾಡುತ್ತಿದ್ದ

ಯೆಹೂದ್ಯರೊಡನೆ ಸಂಭಾಷಿಸುತ್ತಾ ಅವರ ವಿರುದ್ಧ ವಾದಿಸುತ್ತಿದ್ದನು. ಅವರಾದರೋ ಅವನನ್ನು ಕೊಲ್ಲಲು
ಹವಣಿಸಿದರು. [30]ಇದನ್ನು ಅರಿತುಕೊಂಡ ಭಕ್ತಾದಿಗಳು ಅವನನ್ನು ಸೆಜರೇಯಕ್ಕೆ ಕರೆತಂದು ಅಲ್ಲಿಂದ
ತಾರ್ಸ್‍ಕ್ಕೆ ಕಳುಹಿಸಿಬಿಟ್ಟರು.

31 ಇಂತಿರಲು ಜುದೇಯ, ಗಲಿಲೇಯ ಮತ್ತು ಸಮಾರಿಯದ ಧರ್ಮಸಭೆಯಲ್ಲಿ ಶಾಂತಿ ನೆಲಸಿತು.
ಸಭೆ ಬೆಳೆಯುತ್ತಾ ಪ್ರಭುವಿನ ಭಯಭಕ್ತಿಯಲ್ಲಿ ಬಾಳುತ್ತಾ ಪವಿತ್ರಾತ್ಮ ಅವರ ನೆರವಿನಿಂದ ಪ್ರವರ್ಧಿಸುತ್ತಾ
ಇತ್ತು.

## ಲುದ್ದ ಮತ್ತು ಜೊಪ್ಪದಲ್ಲಿ ಪೇತ್ರ

32 ಪೇತ್ರನು ಅಲ್ಲಲ್ಲಿದ್ದ ಭಕ್ತವಿಶ್ವಾಸಿಗಳಿಗೆ ಭೇಟಿಕೊಡುತ್ತಾ ಲುದ್ದ ಎಂಬ ಊರಿನಲ್ಲಿ ವಾಸವಾಗಿದ್ದ
ಭಕ್ತರ ಬಳಿಗೆ ಬಂದನು. [33]ಅಲ್ಲಿ ಪಾರ್ಶ್ವವಾಯು ಪೀಡಿತನಾಗಿ ಎಂಟು ವರ್ಷಗಳಿಂದ ಹಾಸಿಗೆ ಹಿಡಿದಿದ್ದ
ಐನೇಯಾ ಎಂಬವನನ್ನು ಕಂಡನು. [34]ಪೇತ್ರನು ಅವನಿಗೆ, "ಐನೇಯಾ, ಯೇಸುಕ್ರಿಸ್ತರು ನಿನ್ನನ್ನು
ಸ್ವಸ್ಥಪಡಿಸುತ್ತಾರೆ. ಎದ್ದು ನಿನ್ನ ಹಾಸಿಗೆಯನ್ನು ಎತ್ತಿಡು," ಎಂದನು, ಆ ಕ್ಷಣವೇ ಅವನು ಎದ್ದನು. [35]ಲುದ್ದ
ಮತ್ತು ಸಾರೋನಿನ ನಿವಾಸಿಗಳೆಲ್ಲರೂ ಅವನನ್ನು ಕಂಡು ಪ್ರಭುವಿನ ಭಕ್ತರಾದರು.

36 ಜೊಪ್ಪ ಎಂಬ ಊರಿನಲ್ಲಿ ತಬಿಥ ಎಂಬ ಒಬ್ಬ ಭಕ್ತೆ ಇದ್ದಳು. (ಗ್ರೀಕ್ ಭಾಷೆಯಲ್ಲಿ ಅವಳ
ಹೆಸರು 'ದೋರ್ಕ') ಅವಳು ಸತ್ಕಾರ್ಯಗಳಲ್ಲೂ ದಾನಧರ್ಮಗಳಲ್ಲೂ ಸದಾ ನಿರತಳಾಗಿದ್ದವಳು. [37]ಅವಳು
ಕಾಯಿಲೆಯಿಂದ ಒಂದು ದಿನ ಸತ್ತಳು. ಜನರು ಅವಳ ಶವಕ್ಕೆ ಸ್ನಾನಮಾಡಿಸಿ ಮೇಲಂತಸ್ತಿನ ಕೋಣೆಯಲ್ಲಿ
ಇರಿಸಿದರು. [38]ಲುದ್ದವು ಜೊಪ್ಪಕ್ಕೆ ಸಮೀಪದಲ್ಲೇ ಇತ್ತು. ಪೇತ್ರನು ಲುದ್ದದಲ್ಲಿರುವುದನ್ನು ಕೇಳಿದ ಭಕ್ತಾದಿಗಳು,
"ದಯವಿಟ್ಟು ಬೇಗನೆ ನಮ್ಮೂರಿಗೆ ಬನ್ನಿ" ಎಂದು ಇಬ್ಬರ ಮುಖಾಂತರ ಹೇಳಿ ಕಳುಹಿಸಿದರು. [39]ಪೇತ್ರನು
ಎದ್ದು ಅವರ ಜೊತೆಯಲ್ಲೇ ಹೊರಟುಬಂದನು. ಅವನನ್ನು ಮೇಲಂತಸ್ತಿನ ಕೋಣೆಗೆ ಕರೆದುಕೊಂಡು
ಹೋದರು. ಅಲ್ಲಿ ಕೂಡಿದ್ದ ವಿಧವೆಯರೆಲ್ಲರೂ ಅವನ ಸುತ್ತುವರಿದು ಅಳುತ್ತಾ, ದೋರ್ಕಳು ಜೀವದಿಂದ
ಇದ್ದಾಗ ತಮಗೆ ಮಾಡಿಕೊಟ್ಟ ಬಟ್ಟೆ ಬರೆಗಳನ್ನು ಅವನಿಗೆ ತೋರಿಸಿದರು. [40]ಪೇತ್ರನು ಅವರೆಲ್ಲರನ್ನೂ
ಹೊರಗೆ ಕಳುಹಿಸಿ ಮೊಣಕಾಲೂರಿ ಪ್ರಾರ್ಥಿಸಿದನು. ಅನಂತರ ಶವದ ಕಡೆಗೆ ತಿರುಗಿ, "ತಬಿಥಾ,
ಮೇಲಕ್ಕೇಳು," ಎಂದನು. ಆಕೆ ಕಣ್ತೆರೆದು ಪೇತ್ರನನ್ನು ನೋಡಿ ಎದ್ದು ಕುಳಿತಳು. [41]ಪೇತ್ರನು ಕೈ ನೀಡಿ
ಆಕೆಯನ್ನು ಎತ್ತಿನಿಲ್ಲಿಸಿದನು. ಭಕ್ತರನ್ನೂ ವಿಧವೆಯರನ್ನೂ ಕರೆದು ಜೀವಂತಳಾದ ತಬಿಥಳನ್ನು ಅವರಿಗೆ
ತೋರಿಸಿದನು. [42]ಈ ಸಮಾಚಾರ ಜೊಪ್ಪದಲ್ಲೆಲ್ಲಾ ಹರಡಿತು. ಅನೇಕರು ಪ್ರಭುವನ್ನು ವಿಶ್ವಾಸಿಸಿದರು.
[43]ಪೇತ್ರನು ಹಲವು ದಿನಗಳನ್ನು ಜೊಪ್ಪದಲ್ಲಿ ಚರ್ಮ ಹದಮಾಡುವ ಸಿಮೋನನ ಮನೆಯಲ್ಲಿ ಕಳೆದನು.

## ಪೇತ್ರ ಮತ್ತು ಕೊರ್ನೇಲಿಯ

**10** ಸೆಜರೇಯ ಪಟ್ಟಣದಲ್ಲಿ ಕೊರ್ನೇಲಿಯ ಎಂಬವನಿದ್ದನು. ಅವನು 'ಇಟಲಿಯ ದಳ'ದಲ್ಲಿ ಒಬ್ಬ
ಶತಾಧಿಪತಿ. [2]ಅವನೂ ಅವನ ಕುಟುಂಬವೂ ದೇವರಲ್ಲಿ ಭಯಭಕ್ತಿಯಿಂದ ಜೀವಿಸುತ್ತಿದ್ದರು. ಯೆಹೂದ್ಯರಿಗೆ
ಅವನು ಧಾರಾಳವಾಗಿ ದಾನಧರ್ಮ ಮಾಡುತ್ತಿದ್ದನು. ದೇವರಿಗೆ ತಪ್ಪದೆ ಪ್ರಾರ್ಥನೆ ಸಲ್ಲಿಸುತ್ತಿದ್ದನು.
[3]ಅದೊಂದು ಮಧ್ಯಾಹ್ನ, ಸುಮಾರು ಮೂರು ಗಂಟೆಯ ಸಮಯ. ಅವನಿಗೊಂದು ದಿವ್ಯದರ್ಶನವಾಯಿತು:
ದೇವದೂತನೊಬ್ಬನು ತನ್ನ ಮನೆಯೊಳಗೆ ಬಂದು, "ಕೊರ್ನೇಲಿಯಾ," ಎಂದು ಕರೆಯುವುದನ್ನು ಸ್ಪಷ್ಟವಾಗಿ
ಕಂಡನು. [4]ಕೊರ್ನೇಲಿಯನು ಭಯದಿಂದ ದೇವದೂತನನ್ನು ದಿಟ್ಟಿಸಿ ನೋಡುತ್ತಾ, "ಏನು ಸ್ವಾಮಿ?"
ಎಂದನು. ಅದಕ್ಕೆ ದೇವದೂತನು, "ನಿನ್ನ ಪ್ರಾರ್ಥನೆ ಮತ್ತು ದಾನಧರ್ಮ ದೇವರನ್ನು ಮುಟ್ಟಿವೆ. ಅವರು
ನಿನ್ನನ್ನು ಮೆಚ್ಚಿದ್ದಾರೆ; ನಿನ್ನ ಕೋರಿಕೆಗಳನ್ನು ಈಡೇರಿಸಲಿದ್ದಾರೆ. [5]ನೀನು ಈಗಲೇ ಜೊಪ್ಪಕ್ಕೆ ಆಳುಗಳನ್ನು
ಕಳುಹಿಸಿ, ಪೇತ್ರ ಎಂದು ಕರೆಯಲಾಗುವ ಸಿಮೋನನನ್ನು ಬರಹೇಳು. [6]ಅವನು, ಸಮುದ್ರತೀರದಲ್ಲಿ

ವಾಸಿಸುತ್ತಿರುವ, ಚರ್ಮ ಹದಮಾಡುವ ಸಿಮೋನನ ಮನೆಯಲ್ಲಿ ತಂಗಿದ್ದಾನೆ," ಎಂದು ಹೇಳಿ ದೂತನು
ಅದೃಶ್ಯನಾದನು. [7]ಕೂಡಲೇ ಕೊರ್ನೇಲಿಯನು ತನ್ನ ಇಬ್ಬರು ಪರಿಚಾರಕರನ್ನೂ ತನ್ನ ಪಹರೆಯವರಲ್ಲಿ
ಧರ್ಮನಿಷ್ಠನಾಗಿದ್ದ ಒಬ್ಬ ಸೈನಿಕನನ್ನೂ ಕರೆದು, [8]ನಡೆದುದೆಲ್ಲವನ್ನೂ ತಿಳಿಸಿ ಅವರನ್ನು ಜೊಪ್ಪಕ್ಕೆ
ಕಳುಹಿಸಿದನು.

9 ಮಾರನೆಯ ದಿನ ಅವರು ಪ್ರಯಾಣಮಾಡಿ ಜೊಪ್ಪವನ್ನು ಸಮೀಪಿಸಿದಾಗ ಮಧ್ಯಾಹ್ನ ಸಮಯ.
ಆಗತಾನೇ ಪೇತ್ರನು ಪ್ರಾರ್ಥನೆ ಮಾಡಲು ಮಾಳಿಗೆಯ ಮೇಲಕ್ಕೆ ಹೋದನು. [10]ಅವನಿಗೆ ಹಸಿವಾಗಿ
ಏನನ್ನಾದರೂ ತಿನ್ನಬೇಕು ಎನಿಸಿತು. ಊಟ ಸಿದ್ಧವಾಗುತ್ತಿದ್ದಂತೆ, ಪೇತ್ರನು ಧ್ಯಾನಪರವಶನಾಗಿ ಒಂದು
ದರ್ಶನವನ್ನು ಕಂಡನು. [11]ಸ್ವರ್ಗದ ಬಾಗಿಲು ತೆರೆಯಿತು. ದೊಡ್ಡ ದುಪ್ಪಟಿಯಂತಹ ವಸ್ತುವೊಂದು ಇಳಿದು
ಬರುತ್ತಿತ್ತು. ಅದರ ನಾಲ್ಕು ಮೂಲೆಗಳನ್ನು ಹಿಡಿದು ಭೂಮಿಯ ಮೇಲೆ ಅದನ್ನು ಇಳಿಯಬಿಡಲಾಗಿತ್ತು.
[12]ಅದರಲ್ಲಿ, ಹರಿದಾಡುವ ಕ್ರಿಮಿಕೀಟಗಳು, ಹಾರಾಡುವ ಪಕ್ಷಿಗಳು ಮತ್ತು ಎಲ್ಲಾ ತರಹದ ಪ್ರಾಣಿಗಳು ಇದ್ದವು.
[13]ಅಲ್ಲದೆ, "ಪೇತ್ರಾ, ಏಳು, ಕೊಯ್ದು ತಿನ್ನು," ಎಂಬ ವಾಣಿ ಅವನಿಗೆ ಕೇಳಿಸಿತು. [14]ಪೇತ್ರನು, "ಇದು ಬೇಡವೆ
ಬೇಡ ಸ್ವಾಮಿ, ಅಶುದ್ಧ ಹಾಗೂ ನಿಷಿದ್ಧ ಆದುದನ್ನು ನಾನೆಂದೂ ತಿಂದವನಲ್ಲ," ಎಂದನು. [15]ಅದಕ್ಕೆ
ಮತ್ತೊಮ್ಮೆ ಆ ವಾಣಿ ಅವನಿಗೆ, "ದೇವರೇ ಶುದ್ಧೀಕರಿಸಿರುವ ಯಾವುದನ್ನೂ ಅಶುದ್ಧವೆನ್ನಬೇಡ," ಎಂದಿತು.
[16]ಹೀಗೆ ಮೂರು ಸಾರಿ ನಡೆದಮೇಲೆ ಆ ವಸ್ತುವನ್ನು ಸ್ವರ್ಗಕ್ಕೆ ಎತ್ತಿಕೊಳ್ಳಲಾಯಿತು.

17 ಇತ್ತ ಪೇತ್ರನು ತಾನು ಕಂಡ ದರ್ಶನದ ಅರ್ಥವೇನಿರಬಹುದೆಂದು ತಬ್ಬಿಬ್ಬಾದನು. ಅಷ್ಟರಲ್ಲಿ
ಕೊರ್ನೇಲಿಯನು ಕಳುಹಿಸಿದ್ದ ಆಳುಗಳು ಸಿಮೋನನ ಮನೆಯನ್ನು ವಿಚಾರಿಸಿ ಕಂಡುಹಿಡಿದರು. ಹೊರ
ಬಾಗಿಲ ಬಳಿ ನಿಂತುಕೊಂಡು, [18]"ಪೇತ್ರನೆಂದು ಕರೆಯಲಾಗುವ ಸಿಮೋನ ಎಂಬವರು ಇಲ್ಲಿ
ತಂಗಿರುವರೇ?" ಎಂದು ಕೂಗಿ ಕೇಳಿದರು. [19]ಪೇತ್ರನು ತನ್ನ ದರ್ಶನವನ್ನು ಕುರಿತು ಇನ್ನೂ
ಆಲೋಚಿಸುತ್ತಿರುವಾಗ ಪವಿತ್ರಾತ್ಮ ಅವರು, "ಇಗೋ, ಮೂರು ಜನರು ನಿನ್ನನ್ನು ಹುಡುಕುತ್ತಾ ಬಂದಿದ್ದಾರೆ.
[20]ಸಿದ್ಧವಾಗಿ ಕೆಳಕ್ಕೆ ಹೋಗು. ನಾನೇ ಅವರನ್ನು ಕಳುಹಿಸಿರುವುದರಿಂದ ಸಂಕೋಚಪಡದೆ ಅವರೊಡನೆ
ಹೋಗು," ಎಂದರು. [21]ಪೇತ್ರನು ಕೆಳಕ್ಕೆ ಹೋಗಿ ಆ ಜನರನ್ನು ನೋಡಿ, "ನೀವು ಹುಡುಕುತ್ತಿರುವ ವ್ಯಕ್ತಿ
ನಾನೇ. ನೀವು ಬಂದ ಕಾರಣವೇನು?" ಎಂದು ವಿಚಾರಿಸಿದನು. [22]"ಶತಾಧಿಪತಿ ಕೊರ್ನೇಲಿಯ ನಮ್ಮನ್ನು
ಕಳುಹಿಸಿದರು. ಅವರೊಬ್ಬ ಸತ್ಪುರುಷರು, ದೈವಭಕ್ತರು, ಯೆಹೂದ್ಯ ಜನತೆಯಿಂದ ಗೌರವಾನ್ವಿತರು. ನಿಮ್ಮನ್ನು
ತಮ್ಮ ಮನೆಗೆ ಆಹ್ವಾನಿಸಿ, ನೀವು ಹೇಳುವುದನ್ನು ಕೇಳಬೇಕೆಂದು ದೇವದೂತನಿಂದ ಆದೇಶಪಡೆದಿದ್ದಾರೆ,"
ಎಂದರು. [23]ಪೇತ್ರನು ಅವರನ್ನು ಒಳಕ್ಕೆ ಬರಮಾಡಿಕೊಂಡು ಉಪಚರಿಸಿ, ರಾತ್ರಿ ಅಲ್ಲೇ ತಂಗುವಂತೆ
ಮಾಡಿದನು.

ಮಾರನೆಯ ದಿನ ಪೇತ್ರನು ಅವರೊಡನೆ ಹೋದನು. ಜೊತೆಯಲ್ಲಿ ಜೊಪ್ಪದ ಕೆಲವು
ಸಹೋದರರೂ ಹೋದರು. [24]ಮರುದಿವಸ ಅವನು ಸೆಜರೇಯವನ್ನು ತಲುಪಿದನು. ಇತ್ತ ಕೊರ್ನೇಲಿಯನು
ತಾನು ಆಹ್ವಾನಿಸಿದ ನೆಂಟರಿಷ್ಟರೊಡನೆ ಮತ್ತು ಆಪ್ತಮಿತ್ರರೊಡನೆ ಪೇತ್ರನಿಗಾಗಿ ಕಾಯುತ್ತಿದ್ದನು. [25]ಪೇತ್ರನು
ಮನೆಯನ್ನು ಪ್ರವೇಶಿಸುತ್ತಿದ್ದಂತೆ ಕೊರ್ನೇಲಿಯನು ಅವನನ್ನು ಎದುರುಗೊಂಡು, ಪಾದಕ್ಕೆರಗಿ, ಸಾಷ್ಟಾಂಗ
ನಮಸ್ಕಾರ ಮಾಡಿದನು. [26]ಪೇತ್ರನು ಅವನನ್ನು ಮೇಲಕ್ಕೆಬ್ಬಿಸಿ, "ಎದ್ದು ನಿಲ್ಲು, ನಾನೂ ಒಬ್ಬ ಸಾಮಾನ್ಯ
ಮನುಷ್ಯನೇ," ಎಂದನು.

27 ಕೊರ್ನೇಲಿಯನೊಡನೆ ಮಾತನಾಡುತ್ತಾ ಪೇತ್ರನು ಮನೆಯೊಳಕ್ಕೆ ಬಂದಾಗ ಅಲ್ಲಿ ಅನೇಕ
ಜನರು ಸಭೆ ಸೇರಿರುವುದನ್ನು ಕಂಡನು. [28]ಪೇತ್ರನು ಅವರಿಗೆ, "ಯೆಹೂದ್ಯನೊಬ್ಬನು
ಅನ್ಯಧರ್ಮದವರೊಡನೆ ಸಂಪರ್ಕ ಇಟ್ಟುಕೊಳ್ಳುವುದು ಅಥವಾ ಅವರಿಗೆ ಭೇಟಿಕೊಡುವುದು ಧರ್ಮನಿಷಿದ್ಧ
ಎಂಬುದು ನಿಮಗೆ ತಿಳಿದೇ ಇದೆ. ಆದರೆ, ನಾನು ಯಾರನ್ನೂ ಅಶುದ್ಧ ಅಥವಾ ಅಸ್ಪೃಶ್ಯ ಎನ್ನಬಾರದೆಂದು
ದೇವರು ನನಗೆ ತೋರಿಸಿಕೊಟ್ಟಿದ್ದಾರೆ. [29]ಆದುದರಿಂದಲೇ ನೀವು ಹೇಳಿ ಕಳುಹಿಸಿದಾಗ ನಾನು ಯಾವ
ಆಕ್ಷೇಪಣೆ ಮಾಡದೆ ಬಂದಿದ್ದೇನೆ. ಈಗ ನನ್ನನ್ನು ಕರೆದ ಕಾರಣವೇನೆಂದು ತಿಳಿಯ ಬಯಸುತ್ತೇನೆ,"
ಎಂದನು.

30 ಆಗ ಕೊರ್ನೇಲಿಯನು, "ನಾನು ಮೂರು ದಿನಗಳ ಹಿಂದೆ ಮಧ್ಯಾಹ್ನ ಮೂರು ಗಂಟೆಯ ಇದೇ ಸಮಯದಲ್ಲಿ ಪ್ರಾರ್ಥನೆ ಮಾಡುತ್ತಾ ಇದ್ದೆ. ಹಠಾತ್ತನೆ ಶೋಭಾಯಮಾನ ವಸ್ತ್ರ ಧರಿಸಿದ್ದ ವ್ಯಕ್ತಿಯೊಬ್ಬನು ನನ್ನೆದುರಿಗೆ ನಿಂತನು. [31]ಅವನು, "ಕೊರ್ನೇಲಿಯಾ, ದೇವರು ನಿನ್ನ ಪ್ರಾರ್ಥನೆಯನ್ನು ಆಲಿಸಿದ್ದಾರೆ; ನಿನ್ನ ದಾನಧರ್ಮಗಳನ್ನು ಮೆಚ್ಚಿದ್ದಾರೆ. [32]ಯಾರನ್ನಾದರೂ ಜೊಪ್ಪಕ್ಕೆ ಕಳುಹಿಸಿ ಪೇತ್ರ ಎಂದು ಕರೆಯಲಾದ ಸಿಮೋನನನ್ನು ಬರಮಾಡಿಕೊ; ಅವನು ಸಮುದ್ರ ತೀರದಲ್ಲಿ ವಾಸಿಸುತ್ತಿರುವ, ಚರ್ಮ ಹದಮಾಡುವ ಸಿಮೋನನ ಮನೆಯಲ್ಲಿ ತಂಗಿದ್ದಾನೆ," ಎಂದನು. [33]ಅಂತೆಯೇ ನಾನು ತಕ್ಷಣ ತಮ್ಮನ್ನು ಕರೆತರಲು ಕಳುಹಿಸಿದೆ. ತಾವು ಇಲ್ಲಿಗೆ ದಯಮಾಡಿಸಿದಿರಿ. ಪ್ರಭು ತಮಗೆ ಆಜ್ಞಾಪಿಸಿರುವುದನ್ನೆಲ್ಲಾ ಕೇಳಲು ನಾವೆಲ್ಲರೂ ಇಲ್ಲಿ ದೇವರ ಸನ್ನಿಧಿಯಲ್ಲಿ ಸೇರಿದ್ದೇವೆ," ಎಂದನು.

## ಅನ್ಯಧರ್ಮೀಯರಿಗೂ ಆಹ್ವಾನ

34 ಆಗ ಪೇತ್ರನು ಹೀಗೆಂದು ಉಪದೇಶ ಮಾಡಿದನು: "ದೇವರು ಪಕ್ಷಪಾತಿಯಲ್ಲ. ಈ ವಿಷಯ ನನಗೆ ಈಗ ಮನದಟ್ಟಾಗಿದೆ. [35]ದೇವರಿಗೆ ಭಯಪಟ್ಟು ಸತ್ಪುರುಷನಾಗಿ ಬಾಳುವವನು ಯಾವ ಜನಾಂಗದವನೇ ಆಗಿರಲಿ, ಅವನು ಅವರ ಮೆಚ್ಚುಗೆಗೆ ಪಾತ್ರನಾಗುತ್ತಾನೆ. [36]ಸಮಸ್ತ ಮಾನವ ಕೋಟಿಯ ಪ್ರಭುವಾದ ಯೇಸುಕ್ರಿಸ್ತರ ಮುಖಾಂತರ ಶಾಂತಿ ಲಭಿಸುತ್ತದೆ ಎಂಬ ಶುಭಸಂದೇಶವನ್ನು ದೇವರು ಇಸ್ರಯೇಲ್ ಜನಾಂಗಕ್ಕೆ ಸಾರಿದರು. ಈ ವಿಷಯ ನಿಮಗೆ ತಿಳಿದಿದೆ. [37]ಇತ್ತೀಚೆಗೆ ಜುದೇಯ ನಾಡಿನಾದ್ಯಂತ ನಡೆದ ಘಟನೆಗಳು ನಿಮಗೆ ತಿಳಿದೇ ಇರಬೇಕು. [38]ಇವು ನಜರೇತಿನ ಯೇಸುವಿಗೆ ಸಂಬಂಧಪಟ್ಟ ವಿಷಯಗಳು. ಸ್ನಾನದೀಕ್ಷೆಯನ್ನು ಮಾಡಿಸಿಕೊಳ್ಳಬೇಕೆಂದು ಯೊವಾನ್ನನು ಬೋಧಿಸಿದ ನಂತರ, ಯೇಸು ತಮ್ಮ ಸೇವಾವೃತ್ತಿಯನ್ನು ಗಲಿಲೇಯದಲ್ಲಿ ಪ್ರಾರಂಭಿಸಿದರು. ಅವರು ಪವಿತ್ರಾತ್ಮರಿಂದಲೂ ದೈವಶಕ್ತಿಯಿಂದಲೂ ಅಭಿಷಿಕ್ತರಾಗಿದ್ದರು. ದೇವರು ತಮ್ಮೊಡನೆ ಇದ್ದುದರಿಂದ ಅವರು ಎಲ್ಲೆಡೆಯಲ್ಲೂ ಒಳಿತನ್ನು ಮಾಡುತ್ತಾ, ಪಿಶಾಚಿಪೀಡಿತರಾದವರನ್ನು ಸ್ವಸ್ಥಪಡಿಸುತ್ತಾ ಸಂಚರಿಸಿದರು. [39]ಅವರು ಯೆಹೂದ್ಯರ ಹಳ್ಳಿ ಪಳ್ಳಿಗಳಲ್ಲೂ ಜೆರುಸಲೇಮಿನಲ್ಲೂ ಎಸಗಿದ ಸಕಲ ಕಾರ್ಯಗಳಿಗೆ ನಾವು ಸಾಕ್ಷಿಗಳು. ಯೆಹೂದ್ಯರು ಆ ಯೇಸುವನ್ನು ಶಿಲುಬೆ ಮರಕ್ಕೆ ನೇತುಹಾಕಿ ಕೊಂದರು. [40]ಆದರೆ ದೇವರು ಅವರನ್ನು ಮೂರನೆಯ ದಿನ ಪುನರುತ್ಥಾನಗೊಳಿಸಿ ಪ್ರತ್ಯಕ್ಷರಾಗುವಂತೆ ಮಾಡಿದರು. [41]ಅವರು ಕಾಣಿಸಿಕೊಂಡದ್ದು ಎಲ್ಲಾ ಜನರಿಗೆ ಅಲ್ಲ; ದೇವರಿಂದ ಸಾಕ್ಷಿಗಳಾಗಿ ಆಯ್ಕೆಯಾಗಿದ್ದ ನಮಗೆ. ಅವರು ಪುನರುತ್ಥಾನ ಹೊಂದಿದ ನಂತರ ಅವರೊಡನೆಯೇ ಊಟ ಮಾಡಿದವರು ನಾವು. [42]ಮಾನವರಿಗೆ ಶುಭಸಂದೇಶವನ್ನು ಬೋಧಿಸುವಂತೆಯೂ ಜೀವಂತರಿಗೂ ಹಾಗೂ ಮೃತರಿಗೂ ದೇವರೇ ಅವರನ್ನು ನ್ಯಾಯಾಧಿಪತಿಯನ್ನಾಗಿ ನೇಮಿಸಿದ್ದಾರೆಂದು ರುಜುವಾತುಪಡಿಸುವಂತೆಯೂ ನಮಗೆ ಆಜ್ಞಾಪಿಸಿದ್ದಾರೆ. [43]ಎಲ್ಲಾ ಪ್ರವಾದಿಗಳು ಅವರನ್ನು ಕುರಿತೇ ಸಾಕ್ಷಿ ನೀಡಿದ್ದಾರೆ; ಅವರಲ್ಲಿ ವಿಶ್ವಾಸವಿಡುವ ಪ್ರತಿಯೊಬ್ಬನೂ ಅವರ ನಾಮದ ಶಕ್ತಿಯಿಂದ ಪಾಪಕ್ಷಮೆಯನ್ನು ಪಡೆಯುವನೆಂದು ಪ್ರವಾದನೆಮಾಡಿದ್ದಾರೆ."

## ಅನ್ಯಧರ್ಮದವರಿಗೂ ಪವಿತ್ರಾತ್ಮಧಾರೆ

44 ಪೇತ್ರನು ಮಾತನಾಡುತ್ತಿದ್ದಂತೆ ಅವನ ಉಪದೇಶವನ್ನು ಕೇಳುತ್ತಿದ್ದ ಎಲ್ಲರ ಮೇಲೆ ಪವಿತ್ರಾತ್ಮ ಇಳಿದು ಬಂದರು. [45–46]ಎಲ್ಲರು ವಿವಿಧ ಭಾಷೆಗಳನ್ನು ಮಾತನಾಡುತ್ತಾ ದೇವರ ಮಹತ್ವವನ್ನು ಸ್ತುತಿಸತೊಡಗಿದರು. ಜೊಪ್ಪದಿಂದ ಪೇತ್ರನೊಡನೆ ಬಂದಿದ್ದ ಯೆಹೂದ್ಯ ಭಕ್ತವಿಶ್ವಾಸಿಗಳು ಇದನ್ನು ಕಂಡು, ದೇವರು ಅನ್ಯಧರ್ಮದವರ ಮೇಲೂ ಪವಿತ್ರಾತ್ಮಧಾರೆ ಎರೆಯುತ್ತಿದ್ದಾರಲ್ಲಾ ಎಂದು ವಿಸ್ಮಿತರಾದರು. ಆಗ ಪೇತ್ರನು, [47]"ನಮ್ಮಂತೆಯೇ ಪವಿತ್ರಾತ್ಮ ಅವರನ್ನು ಪಡೆದಿರುವ ಈ ಜನರಿಗೆ ದೀಕ್ಷಾಸ್ನಾನ ಕೊಡಲು ಅಭ್ಯಂತರವಿದೆಯೇ?" ಎಂದನು. [48]ಅನಂತರ ಅವರಿಗೆ ಯೇಸುಕ್ರಿಸ್ತರ ನಾಮದಲ್ಲಿ ದೀಕ್ಷಾಸ್ನಾನ ಪಡೆಯುವಂತೆ ಆಜ್ಞಾಪಿಸಿದನು. ಅದಾದ ಬಳಿಕ ತಮ್ಮೊಡನೆ ಕೆಲವು ದಿನ ಇರಬೇಕೆಂದು ಪೇತ್ರನನ್ನು ಆ ಜನರು ಕೇಳಿಕೊಂಡರು.

## ಸುನ್ನತಿವಾದಿಗಳಿಗೆ ಪೇತ್ರನಿತ್ತ ಸಮಾಧಾನ

**11** ಅನ್ಯಧರ್ಮದವರೂ ಸಹ ದೈವವಾಕ್ಯವನ್ನು ಸ್ವೀಕರಿಸಿದರೆಂಬ ಸುದ್ದಿ ಜುದೇಯದಲ್ಲಿದ್ದ ಪ್ರೇಷಿತರಿಗೂ
ವಿಶ್ವಾಸಿಗಳಿಗೂ ಮುಟ್ಟಿತು. 2ಪೇತ್ರನು ಜೆರುಸಲೇಮಿಗೆ ಹೋದಾಗ ಅನ್ಯಧರ್ಮದವರಿಗೆ ಸುನ್ನತಿಯಾಗಬೇಕು
ಎನ್ನುತ್ತಿದ್ದ ಪಂಗಡದವರು ಮುಂದೆ ಬಂದು, 3"ನೀನು ಸುನ್ನತಿಯಿಲ್ಲದ ಅನ್ಯಧರ್ಮದವರ ಮನೆಗೆ
ಭೇಟಿಕೊಟ್ಟು ಅವರೊಡನೆ ಊಟಮಾಡಿದ್ದೇಕೆ?" ಎಂದು ಆಕ್ಷೇಪಿಸಿದರು. 4ಅದಕ್ಕೆ ಪೇತ್ರನು ನಡೆದ
ವೃತ್ತಾಂತವನ್ನು ಆಮೂಲಾಗ್ರವಾಗಿ ಅವರಿಗೆ ವಿವರಿಸಿದನು:

5 "ಜೊಪ್ಪ ಪಟ್ಟಣದಲ್ಲಿ ನಾನು ಧ್ಯಾನಪರವಶನಾಗಿದ್ದಾಗ ದರ್ಶನವೊಂದನ್ನು ಕಂಡೆ. ಸ್ವರ್ಗದಿಂದ
ದೊಡ್ಡ ದುಪ್ಪಟಿಯಂಥ ವಸ್ತು ಒಂದು ಕೆಳಕ್ಕೆ ಇಳಿಯಿತು. ಅದರ ನಾಲ್ಕು ಮೂಲೆಗಳನ್ನು ಹಿಡಿದು ಕೆಳಕ್ಕೆ
ಇಳಿಬಿಡಲಾಗಿತ್ತು. ಅದು ಬಂದು ನನ್ನ ಪಕ್ಕದಲ್ಲೇ ನಿಂತಿತು. 6ಅದನ್ನು ಗಮನಿಸಿ ನೋಡಿದಾಗ ಅದರಲ್ಲಿ
ಪ್ರಾಣಿಗಳೂ ಕಾಡುಮೃಗಗಳೂ ಹರಿದಾಡುವ ಕ್ರಿಮಿಕೀಟಗಳೂ ಹಾರಾಡುವ ಪಕ್ಷಿಗಳೂ ಕಂಡುಬಂದವು.
7ಆಗ, 'ಪೇತ್ರ, ಏಳು, ಕೊಯ್ದು ತಿನ್ನು' ಎಂಬ ವಾಣಿ ನನಗೆ ಕೇಳಿಸಿತು. 8ಅದಕ್ಕೆ ನಾನು, 'ಬೇಡವೇ ಬೇಡ
ಸ್ವಾಮಿ, ಅಶುದ್ಧ ಹಾಗು ಅಸ್ಪೃಶ್ಯವಾದುದು ಯಾವುದೂ ನನ್ನ ಬಾಯನ್ನು ಎಂದೂ ಹೊಕ್ಕಿಲ್ಲ,' ಎಂದೆ.
9ಮತ್ತೊಮ್ಮೆ ಆ ವಾಣಿ ಸ್ವರ್ಗಲೋಕದಿಂದ, 'ದೇವರೇ ಶುದ್ಧೀಕರಿಸಿರುವ ಏನನ್ನೂ ನೀನು ಅಶುದ್ಧವೆನ್ನಬೇಡ,'
ಎಂದು ಉತ್ತರಿಸಿತು. 10ಹೀಗೆ ಮೂರು ಬಾರಿ ನಡೆದ ಮೇಲೆ, ಅವೆಲ್ಲವನ್ನೂ ಒಟ್ಟಿಗೆ ಸ್ವರ್ಗಕ್ಕೆ ಮರಳಿ
ಎಳೆದುಕೊಳ್ಳಲಾಯಿತು.

11 "ಅದೇ ಸಮಯಕ್ಕೆ ಸರಿಯಾಗಿ, ಸೆಜರೇಯದಿಂದ ಕಳುಹಿಸಲಾದ ಮೂವರು ಮಂದಿ ನನ್ನನ್ನು
ಹುಡುಕಿಕೊಂಡು, ನಾನು ತಂಗಿದ್ದ ಮನೆಗೆ ಬಂದರು. 12ನಾನು ಸಂಕೋಚಪಡದೆ ಅವರೊಡನೆ
ಹೋಗಬೇಕೆಂದು ಪವಿತ್ರಾತ್ಮ ತಿಳಿಸಿದರು. ಜೊಪ್ಪದ ಈ ಆರುಮಂದಿ ಭಕ್ತರೂ ನನ್ನೊಡನೆ ಸೆಜರೇಯಕ್ಕೆ
ಬಂದರು. ನಾವೆಲ್ಲರೂ ಕೊರ್ನೇಲಿಯನ ಮನೆಯನ್ನು ಪ್ರವೇಶಿಸಿದೆವು. 13ಅವನು, "ನನ್ನ ಮನೆಯಲ್ಲೇ
ದೂತನೊಬ್ಬನು ಕಾಣಿಸಿಕೊಂಡು, 'ಈಗಲೇ ಯಾರನ್ನಾದರೂ ಜೊಪ್ಪಕ್ಕೆ ಕಳುಹಿಸಿ ಪೇತ್ರ ಎಂದು
ಕರೆಯಲಾಗುವ ಸಿಮೋನನನ್ನು ಬರಹೇಳು. 14ಅವನು, ನೀನೂ ನಿನ್ನ ಕುಟುಂಬದವರೆಲ್ಲರೂ
ಪಡೆಯಬಹುದಾದಂಥ ಜೀವೋದ್ಧಾರದ ಸಂದೇಶವನ್ನು ನೀಡುವನು,' ಎಂದು ತಿಳಿಸಿದನು" ಎಂದು ನಮಗೆ
ಹೇಳಿದನು. 15ನಾನು ಉಪದೇಶಮಾಡಲು ಪ್ರಾರಂಭಿಸಿದ ಕೂಡಲೇ ನಮ್ಮ ಮೇಲೆ ಇಳಿದಂತೆ ಅವರ
ಮೇಲೂ ಪವಿತ್ರಾತ್ಮ ಇಳಿದು ಬಂದರು. 16ಆಗ ನನಗೆ, 'ಯೊವಾನ್ನನು ನೀರಿನಿಂದ ಸ್ನಾನದೀಕ್ಷೆಯನ್ನು
ಕೊಟ್ಟನು. ನೀವಾದರೋ ಪವಿತ್ರಾತ್ಮ ಅವರಿಂದ ದೀಕ್ಷಾಸ್ನಾನವನ್ನು ಪಡೆಯುವಿರಿ,' ಎಂಬ ಪ್ರಭುವಿನ
ಮಾತುಗಳು ನೆನಪಿಗೆ ಬಂದವು. 17ನಾವು ಪ್ರಭು ಯೇಸುಕ್ರಿಸ್ತರನ್ನು ವಿಶ್ವಾಸಿಸಿದಾಗ ನಮಗೆ ಕೊಟ್ಟ ವರವನ್ನೇ
ದೇವರು ಆ ಅನ್ಯಧರ್ಮದವರಿಗೂ ಕೊಟ್ಟಿರುವರು. ಹೀಗಿರುವಲ್ಲಿ ದೇವರನ್ನು ತಡೆಗಟ್ಟಲು ನಾನಾರು?"
ಎಂದನು. 18ಈ ಮಾತುಗಳನ್ನು ಕೇಳಿದ ಮೇಲೆ ಅವರು ತಮ್ಮ ಆಕ್ಷೇಪಣೆಯನ್ನು ನಿಲ್ಲಿಸಿದರು. ಮಾತ್ರವಲ್ಲ,
'ಅನ್ಯಧರ್ಮದವರೂ ಪಶ್ಚಾತ್ತಾಪಪಟ್ಟು ನವಜೀವ ಪಡೆಯುವ ಸದವಕಾಶವನ್ನು ದೇವರು
ದಯಪಾಲಿಸಿದ್ದಾರಲ್ಲಾ!' ಎಂದು ದೈವಸ್ತುತಿ ಮಾಡಿದರು.

## 'ಕ್ರೈಸ್ತರು' ಎಂಬ ಹೆಸರಿನ ಉಗಮ

19 ಸ್ತೇಫನನು ಕೊಲೆಯಾದ ಮೊದಲ್ಗೊಂಡು ಉಂಟಾದ ಹಿಂಸಾಚಾರದ ನಿಮಿತ್ತ ಭಕ್ತಾದಿಗಳು
ಚದರಿಹೋದರು. ಅವರಲ್ಲಿ ಕೆಲವರು ಫೆನಿಷ್ಯ, ಸೈಪ್ರಸ್, ಅಂತಿಯೋಕ್ಯದವರೆಗೂ ಹೋಗಿ
ಶುಭಸಂದೇಶವನ್ನು ಸಾರಿದರು. ಆದರೆ ಇದನ್ನು ಸಾರಿದ್ದು ಯೆಹೂದ್ಯರಿಗೆ ಮಾತ್ರ. 20ಸೈಪ್ರಸ್ ಮತ್ತು
ಸಿರೇನಿನ ಕೆಲವು ಭಕ್ತರಾದರೋ ಅಂತಿಯೋಕ್ಯಕ್ಕೆ ಹೋಗಿ ಪ್ರಭು ಯೇಸುವಿನ ಶುಭಸಂದೇಶವನ್ನು
ಗ್ರೀಕರಿಗೂ ಸಾರಿದರು. 21ಪ್ರಭುವಿನ ಶಕ್ತಿ ಅವರೊಡನೆ ಇತ್ತು. ಜನರು ಬಹುಸಂಖ್ಯೆಯಲ್ಲಿ ಪ್ರಭುವಿನಲ್ಲಿ
ವಿಶ್ವಾಸವಿಟ್ಟು ಅವರ ಭಕ್ತರಾದರು.

22 ಈ ಸಮಾಚಾರ ಜೆರುಸಲೇಮಿನ ಧರ್ಮಸಭೆಗೆ ತಲುಪಿತು. ಬಾರ್ನಬನನ್ನು ಅಂತಿಯೋಕ್ಯಕ್ಕೆ ಅವರು ಕಳುಹಿಸಿದರು. [23]ಬಾರ್ನಬನು ಅಲ್ಲಿಗೆ ಬಂದು ದೇವರ ಕೃಪಾಕಾರ್ಯವನ್ನು ಕಂಡು ಸಂತೋಷಪಟ್ಟನು. ಪ್ರಭುವಿಗೆ ದೃಢಮನಸ್ಸಿನಿಂದ ಪ್ರಾಮಾಣಿಕರಾಗಿರುವಂತೆ ಪ್ರೋತ್ಸಾಹಿಸಿದನು. [24]ಬಾರ್ನಬನು ಸತ್ಪುರುಷನು, ಪವಿತ್ರಾತ್ಮಭರಿತನು ಹಾಗೂ ಅಗಾಧ ವಿಶ್ವಾಸವುಳ್ಳವನು. ಅನೇಕ ಜನರು ಪ್ರಭುವಿನ ಅನುಯಾಯಿಗಳಾದರು.

25 ಅನಂತರ ಬಾರ್ನಬನು ಸೌಲನನ್ನು ಹುಡುಕಿಕೊಂಡು ತಾರ್ಸಕ್ಕೆ ಹೋದನು. [26]ಅವನನ್ನು ಅಲ್ಲಿ ಕಂಡು ಅಂತಿಯೋಕ್ಯಕ್ಕೆ ಕರೆದುಕೊಂಡು ಬಂದನು. ಅವರಿಬ್ಬರೂ ಬಂದು ವರ್ಷವಿಡೀ ಧರ್ಮಸಭೆಯೊಂದಿಗೆ ಇದ್ದು ಬಹುಜನರಿಗೆ ಉಪದೇಶ ಮಾಡಿದರು. ಭಕ್ತಾದಿಗಳನ್ನು ಮೊದಲಬಾರಿಗೆ 'ಕ್ರೈಸ್ತರು' ಎಂದು ಕರೆದದ್ದು–ಅಂತಿಯೋಕ್ಯದಲ್ಲೇ.

27 ಆ ದಿನಗಳಲ್ಲಿ ಕೆಲವು ಪ್ರವಾದಿಗಳು ಜೆರುಸಲೇಮಿನಿಂದ ಅಂತಿಯೋಕ್ಯಕ್ಕೆ ಬಂದರು. [28]ಅವರಲ್ಲಿ ಅಗಬ ಎಂಬವನು ಒಬ್ಬನು. ಇವನು ಪವಿತ್ರಾತ್ಮ ಪ್ರೇರಿತನಾಗಿ ಜಗತ್ತಿನಲ್ಲೆಲ್ಲಾ ಭೀಕರ ಕ್ಷಾಮ ಬರಲಿದೆಯೆಂದು ಮುಂತಿಳಿಸಿದನು. (ಇದು ಬಂದೊದಗಿದುದು ಕ್ಲಾಡಿಯಸ್ ಚಕ್ರವರ್ತಿಯ ಕಾಲದಲ್ಲಿ) [29]ಆಗ ಭಕ್ತರಲ್ಲಿ ಪ್ರತಿಯೊಬ್ಬರು ತಮ್ಮ ಶಕ್ತಿಗನುಸಾರ ಜುದೇಯದಲ್ಲಿ ವಾಸಿಸುತ್ತಿದ್ದ ಭಕ್ತಾದಿಗಳಿಗೆ ನೆರವು ನೀಡಲು ನಿರ್ಧರಿಸಿದರು. [30]ಅಂತೆಯೇ ತಮ್ಮ ಸಹಾಯವನ್ನು ಬಾರ್ನಬ ಮತ್ತು ಸೌಲ ಇವರ ಮುಖಾಂತರ ಅಲ್ಲಿನ ಸಭಾಪ್ರಮುಖರಿಗೆ ಕಳುಹಿಸಿಕೊಟ್ಟರು.

## ಕ್ರೈಸ್ತಸಭೆಗೆ ಕಠಿಣ ಹಿಂಸೆ

**12** ಆ ದಿನಗಳಲ್ಲಿ ಅರಸ ಹೆರೋದನು ಕ್ರೈಸ್ತಸಭೆಯ ಸದಸ್ಯರಲ್ಲಿ ಕೆಲವರನ್ನು ಹಿಂಸಿಸಲು ಆರಂಭಿಸಿದನು. [2]ಯೊವಾನ್ನನ ಸಹೋದರ ಯಕೋಬನನ್ನು ಖಡ್ಗದಿಂದ ಕೊಲ್ಲಿಸಿದನು. [3]ಇದರಿಂದ ಯೆಹೂದ್ಯರಿಗೆ ಮೆಚ್ಚುಗೆಯಾಯಿತೆಂದು ತಿಳಿದು ಪೇತ್ರನನ್ನು ಬಂಧಿಸಿದನು. (ಆಗ ಹುಳಿರಹಿತ ರೊಟ್ಟಿಯ ಹಬ್ಬ ನಡೆಯುತ್ತಿತ್ತು). [4]ಪೇತ್ರನನ್ನು ಬಂಧಿಸಿದ ಮೇಲೆ ಸೆರೆಮನೆಯಲ್ಲಿಟ್ಟು ಅವನನ್ನು ಕಾಯಲು ನಾಲ್ಕು ನಾಲ್ಕು ಸೈನಿಕರಿದ್ದ ಚತುರ್ದಳಕ್ಕೆ ವಹಿಸಿದನು. ಪಾಸ್ಕಹಬ್ಬದ ನಂತರ ಪೇತ್ರನನ್ನು ಬಹಿರಂಗ ವಿಚಾರಣೆಗೆ ಗುರಿಪಡಿಸಲು ಉದ್ದೇಶಿಸಿದ್ದನು. [5]ಪೇತ್ರನನ್ನು ಹೀಗೆ ಸೆರೆಯಲ್ಲಿಟ್ಟಿದ್ದಾಗ, ಸಭೆಯು ಅವನಿಗಾಗಿ ಶ್ರದ್ದೆಯಿಂದ ದೇವರಿಗೆ ಪ್ರಾರ್ಥನೆಮಾಡುತ್ತಿತ್ತು.

## ಸೆರೆಮನೆಯಿಂದ ಕಣ್ಮರೆಯಾದ ಪೇತ್ರ

6 ಹೆರೋದನು ಪೇತ್ರನನ್ನು ಜನರ ಮುಂದೆ ತರಬೇಕೆಂದಿದ್ದ ಹಿಂದಿನ ರಾತ್ರಿ ಅದು. ಪೇತ್ರನು ಇಬ್ಬರು ಸೈನಿಕರ ನಡುವೆ ನಿದ್ರಿಸುತ್ತಿದ್ದನು. ಅವನನ್ನು ಎರಡು ಸರಪಣಿಗಳಿಂದ ಕಟ್ಟಲಾಗಿತ್ತು. ಪಹರೆಯವರು ಸೆರೆಮನೆಯ ದ್ವಾರದಲ್ಲಿ ಕಾವಲಿದ್ದರು. [7]ಫಕ್ಕನೆ ದೇವದೂತನೊಬ್ಬನು ಕಾಣಿಸಿಕೊಂಡನು. ಆ ಕೋಣೆಯೆಲ್ಲಾ ಪ್ರಕಾಶಮಯವಾಯಿತು. ದೂತನು ಪೇತ್ರನ ಭುಜವನ್ನು ತಟ್ಟಿ, ಎಬ್ಬಿಸಿ, "ಬೇಗನೆ ಏಳು," ಎಂದನು. ಆ ಕ್ಷಣವೇ ಪೇತ್ರನ ಕೈಗಳಿಗೆ ಕಟ್ಟಿದ್ದ ಸರಪಣಿಗಳು ಕಳಚಿಬಿದ್ದವು. [8]ದೂತನು ಅವನಿಗೆ, "ಬಟ್ಟೆಯನ್ನು ತೊಟ್ಟುಕೋ, ಪಾದರಕ್ಷೆಯನ್ನು ಮೆಟ್ಟಿಕೋ," ಎಂದನು. ಪೇತ್ರನು ಹಾಗೆಯೇ ಮಾಡಿದನು. ಅನಂತರ ದೂತನು, "ನಿನ್ನ ಮೇಲುಹೊದಿಕೆಯನ್ನು ಹೊದ್ದುಕೊಂಡು ನನ್ನ ಜೊತೆ ಬಾ," ಎಂದನು. [9]ಪೇತ್ರನು ಸೆರೆಮನೆಯ ಹೊರಕ್ಕೆ ಅವನನ್ನು ಹಿಂಬಾಲಿಸಿ ಹೋದನು. ಅಷ್ಟಾದರೂ ದೂತನು ಮಾಡುತ್ತಿರುವುದು ನಿಜವೆಂದು ಅವನಿಗೆ ಅರಿವಾಗಲಿಲ್ಲ; ತನಗೇನೋ ದರ್ಶನವಾಗುತ್ತಿದೆಯೆಂದೆ ಭಾವಿಸಿದನು. [10]ಅವರು ಮೊದಲನೆಯ ಮತ್ತು ಎರಡನೆಯ ಕಾವಲನ್ನು ದಾಟಿದರು. ಪಟ್ಟಣದ ಕಡೆಯಿದ್ದ ಕಬ್ಬಿಣದ ದ್ವಾರದ ಬಳಿಬಂದರು. ಆ ದ್ವಾರ ತನ್ನಷ್ಟಕ್ಕೆ ತಾನೇ ತೆರೆಯಿತು. ಅವರು ಹೊರ ನಡೆದರು. ಬೀದಿಯೊಂದರಲ್ಲಿ ಹಾದು ಹೋಗುತ್ತಿರಲು ಒಮ್ಮೆಲೆ ದೂತನು ಪೇತ್ರನನ್ನು ಬಿಟ್ಟು ಅದೃಶ್ಯನಾದನು.

11 ನಡೆದ ಸಂಗತಿ ಏನೆಂದು ಪೇತ್ರನಿಗೆ ಅರಿವಾದಾಗ ಆತನು, "ನಡೆದುದೆಲ್ಲಾ ಸಾಕ್ಷಾತ್ ಸತ್ಯವೆಂದು ಈಗ ನನಗೆ ತಿಳಿಯಿತು. ಪ್ರಭು ತಮ್ಮ ದೂತನನ್ನು ಕಳುಹಿಸಿ ಹೆರೋದನ ಕೈಯಿಂದಲೂ ಯೆಹೂದ್ಯರು ಮಾಡಬೇಕೆಂದಿದ್ದ ಕೇಡಿನಿಂದಲೂ ನನ್ನನ್ನು ಪಾರುಮಾಡಿದ್ದಾರೆ," ಎಂದುಕೊಂಡನು.

12 ಹೀಗೆ ತನ್ನ ಪರಿಸ್ಥಿತಿಯನ್ನು ಅರಿತ ಬಳಿಕ ಪೇತ್ರನು ಮರಿಯ ಎಂಬುವಳ ಮನೆಗೆ ಹೋದನು. ಈಕೆ 'ಮಾರ್ಕ' ಎಂದು ಹೆಸರುಗೊಂಡಿದ್ದ ಯೊವಾನ್ನನ ತಾಯಿ. ಆ ಮನೆಯಲ್ಲಿ ಹಲವಾರು ಜನರು ಸೇರಿ ಪ್ರಾರ್ಥನೆಮಾಡುತ್ತಿದ್ದರು. [13]ಪೇತ್ರನು ಹೊರಬಾಗಿಲನ್ನು ತಟ್ಟಿದನು. ರೋದ ಎಂಬ ಸೇವಕಿ ವಿಚಾರಿಸಲು ಬಂದಳು. [14]ಆಕೆ ಪೇತ್ರನ ಸ್ವರವನ್ನು ಗುರುತು ಹಚ್ಚಿದ್ದೇ ಆನಂದಪರವಶಳಾಗಿ ಬಾಗಿಲನ್ನು ಸಹ ತೆರೆಯದೆ ಒಳಕ್ಕೆ ಓಡಿದಳು. ಪೇತ್ರನು ಬಾಗಿಲ ಹೊರಗೆ ನಿಂತಿದ್ದಾನೆಂದು ಒಳಗಿದ್ದವರಿಗೆ ತಿಳಿಸಿದಳು. [15]ಅವರು "ನಿನಗೇನು ಹುಚ್ಚೇ?" ಎಂದು ಉದ್ಗರಿಸಿದರು. ಅವಳು ತಾನು ಹೇಳುತ್ತಿರುವುದು ನಿಜವೆಂದು ಒತ್ತಿ ಹೇಳಿದಳು. "ಹಾಗಾದರೆ ಅದು ಅವನ ದೂತನಿರಬೇಕು," ಎಂದುಕೊಂಡರು. [16]ಇತ್ತ ಪೇತ್ರನು ಬಾಗಿಲು ತಟ್ಟುತ್ತಲೇ ಇದ್ದನು. ಕೊನೆಗೆ ಅವರು ಬಂದು ಬಾಗಿಲನ್ನು ತೆರೆದರು. ಪೇತ್ರನನ್ನು ಕಂಡು ಸ್ತಬ್ಧರಾದರು. [17]ಪೇತ್ರನು ನಿಶ್ಯಬ್ದರಾಗಿರುವಂತೆ ಅವರಿಗೆ ಕೈಸನ್ನೆ ಮಾಡಿದನು. ಪ್ರಭು ತನ್ನನ್ನು ಹೇಗೆ ಸೆರೆಮನೆಯಿಂದ ಹೊರಗೆ ಕರೆತಂದರೆಂದು ವಿವರಿಸಿದನು. ಈ ವಿಷಯವನ್ನು ಯಕೋಬನಿಗೂ ಇತರ ಸಹೋದರರಿಗೂ ತಿಳಿಸಲು ಹೇಳಿ ಅಲ್ಲಿಂದ ಹೊರಟು ಬೇರೆಸ್ಥಳಕ್ಕೆ ಹೋದನು.

18 ಬೆಳಗಾದಾಗ ಪೇತ್ರನು ಏನಾದನೆಂದು ಸೈನಿಕರ ನಡುವೆ ದೊಡ್ಡ ಗೊಂದಲವೇ ಎದ್ದಿತು. [19]ಅವನನ್ನು ಹುಡುಕಿತರುವಂತೆ ಹೆರೋದನು ಆಜ್ಞಾಪಿಸಿದನು. ಆದರೆ ಅವನನ್ನು ಕಂಡುಹಿಡಿಯಲು ಅವರಿಂದಾಗಲಿಲ್ಲ. ಆದುದರಿಂದ ಪಹರೆಯವರನ್ನೇ ವಿಚಾರಣೆಗೆ ಗುರಿಮಾಡಿ ಅವರಿಗೆ ಮರಣ ದಂಡನೆಯನ್ನು ವಿಧಿಸಿದನು.

ಇದಾದ ಬಳಿಕ ಹೆರೋದನು ಜುದೇಯದಿಂದ ಹೊರಟು ಕೊಂಚಕಾಲ ಸೆಜರೇಯದಲ್ಲಿ ಇದ್ದನು.

### ಹೆರೋದನ ದುರ್ಮರಣ

20 ಹೆರೋದನು ಟೈರ್ ಮತ್ತು ಸಿದೋನಿನ ಜನರ ಮೇಲೆ ಕಡುಗೋಪಗೊಂಡಿದ್ದನು. ಅವರೆಲ್ಲರೂ ಒಟ್ಟಾಗಿ ಅವನನ್ನು ಸಂದರ್ಶಿಸಲು ಹೋದರು. ಮೊದಲು ಅರಮನೆಯ ಮೇಲ್ವಿಚಾರಕನಾದ ಬ್ಲಾಸ್ತನ ಮನಸ್ಸನ್ನು ತಮ್ಮ ಕಡೆ ಒಲಿಸಿಕೊಂಡರು. ಅನಂತರ ಅವರು ಹೆರೋದನೊಡನೆ ಸಂಧಾನಮಾಡಿಕೊಳ್ಳಲು ಯತ್ನಿಸಿದರು. ಏಕೆಂದರೆ, ಅವರು ದವಸಧ್ಯಾನ್ಯಗಳಿಗಾಗಿ ಹೆರೋದನ ನಾಡನ್ನು ಅವಲಂಬಿಸಬೇಕಾಗಿತ್ತು.

21 ನಿಯಮಿತ ದಿನದಂದು ಹೆರೋದನು ರಾಜಪೋಷಾಕನ್ನು ಧರಿಸಿಕೊಂಡು ಜನರನ್ನುದ್ದೇಶಿಸಿ ಭಾಷಣಮಾಡಿದನು. [22]"ಮಾತನಾಡುತ್ತಿರುವವನು ಮಾನವನಲ್ಲ, ದೇವರೇ!" ಎಂದು ಜನರು ಘೋಷಣೆ ಮಾಡಿದರು. [23]ಆದರೆ ಹೆರೋದನು ದೇವರಿಗೆ ಸಲ್ಲಬೇಕಾದ ಗೌರವವನ್ನು ಸಲ್ಲಿಸಲಿಲ್ಲ. ಆದುದರಿಂದ ದೇವದೂತನು ಆ ಕ್ಷಣವೇ ಅವನನ್ನು ಸಂಹರಿಸಿದನು. ಅವನು ಹುಳಹುಪ್ಪಟೆಗಳಿಗೆ ಆಹಾರವಾದನು.

24 ದೇವರ ಶುಭಸಂದೇಶವಾದರೋ ಹಬ್ಬಿ ಹರಡತೊಡಗಿತು. [25]ಬಾರ್ನಬ ಮತ್ತು ಸೌಲನು ತಮ್ಮ ಧರ್ಮಕಾರ್ಯವನ್ನು ಮುಗಿಸಿಕೊಂಡು ಮಾರ್ಕ ಎಂದು ಹೆಸರುಗೊಂಡ ಯೊವಾನ್ನನೊಂದಿಗೆ ಜೆರುಸಲೇಮಿನಿಂದ ಹಿಂದಿರುಗಿದರು.

### ಬಾರ್ನಬ ಮತ್ತು ಸೌಲರ ನಿಯೋಗ

**13** ಅಂತಿಯೋಕ್ಯದ ಧರ್ಮಸಭೆಯಲ್ಲಿ ಕೆಲವು ಪ್ರವಾದಿಗಳೂ ಬೋಧಕರೂ ಇದ್ದರು. ಅವರಾರೆಂದರೆ: ಬಾರ್ನಬ, ಕಾಳನೆಂದು ಕರೆಯಲಾದ ಸಿಮೆಯೋನ್, ಸಿರೇನಿನ ಲೂಸಿಯಸ್, ಸಾಮಂತ ಹೆರೋದನ ಬಾಲ್ಯಸ್ನೇಹಿತ ಮೆನಹೇನ ಮತ್ತು ಸೌಲ. [2]ಒಂದು ದಿನ ಅವರು ದೇವಾರಾಧನೆಯಲ್ಲೂ ಉಪವಾಸ ವ್ರತದಲ್ಲೂ ನಿರತರಾಗಿದ್ದಾಗ ಪವಿತ್ರಾತ್ಮ, "ಬಾರ್ನಬ ಮತ್ತು ಸೌಲರನ್ನು ನಾನು ಯಾವ ಕಾರ್ಯಕ್ಕಾಗಿ

ಕರೆದಿದ್ದೇನೋ ಆ ಕಾರ್ಯಕ್ಕಾಗಿ ಮೀಸಲಾಗಿಡಿ," ಎಂದರು. [3]ಅಂತೆಯೇ ಅವರು ಉಪವಾಸವಿದ್ದು, ಪ್ರಾರ್ಥನೆ ಮಾಡಿ, ಇವರಿಬ್ಬರ ಮೇಲೆ ಹಸ್ತನಿಕ್ಷೇಪಮಾಡಿ ಕಳುಹಿಸಿಕೊಟ್ಟರು.

### ಸೈಪ್ರಸ್ ದ್ವೀಪದಲ್ಲಿ ಧರ್ಮಪ್ರಚಾರ

4 ಹೀಗೆ ಪವಿತ್ರಾತ್ಮ ಅವರೇ ಕಳುಹಿಸಿದ ಬಾರ್ನಬ ಮತ್ತು ಸೌಲ ಸೆಲೂಸಿಯಾಕ್ಕೆ ಹೋದರು. ಅಲ್ಲಿಂದ ಸೈಪ್ರಸ್ ದ್ವೀಪಕ್ಕೆ ನೌಕಾಯಾನ ಮಾಡಿದರು. [5]ಅವರು ಸಲಮೀಸ್ ಎಂಬ ಸ್ಥಳಕ್ಕೆ ಬಂದಾಗ ಯೆಹೂದ್ಯರ ಪ್ರಾರ್ಥನಾ ಮಂದಿರಗಳಿಗೆ ಹೋಗಿ ಶುಭಸಂದೇಶವನ್ನು ಸಾರಿದರು. ಮಾರ್ಕನೆನಿಸಿಕೊಂಡ ಯೊವಾನ್ನ ಅವರ ಸಂಗಡವಿದ್ದು ಅವರಿಗೆ ನೆರವಾಗುತ್ತಿದ್ದನು.

6 ಅವರು ಆ ದ್ವೀಪದಲ್ಲೆಲ್ಲಾ ಪ್ರಯಾಣ ಮಾಡುತ್ತಾ ಪಾಫೊಸ್ ಎಂಬ ಊರಿಗೆ ಹೋದರು. ಅಲ್ಲಿ 'ಬಾರ್ ಯೇಸು' ಎಂಬ ಮಂತ್ರವಾದಿಯನ್ನು ಕಂಡರು. [7]ತಾನೊಬ್ಬ ಪ್ರವಾದಿಯೆಂದು ನಟಿಸುತ್ತಿದ್ದ ಯೆಹೂದ್ಯ ಅವನು; ಮಾತ್ರವಲ್ಲ, ಅಲ್ಲಿಯ ರಾಜ್ಯಪಾಲನಾಗಿದ್ದ ಸೆರ್ಗ್ಯಪೌಲನ ಪರಿವಾರಕ್ಕೆ ಸೇರಿದ್ದನು. ಈ ರಾಜ್ಯಪಾಲನೊಬ್ಬ ಜ್ಞಾನಿ. ಇವನು ದೇವರ ವಾಕ್ಯವನ್ನು ಕೇಳಲಪೇಕ್ಷಿಸಿ ಬಾರ್ನಬ ಮತ್ತು ಸೌಲರನ್ನು ಆಹ್ವಾನಿಸಿದನು. [8]ಆದರೆ ಆ ಮಂತ್ರವಾದಿ (ಗ್ರೀಕ್ ಭಾಷೆಯಲ್ಲಿ ಅವನನ್ನು 'ಎಲಿಮ' ಎಂದು ಕರೆಯುತ್ತಿದ್ದರು.) ಅವರನ್ನು ವಿರೋಧಿಸಿದನು. ರಾಜ್ಯಪಾಲನು ವಿಶ್ವಾಸಿಯಾಗದಂತೆ ತಡೆಯಲು ಯತ್ನಿಸಿದನು. [9]ಆಗ, ಪೌಲ ಎಂದು ಹೆಸರುಗೊಂಡಿದ್ದ ಸೌಲನು ಪವಿತ್ರಾತ್ಮಭರಿತನಾಗಿ ಆ ಮಂತ್ರವಾದಿಯನ್ನು ದಿಟ್ಟಿಸಿ ನೋಡಿದನು. [10]"ಎಲವೋ ಪಿಶಾಚಿಕೋರನೇ, ಸರ್ವಸನ್ಮಾರ್ಗಕ್ಕೆ ಶತ್ರು ನೀನು; ಎಲ್ಲಾ ತಂತ್ರ ಕುತಂತ್ರಗಳು ನಿನ್ನಲ್ಲಿ ತುಂಬಿವೆ. ಪ್ರಭುವಿನ ಸನ್ಮಾರ್ಗಕ್ಕೆ ಅಡ್ಡಿ ಆತಂಕಗಳನ್ನು ಒಡ್ಡುತ್ತಿರುವೆಯಾ? ಇಗೋ, ಈಗ ಪ್ರಭುವಿನ ಶಾಪ ನಿನ್ನ ಮೇಲಿದೆ! [11]ನೀನು ಬೆಳಕನ್ನು ಕಾಣದೆ ಕೆಲವು ಕಾಲ ಕುರುಡನಾಗಿರುವೆ," ಎಂದನು. ಆ ಕ್ಷಣವೇ ಎಲಿಮನ ಕಣ್ಣು ಮಬ್ಬಾಯಿತು; ಕತ್ತಲೆ ಕವಿದಂತಾಯಿತು; ಯಾರಾದರೂ ಕೈಹಿಡಿದು ನಡೆಸಲೆಂದು ಅವನು ತಡವರಿಸಲಾರಂಭಿಸಿದನು. [12]ನಡೆದುದನ್ನು ಕಂಡ ರಾಜ್ಯಪಾಲನು ಪ್ರಭುವನ್ನು ವಿಶ್ವಾಸಿಸಿದನು; ಅವರನ್ನು ಕುರಿತ ಬೋಧನೆಯನ್ನು ಕೇಳಿ ವಿಸ್ಮಿತನಾದನು.

### ಪಿಸಿದಿಯದ ಅಂತಿಯೋಕ್ಯದಲ್ಲಿ ಪೌಲನ ಪ್ರಬೋಧನೆ

13 ಪೌಲ ಮತ್ತು ಸಂಗಡಿಗರು ಪಾಫೊಸಿನಿಂದ ನೌಕಾಯಾನ ಮಾಡಿ ಪಾಂಫಿಲಿಯದ ಪೆರ್ಗ ಎಂಬಲ್ಲಿಗೆ ಬಂದರು. ಮಾರ್ಕನೆನಿಸಿಕೊಂಡ ಯೊವಾನ್ನನು ಅವರನ್ನು ಅಲ್ಲೇ ಬಿಟ್ಟು ಜೆರುಸಲೇಮಿಗೆ ಹಿಂದಿರುಗಿದನು. [14]ಉಳಿದವರು ಪೆರ್ಗದಿಂದ ಹೊರಟು ಪಿಸಿದಿಯ ಸೀಮೆಗೆ ಸೇರಿದ ಅಂತಿಯೋಕ್ಯಕ್ಕೆ ಬಂದರು. ಸಬ್ಬತ್‌ದಿನದಲ್ಲಿ ಪ್ರಾರ್ಥನಾಮಂದಿರಕ್ಕೆ ಹೋಗಿ ಕುಳಿತುಕೊಂಡರು. [15]ಧರ್ಮಶಾಸ್ತ್ರ ಮತ್ತು ಪ್ರವಾದಿಗಳ ಗ್ರಂಥಗಳಿಂದ ವಾಚನವಾದ ನಂತರ ಪ್ರಾರ್ಥನಾ ಮಂದಿರದ ಅಧಿಕಾರಿಗಳು ಅವರಿಗೆ, "ಸಹೋದರರೇ, ಜನರಿಗೆ ಉಪಯುಕ್ತವಾದ ಹಿತೋಕ್ತಿ ಏನಾದರೂ ಇದ್ದರೆ ಉಪದೇಶಮಾಡಿ," ಎಂದು ಕೇಳಿಕೊಂಡರು. [16]ಆಗ ಪೌಲನು ಎದ್ದುನಿಂತು ಜನರಿಗೆ ನಿಶ್ಯಬ್ದವಾಗಿರುವಂತೆ ಕೈಸನ್ನೆ ಮಾಡಿ, ಹೀಗೆಂದು ಉಪದೇಶ ಮಾಡಲಾರಂಭಿಸಿದನು:

"ಇಸ್ರಯೇಲ್ ಬಾಂಧವರೇ, ಹಾಗು ನಿಜ ದೇವರಲ್ಲಿ ಭಯಭಕ್ತಿಯುಳ್ಳ ಇನ್ನಿತರರೇ, ಕೇಳಿ: [17]ಇಸ್ರಯೇಲ್ ಜನರ ದೇವರು ನಮ್ಮ ಪೂರ್ವಜರನ್ನು ಆರಿಸಿಕೊಂಡರು. ಈಜಿಪ್ಟಿನಲ್ಲಿ ಪರಕೀಯರಾಗಿ ವಾಸಿಸುತ್ತಿದ್ದ ನಮ್ಮ ಜನರನ್ನು ಪ್ರಬಲ ಜನಾಂಗವನ್ನಾಗಿ ಮಾಡಿದರು. ತಮ್ಮ ಮಹಾಶಕ್ತಿಯನ್ನು ಪ್ರಯೋಗಿಸಿ ಅವರನ್ನು ಈಜಿಪ್ಟಿನಿಂದ ಹೊರಗೆ ತಂದರು. [18]ಬೆಂಗಾಡಿನಲ್ಲಿ ಸುಮಾರು ನಾಲ್ವತ್ತು ವರ್ಷಗಳ ಕಾಲ ಅವರನ್ನು ಕಾಪಾಡಿದರು. [19]ಕಾನಾನ್ ನಾಡಿನ ಏಳು ಜನಾಂಗಗಳನ್ನು ನಾಶಮಾಡಿ ನಮ್ಮ ಜನರಿಗೆ ಆ ನಾಡನ್ನು ಸ್ವಾಸ್ತ್ಯವಾಗಿ ಕೊಟ್ಟರು. [20]ಹೀಗೆ ಸುಮಾರು ನಾನೂರ ಐವತ್ತು ವರ್ಷಗಳು ಕಳೆದವು. ಅನಂತರ ಪ್ರವಾದಿ ಸಮುವೇಲನ ಕಾಲದವರೆಗೆ ದೇವರು ಅವರಿಗೆ ನ್ಯಾಯಾಧಿಪತಿಗಳನ್ನು ಕಳುಹಿಸಿದರು. [21]ತಮಗೆ ಅರಸನು ಬೇಕೆಂದು ಕೇಳಿಕೊಂಡಾಗ ದೇವರು ಬೆನ್ಯಮೀನ ಗೋತ್ರದ ಕೀಷನ ಮಗ ಸೌಲನನ್ನು ನೇಮಿಸಿದರು. ಇವನು ನಾಲ್ವತ್ತು ವರ್ಷ ಆಳಿದನು. [22]ಅನಂತರ ದೇವರು ಸೌಲನನ್ನು ತ್ಯಜಿಸಿ ದಾವೀದನನ್ನು

ಅರಸನನ್ನಾಗಿ ನೇಮಿಸಿದರು. ಇವನ ಬಗ್ಗೆ ದೇವರು, "ಜೆಸ್ಸೆಯನ ಮಗ ದಾವೀದನು ನನಗೆ ಮೆಚ್ಚುಗೆಯಾದ
ವ್ಯಕ್ತಿ; ಇವನು ನನ್ನ ಆಶೆ ಆಕಾಂಕ್ಷೆಗಳನ್ನೆಲ್ಲಾ ಪೂರೈಸುವನು," ಎಂದು ತಮ್ಮ ಒಪ್ಪಿಗೆಯನ್ನು ಸೂಚಿಸಿದರು.
23ಈ ದಾವೀದನ ಸಂತತಿಯಿಂದಲೇ ದೇವರು ತಮ್ಮ ವಾಗ್ದಾನದ ಪ್ರಕಾರ ಇಸ್ರಯೇಲ್ ಜನರಿಗೆ ಒಬ್ಬ
ಉದ್ಧಾರಕನನ್ನು ಕಳುಹಿಸಿದರು. ಇವರೇ ಯೇಸುಸ್ವಾಮಿ. 24ಇವರ ಆಗಮನಕ್ಕೆ ಸಿದ್ಧತೆಯಾಗಿ,
ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿ ದೇವರಿಗೆ ಅಭಿಮುಖರಾಗಿ ಸ್ನಾನದೀಕ್ಷೆಯನ್ನು ಪಡೆಯಬೇಕೆಂದು
ಯೊವಾನ್ನನು ಇಸ್ರಯೇಲಿನ ಎಲ್ಲ ಜನರಿಗೆ ಸಾರಿದನು. 25ಯೊವಾನ್ನನು ತನ್ನ ನಿಯೋಗವನ್ನು
ಪೂರೈಸುತ್ತಿದ್ದಂತೆ ಜನರಿಗೆ, 'ನಾನು ಯಾರೆಂದು ನೀವು ನೆನೆಸುತ್ತೀರಿ? ನೀವು ಎದುರು ನೋಡುತ್ತಿರುವ
ವ್ಯಕ್ತಿ ನಾನಲ್ಲ. ನನ್ನ ಅನಂತರ ಒಬ್ಬರು ಬರುವರು; ಅವರ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು
ಯೋಗ್ಯನಲ್ಲ,' ಎಂದನು.

26 "ನನ್ನ ಸಹೋದರರೇ, ಅಬ್ರಹಾಮನ ಸಂತತಿಯವರೇ ಮತ್ತು ದೇವರಲ್ಲಿ ಭಯಭಕ್ತಿಯುಳ್ಳ
ಇನ್ನಿತರರೇ, ಈ ಜೀವೋದ್ಧಾರದ ಸಂದೇಶವನ್ನು ಕಳುಹಿಸಿರುವುದು ನಮಗಾಗಿಯೇ. 27ಜೆರುಸಲೇಮಿನ
ನಿವಾಸಿಗಳು ಮತ್ತು ಅವರ ಅಧಿಕಾರಿಗಳು ಯೇಸು ಲೋಕೋದ್ಧಾರಕನೆಂದು ಅರಿತುಕೊಳ್ಳಲಿಲ್ಲ. ಪ್ರತಿ
ಸಬ್ಬತ್‌ದಿನ ಓದಲಾದ ಪ್ರವಾದಿಗಳ ವಾಕ್ಯಗಳನ್ನು ಅವರು ಗ್ರಹಿಸಿಕೊಳ್ಳಲಿಲ್ಲ. ಯೇಸುವಿಗೆ
ಮರಣದಂಡನೆಯನ್ನು ವಿಧಿಸಿ ಆ ಪ್ರವಾದನೆಗಳು ನಿಜವಾಗಲು ಕಾರಣರಾದರು. 28ಮರಣದಂಡನೆ
ವಿಧಿಸಲು ಯಾವ ಕಾರಣವಿಲ್ಲದಿದ್ದರೂ ಅವರನ್ನು ಕೊಲ್ಲಿಸುವಂತೆ ಪಿಲಾತನನ್ನು ಕೇಳಿಕೊಂಡರು.
29ಯೇಸುವನ್ನು ಕುರಿತು ಪವಿತ್ರಗ್ರಂಥ ಹೇಳುವುದೆಲ್ಲವೂ ನೆರವೇರಿದ ಮೇಲೆ ಅವರನ್ನು ಶಿಲುಬೆಯಿಂದ
ಕೆಳಗಿಳಿಸಿ ಸಮಾಧಿಮಾಡಿದರು. 30ಆದರೆ ದೇವರು ಅವರನ್ನು ಮರಣದಿಂದ ಪುನರುತ್ಥಾನಗೊಳಿಸಿದರು.
31ಹೀಗೆ ಪುನರುತ್ಥಾನ ಹೊಂದಿದ ಯೇಸು, ಗಲಿಲೇಯದಿಂದ ತಮ್ಮೊಡನೆ ಜೆರುಸಲೇಮಿಗೆ ಬಂದಿದ್ದವರಿಗೆ
ಕಾಣಿಸಿಕೊಂಡರು. ಆ ವ್ಯಕ್ತಿಗಳೇ ಈಗ ನಮ್ಮ ಜನರ ಮಧ್ಯೆ ಇರುವ ಯೇಸುವಿನ ಪರವಾದ ಸಾಕ್ಷಿಗಳು. 32–
33ನಾವೀಗ ನಿಮಗೆ ಸಾರುವ ಶುಭಸಂದೇಶ ಇದು: ದೇವರು ಯೇಸುಸ್ವಾಮಿಯನ್ನು
ಪುನರುತ್ಥಾನಗೊಳಿಸಿದ್ದಾರೆ. ಈ ಮೂಲಕ ನಮ್ಮ ಪೂರ್ವಜರಿಗೆ ಮಾಡಿದ ವಾಗ್ದಾನವನ್ನು ಅವರ
ಸಂತತಿಯಾದ ನಮಗಿಂದು ಈಡೇರಿಸಿದ್ದಾರೆ. ಎರಡನೆಯ ಕೀರ್ತನೆಯಲ್ಲಿ ಹೀಗೆಂದು ಬರೆದಿದೆ: 'ನೀನೇ
ನನ್ನ ಪುತ್ರ, ನಾನಿಂದು ನಿನ್ನ ಜನಕ.'

34 "ಯೇಸುವನ್ನು ಸಮಾಧಿಯಲ್ಲೇ ಕೊಳೆತು ಹೋಗಲು ಬಿಡದೆ ಮರಣದಿಂದ
ಪುನರುತ್ಥಾನಗೊಳಿಸಿದ ದೇವರು ಹೀಗೆಂದಿದ್ದಾರೆ:

'ನಾನು ದಾವೀದನಿಗೆ ವಾಗ್ದಾನಮಾಡಿದ
ಪವಿತ್ರ ಹಾಗೂ ನಿಶ್ಚಿತ ವರಗಳನ್ನು
ನಿಮಗೆ ಕೊಡುತ್ತೇನೆ.'

35 ಇನ್ನೊಂದು ಕೀರ್ತನೆಯಲ್ಲಿ ಹೀಗೆಂದಿದ್ದಾರೆ:

'ನಿಮ್ಮ ಪರಮ ಪೂಜ್ಯನು ಸಮಾಧಿಯಲ್ಲಿ
ಕೊಳೆತುಹೋಗಲು ನೀವು ಬಿಡುವುದಿಲ್ಲ.'

36 "ದಾವೀದನು ತನ್ನ ಜೀವಮಾನ ಕಾಲದಲ್ಲಿ ದೇವರ ಸಂಕಲ್ಪಕ್ಕೆ ತಲೆಬಾಗಿ ಬಾಳಿದನು; ಸತ್ತಾಗ
ಅವನ ಪೂರ್ವಜರ ಬಳಿ ಅವನನ್ನು ಸಮಾಧಿ ಮಾಡಲಾಯಿತು. 37ಆದರೆ ದೇವರು ಮರಣದಿಂದ ಎಬ್ಬಿಸಿದ
ಯೇಸುಸ್ವಾಮಿ ಕೊಳೆಯುವ ಅವಸ್ಥೆಯನ್ನು ಅನುಭವಿಸಲಿಲ್ಲ.

38–39 "ನನ್ನ ಸಹೋದರರೇ, ನಿಮಗಿದು ತಿಳಿದಿರಲಿ: ಪಾಪಕ್ಷಮೆ ಯೇಸುವಿನ ಮುಖಾಂತರವೇ
ಸಾಧ್ಯ ಎಂದು ಸಾರಲಾಗುತ್ತಿದೆ. ಮೋಶೆಯ ನಿಯಮಗಳ ಪಾಲನೆಯ ಮೂಲಕ ಪಾಪಗಳಿಂದ ವಿಮೋಚನೆ
ಹೊಂದಲು ನಿಮ್ಮಿಂದಾಗಲಿಲ್ಲ; ಆದರೆ ಯೇಸುವನ್ನು ವಿಶ್ವಾಸಿಸುವ ಪ್ರತಿ ಒಬ್ಬನೂ ಅವೆಲ್ಲವುಗಳಿಂದ
ವಿಮೋಚನೆ ಪಡೆಯುತ್ತಾನೆ. 40ಆದುದರಿಂದ ಪ್ರವಾದಿಗಳ ಈ ಮಾತುಗಳು ನಿಮ್ಮಲ್ಲಿ ನಿಜವಾಗದಂತೆ
ಎಚ್ಚರಿಕೆಯಾಗಿರಿ: 41'ಅವಹೇಳನ ಮಾಡುವವರೇ, ಗಮನಿಸಿರಿ; ದಿಗ್ಭ್ರಮೆಗೊಂಡು ದಿಕ್ಕುಪಾಲಾಗಿರಿ; ನಿಮ್ಮ

ಕಾಲದಲ್ಲೇ ನಾನೊಂದು ಮಹತ್ಕಾರ್ಯವನ್ನು ಮಾಡುತ್ತೇನೆ; ಅದನ್ನು ನೀವು ನಂಬಲಾರಿರಿ, ಇನ್ನೊಬ್ಬರು ವಿವರಿಸಿ ಹೇಳಿದರೂ ನಂಬಲಾರಿರಿ’,” ಎಂದು ಹೇಳಿದನು.

42 ಪೌಲ ಮತ್ತು ಬಾರ್ನಬ ಪ್ರಾರ್ಥನಾ ಮಂದಿರವನ್ನು ಬಿಟ್ಟು ಹೊರಟರು. “ಮುಂದಿನ ಸಬ್ಬತ್‌ದಿನ ಪುನಃ ಬಂದು ಈ ವಿಷಯಗಳ ಬಗ್ಗೆ ಹೆಚ್ಚು ತಿಳಿಸಿರಿ,” ಎಂದು ಜನರು ಕೇಳಿಕೊಂಡರು.
43ಪ್ರಾರ್ಥನಾಕೂಟ ಮುಗಿದಮೇಲೆ ಅನೇಕ ಯೆಹೂದ್ಯರೂ ಯೆಹೂದ್ಯ ಮತಾವಲಂಬಿಗಳಾದ ಅನ್ಯರೂ ಪೌಲ ಮತ್ತು ಬಾರ್ನಬರನ್ನು ಹಿಂಬಾಲಿಸಿದರು. ಈ ಪ್ರೇಷಿತರು ಅವರೊಡನೆ ಮಾತನಾಡಿ ದೈವಾನುಗ್ರಹದಲ್ಲಿ ದೃಢವಾಗಿ ಬಾಳುವಂತೆ ಪ್ರೋತ್ಸಾಹಿಸಿದರು.

44 ಮುಂದಿನ ಸಬ್ಬತ್‌ದಿನ ದೇವರ ವಾಕ್ಯವನ್ನು ಕೇಳಲು ನಗರಕ್ಕೆ ನಗರವೇ ಆಗಮಿಸಿತು. 45ಜನರು
ತಂಡೋಪತಂಡವಾಗಿ ಬರುತ್ತಿರುವುದನ್ನು ಕಂಡು ಯೆಹೂದ್ಯರು ಮತ್ಸರಭರಿತರಾದರು. ಅವರು ಪೌಲನ ಮಾತುಮಾತಿಗೂ ವಿರೋಧವಾಗಿ ವಾದಿಸಿ ದೂಷಣೆಮಾಡತೊಡಗಿದರು. 46ಪೌಲ ಮತ್ತು ಬಾರ್ನಬ
ಮತ್ತಷ್ಟು ಧೈರ್ಯದಿಂದ ಮಾತನಾಡಿದರು: “ದೇವರ ವಾಕ್ಯವನ್ನು ಮೊಟ್ಟಮೊದಲು ನಿಮಗೆ ಬೋಧಿಸುವುದು ಅಗತ್ಯವಾಗಿತ್ತು. ಆದರೆ ನೀವು ಅದನ್ನು ನಿರಾಕರಿಸಿ ಅಮರಜೀವಕ್ಕೆ ಅಪಾತ್ರರೆಂದು ನಿಮ್ಮನ್ನು ನೀವೇ ತೀರ್ಮಾನಿಸಿಕೊಂಡಿರಿ. ಆದುದರಿಂದ ನಾವು ನಿಮ್ಮನ್ನು ಬಿಟ್ಟು ಅನ್ಯಧರ್ಮದವರ ಕಡೆ ಹೋಗುತ್ತೇವೆ.
47ಏಕೆಂದರೆ ಪ್ರಭು ನಮಗಿತ್ತ ಆಜ್ಞೆ ಹೀಗಿದೆ:

‘ಅನ್ಯಧರ್ಮೀಯರಿಗೆ ಜ್ಯೋತಿಯನ್ನಾಗಿಯೂ
ವಿಶ್ವಪೂರ್ತಿಗೆ ಜೀವೋದ್ಧಾರದ
ಸಾಧನವಾಗಿಯೂ
ನಾನು ನಿನ್ನನ್ನು ನೇಮಿಸಿದ್ದೇನೆ’.

48 ಇದನ್ನು ಕೇಳಿದ ಅನ್ಯಧರ್ಮೀಯರು ಸಂತೋಷಪಟ್ಟು ದೇವರ ಸಂದೇಶಕ್ಕಾಗಿ ಸ್ತುತಿಸಿದರು. ಅಮರಜೀವಕ್ಕೆ ಆಯ್ಕೆಯಾದವರೆಲ್ಲರೂ ವಿಶ್ವಾಸಿಗಳಾದರು.

49 ಪ್ರಭುವಿನ ವಾಕ್ಯ ಆ ಪ್ರದೇಶದಲ್ಲೆಲ್ಲಾ ಹಬ್ಬಿ ಹರಡಿತು. 50ಯೆಹೂದ್ಯರಾದರೋ
ದೇವಭಕ್ತೆಯರಾದ ಕುಲೀನ ಸ್ತ್ರೀಯರನ್ನೂ ಪಟ್ಟಣದ ಪ್ರಮುಖ ಜನರನ್ನೂ ಪ್ರಚೋದಿಸಿದರು: ಪೌಲ ಮತ್ತು ಬಾರ್ನಬರನ್ನು ಹಿಂಸಿಸುವಂತೆ ಹುರಿದುಂಬಿಸಿ, ಅವರನ್ನು ಆ ಪ್ರದೇಶದಿಂದ ಹೊರಗಟ್ಟಿಸಿದರು. 51ಇದಕ್ಕೆ
ಪ್ರತಿಯಾಗಿ ಪ್ರೇಷಿತರು ತಮ್ಮ ಪಾದ ಧೂಳನ್ನು ಝಾಡಿಸಿ ಇಕೋನಿಯಕ್ಕೆ ಹೊರಟು ಹೋದರು. 52ಭಕ್ತ
ವಿಶ್ವಾಸಿಗಳಾದರೋ ಪರಮಾನಂದಪಟ್ಟರು, ಪವಿತ್ರಾತ್ಮಭರಿತರಾದರು.

## ಇಕೋನಿಯದಲ್ಲಿ ಪೌಲ ಮತ್ತು ಬಾರ್ನಬ

**14** ಇಕೋನಿಯದಲ್ಲೂ ಪೌಲ ಮತ್ತು ಬಾರ್ನಬ ಯೆಹೂದ್ಯರ ಪ್ರಾರ್ಥನಾ ಮಂದಿರಕ್ಕೆ ಹೋದರು. ಅವರ
ಅಮೋಘ ಬೋಧನೆಯನ್ನು ಕೇಳಿ ಯೆಹೂದ್ಯರು ಮತ್ತು ಗ್ರೀಕರು ಬಹುಸಂಖ್ಯೆಯಲ್ಲಿ ಭಕ್ತ ವಿಶ್ವಾಸಿಗಳಾದರು.
2ವಿಶ್ವಾಸಿಸಲೊಲ್ಲದ ಯೆಹೂದ್ಯರಾದರೋ ಅನ್ಯಧರ್ಮೀಯರನ್ನು ಪ್ರಚೋದಿಸಿ ಭಕ್ತರ ವಿರುದ್ಧ ಎತ್ತಿಕಟ್ಟಿದರು.
3ಪ್ರೇಷಿತರಿಬ್ಬರೂ ಅಲ್ಲಿ ಬಹುಕಾಲವಿದ್ದು ಪ್ರಭುವನ್ನು ಕುರಿತು ಧೈರ್ಯವಾಗಿ ಬೋಧಿಸಿದರು. ಪ್ರಭು ಅವರಿಗೆ ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ ಮಾಡುವ ಶಕ್ತಿಯನ್ನು ಕೊಟ್ಟರು. ಈ ಮೂಲಕ ದೇವಾನುಗ್ರಹದ ಬಗ್ಗೆ ಅವರ ಸಂದೇಶ ಸತ್ಯವಾದುದೆಂದು ವ್ಯಕ್ತಪಡಿಸಿದರು. 4ಪಟ್ಟಣದ ಜನರಲ್ಲಿ
ಭಿನ್ನಾಭಿಪ್ರಾಯ ಉಂಟಾಯಿತು. ಕೆಲವರು ಯೆಹೂದ್ಯರ ಪರವಾಗಿಯೂ ಮತ್ತೆ ಕೆಲವರು ಪ್ರೇಷಿತರ ಪರವಾಗಿಯೂ ವಿಂಗಡವಾಗಿ ಹೋದರು.

5 ಅನ್ಯಧರ್ಮದವರು ಮತ್ತು ಯೆಹೂದ್ಯರು ತಮ್ಮ ಅಧಿಕಾರಿಗಳೊಡನೆ ಸೇರಿ ಪ್ರೇಷಿತರಿಗೆ ಕಿರುಕುಳಕೊಡಲು ಹಾಗೂ ಅವರ ಮೇಲೆ ಕಲ್ಲು ತೂರಲು ಪ್ರಯತ್ನಿಸಿದರು. 6ಇದನ್ನರಿತುಕೊಂಡ ಪ್ರೇಷಿತರು

ಅಲ್ಲಿಂದ ಪಲಾಯನಮಾಡಿ ಲುಕವೋನಿಯದ ಪಟ್ಟಣಗಳಾದ ಲುಸ್ತ್ರ ಮತ್ತು ದೆರ್ಬೆಗೂ ಅದರ ಸುತ್ತಮುತ್ತಲ
ಪ್ರದೇಶಗಳಿಗೂ ಹೊರಟುಹೋದರು. 7ಅಲ್ಲೂ ಶುಭಸಂದೇಶವನ್ನು ಸಾರತೊಡಗಿದರು.

**ನರಮಾನವರಿಗೆ ವರಬಲಿಯೇ?**

8 ಲುಸ್ತ್ರದಲ್ಲಿ ಒಬ್ಬ ಕುಂಟನಿದ್ದ. ಅವನೊಬ್ಬ ಹುಟ್ಟುಕುಂಟ. ಎಂದೂ ಕಾಲೂರಿ ನಡೆದವನಲ್ಲ.
9ಒಮ್ಮೆ, ಅವನು ಕುಳಿತಲ್ಲೇ ಪೌಲನ ಮಾತುಗಳನ್ನು ಆಲಿಸುತ್ತಿದ್ದನು. ಆಗ ಪೌಲನು ಅವನನ್ನೇ ದಿಟ್ಟಿಸಿ
ನೋಡಿದನು. ಅವನಲ್ಲಿ ಸ್ವಸ್ಥ ಪಡೆಯುವಷ್ಟು ವಿಶ್ವಾಸವನ್ನು ಕಂಡು ಸ್ವರವೆತ್ತಿ, 10"ಎದ್ದೇಳು, ಕಾಲೂರಿ ನೆಟ್ಟಗೆ
ನಿಲ್ಲು," ಎಂದು ಹೇಳಿದನು. ಆ ಮನುಷ್ಯನು ನೆಗೆದುನಿಂತು ನಡೆಯಲಾರಂಭಿಸಿದನು. 11ಪೌಲನು ಮಾಡಿದ
ಈ ಮಹತ್ಕಾರ್ಯವನ್ನು ಜನಸಮೂಹವು ನೋಡಿತು. "ದೇವರುಗಳೇ ಮನುಷ್ಯರೂಪದಲ್ಲಿ ನಮ್ಮಲ್ಲಿಗೆ
ಬಂದಿದ್ದಾರೆ," ಎಂದು ತಮ್ಮ ಲುಕವೋನಿಯ ಭಾಷೆಯಲ್ಲಿ ಗಟ್ಟಿಯಾಗಿ ಕೂಗಲಾರಂಭಿಸಿತು. 12ಆ ಜನರು
ಬಾರ್ನಬನನ್ನು 'ಜೆಯುಸ್' ದೇವರೆಂದೂ ಪೌಲನು ಮುಖ್ಯ ಭಾಷಣಕಾರನಾದುದರಿಂದ, ಅವನನ್ನು
'ಹೆರ್ಮೆ' ದೇವರೆಂದೂ ಕರೆಯಲಾರಂಭಿಸಿದರು. 13ಆ ಜೆಯುಸ್ ದೇವರ ಗುಡಿ ಪಟ್ಟಣದ ಮುಂದೆಯೇ
ಇತ್ತು. ಅಲ್ಲಿಯ ಅರ್ಚಕನು ದ್ವಾರದ ಬಳಿಗೆ ಹೋರಿಗಳನ್ನೂ ಹೂವಿನ ಹಾರಗಳನ್ನೂ ತೆಗೆದುಕೊಂಡು
ಬಂದನು. ಜನರೊಡನೆ ಸೇರಿ ಪ್ರೇಷಿತರಿಗೆ ಬಲಿಯನ್ನು ಅರ್ಪಿಸಬೇಕೆಂದಿದ್ದನು. 14ಇದನ್ನು ಕೇಳಿದ ಬಾರ್ನಬ
ಮತ್ತು ಪೌಲರು ಸಿಟ್ಟಿನಿಂದ ತಮ್ಮ ಮೇಲಂಗಿಗಳನ್ನು ಹರಿದು ಜನಸಂದಣಿಯತ್ತ ಧಾವಿಸಿ ಹೀಗೆಂದು ಕೂಗಿ
ಹೇಳಿದರು: 15"ಮಹಾಜನರೇ, ನೀವು ಮಾಡುತ್ತಿರುವುದೇನು? ನಾವು ನಿಮ್ಮಂತೆ ಕೇವಲ ನರಮಾನವರು.
ನಾವು ಬಂದಿರುವುದು ನಿಮಗೆ ಶುಭಸಂದೇಶವನ್ನು ಸಾರುವುದಕ್ಕೆ; ನೀವು ಈ ನಿರರ್ಥಕ ಕಾರ್ಯವನ್ನು
ಬಿಟ್ಟುಬಿಡಬೇಕು; ಭೂಮ್ಯಾಕಾಶವನ್ನೂ ಸಮುದ್ರ ಸರೋವರವನ್ನೂ ಮತ್ತು ಅವುಗಳಲ್ಲಿರುವ ಸಮಸ್ತ
ಸೃಷ್ಟಿಯನ್ನೂ ಉಂಟುಮಾಡಿದ ಜೀವಂತ ದೇವರ ಭಕ್ತರಾಗಬೇಕು. 16ಹಿಂದಿನ ಕಾಲದಲ್ಲಿ ಸಮಸ್ತ
ಜನಾಂಗಗಳು ತಮಗೆ ಇಷ್ಟಬಂದಂತೆ ನಡೆಯಲೆಂದು ದೇವರು ಬಿಟ್ಟುಬಿಟ್ಟರು. 17ಆದರೆ ತಮ್ಮ ಅಸ್ತಿತ್ವವನ್ನು
ಅರಿತುಕೊಳ್ಳುವಂತೆ ಸುಕೃತ್ಯಗಳ ಸಾಕ್ಷ್ಯ ನೀಡುತ್ತಲೇ ಬಂದಿದ್ದಾರೆ; ನಿಮಗೆ ಆಕಾಶದಿಂದ ಮಳೆಯನ್ನೂ
ಸಕಾಲಕ್ಕೆ ಬೆಳೆಯನ್ನೂ ಕೊಡುತ್ತಾ ಆಹಾರವನ್ನು ಒದಗಿಸಿ, ನಿಮ್ಮ ಹೃದಯವನ್ನು ಪರಮಾನಂದಗೊಳಿಸುತ್ತಾ
ಬಂದಿದ್ದಾರೆ." 18ಪ್ರೇಷಿತರು ಇಷ್ಟು ಹೇಳಿದರೂ ಜನರು ತಮಗೆ ಬಲಿಯರ್ಪಿಸುವುದನ್ನು ತಡೆಯುವುದು
ಕಷ್ಟಸಾಧ್ಯವಾಯಿತು.
19 ಆಗ ಅಂತಿಯೋಕ್ಯ ಮತ್ತು ಇಕೋನಿಯದಿಂದ ಕೆಲವು ಯೆಹೂದ್ಯರು ಅಲ್ಲಿಗೆ ಬಂದರು. ಅವರು
ಜನಸಮೂಹವನ್ನು ತಮ್ಮ ಕಡೆ ಒಲಿಸಿಕೊಂಡು ಪೌಲನ ಮೇಲೆ ಕಲ್ಲು ಬೀರಿ, ಅವನು ಸತ್ತನೆಂದು ಭಾವಿಸಿ,
ಪಟ್ಟಣದಿಂದ ಹೊರಗೆ ಎಳೆದು ಹಾಕಿದರು. 20ಆದರೆ, ಭಕ್ತವಿಶ್ವಾಸಿಗಳು ಬಂದು ಅವನ ಸುತ್ತಲೂ ನೆರೆದಿದ್ದಾಗ
ಅವನು ಎದ್ದು ಪಟ್ಟಣವನ್ನು ಪ್ರವೇಶಿಸಿದನು. ಮರುದಿನ ಅವನು ಬಾರ್ನಬನ ಸಂಗಡ ದೆರ್ಬೆಗೆ ಹೊರಟು
ಹೋದನು.

**ಸಿರಿಯದ ಅಂತಿಯೋಕ್ಯಕ್ಕೆ ಮರುಪ್ರಯಾಣ**

21 ದೆರ್ಬೆಯಲ್ಲಿ ಪೌಲ ಮತ್ತು ಬಾರ್ನಬ ಶುಭಸಂದೇಶವನ್ನು ಸಾರಿ ಅನೇಕರನ್ನು
ಭಕ್ತವಿಶ್ವಾಸಿಗಳನ್ನಾಗಿ ಮಾಡಿಕೊಂಡರು. ಅನಂತರ ಅಲ್ಲಿಂದ ಲುಸ್ತ್ರಕ್ಕೂ ಇಕೋನಿಯಕ್ಕೂ ಅಂತಿಯೋಕ್ಯಕ್ಕೂ
ಹಿಂದಿರುಗಿ ಬಂದರು. 22ಅಲ್ಲಿ ಭಕ್ತಾದಿಗಳನ್ನು ದೃಢಪಡಿಸಿ ವಿಶ್ವಾಸದಲ್ಲಿ ನಿಷ್ಠರಾಗಿರುವಂತೆ ಪ್ರೋತ್ಸಾಹಿಸಿದರು.
'ಕಷ್ಟಸಂಕಟಗಳ ಮೂಲಕ ನಾವು ದೇವರ ಸಾಮ್ರಾಜ್ಯವನ್ನು ಪ್ರವೇಶಿಸಬೇಕಾಗಿದೆ' ಎಂದು ಬೋಧಿಸಿದರು.
23ಇದಲ್ಲದೆ ಪ್ರತಿಯೊಂದು ಕ್ರೈಸ್ತಸಭೆಗೂ ಪ್ರಮುಖರನ್ನು ನೇಮಿಸಿದರು. ಪ್ರಾರ್ಥನೆ ಮತ್ತು ಉಪವಾಸ ಮಾಡಿ
ತಾವು ಅಚಲವಾಗಿ ನಂಬಿದ್ದ ಪ್ರಭುವಿಗೆ ಅವರನ್ನು ಒಪ್ಪಿಸಿದರು.
24 ಇದಾದ ಮೇಲೆ ಪಿಸಿದಿಯ ಪ್ರದೇಶವನ್ನು ದಾಟಿ ಪಾಂಫಿಲೀಯ ಎಂಬಲ್ಲಿಗೆ ಬಂದರು.
25ಪೆರ್ಗದಲ್ಲಿ ಶುಭಸಂದೇಶವನ್ನು ಸಾರಿ ಅತ್ತಾಲಿಯ ಎಂಬಲ್ಲಿಗೆ ಹೋದರು. 26ಅಲ್ಲಿಂದ ನೌಕಾಯಾನ

ಮಾಡಿ ಅವರು ಅಂತಿಯೋಕ್ಯಕ್ಕೆ ಮರಳಿದರು. ಈವರೆಗೆ ಮಾಡಿ ಮುಗಿಸಿದ್ದ ಸೇವಾಕಾರ್ಯಕ್ಕಾಗಿ ಅವರು ದೇವರ ಕೃಪಾಶ್ರಯಕ್ಕೆ ಮೊದಲು ಸಮರ್ಪಿತರಾದದ್ದು ಇಲ್ಲಿಯೇ.

27 ಇಲ್ಲಿಗೆ ತಲುಪಿದ ಕೂಡಲೇ ಅವರು ಕ್ರೈಸ್ತಸಭೆಯನ್ನು ಒಟ್ಟುಗೂಡಿಸಿದರು. ದೇವರು ತಮ್ಮೊಡನೆ ಇದ್ದು ಸಾಧಿಸಿದ್ದೆಲ್ಲವನ್ನೂ ವರದಿ ಮಾಡಿದರು; ಅದೂ ಅಲ್ಲದೆ, ದೇವರು ಅನ್ಯಧರ್ಮೀಯರಿಗೆ ವಿಶ್ವಾಸದ ದ್ವಾರವನ್ನು ಹೇಗೆ ತೆರೆದರೆಂದು ವಿವರಿಸಿದರು. [28]ತರುವಾಯ ಭಕ್ತವಿಶ್ವಾಸಿಗಳ ಸಂಗಡ ಹೆಚ್ಚುಕಾಲ ತಂಗಿದ್ದರು.

## ಜೆರುಸಲೇಮಿನಲ್ಲಿ ಸಮ್ಮೇಳನ

**15** ಜುದೇಯದಿಂದ ಕೆಲವು ಜನರು ಅಂತಿಯೋಕ್ಯಕ್ಕೆ ಬಂದು ಅಲ್ಲಿನ ಭಕ್ತವಿಶ್ವಾಸಿಗಳಿಗೆ, "ಮೋಶೆಯ ನಿಯಮದಂತೆ ನೀವು ಸುನ್ನತಿ ಮಾಡಿಸಿಕೊಂಡ ಹೊರತು ಜೀವೋದ್ಧಾರ ಪಡೆಯಲಾರಿರಿ," ಎಂದು ಬೋಧಿಸತೊಡಗಿದರು. [2]ಈ ವಿಷಯವಾಗಿ ಅವರಿಗೂ ಪೌಲ ಮತ್ತು ಬಾರ್ನಬರಿಗೂ ಭಿನ್ನಾಭಿಪ್ರಾಯ ಉಂಟಾಗಿ ತೀವ್ರ ವಿವಾದವೆದ್ದಿತು. ಆದುದರಿಂದ ಈ ಸಮಸ್ಯೆಯ ಬಗ್ಗೆ ಪೌಲ ಮತ್ತು ಬಾರ್ನಬರು ಅಂತಿಯೋಕ್ಯದ ಇನ್ನೂ ಕೆಲವರ ಸಮೇತ ಜೆರುಸಲೇಮಿಗೆ ಹೋಗಿ ಪ್ರೇಷಿತರನ್ನೂ ಪ್ರಮುಖರನ್ನೂ ಕಾಣಬೇಕೆಂದು ತೀರ್ಮಾನಿಸಲಾಯಿತು.

3 ಅಂತೆಯೇ ಕ್ರೈಸ್ತಸಭೆ ಅವರನ್ನು ಬೀಳ್ಕೊಟ್ಟಿತು. ಅವರು ಫೆನಿಷ್ಯ ಹಾಗೂ ಸಮಾರಿಯದ ಮಾರ್ಗವಾಗಿ ಪ್ರಯಾಣಮಾಡುತ್ತಾ ಅಲ್ಲಿಯ ಭಕ್ತವಿಶ್ವಾಸಿಗಳಿಗೆ ಅನ್ಯಧರ್ಮೀಯರು ಹೇಗೆ ಕ್ರೈಸ್ತರಾದರೆಂಬುದನ್ನು ವಿವರಿಸಿದರು. ಇದನ್ನು ಕೇಳಿದ ಭಕ್ತಾದಿಗಳು ಸಂತೋಷಭರಿತರಾದರು. [4]ಪೌಲ, ಬಾರ್ನಬ ಮತ್ತು ಸಂಗಡಿಗರು ಜೆರುಸಲೇಮಿಗೆ ಆಗಮಿಸಿದಾಗ, ಅಲ್ಲಿಯ ಕ್ರೈಸ್ತಸಭೆ ಪ್ರೇಷಿತರ ಹಾಗೂ ಪ್ರಮುಖರ ಸಮೇತ ಅವರನ್ನು ಸ್ವಾಗತಿಸಿತು. ಆಗ ಅವರು, ದೇವರು ತಮ್ಮೊಡನೆ ಇದ್ದು, ಸಾಧಿಸಿದ ಎಲ್ಲಾ ಕಾರ್ಯಗಳನ್ನು ವರದಿ ಮಾಡಿದರು. [5]ಫರಿಸಾಯ ಪಂಥಕ್ಕೆ ಸೇರಿದ ಕೆಲವು ಭಕ್ತರು ಮಾತ್ರ ಎದ್ದುನಿಂತು, ಅನ್ಯಧರ್ಮೀಯರು ಸುನ್ನತಿ ಮಾಡಿಸಿಕೊಳ್ಳಲೇಬೇಕು, ಅವರು ಮೋಶೆಯ ನಿಯಮಗಳನ್ನು ಅನುಸರಿಸುವಂತೆ ಆಜ್ಞೆ ಮಾಡಲೇಬೇಕು," ಎಂದರು.

6 ಈ ಸಮಸ್ಯೆಯನ್ನು ಪರಿಶೀಲಿಸಲು ಪ್ರೇಷಿತರು ಮತ್ತು ಸಭಾಪ್ರಮುಖರು ಸಭೆ ಸೇರಿದರು. [7]ಸುದೀರ್ಘ ಚರ್ಚೆಯಾದ ನಂತರ ಪೇತ್ರನು ಎದ್ದು ನಿಂತು ಹೀಗೆಂದನು: "ಸಹೋದರರೇ, ಅನ್ಯಧರ್ಮೀಯರು ಶುಭಸಂದೇಶವನ್ನು ನನ್ನ ಬಾಯಿಯಿಂದ ಕೇಳಿ ವಿಶ್ವಾಸಿಸಲೆಂದು ದೇವರು ನಿಮ್ಮ ಮಧ್ಯೆಯಿಂದ ನನ್ನನ್ನು ಬಹುದಿನಗಳ ಹಿಂದೆಯೇ ಆರಿಸಿಕೊಂಡರು. ಇದು ನಿಮಗೆ ತಿಳಿದ ವಿಷಯ. [8]ಮಾನವನ ಅಂತರಂಗವನ್ನು ಅರಿತ ದೇವರು ನಿಮಗೆ ಕೊಟ್ಟಂತೆಯೇ ಅವರಿಗೂ ಪವಿತ್ರಾತ್ಮ ಅವರನ್ನು ಕೊಟ್ಟರು. ಅವರೂ ತಮ್ಮವರೇ ಎಂದು ವ್ಯಕ್ತಪಡಿಸಿದರು. [9]ಅವರಿಗೂ ನಮಗೂ ಯಾವ ಭೇದಭಾವವನ್ನು ತೋರಿಸದೆ ವಿಶ್ವಾಸದ ನಿಮಿತ್ತ ದೇವರು ಅವರ ಪಾಪಗಳನ್ನು ಕ್ಷಮಿಸಿದರು. [10]ಆದುದರಿಂದ ನಮ್ಮ ಪೂರ್ವಜರಿಂದಾಗಲೀ ನಮ್ಮಿಂದಾಗಲೀ ಹೊರಲಾಗದಂಥ ಹೊರೆಯನ್ನು ಈ ಅನುಯಾಯಿಗಳ ಮೇಲೆ ಏಕೆ ಹೊರಿಸುತ್ತೀರಿ? ಹೀಗೆ ದೇವರನ್ನೇಕೆ ಕೆಣಕುತ್ತೀರಿ? [11]ಇಲ್ಲ, ಇದು ಸರಿಯಲ್ಲ. ನಮಗೇ ಆಗಲಿ, ಅವರಿಗೇ ಆಗಲಿ, ಜೀವೋದ್ಧಾರ ದೊರಕುವುದು ಪ್ರಭು ಯೇಸುವಿನ ಅನುಗ್ರಹದಿಂದಲೇ. ಇದೇ ನಮ್ಮ ವಿಶ್ವಾಸ."

12 ಇದನ್ನು ಕೇಳಿದ್ದೇ, ಸಭೆ ಸೇರಿದ್ದವರೆಲ್ಲರೂ ಮೌನರಾದರು. ಪೌಲ ಮತ್ತು ಬಾರ್ನಬರಿಗೆ ಕಿವಿಗೊಟ್ಟರು. ದೇವರು ಅವರ ಮುಖಾಂತರ ಅನ್ಯಧರ್ಮೀಯರ ಮಧ್ಯೆ ಎಸಗಿದ ಸೂಚಕಕಾರ್ಯಗಳನ್ನೂ ಅದ್ಭುತಕಾರ್ಯಗಳನ್ನೂ ಕುರಿತು ಕೇಳಿದರು.

13 ಇದಾದ ಮೇಲೆ ಯಕೋಬನು ಎದ್ದು ಹೀಗೆಂದನು: "ಸಹೋದರರೇ ಕೇಳಿ, [14]ದೇವರು ಈ ಮೊದಲೇ ಅನ್ಯಧರ್ಮೀಯರಲ್ಲಿ ಆಸಕ್ತಿಗೊಂಡು ಅವರಿಂದಲೂ ಸ್ವಂತ ಪ್ರಜೆಯನ್ನು ಆರಿಸಿಕೊಂಡಿದ್ದಾರೆ,

ಎಂಬ ವಿಷಯವನ್ನು ಸಿಮೋನನು ಈಗ ತಾನೇ ವಿವರಿಸಿದ್ದಾನೆ. [15]ಇದಕ್ಕೂ ಪ್ರವಾದಿಗಳ ಪ್ರವಚನಗಳಿಗೂ ಪೂರ್ಣಸಾಮರಸ್ಯವಿದೆ.

16 'ಅಳಿದುಹೋದ ದಾವೀದನ ಮನೆತನವನು
ಪುನರ್‌ಸ್ಥಾಪಿಸಲು ಮರಳಿ ಬರುವೆನು
ಪಾಳುಬಿದ್ದುದನು ಜೀರ್ಣೋದ್ಧಾರ
ಗೊಳಿಸುವೆನು
ಸುಭದ್ರವಾಗಿ ನಿಲ್ಲಿಸುವೆನು ಅದನ್ನು
17 ನನ್ನವರೆಂದು ನಾನು ಕರೆದ ಎಲ್ಲ
ಅನ್ಯಧರ್ಮೀಯರು
ಉಳಿದೆಲ್ಲ ಮಾನವರು ನನ್ನತ್ತ ಬರಲಿಹರು
18 ಎಂಬೀ ಸರ್ವೇಶ್ವರನ ನುಡಿ
ಎಂದಿನಿಂದಲೋ ತಿಳಿದಿಹುದು.'

19 "ಆದುದರಿಂದ ನನ್ನ ತೀರ್ಮಾನವೇನೆಂದರೆ: ದೇವರ ಕಡೆಗೆ ತಿರುಗುತ್ತಿರುವ ಅನ್ಯಧರ್ಮೀಯರನ್ನು ತೊಂದರೆಗೆ ಈಡುಮಾಡಬಾರದು. [20]ಅದಕ್ಕೆ ಬದಲಾಗಿ ನಾವು ಅವರಿಗೆ ಪತ್ರ ಬರೆದು, 'ವಿಗ್ರಹಗಳಿಗೆ ನೈವೇದ್ಯವಾದುದು ಅಪವಿತ್ರವಾದುದು; ಅದನ್ನು ಸೇವಿಸಬಾರದು; ಅನೈತಿಕತೆಯಿಂದ ದೂರವಿರಬೇಕು; ರಕ್ತವನ್ನಾಗಲಿ, ಕುತ್ತಿಗೆ ಹಿಸುಕಿದ ಪ್ರಾಣಿಗಳನ್ನಾಗಲಿ ತಿನ್ನಬಾರದು,' ಎಂದು ತಿಳುವಳಿಕೆ ಕೊಡಬೇಕು. [21]ಏಕೆಂದರೆ ಪುರಾತನ ಕಾಲಂದಿದಲೂ ಪ್ರತಿಯೊಂದು ಸಬ್ಬತ್‌ದಿನ ಮೋಶೆಯ ಧರ್ಮಶಾಸ್ತ್ರವನ್ನು ಪ್ರಾರ್ಥನಾ ಮಂದಿರಗಳಲ್ಲಿ ಓದಲಾಗುತ್ತಿದೆ ಮತ್ತು ಆತನ ಬೋಧನೆಯನ್ನು ಪ್ರತಿ ನಗರದಲ್ಲೂ ಸಾರಲಾಗುತ್ತಿದೆ," ಎಂದನು.

### ಪ್ರೇಷಿತರ ಪರಿಪತ್ರ

22 ಅನಂತರ ಪ್ರೇಷಿತರೂ ಸಭಾಪ್ರಮುಖರೂ ಇಡೀ ಧರ್ಮಸಭೆಯ ಸಮ್ಮತಿ ಪಡೆದು, ತಮ್ಮಲ್ಲಿ ಕೆಲವರನ್ನು ಆರಿಸಿ, ಪೌಲ ಮತ್ತು ಬಾರ್ನಬರೊಂದಿಗೆ ಅಂತಿಯೋಕ್ಯಕ್ಕೆ ಕಳುಹಿಸಬೇಕೆಂದು ನಿರ್ಧರಿಸಿದರು. ಅಂತೆಯೇ, ಸಹೋದರರರಲ್ಲಿ ಬಹು ಗೌರವಾನ್ವಿತರಾದ ಬಾರ್ಸಬ ಎಂದು ಕರೆಯಲಾದ ಯೂದ ಮತ್ತು ಸೀಲ ಎಂಬ ಇಬ್ಬರನ್ನು ಆರಿಸಿದರು. ಈ ಕೆಳಗಿನ ಪತ್ರವನ್ನು ಬರೆದು ಅವರ ಕೈಯಲ್ಲಿ ಕಳುಹಿಸಿದರು.

23 "ಅಂತಿಯೋಕ್ಯ, ಸಿರಿಯ ಮತ್ತು ಸಿಲಿಸಿಯಗಳಲ್ಲಿ ವಾಸಿಸುವ ಯೆಹೂದ್ಯೇತರ ಸಹೋದರರಿಗೆ –

ಪ್ರೇಷಿತರೂ ಸಭಾಪ್ರಮುಖರೂ ನಿಮ್ಮ ಸಹೋದರರೂ ಆದ ನಮ್ಮ ಶುಭಾಶಯಗಳು! [24]ನಮ್ಮ ಕಡೆಯ ಕೆಲವು ಜನರು ನಮ್ಮಿಂದ ಯಾವ ಆದೇಶವನ್ನೂ ಪಡೆಯದೆ ನಿಮ್ಮನ್ನು ತೊಂದರೆಗೆ ಈಡುಮಾಡಿ ನಿಮ್ಮ ಮನಸ್ಸನ್ನು ಕಲಕಿದರೆಂಬ ಸಮಾಚಾರ ನಮ್ಮ ಗಮನಕ್ಕೆ ಬಂದಿದೆ. [25]ಆದುದರಿಂದ ನಾವೆಲ್ಲರೂ ಸಭೆಸೇರಿ ಪ್ರತಿನಿಧಿಗಳನ್ನು ಆರಿಸಿ ನಿಮ್ಮಲ್ಲಿಗೆ ಕಳುಹಿಸಲು ನಿರ್ಧರಿಸಿದೆವು. [26]ನಮ್ಮ ಪ್ರಭುವಾದ ಯೇಸುಕ್ರಿಸ್ತರಿಗಾಗಿ ತಮ್ಮ ಪ್ರಾಣವನ್ನೇ ಮುಡಿಪಾಗಿಟ್ಟಿರುವ ನಮ್ಮೊಲವಿನ ಬಾರ್ನಬ ಮತ್ತು ಪೌಲರೊಡನೆ ಈ ಪ್ರತಿನಿಧಿಗಳು ಬರುತ್ತಿದ್ದಾರೆ. [27]ಇವರೇ ನಾವು ಕಳುಹಿಸುತ್ತಿರುವ ಯೂದ ಮತ್ತು ಸೀಲ. ಇವರು ನಾವು ಬರೆದಿರುವುದನ್ನು ನಿಮಗೆ ಖುದ್ದಾಗಿ ತಿಳಿಸುವರು. [28–29]ವಿಗ್ರಹಗಳಿಗೆ ನೈವೇದ್ಯವಾದುದು ಅಪವಿತ್ರವಾದುದು. ಅದನ್ನು ಸೇವಿಸಬಾರದು; ರಕ್ತವನ್ನಾಗಲಿ, ಕುತ್ತಿಗೆ ಹಿಸುಕಿಕೊಂದ ಪ್ರಾಣಿಗಳನ್ನಾಗಲಿ ತಿನ್ನಬಾರದು; ಅನೈತಿಕತೆಯಿಂದ ದೂರವಿರಬೇಕು. ಈ ಅಗತ್ಯ ನಿಯಮಗಳ ಹೊರತು ಬೇರೆ ಯಾವ ಹೊರೆಯನ್ನೂ ನಿಮ್ಮ ಮೇಲೆ ಹೇರುವುದು ವಿಹಿತವಲ್ಲವೆಂಬುದು ಪವಿತ್ರಾತ್ಮ ಅವರ ಹಾಗೂ ನಮ್ಮ ತೀರ್ಮಾನ. ಈ ನಿಯಮಗಳನ್ನು ಅನುಸರಿಸಿದರೆ, ನಿಮಗೆ ಒಳಿತಾಗುವುದು, ನಿಮಗೆ ಶುಭವಾಗಲಿ!"

30 ಅಂತೆಯೇ ಪ್ರತಿನಿಧಿಗಳು ಅಲ್ಲಿಂದ ಅಪ್ಪಣೆ ಪಡೆದು ಅಂತಿಯೋಕ್ಯಕ್ಕೆ ಹೋದರು. ಅಲ್ಲಿ ಭಕ್ತ ಸಭೆಯನ್ನು ಒಟ್ಟುಗೂಡಿಸಿ ಅವರಿಗೆ ಆ ಪತ್ರವನ್ನು ಕೊಟ್ಟರು. [31]ಪತ್ರದಲ್ಲಿದ್ದ ಪ್ರೋತ್ಸಾಹದಾಯಕ

ಸಂದೇಶವನ್ನು ಓದಿದ್ದೇ ಭಕ್ತಾದಿಗಳು ಆನಂದಭರಿತರಾದರು. [32]ಸೀಲ ಮತ್ತು ಯೂದ ಸ್ವತಃ
ಪ್ರವಾದಿಗಳಾದುದರಿಂದ ಸುದೀರ್ಘ ಮಾತುಕತೆಗಳಿಂದ ಭಕ್ತರಲ್ಲಿ ಧೈರ್ಯಸ್ಥೈರ್ಯವನ್ನು
ಉಂಟುಮಾಡಿದರು. [33]ಕೆಲವು ದಿನಗಳಾದ ಮೇಲೆ ಅಲ್ಲಿಯ ಭಕ್ತರನ್ನು ಬೀಳ್ಕೊಟ್ಟು ತಮ್ಮನ್ನು ಕಳುಹಿಸಿದವರ
ಬಳಿಗೆ ಹಿಂದಿರುಗಲು ಸಿದ್ಧರಾದರು. [34]ಸೀಲನಾದರೋ ಅಲ್ಲೇ ಉಳಿದುಕೊಳ್ಳಲು ನಿರ್ಧರಿಸಿದನು.
35 ಇತ್ತ ಪೌಲ ಮತ್ತು ಬಾರ್ನಬ ಅಂತಿಯೋಕ್ಯದಲ್ಲೇ ತಂಗಿದ್ದು ಅನೇಕರೊಡಗೂಡಿ ಪ್ರಭುವಿನ
ವಾಕ್ಯವನ್ನು ಬೋಧಿಸುತ್ತಾ ಶುಭಸಂದೇಶವನ್ನು ಸಾರುತ್ತಾ ಇದ್ದರು.

### ಪೌಲನ ಧರ್ಮಪರ್ಯಟನ ಪೌಲ ಬಾರ್ನಬರ ನಡುವೆ ಭಿನ್ನಾಭಿಪ್ರಾಯ

36 ಕೆಲವು ಕಾಲದ ನಂತರ ಪೌಲನು, "ನಾವು ಪ್ರಭುವಿನ ವಾಕ್ಯವನ್ನು ಈಗಾಗಲೇ ಬೋಧಿಸಿದ
ಪ್ರತಿಯೊಂದು ಪಟ್ಟಣಗಳಿಗೆ ಪುನಃ ಹೋಗೋಣ. ಅಲ್ಲಿ ನಮ್ಮ ಸಹೋದರರನ್ನು ಸಂದರ್ಶಿಸಿ ಅವರು
ಹೇಗಿದ್ದಾರೆಂದು ನೋಡಿ ಬರೋಣ ಬಾ," ಎಂದು ಬಾರ್ನಬನನ್ನು ಕರೆದನು. [37]ಮಾರ್ಕನೆಂದು
ಹೆಸರುಗೊಂಡ ಯೊವಾನ್ನನನ್ನು ತಮ್ಮ ಸಂಗಡ ಕರೆದುಕೊಂಡು ಹೋಗಬೇಕೆಂಬುದು ಬಾರ್ನಬನ
ಇಷ್ಟವಾಗಿತ್ತು. [38]ಆದರೆ ಪಾಂಫಿಲಿಯದಲ್ಲಿ ಇದ್ದಾಗ ಧರ್ಮಪ್ರಚಾರ ಕಾರ್ಯದಲ್ಲಿ ಸಹಕರಿಸದೆ ತಮ್ಮನ್ನು
ಬಿಟ್ಟಗಲಿದ ಅವನನ್ನು ಜೊತೆಯಲ್ಲಿ ಕರೆದುಕೊಂಡು ಹೋಗುವುದು ಉಚಿತವಲ್ಲವೆಂಬುದು ಪೌಲನ
ಅಭಿಪ್ರಾಯ. [39]ಹೀಗೆ ಇವರಿಬ್ಬರಲ್ಲಿ ತೀವ್ರ ವಾಗ್ವಾದ ಉಂಟಾಯಿತು. ಒಬ್ಬರನ್ನೊಬ್ಬರು ಬಿಟ್ಟು
ಅಗಲಬೇಕಾಯಿತು. ಬಾರ್ನಬನು ಮಾರ್ಕನನ್ನು ಕರೆದುಕೊಂಡು ಸೈಪ್ರಸ್ ದ್ವೀಪಕ್ಕೆ ನೌಕಾಯಾನ
ಮಾಡಿದನು. [40]ಪೌಲನು ಸೀಲನನ್ನು ಆರಿಸಿಕೊಂಡು ಅವನೊಡನೆ ತೆರಳಿದನು. ಸಹೋದರರು ಅವನನ್ನು
ಪ್ರಭುವಿನ ಕೃಪಾಶ್ರಯಕ್ಕೆ ಒಪ್ಪಿಸಿ ಕಳುಹಿಸಿಕೊಟ್ಟರು. [41]ಅವನು ಸಿರಿಯ ಮತ್ತು ಸಿಲಿಸಿಯಗಳನ್ನು ಹಾದು
ಹೋಗುತ್ತಾ, ಅಲ್ಲಿದ್ದ ಕ್ರೈಸ್ತಸಭೆಗಳನ್ನು ದೃಢಪಡಿಸುತ್ತಾ ಪ್ರಯಾಣಬೆಳೆಸಿದನು.

### ಪೌಲನೊಡನೆ ತಿಮೊಥೇಯ

**16** ಪೌಲನು ದೆರ್ಬೆಗೂ ಅಲ್ಲಿಂದ ಲುಸ್ತ್ರಕ್ಕೂ ಪ್ರಯಾಣಮಾಡಿದನು. ತಿಮೊಥೇಯ ಎಂಬ ಕ್ರೈಸ್ತಭಕ್ತನು
ಅಲ್ಲಿ ವಾಸಿಸುತ್ತಿದ್ದನು. ಇವನ ತಾಯಿ ಯೆಹೂದ್ಯಳು ಹಾಗೂ ಕ್ರೈಸ್ತಭಕ್ತಳು. ತಂದೆಯಾದರೋ ಗ್ರೀಕನು.
[2]ಲುಸ್ತ್ರ ಮತ್ತು ಇಕೋನಿಯದ ಸಹೋದರರೆಲ್ಲರಿಗೆ ತಿಮೊಥೇಯನ ಬಗ್ಗೆ ಸದಭಿಪ್ರಾಯವಿತ್ತು. [3]ಪೌಲನು
ತಿಮೊಥೇಯನನ್ನು ತನ್ನೊಡನೆ ಕರೆದುಕೊಂಡು ಹೋಗಲು ಅಪೇಕ್ಷಿಸಿದನು. ಆ ಪ್ರದೇಶಗಳಲ್ಲಿದ್ದ
ಯೆಹೂದ್ಯರಿಗೆ ತಿಮೊಥೇಯನ ತಂದೆ ಗ್ರೀಕನೆಂದು ತಿಳಿದಿದ್ದುದರಿಂದ ಅವನಿಗೆ ಸುನ್ನತಿ ಮಾಡಿಸಿದನು.
[4]ಊರಿಂದ ಊರಿಗೆ ಪ್ರಯಾಣ ಮಾಡುತ್ತಾ, ಜೆರುಸಲೇಮಿನಲ್ಲಿದ್ದ ಪ್ರೇಷಿತರೂ ಸಭಾಪ್ರಮುಖರೂ
ನಿರ್ಧರಿಸಿದ ನಿಯಮಗಳನ್ನು ಭಕ್ತರಿಗೆ ಬೋದಿಸುತ್ತಾ, ಅವುಗಳನ್ನು ಪಾಲಿಸುವಂತೆ ಹೇಳಿದರು. [5]ಹೀಗೆ ಕ್ರೈಸ್ತ
ಸಭೆಗಳು ವಿಶ್ವಾಸದಲ್ಲಿ ದೃಢಗೊಂಡು ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಬೆಳೆಯತೊಡಗಿತು.

### ಮಕೆದೋನಿಯಕ್ಕೆ ಬರಲು ದಿವ್ಯಕರೆ

6 ಏಷ್ಯದಲ್ಲಿ ಅವರು ಶುಭಸಂದೇಶವನ್ನು ಸಾರಕೂಡದೆಂದು ಪವಿತ್ರಾತ್ಮ ನಿಷೇಧಿಸಿದ್ದರಿಂದ ಅವರು
ಫ್ರಿಜಿಯ ಮತ್ತು ಗಲಾತ್ಯ ಪ್ರದೇಶಗಳ ಮಾರ್ಗವಾಗಿ ಪ್ರಯಾಣಮಾಡಿದರು. [7]ಮೂಸಿಯದ ಗಡಿಯನ್ನು
ತಲುಪಿದಾಗ ಅವರು ಬಿಥೂನಿಯ ಪ್ರಾಂತ್ಯಕ್ಕೆ ಹೋಗಲು ಯತ್ನಿಸಿದರು. ಯೇಸುವಿನ ಆತ್ಮ ಅಲ್ಲಿಗೆ
ಹೋಗಲು ಸಹ ಅವರನ್ನು ಬಿಡಲಿಲ್ಲ. [8]ಆದುದರಿಂದ ಅವರು ಮೂಸಿಯವನ್ನು ಹಾದು ನೇರವಾಗಿ
ತ್ರೋವಕ್ಕೆ ಹೋದರು. [9]ಆ ರಾತ್ರಿ ಪೌಲನಿಗೆ ಒಂದು ದರ್ಶನವಾಯಿತು; ಮಕೆದೋನಿಯದ ಒಬ್ಬ ವ್ಯಕ್ತಿ ಅಲ್ಲಿ
ನಿಂತು, "ಮಕೆದೋನಿಯಕ್ಕೆ ಬಂದು ನಮಗೆ ಸಹಾಯಮಾಡಿ," ಎಂದು ಅಂಗಲಾಚಿದನು. [10]ಪೌಲನಿಗೆ ಈ

ದರ್ಶನವಾದ ತಕ್ಷಣ ಆ ಜನರಿಗೆ ಶುಭಸಂದೇಶವನ್ನು ಸಾರಲು ದೇವರು ನಮ್ಮನ್ನು ಕರೆದಿದ್ದಾರೆಂದು ನಾವು
ಅರಿತುಕೊಂಡು ಮಕೆದೋನಿಯಕ್ಕೆ ಹೋಗಲು ಸಿದ್ಧರಾದೆವು.

### ಫಿಲಿಪ್ಪಿಯಲ್ಲಿ ಲಿಡಿಯಳ ಮನಪರಿವರ್ತನೆ

11 ನಾವು ತ್ರೋವದಲ್ಲಿ ಹಡಗುಹತ್ತಿ ಸಮೋಥ್ರಕ್ಕೆ ನೇರವಾಗಿ ಪ್ರಯಾಣಮಾಡಿದೆವು. ಮಾರನೆಯ
ದಿನ ನೆಯಫೋಲನ್ನು ತಲುಪಿ, [12]ಅಲ್ಲಿಂದ ಮಕೆದೋನಿಯದ ಪ್ರಮುಖ ಪಟ್ಟಣವಾದ ಫಿಲಿಪ್ಪಿಗೆ ಬಂದೆವು.
ಇದು ರೋಮಿನ ವಸಾಹತು; ಇಲ್ಲಿ ಕೆಲವು ದಿನಗಳನ್ನು ಕಳೆದೆವು. [13]ಪಟ್ಟಣದ ಹೊರಗಿರುವ ನದಿತೀರದ
ಬಳಿ ಯೆಹೂದ್ಯರ ಪ್ರಾರ್ಥನಾ ಸ್ಥಳವಿರಬಹುದೆಂದು ಭಾವಿಸಿ ಸಬ್ಬತ್‍ದಿನ ಅಲ್ಲಿಗೆ ಹೋದೆವು. ನಾವು
ಕುಳಿತುಕೊಂಡು ಅಲ್ಲಿ ಸೇರಿದ್ದ ಮಹಿಳೆಯರೊಡನೆ ಸಂಭಾಷಿಸಿದೆವು. [14]ನಮ್ಮ ಬೋಧನೆಯನ್ನು ಕೇಳಿದ ಆ
ಮಹಿಳೆಯರಲ್ಲಿ ಲಿಡಿಯ ಎಂಬವಳು ಒಬ್ಬಳು. ಈಕೆ ಥುವತ್ಯೆರ ಎಂಬ ಊರಿನವಳು; ಪಟ್ಟೆ ಪೀತಾಂಬರಗಳ
ವ್ಯಾಪಾರಿ ಹಾಗೂ ದೇವಭಕ್ತೆ. ಪೌಲನ ಬೋಧನೆಗೆ ಕಿವಿಗೊಟ್ಟು ಗ್ರಹಿಸುವಂತೆ ಪ್ರಭು ಆಕೆಯ ಹೃದಯವನ್ನು
ತೆರೆದರು. [15]ಅಂತೆಯೇ ತನ್ನ ಮನೆಯವರ ಸಮೇತ ದೀಕ್ಷಾಸ್ನಾನವನ್ನು ಪಡೆದಳು. ಅನಂತರ, "ನಾನು
ಪ್ರಭುವಿನ ನಿಜವಾದ ವಿಶ್ವಾಸಿಯೆಂದು ನೀವು ಒಪ್ಪಿಕೊಳ್ಳುವುದಾದರೆ ನನ್ನ ಮನೆಗೆ ಬಂದು ತಂಗಿರಿ," ಎಂದು
ನಮ್ಮನ್ನು ಒತ್ತಾಯ ಪೂರ್ವಕವಾಗಿ ಆಹ್ವಾನಿಸಿದಳು.

### ಸೆರೆಮನೆಯಲ್ಲಿ ಪೌಲ ಮತ್ತು ಸೀಲ

16 ಒಂದು ದಿನ ನಾವು ಪ್ರಾರ್ಥನಾ ಸ್ಥಳಕ್ಕೆ ಹೋಗುತ್ತಿದ್ದೆವು. ಗಾರುಡಗಾತಿಯಾದ ಒಬ್ಬ ದಾಸಿ
ನಮ್ಮನ್ನು ಎದುರುಗೊಂಡಳು. ಆ ಹುಡುಗಿ ಕಣಿಶಕುನ ಹೇಳಿ ತನ್ನ ಯಜಮಾನನಿಗೆ ತುಂಬಾ ಹಣ
ಸಂಪಾದಿಸುತ್ತಿದ್ದಳು. [17]ಅವಳು ಪೌಲನನ್ನು ಮತ್ತು ನಮ್ಮನ್ನು ಹಿಂಬಾಲಿಸುತ್ತಾ, "ಇವರು ಮಹೋನ್ನತ
ದೇವರ ಕಿಂಕರರು; ಜೀವೋದ್ಧಾರದ ಮಾರ್ಗವನ್ನು ಇವರು ನಿಮಗೆ ಸಾರುತ್ತಾರೆ," ಎಂದು ಚೀರುತ್ತಿದ್ದಳು.
[18]ಹೀಗೆ ದಿನೇದಿನೇ ಮಾಡುತ್ತಿದ್ದಳು. ಇದರಿಂದ ಪೌಲನಿಗೆ ಬಹಳ ಬೇಸರವಾಯಿತು. ಅವಳ ಕಡೆಗೆ ತಿರುಗಿ,
ಅವಳನ್ನು ಹಿಡಿದಿದ್ದ ದೆವ್ವಕ್ಕೆ "ಇವಳನ್ನು ಬಿಟ್ಟುತೊಲಗು ಎಂದು ಯೇಸುಕ್ರಿಸ್ತರ ನಾಮದಲ್ಲಿ ನಿನಗೆ
ಆಜ್ಞಾಪಿಸುತ್ತೇನೆ," ಎಂದನು. ಆ ಕ್ಷಣವೇ ಅದು ಅವಳನ್ನು ಬಿಟ್ಟು ಹೋಯಿತು.

19 ಹಣ ಗಳಿಸುತ್ತಿದ್ದ ಅವಳ ಯಜಮಾನನಿಗೆ ನಿರಾಶೆಯಾಯಿತು. ಅವರು ಪೌಲ ಮತ್ತು ಸೀಲರನ್ನು
ಬಂಧಿಸಿ ಸಾರ್ವಜನಿಕ ನ್ಯಾಯಸ್ಥಾನದಲ್ಲಿದ್ದ ಅಧಿಕಾರಿಗಳ ಬಳಿಗೆ ಎಳೆದುಕೊಂಡು ಹೋದರು. [20]ಅಲ್ಲಿದ್ದ
ರೋಮಿನ ನ್ಯಾಯಾಧಿಪತಿಗಳ ಮುಂದೆ ನಿಲ್ಲಿಸಿ, "ಇವರು ನಮ್ಮ ಪಟ್ಟಣದಲ್ಲಿ ಗಲಭೆ ಎಬ್ಬಿಸುತ್ತಿದ್ದಾರೆ.
[21]ಇವರು ಯೆಹೂದ್ಯರು. ರೋಮನರಾದ ನಾವು ಅಂಗೀಕರಿಸಲು ಅಥವಾ ಅನುಸರಿಸಲು ಆಗದಂತಹ
ಆಚಾರ ವಿಚಾರಗಳನ್ನು ಪ್ರಚಾರ ಮಾಡುತ್ತಿದ್ದಾರೆ," ಎಂದರು. [22]ಜನರ ಗುಂಪು ಅವರೊಡನೆ ಸೇರಿ
ದೊಂಬಿಮಾಡಿತು. ನ್ಯಾಯಾಧಿಪತಿಗಳು ಪೌಲ ಮತ್ತು ಸೀಲರ ವಸ್ತ್ರಗಳನ್ನು ಕಿತ್ತುಹಾಕಿಸಿ ಛಡಿ ಏಟುಗಳನ್ನು
ಕೊಡುವಂತೆ ಆಜ್ಞೆ ಮಾಡಿದರು. [23]ಅವರನ್ನು ಚೆನ್ನಾಗಿ ಥಳಿಸಿದ ಮೇಲೆ ಸೆರೆಮನೆಯಲ್ಲಿ ಹಾಕಿ
ಎಚ್ಚರಿಕೆಯಿಂದ ನೋಡಿಕೊಳ್ಳಬೇಕೆಂದು ಸೆರೆಮನೆಯ ಅಧಿಕಾರಿಗೆ ಅಪ್ಪಣೆ ವಿಧಿಸಲಾಯಿತು. [24]ಅಂತೆಯೇ,
ಆ ಅಧಿಕಾರಿ ಅವರನ್ನು ಸೆರೆಮನೆಯ ಒಳಕೋಣೆಗೆ ತಳ್ಳಿ ಅವರ ಕಾಲುಗಳನ್ನು ಮರದ ದಿಮ್ಮಿಗಳಿಗೆ
ಬಿಗಿಸಿದನು.

25 ಸುಮಾರು ನಡುರಾತ್ರಿಯ ಸಮಯ. ಪೌಲ ಮತ್ತು ಸೀಲ ಪ್ರಾರ್ಥನೆಮಾಡುತ್ತಾ ದೇವರಿಗೆ
ಸ್ತುತಿಗೀತೆಗಳನ್ನು ಹಾಡುತ್ತಾ ಇದ್ದರು. ಇತರ ಕೈದಿಗಳೆಲ್ಲರೂ ಆಲಿಸುತ್ತಿದ್ದರು. [26]ಇದ್ದಕ್ಕಿದ್ದಂತೆ ಭೀಕರ
ಭೂಕಂಪ ಉಂಟಾಯಿತು. ಸೆರೆಮನೆಯ ಅಸ್ತಿವಾರವೇ ಕದಲಿತು. ಆ ಕ್ಷಣವೇ ಕದಗಳೆಲ್ಲಾ ತೆರೆದುವು.
ಕೈದಿಗಳೆಲ್ಲರ ಬಂಧನಗಳು ಕಳಚಿಬಿದ್ದುವು. [27]ಎಚ್ಚೆತ್ತ ಅಧಿಕಾರಿ ಸೆರೆಮನೆಯ ಬಾಗಿಲುಗಳೆಲ್ಲಾ
ತೆರೆದಿರುವುದನ್ನು ಕಂಡನು. ಕೈದಿಗಳೆಲ್ಲರು ತಪ್ಪಿಸಿಕೊಂಡಿರುವರೆಂದು ಭಾವಿಸಿ ತನ್ನ ಖಡ್ಗವನ್ನು ಹಿರಿದು
ಆತ್ಮಹತ್ಯೆ ಮಾಡಿಕೊಳ್ಳುವುದರಲ್ಲಿದ್ದನು. [28]ಆಗ ಪೌಲನು ಗಟ್ಟಿಯಾಗಿ ಕೂಗುತ್ತಾ, "ನೀನೇನೂ
ಹಾನಿಮಾಡಿಕೊಳ್ಳಬೇಡ, ನಾವೆಲ್ಲರೂ ಇಲ್ಲೇ ಇದ್ದೇವೆ," ಎಂದನು. [29]ಸೆರೆಮನೆಯ ಅಧಿಕಾರಿ ದೀಪವನ್ನು

ತರಿಸಿ, ಒಳಗೆ ಧಾವಿಸಿ ಬಂದು, ಭಯದಿಂದ ನಡುಗುತ್ತಾ ಪೌಲ ಮತ್ತು ಸೀಲರ ಪಾದಕ್ಕೆ ಬಿದ್ದನು.
30ಅನಂತರ ಅವರನ್ನು ಹೊರಗೆ ಕರೆತಂದು, "ಸ್ವಾಮಿಗಳೇ, ಜೀವೋದ್ಧಾರ ಪಡೆಯಲು ನಾನು
ಮಾಡಬೇಕಾದುದು ಏನು?" ಎಂದು ವಿಚಾರಿಸಿದನು. 31"ಪ್ರಭು ಯೇಸುವಿನಲ್ಲಿ ವಿಶ್ವಾಸವಿಡು, ನೀನೂ ನಿನ್ನ
ಮನೆಯವರೆಲ್ಲರೂ ಜೀವೋದ್ಧಾರವನ್ನು ಹೊಂದುವಿರಿ," ಎಂದು ಅವರು ಉತ್ತರಕೊಟ್ಟರು. 32ಅನಂತರ
ಪ್ರಭುವಿನ ಸಂದೇಶವನ್ನು ಅವನಿಗೂ ಅವನ ಮನೆಯಲ್ಲಿದ್ದ ಎಲ್ಲರಿಗೂ ಬೋಧಿಸಿದರು. 33ರಾತ್ರಿಯ
ವೇಳೆಯಲ್ಲೇ ಸೆರೆಮನೆಯ ಅಧಿಕಾರಿ ಅವರನ್ನು ಕರೆದುಕೊಂಡು ಹೋಗಿ ಅವರ ಗಾಯಗಳನ್ನು ತೊಳೆದನು.
ಅನಂತರ ಅವನೂ ಅವನ ಕುಟುಂಬದವರೂ ದೀಕ್ಷಾಸ್ನಾನವನ್ನು ಪಡೆದರು. 34ಬಳಿಕ ಪೌಲ ಮತ್ತು
ಸೀಲರನ್ನು ತನ್ನ ಮನೆಗೆ ಕರೆದುಕೊಂಡು ಹೋಗಿ ಊಟಬಡಿಸಿದನು. ದೇವರಲ್ಲಿ ವಿಶ್ವಾಸವಿಡುವ ಸದವಕಾಶ
ದೊರಕಿದ್ದಕ್ಕಾಗಿ ಅವನೂ ಅವನ ಮನೆಯವರೆಲ್ಲರೂ ಉಲ್ಲಾಸಗೊಂಡರು.
35 ಮಾರನೆಯ ಬೆಳಿಗ್ಗೆ ನ್ಯಾಯಾಧಿಪತಿಗಳು ಜವಾನರ ಮುಖಾಂತರ, "ಈ ವ್ಯಕ್ತಿಗಳನ್ನು
ಬಿಟ್ಟುಬಿಡು," ಎಂದು ಹೇಳಿಕಳುಹಿಸಿದರು. 36ಸೆರೆಮನೆಯ ಅಧಿಕಾರಿ ಪೌಲನ ಬಳಿಗೆ ಬಂದು,
"ನ್ಯಾಯಾಧಿಪತಿಗಳು ನಿಮ್ಮನ್ನು ಬಿಡುಗಡೆ ಮಾಡುವಂತೆ ಹೇಳಿಕಳುಹಿಸಿದ್ದಾರೆ; ನೀವು ನೆಮ್ಮದಿಯಿಂದ
ಹೊರಟು ಹೋಗಬಹುದು," ಎಂದು ವರದಿ ಮಾಡಿದನು. 37ಆದರೆ ಪೌಲನು ಅವರಿಗೆ, "ನಮ್ಮನ್ನು
ಶಿಕ್ಷೆಗೊಳಪಡಿಸುವಂಥ ಅಪರಾಧವನ್ನೇನೂ ನಾವು ಮಾಡಿಲ್ಲ. ಅಲ್ಲದೆ ನಾವು ರೋಮಿನ ಪೌರರು, ಆದರೂ
ನಮ್ಮನ್ನು ಬಹಿರಂಗವಾಗಿ ಛಡಿಗಳಿಂದ ಹೊಡಿಸಿದ್ದಾರೆ. ಸೆರೆಮನೆಗೆ ತಳ್ಳಿದ್ದಾರೆ; ಈಗ ಗೋಪ್ಯವಾಗಿ ನಮ್ಮನ್ನು
ಕಳುಹಿಸಿಬಿಡಬೇಕೆಂದಿದ್ದಾರೆಯೆ? ಇಲ್ಲ, ಇದು ಸಾಧ್ಯವಿಲ್ಲ. ನ್ಯಾಯಾಧಿಪತಿಗಳೇ ಖುದ್ದಾಗಿ ಇಲ್ಲಿಗೆ ಬಂದು
ನಮ್ಮನ್ನು ಬಿಡುಗಡೆ ಮಾಡಲಿ," ಎಂದನು. 38ಜವಾನರು ಈ ಮಾತುಗಳನ್ನು ನ್ಯಾಯಾಧಿಪತಿಗಳಿಗೆ ವರದಿ
ಮಾಡಿದರು. ಅವರು ಪೌಲ ಮತ್ತು ಸೀಲ ರೋಮಿನ ಪೌರರೆಂದು ಕೇಳಿ ಭಯಪಟ್ಟರು. 39ಆದುದರಿಂದ
ಅವರೇ ಬಂದು ಕ್ಷಮೆಕೋರಿ, ಸೆರೆಮನೆಯಿಂದ ಬಿಡುಗಡೆಮಾಡಿ, ನಗರವನ್ನು ಬಿಟ್ಟು ಹೋಗಬೇಕೆಂದು
ವಿನಂತಿಸಿದರು. 40ಪೌಲ ಮತ್ತು ಸೀಲ ಸೆರೆಮನೆಯಿಂದ ಹೊರಟು ಲಿಡಿಯಳ ಮನೆಗೆ ಹೋದರು.
ಭಕ್ತವಿಶ್ವಾಸಿಗಳನ್ನು ಸಂಧಿಸಿ ಅವರಿಗೆ ಪ್ರೋತ್ಸಾಹದ ಮಾತುಗಳನ್ನಾಡಿ ಅಲ್ಲಿಂದ ನಿರ್ಗಮಿಸಿದರು.

## ಥೆಸಲೋನಿಕದಲ್ಲಿ ದೊಂಬಿ

**17** ಪೌಲ ಮತ್ತು ಸೀಲ ಆಂಫಿಪೊಲಿ ಹಾಗೂ ಅಪೊಲೋನಿಯ ಮಾರ್ಗವಾಗಿ ಪ್ರಯಾಣಮಾಡಿ
ಥೆಸಲೋನಿಕಕ್ಕೆ ಬಂದರು. ಅಲ್ಲಿ ಯೆಹೂದ್ಯರ ಪ್ರಾರ್ಥನಾಮಂದಿರ ಒಂದಿತ್ತು. 2ಪೌಲನು ವಾಡಿಕೆಯ ಪ್ರಕಾರ
ಪ್ರಾರ್ಥನಾ ಮಂದಿರಕ್ಕೆ ಹೋದನು. ಮೂರು ಸಬ್ಬತ್‍ದಿನ ಪವಿತ್ರಗ್ರಂಥವನ್ನು ಉಲ್ಲೇಖಿಸಿ, ಅಲ್ಲಿದ್ದವರೊಡನೆ
ಚರ್ಚೆಮಾಡಿದನು. 3ಪವಿತ್ರಗ್ರಂಥದ ಪ್ರಕಾರ ಲೋಕೋದ್ಧಾರಕನು ಯಾತನೆಯನ್ನು
ಅನುಭವಿಸಬೇಕಾಗಿತ್ತೆಂದೂ ಮರಣಹೊಂದಿ ಪುನರುತ್ಥಾನ ಹೊಂದಬೇಕಾಗಿತ್ತೆಂದೂ ಪ್ರತಿಪಾದಿಸಿದನು.
'ನಾನು ನಿಮಗೆ ಸಾರುತ್ತಿರುವ ಯೇಸುಸ್ವಾಮಿಯೇ ಆ ಉದ್ಧಾರಕ' ಎಂದು ಸ್ಪಷ್ಟಪಡಿಸಿದನು. 4ಇದು
ಸತ್ಯವೆಂದು ಮನವರಿಕೆ ಆದ ಕೆಲವರು ಪೌಲ ಮತ್ತು ಸೀಲರನ್ನು ಸೇರಿಕೊಂಡರು. ಅಂತೆಯೇ
ದೈವಭಕ್ತರಾಗಿದ್ದ ಗ್ರೀಕರ ದೊಡ್ಡ ಗುಂಪೂ ಅನೇಕ ಕುಲೀನ ಸ್ತ್ರೀಯರೂ ಅವರನ್ನು ಸೇರಿಕೊಂಡರು.
5 ಆದರೆ ಯೆಹೂದ್ಯರು ಮತ್ಸರದಿಂದ ಕೂಡಿ, ಪುಂಡಪೋಕರಿಗಳನ್ನು ಎತ್ತಿಕಟ್ಟಿ, ಒಂದು ಗುಂಪನ್ನು
ಕೂಡಿಸಿದರು. ಪಟ್ಟಣದಲ್ಲೆಲ್ಲಾ ದೊಂಬಿ ಎಬ್ಬಿಸಿದರು. ಪೌಲ ಮತ್ತು ಸೀಲರನ್ನು ಜನರ ಮುಂದೆ
ಎಳೆದುತರುವ ಉದ್ದೇಶದಿಂದ ಅವರನ್ನು ಹುಡುಕುತ್ತಾ ಯಾಸೋನ ಎಂಬವನ ಮನೆಯನ್ನು ಮುತ್ತಿದರು.
6ಅವರನ್ನು ಅಲ್ಲಿ ಕಾಣದಿರಲು ಯಾಸೋನನನ್ನೂ ಕೆಲವು ಭಕ್ತವಿಶ್ವಾಸಿಗಳನ್ನೂ ನಗರಾಧಿಕಾರಿಗಳ ಮುಂದೆ
ಎಳೆದು ತಂದು, "ಎಲ್ಲೆಲ್ಲೂ ಅಲ್ಲೋಲ ಕಲ್ಲೋಲ ಎಬ್ಬಿಸಿದ ಆ ವ್ಯಕ್ತಿಗಳು ಈಗ ನಮ್ಮ ನಗರಕ್ಕೂ ಬಂದಿದ್ದಾರೆ.
7ಈ ಯಾಸೋನನು ಅವರಿಗೆ ಆಶ್ರಯ ಕೊಟ್ಟಿದ್ದಾನೆ. ಅವರು 'ಯೇಸು' ಎಂಬ ಇನ್ನೊಬ್ಬ ಅರಸನಿದ್ದಾನೆಂದು
ಹೇಳುತ್ತಾ ಚಕ್ರವರ್ತಿಯ ಆಜ್ಞೆಗಳನ್ನು ಉಲ್ಲಂಘಿಸುತ್ತಿದ್ದಾರೆ," ಎಂದು ಗುಲ್ಲೆಬ್ಬಿಸಿದರು. 8ನಗರದ ನಿವಾಸಿಗಳೂ

ಅಧಿಕಾರಿಗಳೂ ಇದನ್ನು ಕೇಳಿ ಉದ್ರಿಕ್ತರಾದರು; [9]ಯಾಸೋನ ಮತ್ತಿತರ ಸಂಗಡಿಗರಿಂದ ಜಾಮೀನು ಪಡೆದು
ಅವರನ್ನು ಬಿಡುಗಡೆಮಾಡಿದರು.

### ಬೆರೋಯದಲ್ಲೂ ಗಲಭೆ

10 ಭಕ್ತವಿಶ್ವಾಸಿಗಳು ಪೌಲ ಮತ್ತು ಸೀಲರನ್ನು ರಾತ್ರೋರಾತ್ರಿಯಲ್ಲೇ ಬೆರೋಯ ಎಂಬ ಊರಿಗೆ
ಕಳುಹಿಸಿಬಿಟ್ಟರು. ಇವರು ಆ ಊರನ್ನು ತಲುಪಿದ್ದೇ, ಯೆಹೂದ್ಯರ ಪ್ರಾರ್ಥನಾಮಂದಿರಕ್ಕೆ ಹೋದರು.
[11]ಅಲ್ಲಿನ ಯೆಹೂದ್ಯರು ಥೆಸಲೋನಿಕದ ಜನರಿಗಿಂತ ವಿಶಾಲ ಮನೋಭಾವವುಳ್ಳವರು; ಶುಭಸಂದೇಶವನ್ನು
ಅತ್ಯಾಸಕ್ತಿಯಿಂದ ಸ್ವಾಗತಿಸಿದರು. ಅದು ಪವಿತ್ರಗ್ರಂಥಕ್ಕೆ ಅನುಗುಣವಾಗಿದೆಯೇ ಎಂದು ತಿಳಿದುಕೊಳ್ಳಲು
ಪ್ರತಿದಿನವೂ ಅಧ್ಯಯನ ಮಾಡತೊಡಗಿದರು. [12]ಅವರಲ್ಲಿ ಅನೇಕರು ವಿಶ್ವಾಸಿಗಳಾದರು. ಅನೇಕ ಗ್ರೀಕ್
ಕುಲೀನ ಸ್ತ್ರೀಯರೂ ಪುರುಷರೂ ವಿಶ್ವಾಸಿಗಳಾದರು.
13 ಪೌಲನು ಬೆರೋಯದಲ್ಲೂ ದೇವರ ವಾಕ್ಯವನ್ನು ಸಾರುತ್ತಿದ್ದಾನೆಂಬ ವರ್ತಮಾನವು
ಥೆಸಲೋನಿಕದ ಯೆಹೂದ್ಯರಿಗೆ ತಿಳಿದುಬಂತು. ಅವರು ಅಲ್ಲಿಗೂ ಬಂದು ಜನಸಮೂಹವನ್ನು ಪ್ರಚೋದಿಸಿ
ಗಲಭೆಯೆಬ್ಬಿಸಿದರು. [14]ಕೂಡಲೇ ಭಕ್ತವಿಶ್ವಾಸಿಗಳು ಪೌಲನನ್ನು ಸಮುದ್ರ ತೀರಕ್ಕೆ ಕಳುಹಿಸಿಬಿಟ್ಟರು. ಆದರೆ
ಸೀಲ ಮತ್ತು ತಿಮೊಥೇಯ ಬೆರೋಯದಲ್ಲೇ ಉಳಿದುಕೊಂಡರು. [15]ಪೌಲನನ್ನು ಬಿಟ್ಟುಬರಲು ಹೋದವರು
ಅವನ ಜೊತೆ ಅಥೆನ್ಸಿನವರೆಗೆ ಹೋದರು; ಅನಂತರ ಸೀಲ ಮತ್ತು ತಿಮೊಥೇಯರಿಬ್ಬರೂ ಸಾಧ್ಯವಾದಷ್ಟು
ಬೇಗ ತನ್ನ ಬಳಿಗೆ ಬಂದು ಸೇರಬೇಕೆಂಬ ಆಜ್ಞೆಯನ್ನು ಪೌಲನಿಂದ ಪಡೆದು, ಅವರು ಬೆರೋಯಕ್ಕೆ
ಹಿಂದಿರುಗಿದರು.

### ಅಜ್ಞಾತ ದೇವರನ್ನು ಕುರಿತು ಅಥೆನ್ಸಿನಲ್ಲಿ ಬೋಧನೆ

16 ಅಥೆನ್ಸಿನಲ್ಲಿ ಪೌಲನು, ಸೀಲ ಮತ್ತು ತಿಮೊಥೇಯರನ್ನು ಎದುರುನೋಡುತ್ತಿದ್ದನು. ಆ ಪಟ್ಟಣದಲ್ಲಿ
ಎಲ್ಲಿ ನೋಡಿದರಲ್ಲಿ ವಿಗ್ರಹಗಳಿರುವುದನ್ನು ಕಂಡು, ಅವನ ಮನಸ್ಸು ಕುದಿಯಿತು. [17]ಅದುದರಿಂದ ಅವನು
ಪ್ರಾರ್ಥನಾಮಂದಿರಕ್ಕೆ ಹೋಗಿ ಯೆಹೂದ್ಯರೊಡನೆ ಮತ್ತು ಯೆಹೂದ್ಯ ಮತಾವಲಂಬಿಗಳೊಡನೆ
ಚರ್ಚಿಸತೊಡಗಿದನು. ಸಾರ್ವಜನಿಕ ಚೌಕದ ಬಳಿ, ಕಂಡ ಕಂಡವರೊಡನೆ ಪ್ರತಿದಿನವೂ ತರ್ಕಮಾಡಿದನು.
[18]ಕೆಲವು ಎಪಿಕೂರಿಯ ಮತ್ತು ಸ್ತೋಯಿಕ ತತ್ವಶಾಸ್ತ್ರಜ್ಞರೂ ಕೂಡ ಅವನೊಡನೆ ವಾದಿಸಿದರು. ಕೆಲವರು
"ಈ ಬಾಯಿಬಡುಕ ಹೇಳುವುದಾದರೂ ಏನು?" ಎಂದರು. ಪೌಲನು ಯೇಸುಸ್ವಾಮಿಯ
ವಿಷಯವಾಗಿಯೂ ಪುನರುತ್ಥಾನದ ವಿಷಯವಾಗಿಯೂ ಬೋಧಿಸುತ್ತಿದ್ದುದರಿಂದ ಮತ್ತೆ ಕೆಲವರು 'ಇವನು
ವಿದೇಶೀಯ ದೇವರುಗಳ ಬಗ್ಗೆ ಮಾತನಾಡುವಂತೆ ಕಾಣುತ್ತದೆ,' ಎಂದರು. [19]ಅವರು ಪೌಲನನ್ನು
ಅರಿಯೊಪಾಗ ಎಂಬ ಸ್ಥಳಕ್ಕೆ ಕರೆತಂದು, "ನೀನು ಸಾರುತ್ತಿರುವ ನೂತನ ತತ್ವವನ್ನು ನಾವು
ತಿಳಿದುಕೊಳ್ಳಬಹುದೇ? [20]ನೀನು ಹೇಳುತ್ತಿರುವ ಕೆಲವು ಸಂಗತಿಗಳು ನಮಗೆ ವಿಚಿತ್ರವಾಗಿ ತೋರುತ್ತವೆ.
ಆದ್ದರಿಂದ ಅವುಗಳ ಅರ್ಥವೇನೆಂದು ತಿಳಿಯ ಬಯಸುತ್ತೇವೆ," ಎಂದರು. ([21]ಅಥೆನ್ಸಿನ ನಿವಾಸಿಗಳು ಮತ್ತು
ಅಲ್ಲಿ ವಾಸಿಸುತ್ತಿದ್ದ ವಿದೇಶಿಯರು ಅತ್ಯಾಧುನಿಕ ವಿದ್ಯಮಾನಗಳನ್ನು ಕುರಿತು ಮಾತನಾಡುವುದರಲ್ಲೂ
ಕೇಳಿತಿಳಿಯುವುದರಲ್ಲೂ ಸಮಯ ಕಳೆಯುತ್ತಿದ್ದರು).
22 ಪೌಲನು ಅರಿಯೊಪಾಗಿನ ಸಭೆಯ ಮುಂದೆ ನಿಂತು ಹೀಗೆಂದನು: "ಅಥೆನ್ಸಿನ ಮಹಾಜನರೇ,
ನೀವು ಎಲ್ಲಾ ವಿಧದಲ್ಲೂ ಬಹು ಧರ್ಮನಿಷ್ಠರೆಂದು ನನಗೆ ತೋರುತ್ತದೆ. [23]ನಿಮ್ಮ ಪಟ್ಟಣದಲ್ಲಿ ನಾನು
ತಿರುಗಾಡುತ್ತಾ, ನೀವು ಪೂಜಿಸುವ ವಿಗ್ರಹಗಳನ್ನು ಗಮನಿಸುತ್ತಾ ಇದ್ದಾಗ ಒಂದು ಬಲಿಪೀಠವು ಕಣ್ಣಿಗೆ
ಬಿದ್ದಿತು. ಅದರ ಮೇಲೆ 'ಅಜ್ಞಾತ ದೇವರಿಗೆ' ಎಂಬ ಲಿಖಿತವಿತ್ತು. ನೀವು ಅರಿಯದೆ ಆರಾಧಿಸುವ ಆ
ದೇವರನ್ನೇ ಅರುಹಿಸಲು ನಾನು ಬಂದಿರುತ್ತೇನೆ. [24]ಜಗತ್ತನ್ನು ಹಾಗೂ ಅದರಲ್ಲಿರುವ ಸಮಸ್ತವನ್ನೂ ಸೃಷ್ಟಿಸಿದ
ದೇವರು ಇಹಪರಗಳಿಗೆ ಒಡೆಯರು; ಮಾನವನು ನಿರ್ಮಿಸಿದ ಗುಡಿಗಳಲ್ಲಿ ಅವರು
ಮನೆಮಾಡುವಂಥವರಲ್ಲ. [25]ಎಲ್ಲಾ ಜೀವಿಗಳಿಗೆ ಪ್ರಾಣವನ್ನೂ ಶ್ವಾಸವನ್ನೂ ಸಮಸ್ತವನ್ನೂ ಕೊಡುವವರು
ಅವರೇ; ಎಂದೇ ಅವರಿಗಾಗಿ ಮಾನವನು ದುಡಿಯಬೇಕಾದ ಅವಶ್ಯಕತೆ ಇಲ್ಲ. ಅಂಥ ಕೊರತೆ ಅವರಿಗೇನೂ

ಇಲ್ಲ. 26ಒಂದೇ ಮೂಲದಿಂದ ಅವರು ಎಲ್ಲಾ ಜನಾಂಗಗಳನ್ನು ಸೃಷ್ಟಿಸಿ ಭೂಮಂಡಲದಲ್ಲೆಲ್ಲಾ ಜೀವಿಸುವಂತೆ
ಮಾಡಿದ್ದಾರೆ. ಆಯಾ ಜನಾಂಗದ ಕಾಲಾವಧಿಯನ್ನೂ ಅವರವರ ನೆಲೆಯ ಎಲ್ಲೆಮೇರೆಗಳನ್ನೂ
ಮುಂಚಿತವಾಗಿ ಅವರೇ ನಿರ್ಧರಿಸಿದ್ದಾರೆ. 27ಜನರು ತಮ್ಮನ್ನು ಅರಸಬೇಕೆಂಬುದೇ ಅವರ ಉದ್ದೇಶ;
ಹೀಗಾದರೂ ತಮ್ಮನ್ನು ಅರಸಿ ಸಾಕ್ಷಾತ್ಕರಿಸಿಕೊಂಡಾರು ಎಂದು ದೇವರು ಹೀಗೆ ಮಾಡಿದರು. ಆದರೂ,
ನಮ್ಮಲ್ಲಿ ಯಾರೊಬ್ಬರಿಂದಲೂ ದೇವರು ದೂರವಿಲ್ಲ. 28ಏಕೆಂದರೆ, 'ನಾವು ಜೀವಿಸುವುದೂ ಚಲಿಸುವುದೂ
ಇರುವುದೂ ಅವರಲ್ಲೇ'; ನಿಮ್ಮ ಕವಿಗಳಲ್ಲೇ ಕೆಲವರು ಹೇಳಿರುವಂತೆ, 'ನಾವು ನಿಜವಾಗಿ ದೇವರ ಮಕ್ಕಳು.'
29 "ನಾವು ದೇವರ ಮಕ್ಕಳಾಗಿರುವುದರಿಂದ ಜನರು ಕಲಾಕುಶಲತೆಯಿಂದಲೂ ಕಲ್ಪನೆಯಿಂದಲೂ
ರೂಪಿಸಿದ ಚಿನ್ನ, ಬೆಳ್ಳಿ, ಶಿಲೆಗಳ ಪ್ರತಿಮೆಗೆ ದೇವರು ಸಮಾನರೆಂದು ಭಾವಿಸಲಾಗದು. 30ಮಾನವರು
ತಮ್ಮನ್ನು ಅರಿಯದೆ ಬಾಳಿದ ಕಾಲವನ್ನು ದೇವರು ಗಮನಕ್ಕೆ ತಂದುಕೊಳ್ಳಲಿಲ್ಲ. ಆದರೆ ಈಗ
ಎಲ್ಲೆಡೆಯಲ್ಲಿರುವ ಸರ್ವಮಾನವರು ದುರ್ಮಾರ್ಗಗಳನ್ನು ಬಿಟ್ಟು ತಮಗೆ ಅಭಿಮುಖರಾಗಬೇಕೆಂದು
ಆಜ್ಞಾಪಿಸುತ್ತಾರೆ. 31ಏಕೆಂದರೆ, ಅವರು ಒಂದು ದಿನವನ್ನು ಗೊತ್ತುಮಾಡಿದ್ದಾರೆ; ಆ ದಿನದಂದು ತಾವು
ನೇಮಿಸಿದ ಒಬ್ಬ ವ್ಯಕ್ತಿಯ ಮುಖಾಂತರ ಇಡೀ ಜಗತ್ತಿಗೆ ನ್ಯಾಯನಿರ್ಣಯ ಮಾಡುವರು. ಇದನ್ನು
ಎಲ್ಲರಿಗೂ ಖಚಿತಪಡಿಸಲೆಂದೇ ಆ ವ್ಯಕ್ತಿಯನ್ನು ಮರಣದಿಂದ ಪುನರುತ್ಥಾನಗೊಳಿಸಿದ್ದಾರೆ."
32 ಸತ್ತವರ ಪುನರುತ್ಥಾನದ ಬಗ್ಗೆ ಪೌಲನು ಮಾತಾಡಿದಾಗ ಕೆಲವರು ಪರಿಹಾಸ್ಯಮಾಡಿದರು.
ಉಳಿದವರು, "ಈ ವಿಷಯದ ಬಗ್ಗೆ ನೀನು ಇನ್ನೊಮ್ಮೆ ಹೇಳಬಹುದು, ಆಗ ಕೇಳುತ್ತೇವೆ," ಎಂದರು.
33ಹೀಗೆ ಪೌಲನು ಆ ಸಭೆಯಿಂದ ನಿರ್ಗಮಿಸಿದನು. 34ಕೆಲವರು ಅವನನ್ನು ಸೇರಿಕೊಂಡು
ಭಕ್ತವಿಶ್ವಾಸಿಗಳಾದರು. ಇವರಲ್ಲಿ ಅರಿಯೊಪಾಗದ ದಿಯೊನಿಸಿಯನೂ ದಮಾರಿ ಎಂಬ ಸ್ತ್ರೀಯೂ
ಮತ್ತಿತರರೂ ಇದ್ದರು.

### ಕೊರಿಂಥದಲ್ಲಿ ಧರ್ಮಸಭೆಯ ಸ್ಥಾಪನೆ

**18** ಇದಾದಮೇಲೆ ಪೌಲನು ಅಥೆನ್ಸ್ ಅನ್ನು ಬಿಟ್ಟು ಕೊರಿಂಥಕ್ಕೆ ಹೋದನು. 2ಪೊಂತ ಎಂಬ ಊರಿನ
ಅಕ್ವಿಲ ಎಂಬ ಯೆಹೂದ್ಯನನ್ನು ಅಲ್ಲಿ ಕಂಡನು. ಚಕ್ರವರ್ತಿ ಕ್ಲಾಡಿಯಸನು ಯೆಹೂದ್ಯರೆಲ್ಲರೂ
ರೋಮ್‌ನಗರವನ್ನು ಬಿಟ್ಟುಹೋಗಬೇಕೆಂದು ಆಜ್ಞಾಪಿಸಿದ್ದರಿಂದ, ಈ ಅಕ್ವಿಲನು ತನ್ನ ಪತ್ನಿ ಪ್ರಿಸ್ಸಿಲಳೊಂದಿಗೆ
ಇಟಲಿಯಿಂದ ಇತ್ತೀಚೆಗೆ ಬಂದಿದ್ದನು. ಪೌಲನು ಅವರನ್ನು ನೋಡಲು ಹೋದನು. 3ಅವರು ತನ್ನಂತೆಯೇ
ಗುಡಾರಮಾಡುವ ಕಸುಬಿನವರಾಗಿದ್ದರಿಂದ ಅವರಲ್ಲೇ ತಂಗಿದ್ದು ಅವರೊಡನೆ ಕೆಲಸ ಮಾಡುತ್ತಾ ಬಂದನು.
4ಪ್ರತಿ ಸಬ್ಬತ್‌ದಿನ ಅವನು ಪ್ರಾರ್ಥನಾಮಂದಿರದಲ್ಲಿ ಚರ್ಚಿಸುತ್ತಾ ಯೆಹೂದ್ಯರನ್ನು ಮತ್ತು ಗ್ರೀಕರನ್ನು
ವಿಶ್ವಾಸಿಗಳನ್ನಾಗಿಸಲು ಪ್ರಯತ್ನಿಸುತ್ತಿದ್ದನು.
5 ಸೀಲ ಮತ್ತು ತಿಮೊಥೇಯ ಮಕೆದೋನಿಯದಿಂದ ಬಂದ ಮೇಲೆ ಪೌಲನು ಶುಭಸಂದೇಶವನ್ನು
ಸಾರುವುದರಲ್ಲೂ ಯೇಸುವೇ ಬರಬೇಕಾದ ಲೋಕೋದ್ಧಾರಕ ಎಂದು ಯೆಹೂದ್ಯರಿಗೆ
ರುಜುವಾತುಪಡಿಸುವುದರಲ್ಲೂ ತನ್ನ ಸಮಯವನ್ನು ಕಳೆದನು. 6ಆದರೆ ಆ ಯೆಹೂದ್ಯರು ಅವನನ್ನು
ಪ್ರತಿಭಟಿಸಿ ದೂಷಿಸಿದರು. ಆಗ ಪೌಲನು ತನ್ನ ಹೊದಿಕೆಯನ್ನು ಒದರಿ, "ನಿಮ್ಮ ವಿನಾಶಕ್ಕೆ ನೀವೇ ಹೊಣೆ;
ಅದಕ್ಕೆ ನಾನು ಬಾಧ್ಯನಲ್ಲ. ಇಂದಿನಿಂದ ನಾನು ಅನ್ಯಧರ್ಮೀಯರ ಕಡೆಗೆ ಹೋಗುತ್ತೇನೆ," ಎಂದನು.
7ಅಂತೆಯೇ ಅವರನ್ನು ಬಿಟ್ಟು ದೇವರಲ್ಲಿ ಭಯಭಕ್ತಿಯುಳ್ಳವನಾಗಿದ್ದ ತೀತಯುಸ್ತ ಎಂಬವನ ಮನೆಗೆ
ಹೋದನು. ಅವನ ಮನೆ ಪ್ರಾರ್ಥನಾ ಮಂದಿರದ ಪಕ್ಕದಲ್ಲೇ ಇತ್ತು. 8ಪ್ರಾರ್ಥನಾಮಂದಿರದ ಅಧ್ಯಕ್ಷ ಕ್ರಿಸ್ಪ
ಎಂಬವನೂ ಅವನ ಮನೆಯವರೆಲ್ಲರೂ ಪ್ರಭುವಿನಲ್ಲಿ ವಿಶ್ವಾಸವಿಟ್ಟರು. ಕೊರಿಂಥದ ಇನ್ನೂ ಅನೇಕ ಜನರು
ಪೌಲನ ಬೋಧನೆಯನ್ನು ಕೇಳಿ ವಿಶ್ವಾಸವಿಟ್ಟರು ಮತ್ತು ದೀಕ್ಷಾಸ್ನಾನ ಪಡೆದರು.
9 ಒಂದು ರಾತ್ರಿ ಪೌಲನಿಗೆ ಪ್ರಭು ದರ್ಶನ ಇತ್ತು, "ಭಯಪಡಬೇಡ, ಬೋಧನೆ ಮಾಡುವುದನ್ನು
ಮುಂದುವರಿಸು, 10ನಾನು ನಿನ್ನೊಡನೆ ಇದ್ದೇನೆ. ಯಾರೂ ನಿನ್ನ ಮೇಲೆ ಬಿದ್ದು ಹಾನಿ ಮಾಡುವುದಿಲ್ಲ.

ಪಟ್ಟಣದ ಅನೇಕ ಜನರು ನನ್ನ ಪರವಾಗಿದ್ದಾರೆ," ಎಂದರು. [11]ಅಂತೆಯೇ ಪೌಲನು ಒಂದೂವರೆ ವರ್ಷಕಾಲ ಅಲ್ಲಿದ್ದು ದೇವರ ವಾಕ್ಯವನ್ನು ಜನರಿಗೆ ಬೋಧಿಸಿದನು.

## ರಾಜ್ಯಪಾಲ ಗಲ್ಲಿಯೋನ ಮುಂದೆ ಪೌಲ

12 ಗಲ್ಲಿಯೋ ಎಂಬವನು ಅಖಾಯದಲ್ಲಿ ರಾಜ್ಯಪಾಲನಾಗಿದ್ದಾಗ, ಯೆಹೂದ್ಯರು ಪೌಲನ ವಿರುದ್ಧ ಒಟ್ಟುಗೂಡಿ ಅವನನ್ನು ಬಂಧಿಸಿ ನ್ಯಾಯಸ್ಥಾನಕ್ಕೆ ಕೊಂಡೊಯ್ದರು. [13]"ಧರ್ಮಶಾಸ್ತ್ರಕ್ಕೆ ವ್ಯತಿರಿಕ್ತವಾದ ರೀತಿಯಲ್ಲಿ ದೇವರನ್ನು ಆರಾಧಿಸುವಂತೆ ಈ ಮನುಷ್ಯ ಜನರನ್ನು ಪ್ರೇರೇಪಿಸುತ್ತಾ ಇದ್ದಾನೆ," ಎಂದು ಅಲ್ಲಿ ದೂರಿತ್ತರು. [14]ಪೌಲನು ಮಾತನಾಡಬೇಕೆಂದಿರುವಾಗ, ಗಲ್ಲಿಯೋ ಯೆಹೂದ್ಯರನ್ನು ಸಂಬೋಧಿಸಿ, "ಯೆಹೂದ್ಯರೇ, ಅನ್ಯಾಯವಾಗಲಿ, ಅಕ್ರಮವಾಗಲಿ ನಡೆದಿದ್ದ ಪಕ್ಷದಲ್ಲಿ, ನಿಮ್ಮ ಅಪಾದನೆಗಳನ್ನು ತಾಳ್ಮೆಯಿಂದ ಕೇಳಬೇಕಾದುದು ಸರಿಯಷ್ಟೆ. [15]ಆದರೆ ಇದು ನಾಮನೇಮಗಳಿಗೆ ಹಾಗು ನಿಮ್ಮ ಧರ್ಮಶಾಸ್ತ್ರಕ್ಕೆ ಸಂಬಂಧಪಟ್ಟ ಪ್ರಶ್ನೆ. ಅದನ್ನು ನಿಮ್ಮನಿಮ್ಮಲ್ಲೇ ಇತ್ಯರ್ಥಮಾಡಿಕೊಳ್ಳಿ. ಇಂಥ ವಿಷಯಗಳನ್ನು ವಿಚಾರಣೆ ಮಾಡಲು ನನಗೆ ಮನಸ್ಸಿಲ್ಲ," ಎಂದು ಹೇಳಿ [16]ಅವರನ್ನು ನ್ಯಾಯಸ್ಥಾನದಿಂದ ಹೊರಗಟ್ಟಿದನು. [17]ಆಗ ಅವರೆಲ್ಲರೂ ಪ್ರಾರ್ಥನಾಮಂದಿರದ ಅಧ್ಯಕ್ಷ ಸೋಸ್ಥೆನನನ್ನು ಬಂಧಿಸಿ, ನ್ಯಾಯಸ್ಥಾನದ ಮುಂದೆಯೇ ಹೊಡೆದರು. ಗಲ್ಲಿಯೋ ಇದೊಂದನ್ನೂ ಲಕ್ಷಿಸಲಿಲ್ಲ.

## ಅಂತಿಯೋಕ್ಯಕ್ಕೆ ಮರಪ್ರಯಾಣ

18 ಇದಾದ ಮೇಲೆ ಪೌಲನು ಕೊರಿಂಥದಲ್ಲಿ ಅನೇಕ ದಿನ ಇದ್ದನು. ಅನಂತರ ಭಕ್ತವಿಶ್ವಾಸಿಗಳನ್ನು ಬೀಳ್ಕೊಟ್ಟು ಅಕ್ವಿಲ ಮತ್ತು ಪ್ರಿಸ್ಸಿಲರೊಡನೆ ಸಿರಿಯಕ್ಕೆ ನೌಕಾಯಾನ ಹೊರಟನು. ತಾನು ಮಾಡಿದ್ದ ಹರಕೆಯ ಪ್ರಕಾರ ಕೆಂಖ್ರೆಯೆಂಬ ಸ್ಥಳದಲ್ಲಿ ಮುಂಡನಮಾಡಿಸಿಕೊಂಡನು. [19]ಎಫೆಸ ನಗರಕ್ಕೆ ಬಂದು ಸೇರಿದಾಗ ಪೌಲನು ತನ್ನ ಸಂಗಡಿಗರನ್ನು ಅಲ್ಲೇ ಬಿಟ್ಟು ಪ್ರಾರ್ಥನಾ ಮಂದಿರಕ್ಕೆ ಹೋಗಿ ಅಲ್ಲಿ ಯೆಹೂದ್ಯರೊಡನೆ ತರ್ಕಮಾಡತೊಡಗಿದನು. [20]ಆ ಯೆಹೂದ್ಯರು ತಮ್ಮೊಡನೆ ಇನ್ನೂ ಸ್ವಲ್ಪ ಕಾಲವಿರಬೇಕೆಂದು ಅವನನ್ನು ವಿನಂತಿಸಿದರು. ಆದರೆ ಪೌಲನು ಒಪ್ಪಿಕೊಳ್ಳಲಿಲ್ಲ. [21]ಅವರನ್ನು ಬೀಳ್ಕೊಡುತ್ತಾ, "ದೇವರ ಚಿತ್ತವಾದರೆ ನಾನು ನಿಮ್ಮಲ್ಲಿಗೆ ಮರಳಿಬರುತ್ತೇನೆ," ಎಂದು ಹೇಳಿ ಎಫೆಸದಿಂದ ಸಮುದ್ರ ಪ್ರಯಾಣಮಾಡಿದನು.

22 ಅವನು ಸೆಜರೇಯವನ್ನು ಸೇರಿದನು. ಅಲ್ಲಿಂದ ಜೆರುಸಲೇಮಿಗೆ ಹೋಗಿ ಧರ್ಮಸಭೆಯನ್ನು ಸಂಧಿಸಿ ಅಂತಿಯೋಕ್ಯಕ್ಕೆ ಬಂದನು. [23]ಅಲ್ಲಿ ಕೆಲಕಾಲವಿದ್ದು ಪುನಃ ಹೊರಟು ಗಲಾತ್ಯ ಮತ್ತು ಫ್ರಿಜಿಯ ಪ್ರದೇಶಗಳಲ್ಲಿ ಸಂಚರಿಸುತ್ತಾ ಭಕ್ತರೆಲ್ಲರನ್ನು ದೃಢಪಡಿಸಿದನು.

## ವಿಶ್ವಾಸಿಗಳಿಗೆ ಅಪೊಲ್ಲೋಸನ ಬೆಂಬಲ

24 ಅಲೆಕ್ಸಾಂಡ್ರಿಯದ ಅಪೊಲ್ಲೋಸ್ ಎಂಬ ಯೆಹೂದ್ಯನು ಎಫೆಸಕ್ಕೆ ಬಂದಿದ್ದನು. ಅವನೊಬ್ಬ ಉತ್ತಮ ಭಾಷಣಕಾರ ಹಾಗೂ ಪವಿತ್ರಗ್ರಂಥದಲ್ಲಿ ಪಾಂಡಿತ್ಯಪಡೆದವನು. [25]ಪ್ರಭುವಿನ ಮಾರ್ಗದ ಬಗ್ಗೆ ಅವನಿಗೆ ಉಪದೇಶಮಾಡಲಾಗಿತ್ತು. ಸ್ನಾನಿಕ ಯೊವಾನ್ನನ ಸ್ನಾನದೀಕ್ಷೆ ಒಂದನ್ನೇ ಅವನು ಬಲ್ಲವನಾಗಿದ್ದನು. ಆದರೂ ಯೇಸುಸ್ವಾಮಿಯ ಬಗ್ಗೆ ಉತ್ಸಾಹಭರಿತನಾಗಿ ಉಪದೇಶಮಾಡಿ ಚ್ಯುತಿಯಿಲ್ಲದೆ ಬೋಧಿಸುತ್ತಾ ಬಂದನು. [26]ಇವನು ಪ್ರಾರ್ಥನಾಮಂದಿರದಲ್ಲಿ ಧೈರ್ಯದಿಂದ ಮಾತನಾಡುತ್ತಿದ್ದಾಗ, ಪ್ರಿಸ್ಸಿಲ ಮತ್ತು ಅಕ್ವಿಲರು ಅವನ ಬೋಧನೆಯನ್ನು ಕೇಳಿದರು. ಅವನನ್ನು ಮನೆಗೆ ಕರೆದುಕೊಂಡು ಹೋಗಿ ಪ್ರಭುವಿನ ಮಾರ್ಗವನ್ನು ಇನ್ನೂ ಸೂಕ್ಷ್ಮವಾಗಿ ವಿವರಿಸಿದರು. [27]ಇವನು ಅಖಾಯಕ್ಕೆ ಹೋಗಲು ಇಷ್ಟಪಟ್ಟಾಗ ಭಕ್ತಾದಿಗಳು ಅವನನ್ನು ಪ್ರೋತ್ಸಾಹಿಸಿ, ಅಖಾಯದ ಭಕ್ತಾದಿಗಳಿಗೆ ಪತ್ರ ಬರೆದು, ಇವನನ್ನು ಸ್ವಾಗತಿಸುವಂತೆ ಬಿನ್ನವಿಸಿದರು. ಇವನು ಅಲ್ಲಿಗೆ ಹೋಗಿ ದೇವರ ಕೃಪೆಯಿಂದ ವಿಶ್ವಾಸಿಗಳಾಗಿದ್ದವರಿಗೆ ಬಹುವಾಗಿ ನೆರವಾದನು. [28]ಹೇಗೆಂದರೆ, ಪವಿತ್ರ ಗ್ರಂಥಾನುಸಾರ ಯೇಸುವೇ ಲೋಕೋದ್ಧಾರಕನೆಂದು ಖಚಿತಪಡಿಸಿ ಯೆಹೂದ್ಯರನ್ನು ಎಲ್ಲರ ಮುಂದೆ ಬಹಿರಂಗವಾಗಿ ಪ್ರತಿಭಟಿಸಿದನು.

## ಎಫೆಸದಲ್ಲಿ ಧರ್ಮಸಭೆಯ ಸ್ಥಾಪನೆ

**19** ಅಪೊಲ್ಲೋಸನು ಕೊರಿಂಥದಲ್ಲಿ ಇದ್ದಾಗ, ಪೌಲನು ಮೇಲ್ನಾಡಿನ ಪ್ರಾಂತ್ಯದ ಮಾರ್ಗವಾಗಿ ಎಫೆಸಕ್ಕೆ
ಬಂದನು. ಅಲ್ಲಿ ಕೆಲವು ಮಂದಿ ಶಿಷ್ಯರನ್ನು ಕಂಡು, 2"ನೀವು ವಿಶ್ವಾಸಿಸಿದಾಗ ಪವಿತ್ರಾತ್ಮ ಅವರನ್ನು
ಪಡೆದಿರೋ?" ಎಂದು ಕೇಳಿದನು. ಅದಕ್ಕೆ ಅವರು, "ಪವಿತ್ರಾತ್ಮ ಎಂಬವರು ಇದ್ದಾರೆಂದು ನಾವು ಕೇಳಿಯೇ
ಇಲ್ಲ," ಎಂದು ಉತ್ತರಿಸಿದರು. 3"ಹಾಗಾದರೆ ನೀವು ಯಾವ ಸ್ನಾನದೀಕ್ಷೆಯನ್ನು ಪಡೆದಿರಿ?" ಎಂದು
ಪೌಲನು ಕೇಳಲು, "ನಾವು ಯೊವಾನ್ನನ ಸ್ನಾನದೀಕ್ಷೆ ಪಡೆದೆವು," ಎಂದರು. 4ಆಗ ಪೌಲನು, "ಯಾರು
ತಮ್ಮ ಪಾಪದಿಂದ ವಿಮುಖರಾಗಿ ದೇವರಿಗೆ ಅಭಿಮುಖರಾಗುತ್ತಿದ್ದರೋ, ಅಂಥವರಿಗೆ ಯೊವಾನ್ನನು
ಸ್ನಾನದೀಕ್ಷೆ ಕೊಡುತ್ತಿದ್ದನು. ಆದರೆ ಆ ಯೊವಾನ್ನನೇ 'ತನ್ನ ಬಳಿಕ ಬರುವಾತನಲ್ಲಿ ವಿಶ್ವಾಸವಿಡಿ; ಅವರೇ
ಯೇಸು' ಎಂದು ಇಸ್ರಯೇಲರಿಗೆ ಬೋಧಿಸಿದ್ದನು," ಎಂದನು. 5ಇದನ್ನು ಕೇಳಿದಾಗ ಅವರು ಪ್ರಭು
ಯೇಸುವಿನ ನಾಮದಲ್ಲಿ ದೀಕ್ಷಾಸ್ನಾನವನ್ನು ಪಡೆದರು. 6ಪೌಲನು ಅವರ ಮೇಲೆ ಹಸ್ತನಿಕ್ಷೇಪ ಮಾಡಲು,
ಪವಿತ್ರಾತ್ಮ ಅವರ ಮೇಲೆ ಬಂದರು. ಆಗ ಅವರೆಲ್ಲರೂ ನಾನಾ ಭಾಷೆಗಳನ್ನು ಮಾತನಾಡುತ್ತಾ
ಪ್ರವಾದಿಸಿದರು. 7ಇವರು ಸುಮಾರು ಹನ್ನೆರಡು ಮಂದಿ ಇದ್ದಿರಬಹುದು.

8 ಅನಂತರ ಮೂರು ತಿಂಗಳ ಕಾಲ ಪೌಲನು ಪ್ರಾರ್ಥನಾಮಂದಿರಕ್ಕೆ ಹೋಗಿ ಧೈರ್ಯದಿಂದ
ಮಾತನಾಡಿದನು. ದೇವರ ಸಾಮ್ರಾಜ್ಯದ ಬಗ್ಗೆ ಅಲ್ಲಿದ್ದವರೊಡನೆ ಚರ್ಚಿಸುತ್ತಾ, ಅವರನ್ನು
ವಿಶ್ವಾಸಿಗಳನ್ನಾಗಿಸಲು ಪ್ರಯತ್ನಿಸಿದನು. 9ಆದರೆ ಅವರಲ್ಲಿ ಕೆಲವರು ಹಠಮಾರಿಗಳು; ಅವರು ವಿಶ್ವಾಸವನ್ನು
ನಿರಾಕರಿಸಿದ್ದೂ ಅಲ್ಲದೆ ಈ ಹೊಸ ಮಾರ್ಗವನ್ನು ಸಭೆಯ ಮುಂದೆ ದೂಷಿಸತೊಡಗಿದರು. ಈ ಕಾರಣ
ಪೌಲನು ಅವರನ್ನು ಬಿಟ್ಟು ಶಿಷ್ಯರನ್ನು ಕರೆದುಕೊಂಡು ತುರಾನ್ನ ಎಂಬವನ ತರ್ಕಶಾಲೆಯಲ್ಲಿ ಪ್ರತಿದಿನವೂ
ಚರ್ಚೆ ನಡೆಸುತ್ತಾ ಬಂದನು. 10ಹೀಗೆ ಎರಡು ವರ್ಷಗಳು ಕಳೆದವು. ಇದರ ಪರಿಣಾಮವಾಗಿ ಏಷ್ಯಾದಲ್ಲಿ
ವಾಸವಾಗಿದ್ದ ಯೆಹೂದ್ಯರೂ ಗ್ರೀಕರೂ ಪ್ರಭುವಿನ ವಾಕ್ಯವನ್ನು ಕೇಳಲು ಅನುಕೂಲವಾಯಿತು.

## ಎಫೆಸದಲ್ಲಿ ಮಂತ್ರತಂತ್ರಗಳ ಅಂತ್ಯ

11 ದೇವರು ಪೌಲನ ಕೈಯಿಂದ ಅಸಾಧಾರಣ ಅದ್ಭುತಗಳನ್ನು ಮಾಡಿಸುತ್ತಿದ್ದರು. 12ಅವನು ಬಳಸಿದ
ಕರವಸ್ತ್ರಗಳನ್ನೂ ಉಡುವಸ್ತ್ರಗಳನ್ನೂ ಜನರು ತೆಗೆದುಕೊಂಡು ಹೋಗಿ ವ್ಯಾಧಿಸ್ಥರಿಗೆ ಮುಟ್ಟಿಸಿದ್ದೇ, ಅವರ
ವ್ಯಾಧಿಗಳು ಗುಣವಾಗುತ್ತಿದ್ದವು; ದೆವ್ವಗಳು ಬಿಟ್ಟು ಹೋಗುತ್ತಿದ್ದವು. 13"ದೆವ್ವ ಬಿಡಿಸುವವರು" ಎನಿಸಿಕೊಂಡು
ಊರೂರು ಸುತ್ತುತ್ತಿದ್ದ ಕೆಲವು ಯೆಹೂದ್ಯರು ಸಹ ಪ್ರಭು ಯೇಸುವಿನ ನಾಮವನ್ನು ಬಳಸಿ ದೆವ್ವಬಿಡಿಸಲು
ಯತ್ನಿಸಿದರು. ಇವರು ದೆವ್ವಗಳಿಗೆ, "ಪೌಲನು ಸಾರುತ್ತಿರುವ ಯೇಸುವಿನ ನಾಮದಲ್ಲಿ ನಿಮಗೆ ಆಣೆಯಿಟ್ಟು
ಆಜ್ಞಾಪಿಸುತ್ತೇವೆ," ಎಂದು ಹೇಳುತ್ತಿದ್ದರು. 14ಮುಖ್ಯ ಯಾಜಕನಾಗಿದ್ದ ಸ್ಕೇವ ಎಂಬವನ ಏಳು ಮಕ್ಕಳು
ಹೀಗೆಯೇ ಮಾಡುತ್ತಿದ್ದರು. 15ಆದರೆ ಆ ದೆವ್ವ ಅವರಿಗೆ, "ಯೇಸು ನನಗೆ ಗೊತ್ತು, ಪೌಲನನ್ನು ನಾನು ಬಲ್ಲೆ;
ಆದರೆ ನೀವು ಯಾರು?" ಎಂದು ಪ್ರಶ್ನಿಸಿತು. 16ಅಲ್ಲದೆ ದೆವ್ವ ಹಿಡಿದಿದ್ದ ಮನುಷ್ಯನು ಅವರ ಮೇಲೆ ಹಾರಿ
ಬಿದ್ದು, ಅಪ್ಪಳಿಸಿ, ಅವರೆಲ್ಲರನ್ನೂ ಅಧೀನಪಡಿಸಿದನು. ಅವರು ಗಾಯಗೊಂಡು, ನಗ್ನರಾಗಿ, ಆ ಮನೆಯಿಂದ
ಓಡಿಹೋದರು. 17ಎಫೆಸದಲ್ಲಿ ವಾಸಿಸುತ್ತಿದ್ದ ಯೆಹೂದ್ಯರೂ ಅನ್ಯಧರ್ಮೀಯರೂ ಈ ವಿಷಯವನ್ನು ಕೇಳಿ
ಭಯಭೀತರಾದರು. ಪ್ರಭು ಯೇಸುವಿನ ನಾಮವನ್ನು ಸಂಕೀರ್ತಿಸಿದರು. 18ಭಕ್ತವಿಶ್ವಾಸಿಗಳಾದ ಅನೇಕರು
ಮುಂದೆ ಬಂದು ತಮ್ಮ ದುಷ್ಕೃತ್ಯಗಳನ್ನು ಬಹಿರಂಗವಾಗಿ ಒಪ್ಪಿಕೊಂಡು ನಿವೇದಿಸಿದರು. 19ಮಾಯಮಂತ್ರ
ಮಾಡುತ್ತಿದ್ದ ಅನೇಕರು ತಮ್ಮ ಪುಸ್ತಕಗಳನ್ನು ತೆಗೆದುಕೊಂಡು ಬಂದು ಅವುಗಳನ್ನು ಎಲ್ಲರ ಮುಂದೆ
ಸುಟ್ಟುಹಾಕಿದರು. ಆ ಪುಸ್ತಕಗಳ ಬೆಲೆಯನ್ನು ಎಣಿಕೆಮಾಡಿದಾಗ ಅದರ ಮೊತ್ತ ಐವತ್ತು ಸಾವಿರ
ಬೆಳ್ಳಿನಾಣ್ಯಗಳಷ್ಟಾಯಿತು. 20ಪ್ರಭುವಿನ ವಾಕ್ಯ ಹೀಗೆ ಹಬ್ಬಿ ಹರಡಿ ಪ್ರಬಲವಾಯಿತು.

## ಅರ್ತೆಮಿೂ ದೇವತೆಯ ಪರವಾಗಿ ದೊಂಬಿ

21 ಈ ಘಟನೆಗಳ ನಂತರ ಪೌಲನು ಮಕೆದೋನಿಯ ಮತ್ತು ಅಖಾಯದ ಮೂಲಕ ಜೆರುಸಲೇಮಿಗೆ ಹೋಗಲು ನಿರ್ಧರಿಸಿಕೊಂಡನು. ಅಲ್ಲಿಗೆ ಹೋದ ಮೇಲೆ ರೋಮ್ ನಗರವನ್ನು ಕೂಡ ನೋಡಬೇಕು ಎಂಬುದು ಅವನ ಉದ್ದೇಶ ಆಗಿತ್ತು. 22ತನ್ನ ಇಬ್ಬರು ಸಹಾಯಕರಾದ ತಿಮೊಥೇಯ ಮತ್ತು ಎರಾಸ್ತನನ್ನು ಮಕೆದೋನಿಯಕ್ಕೆ ಕಳುಹಿಸಿಬಿಟ್ಟು, ತಾನು ಇನ್ನೂ ಸ್ವಲ್ಪ ಕಾಲ ಏಷ್ಯದಲ್ಲೇ ಉಳಿದುಕೊಂಡನು.

23 ಅದೇ ಸಮಯಕ್ಕೆ ಎಫೆಸದಲ್ಲಿ ಕ್ರಿಸ್ತ ಮಾರ್ಗ ಅನ್ವೇಷಣೆಯ ನಿಮಿತ್ತ ತೀವ್ರ ಗಲಭೆ ಉಂಟಾಯಿತು. 24ಅಲ್ಲಿ ದೆಮೆತ್ರಿಯ ಎಂಬ ಅಕ್ಕಸಾಲಿಗನಿದ್ದನು. ಇವನು ಅರ್ತೆಮಿೂ ದೇವತೆಯ ಗುಡಿಗೆ ಬೆಳ್ಳಿಯ ಆಕೃತಿಯನ್ನು ಮಾಡುತ್ತಿದ್ದನು. ಈ ಕಸಬುದಾರರಿಗೆ ಇದು ತುಂಬ ಲಾಭದಾಯಕವಾಗಿತ್ತು. 25ದೆಮೆತ್ರಿಯನು ಅವರೆಲ್ಲರನ್ನು ಹಾಗೂ ಸಂಬಂಧಪಟ್ಟ ಕಸಬಿನ ಇತರರನ್ನು ಒಟ್ಟುಗೂಡಿಸಿ, “ಮಿತ್ರರೇ, ನಿಮ್ಮ ಸಿರಿಸಂಪತ್ತಿಗೆಲ್ಲಾ ಈ ಕಸಬೇ ಮೂಲಕಾರಣ, ಇದು ನಿಮಗೆ ತಿಳಿದ ವಿಷಯ. 26ಪೌಲ ಎಂಬವನು ಏನು ಮಾಡುತ್ತಿರುವನೆಂದು ನೀವು ನೋಡಿದ್ದೀರಿ ಹಾಗೂ ಕೇಳಿದ್ದೀರಿ; ಕೈಯಿಂದ ಮಾಡಿದ ಆಕೃತಿಗಳು ದೇವರೇ ಅಲ್ಲವೆಂದು ಇಲ್ಲಿ ಎಫೆಸದಲ್ಲೂ ಹೆಚ್ಚು ಕಡಿಮೆ ಇಡೀ ಏಷ್ಯದಲ್ಲೂ ಪ್ರಚಾರ ಮಾಡುತ್ತಿದ್ದಾನೆ; ಮಾತ್ರವಲ್ಲ, ಅನೇಕ ಜನರನ್ನು ಮನವೊಲಿಸಿ ಮಾರ್ಪಡಿಸಿಬಿಟ್ಟಿದ್ದಾನೆ. 27ಇದರಿಂದಾಗಿ ನಮ್ಮ ಕಸಬಿಗೇ ಕೆಟ್ಟ ಹೆಸರು ಬರುವ ಅಪಾಯವಿದೆ. ಅಷ್ಟೇ ಏಕೆ, ಅರ್ತೆಮಿೂ ಮಹಾದೇವಿಯ ಗುಡಿ ಹೇಳಹೆಸರಿಲ್ಲದಂತಾಗುವ ಸಂಭವವಿದೆ. ಇಡೀ ಏಷ್ಯದಲ್ಲೂ ಜಗತ್ತಿನ ಎಲ್ಲೆಲ್ಲೂ ಪೂಜಿಸಲಾಗುವ ಆ ದೇವತೆಯ ವೈಭವ ಅಳಿದುಹೋಗುವ ಅಪಾಯವಿದೆ,” ಎಂದನು.

28 ಈ ಮಾತುಗಳನ್ನು ಕೇಳಿದ ಆ ಜನರು ಕೋಪಾವೇಶದಿಂದ, “ಎಫೆಸದ ಅರ್ತೆಮಿೂ ದೇವಿಯೇ ಮಹಾದೇವಿ!” ಎಂದು ಆರ್ಭಟಿಸಿದರು. 29ಪಟ್ಟಣದಲ್ಲೆಲ್ಲಾ ಕೋಲಾಹಲವೆದ್ದಿತು. ಜನರು ಗುಂಪಾಗಿ ಬಂದು ಪೌಲನ ಸಹಪ್ರಯಾಣಿಕರು ಹಾಗೂ ಮಕೆದೋನಿಯದವರು ಆದ ಗಾಯ ಮತ್ತು ಅರಿಸ್ತಾರ್ಕ ಎಂಬವರನ್ನು ಹಿಡಿದರು. ಅವರನ್ನು ಎಳೆದುಕೊಂಡು ಹೋಗಿ ಕ್ರೀಡಾಂಗಣಕ್ಕೆ ಒಟ್ಟಾಗಿ ನುಗ್ಗಿದರು. 30ಇದನ್ನು ತಿಳಿದ ಪೌಲನು ಜನಸಮೂಹದ ಮುಂದೆಹೋಗಿ ನಿಲ್ಲಬೇಕೆಂದು ಇದ್ದನು. ಆದರೆ ಭಕ್ತಾದಿಗಳು ಅವನನ್ನು ಹೋಗಬಿಡಲಿಲ್ಲ. 31ಇದೂ ಅಲ್ಲದೆ, ಪೌಲನ ಸ್ನೇಹಿತರಾದ ಕೆಲವು ಸ್ಥಳೀಯ ಅಧಿಕಾರಿಗಳು, ಕ್ರೀಡಾಂಗಣಕ್ಕೆ ಹೋಗುವ ಸಾಹಸವನ್ನು ಮಾಡಕೂಡದೆಂದು ವಿನಂತಿಸಿ, ಪೌಲನಿಗೆ ಹೇಳಿ ಕಳುಹಿಸಿದರು. 32ಸಭೆಯಲ್ಲಿ ಗೊಂದಲವೆದ್ದಿತು. ಕೆಲವರು ಒಂದು ವಿಧದಲ್ಲಿ ಬೊಬ್ಬೆ ಹಾಕಿದರೆ, ಮತ್ತೆ ಕೆಲವರು ಇನ್ನೊಂದು ವಿಧದಲ್ಲಿ ಕೂಗಾಡಲಾರಂಭಿಸಿದರು. ಬಹುಜನರಿಗೆ ತಾವು ಅಲ್ಲಿಗೆ ಬಂದುದರ ಕಾರಣವೇ ತಿಳಿದಿರಲಿಲ್ಲ. 33ಯೆಹೂದ್ಯರು ಅಲೆಕ್ಸಾಂಡರ್ ಎಂಬವನನ್ನು ಸಭೆಯ ಮುಂದಕ್ಕೆ ನೂಕಿದರು. ನೆರೆದಿದ್ದ ಕೆಲವರು ಅವನನ್ನು ಪುಸಲಾಯಿಸಿದರು. ಆಗ ಅಲೆಕ್ಸಾಂಡರನು ಮೌನವಾಗಿರುವಂತೆ ಕೈಸನ್ನೆಮಾಡಿ ಜನರಿಗೆ ಸಮಾಧಾನ ಹೇಳಲು ಪ್ರಯತ್ನಿಸಿದನು. 34ಆದರೆ ಅವನು ಯೆಹೂದ್ಯನೆಂದು ಗುರುತಿಸಿದ ಕೂಡಲೇ ಅವರೆಲ್ಲರೂ ಎರಡು ಗಂಟೆಗಳ ಕಾಲ, “ಎಫೆಸದ ಅರ್ತೆಮಿೂ ದೇವಿಯೇ ಮಹಾದೇವಿ,” ಎಂದು ಒಂದೇಸಮನೆ ಬೊಬ್ಬೆ ಹಾಕಿದರು.

35 ಕಟ್ಟಕಡೆಗೆ ಪಟ್ಟಣದ ಅಧಿಕಾರಿ ಒಬ್ಬನು ಜನಸಮೂಹವನ್ನು ಶಾಂತಗೊಳಿಸುತ್ತಾ ಹೀಗೆಂದನು: “ಎಫೆಸದ ಮಹಾಜನರೇ, ಅರ್ತೆಮಿೂ ಮಹಾದೇವಿಯ ಗುಡಿಯನ್ನು ಹಾಗೂ ಆಕಾಶದಿಂದ ಬಿದ್ದ ಶಿಲೆಯನ್ನು ಎಫೆಸ ಪಟ್ಟಣವು ಎಚ್ಚರಿಕೆಯಿಂದ ಸಂರಕ್ಷಿಸುತ್ತಾ ಬಂದಿದೆ ಎಂಬುದು ಎಲ್ಲರಿಗೂ ತಿಳಿದ ವಿಷಯ. 36ಇದನ್ನು ಯಾರೂ ಅಲ್ಲಗಳೆಯುವಂತಿಲ್ಲ; ಆದುದರಿಂದ ನೀವು ಶಾಂತರಾಗಬೇಕು, ದುಡುಕಿ ಏನನ್ನೂ ಮಾಡಬಾರದು. 37ನೀವು ಎಳೆದು ತಂದಿರುವ ಈ ವ್ಯಕ್ತಿಗಳು ಗುಡಿಕಳ್ಳರೂ ಅಲ್ಲ, ನಮ್ಮ ದೇವತೆಯ ದೂಷಕರೂ ಅಲ್ಲ. 38ದೆಮೆತ್ರಿಯನಿಗೇ ಆಗಲಿ, ಅವನ ಜೊತೆ ಕೆಲಸಗಾರರಿಗೇ ಆಗಲಿ, ಯಾರ ಮೇಲಾದರೂ ಏನಾದರೂ ಆಪಾದನೆ ಇದ್ದರೆ, ಅದಕ್ಕೆ ನ್ಯಾಯಾಲಯಗಳು ತೆರೆದಿವೆ; ರಾಜ್ಯಪಾಲರಿದ್ದಾರೆ; ಅವರು ಅಲ್ಲಿಗೆ ಹೋಗಿ ದೂರುಕೊಡಲಿ. 39ಇದಕ್ಕಿಂತಲೂ ಮಿಗಿಲಾಗಿ ನೀವು ಏನನ್ನಾದರೂ ಅಪೇಕ್ಷಿಸುವುದಾದರೆ, ಅದನ್ನು ಕಾನೂನುಬದ್ಧವಾಗಿ ಸೇರುವ ಸಭೆಯಲ್ಲಿ ತೀರ್ಮಾನಮಾಡಬಹುದು. 40ಈ ದಿನ ನಡೆದ ಘಟನೆಯನ್ನು ದಂಗೆಯೆಂದು ನಮ್ಮ ಮೇಲೆ ಆಪಾದನೆ ಹೊರಿಸುವ ಆಸ್ಪದವಿದೆ. ಏಕೆಂದರೆ, ಈ ಗಲಭೆಗೆ ಸರಿಯಾದ

ಕಾರಣವನ್ನು ಕೊಟ್ಟು ಸಮರ್ಥಿಸಿಕೊಳ್ಳಲು ನಮ್ಮಿಂದಾಗದು," ಎಂದನು. 41ಈ ಮಾತುಗಳನ್ನು ಹೇಳಿದ
ಮೇಲೆ ಅವನು ಕೂಟವನ್ನು ಚದರಿಸಿದನು.

## ಎಫೆಸದಿಂದ ಪೌಲನ ನಿರ್ಗಮನ

**20** ಕೋಲಾಹಲವು ಅಡಗಿದ ಮೇಲೆ ಪೌಲನು ಭಕ್ತವಿಶ್ವಾಸಿಗಳನ್ನು ಬರಮಾಡಿಕೊಂಡು ಪ್ರೋತ್ಸಾಹದ
ಮಾತುಗಳನ್ನಾಡಿ ಅವರನ್ನು ಬೀಳ್ಕೊಟ್ಟು ಮಕೆದೋನಿಯಕ್ಕೆ ಹೋದನು. 2ಆ ಪ್ರದೇಶದಲ್ಲಿ ಸಂಚಾರಮಾಡಿ
ಭಕ್ತಾದಿಗಳನ್ನು ಹಲವಾರು ವಿಧದಲ್ಲಿ ಪ್ರೋತ್ಸಾಹಿಸಿದನು. ಅನಂತರ ಅಲ್ಲಿಂದ ಅಖಾಯಕ್ಕೆ ಬಂದನು. 3ಇಲ್ಲಿ
ಅವನು ಮೂರು ತಿಂಗಳು ಕಳೆದನು. ಬಳಿಕ ಸಿರಿಯಕ್ಕೆ ನೌಕಾಯಾನ ಮಾಡಲು ಸಿದ್ದನಾಗುತ್ತಿದ್ದಾಗ,
ಯೆಹೂದ್ಯರು ಅವನ ವಿರುದ್ಧ ಒಳಸಂಚು ಮಾಡುತ್ತಿರುವುದಾಗಿ ತಿಳಿದುಬಂದಿತು. ಆದುದರಿಂದ ಅವನು
ಮಕೆದೋನಿಯದ ಮಾರ್ಗವಾಗಿ ಹಿಂದಿರುಗಲು ನಿರ್ಧರಿಸಿದನು. 4ಬೆರೋಯ ಪಟ್ಟಣದ ಪುರನ ಮಗ
ಸೋಪತ್ರನು ಅವನೊಡನೆ ಹೋದನು. ಅಂತೆಯೇ ಥೆಸಲೋನಿಕದ ಅರಿಸ್ತಾರ್ಕ ಹಾಗು ಸೆಕುಂದ, ದೆರ್ಬೆ
ಪಟ್ಟಣದ ಗಾಯ, ಏಷ್ಯಾದ ತುಖಿಕ ಹಾಗು ತಿಮೊಥೇಯ ಅವನೊಡನೆ ಹೊರಟರು. 5ಇವರು
ಮುಂಚಿತವಾಗಿ ಹೋಗಿ ತ್ರೋವದಲ್ಲಿ ನಮಗಾಗಿ ಕಾದಿದ್ದರು. 6ನಾವು ಹುಳಿರಹಿತ ರೊಟ್ಟಿಯ ಹಬ್ಬದ ನಂತರ
ಫಿಲಿಪ್ಪಿಯಿಂದ ನೌಕಾಯಾನ ಹೊರಟೆವು. ಐದು ದಿನಗಳ ನಂತರ ತ್ರೋವದಲ್ಲಿ ಅವರನ್ನು ಸೇರಿ, ಅಲ್ಲಿ
ಏಳುದಿನ ತಂಗಿದೆವು.

## ಯುತಿಕನಿಗೆ ಜೀವದಾನ

7 ವಾರದ ಮೊದಲನೆಯ ದಿನ 'ರೊಟ್ಟಿ ಮುರಿಯುವ' ಸಹಭೋಜನಕ್ಕೆ ನಾವು ಜೊತೆ ಕೂಡಿದ್ದೆವು.
ಪೌಲನು ಮಾರನೆಯ ದಿನ ಅವರನ್ನು ಬಿಟ್ಟು ಹೊರಡಬೇಕಾದ್ದರಿಂದ ಉಪನ್ಯಾಸ ಮಾಡಲಾರಂಭಿಸಿ
ಮಧ್ಯರಾತ್ರಿಯವರೆಗೂ ಮುಂದುವರೆಸಿದನು. 8ನಾವು ಸಭೆಸೇರಿದ್ದ ಮೇಲಂತಸ್ತಿನ ಕೊಠಡಿಯಲ್ಲಿ ಅನೇಕ
ದೀಪಗಳು ಉರಿಯುತ್ತಿದ್ದವು. 9ಯುತಿಕ ಎಂಬ ಯುವಕನು ಕಿಟಕಿಯಲ್ಲಿ ಕುಳಿತುಕೊಂಡಿದ್ದನು. ಪೌಲನು
ದೀರ್ಘಕಾಲ ಮಾತನಾಡುತ್ತಲೇ ಇದ್ದುದರಿಂದ ಯುತಿಕನಿಗೆ ಗಾಢನಿದ್ರೆ ಹತ್ತಿತು; ತೂಕಡಿಕೆ ಹೆಚ್ಚಾಗಿ ಅವನು
ಮೂರನೆಯ ಅಂತಸ್ತಿನಿಂದ ನೆಲಕ್ಕೆ ಬಿದ್ದುಬಿಟ್ಟನು. ಅವನನ್ನು ಎತ್ತಿ ನೋಡುವಾಗ ಅವನು ಸತ್ತಿದ್ದನು.
10ಆದರೆ ಪೌಲನು ಕೆಳಗೆ ಇಳಿದು ಹೋಗಿ ಅವನ ಮೇಲೆ ಬಾಗಿ, ಅವನನ್ನು ತಬ್ಬಿಕೊಂಡು, "ಚಿಂತಿಸಬೇಡಿ,
ಇವನಲ್ಲಿ ಇನ್ನೂ ಜೀವವಿದೆ," ಎಂದನು. 11ಅನಂತರ ಪೌಲನು ಮೇಲಂತಸ್ತಿಗೆ ಹಿಂದಿರುಗಿ, ರೊಟ್ಟಿಯನ್ನು
ಮುರಿದು ಸಹಭೋಜನ ಮಾಡಿದನು. ಮುಂಜಾವದವರೆಗೂ ಅವರೊಡನೆ ಮಾತನಾಡಿ ಅಲ್ಲಿಂದ ಹೊರಟು
ಹೋದನು. 12ಜೀವಂತನಾಗಿದ್ದ ಆ ಯುವಕನನ್ನು ಮನೆಗೆ ಕರೆದುಕೊಂಡು ಹೋದರು. ಅವರಿಗಾದ
ಸಾಂತ್ವನ ಅಷ್ಟಿಷ್ಟಲ್ಲ!

## ಮಿಲೇತಕ್ಕೆ ಪೌಲನ ಪ್ರಯಾಣ

13 ಪೌಲನು ನಮಗಿತ್ತ ಸೂಚನೆಯ ಪ್ರಕಾರ ನಾವು ಹಡಗುಹತ್ತಿ ಅಸ್ಸೋಸಿ ಎಂಬ ಊರಿಗೆ
ಮುಂಚಿತವಾಗಿ ಪ್ರಯಾಣಮಾಡಿದೆವು. ತಾನು ಅಲ್ಲಿಗೆ ಭೂಮಾರ್ಗವಾಗಿ ಬರುವುದಾಗಿಯೂ ಅಲ್ಲಿ ತನ್ನನ್ನು
ಹಡಗಿಗೆ ಏರಿಸಿಕೊಳ್ಳಬೇಕೆಂದೂ ಪೌಲನು ತಿಳಿಸಿದ್ದನು. 14ಅಂತೆಯೇ ಅಸ್ಸೋಸಿಯಲ್ಲಿ ಅವನನ್ನು ಭೇಟಿಯಾಗಿ
ಹಡಗಿಗೆ ಏರಿಸಿಕೊಂಡು ಮಿತಿಲೇನಿಗೆ ಬಂದೆವು. 15ಅಲ್ಲಿಂದ ನೌಕಾಯಾನ ಮಾಡಿ ಮರುದಿನ ಖಿಯೋಸ
ದ್ವೀಪವನ್ನು ಸಮೀಪಿಸಿ ಮಾರನೆಯ ದಿನ ಸಾಮೋಸನ್ನು ತಲುಪಿದೆವು. ಅದರ ಮಾರನೆಯ ದಿನ
ಮಿಲೇತನ್ನು ಸೇರಿದೆವು. 16ಸಾಧ್ಯವಾದರೆ ಪಂಚಾಶತ್ತಮ ಹಬ್ಬಕ್ಕೆ ಜೆರುಸಲೇಮಿನಲ್ಲಿರಬೇಕೆಂಬ ಆತುರ
ಪೌಲನಿಗೆ ಇದ್ದುದರಿಂದ, ಏಷ್ಯದಲ್ಲಿ ಕಾಲ ವಿಳಂಬಮಾಡಲು ಮನಸ್ಸಿಲ್ಲದೆ, ಎಫೆಸವನ್ನು ದಾಟಿ
ಹೋಗಬೇಕೆಂದು ಅವನು ತೀರ್ಮಾನಿಸಿದನು.

## ಎಫೆಸದ ಹಿರಿಯರಿಗೆ ಕೊನೆಯ ಬುದ್ಧಿ ಮಾತು

17 ಪೌಲನು ಮಿಲೇತದಿಂದ ಎಫೆಸಕ್ಕೆ ಸಮಾಚಾರ ಕಳುಹಿಸಿ, ಅಲ್ಲಿನ ಧರ್ಮಸಭೆಯ ಪ್ರಮುಖರನ್ನು
ಬರಮಾಡಿಕೊಂಡನು. [18]ಬಂದಮೇಲೆ ಅವರಿಗೆ ಹೀಗೆಂದನು: “ನಾನು ಏಷ್ಯ ಪ್ರಾಂತ್ಯದಲ್ಲಿ ಕಾಲಿಟ್ಟ ದಿನ
ಮೊದಲ್ಗೊಂಡು ಇಂದಿನವರೆಗೆ ನಿಮ್ಮ ಮಧ್ಯೆ ಹೇಗೆ ಬಾಳಿದೆನೆಂದು ನಿಮಗೆ ತಿಳಿದಿದೆ. [19]ಯೆಹೂದ್ಯರ
ಕುತಂತ್ರಗಳಿಂದ ನನಗೆ ಬಂದೊದಗಿದ ಸಂಕಷ್ಟಗಳಲ್ಲಿ, ನಾನು ಅತಿ ನಮ್ರತೆಯಿಂದಲೂ ಕಣ್ಣೀರಿಡುತ್ತಲೂ
ಪ್ರಭುವಿನ ಸೇವೆಮಾಡಿಕೊಂಡು ಬಂದೆನು. [20]ನಿಮಗೆ ಹಿತಕರವಾದುದೆಲ್ಲವನ್ನು ಬಹಿರಂಗದಲ್ಲೂ
ಮನೆಗಳಲ್ಲೂ ಹಿಂಜರಿಯದೆ ಬೋಧಿಸಿದ್ದೇನೆ ಹಾಗೂ ಕಲಿಸಿದ್ದೇನೆ. [21]ಪಾಪಕ್ಕೆ ಪಶ್ಚಾತ್ತಾಪಪಟ್ಟು ದೇವರಿಗೆ
ಅಭಿಮುಖರಾಗಬೇಕು, ನಮ್ಮ ಪ್ರಭು ಯೇಸುವಿನಲ್ಲಿ ವಿಶ್ವಾಸವಿಡಬೇಕು, ಎಂದು ಯೆಹೂದ್ಯರಿಗೂ ಗ್ರೀಕರಿಗೂ
ಸ್ಪಷ್ಟವಾದ ಎಚ್ಚರಿಕೆಯನ್ನು ಕೊಟ್ಟಿದ್ದೇನೆ. [22]ಈಗಲಾದರೋ, ಪವಿತ್ರಾತ್ಮ ಪರವಶನಾಗಿ ನಾನು ಜೆರುಸಲೇಮಿಗೆ
ಹೋಗುತ್ತಿದ್ದೇನೆ. ಅಲ್ಲಿ ನನಗೇನು ಸಂಭವಿಸುವುದೋ ತಿಳಿಯದು. [23]ಸೆರೆಮನೆ ಹಾಗೂ ಸಂಕಷ್ಟಗಳು
ನನಗಾಗಿ ಕಾದಿವೆಯೆಂದು ಪವಿತ್ರಾತ್ಮ ಪ್ರತಿಯೊಂದು ಪಟ್ಟಣದಲ್ಲೂ ಕೊಟ್ಟ ಎಚ್ಚರಿಕೆ ಮಾತ್ರ ಸ್ಪಷ್ಟವಾಗಿದೆ.
ನನಗಾದರೋ, ನನ್ನ ಪ್ರಾಣವು ತೃಣಕ್ಕೆ ಸಮಾನ. [24]ಪ್ರಭು ಯೇಸು ನನಗೆ ವಿಧಿಸಿದ ಆಯೋಗವನ್ನು,
ಅಂದರೆ ದೈವಾನುಗ್ರಹ ಕುರಿತಾದ ಶುಭಸಂದೇಶವನ್ನು ಸಾಕ್ಷ್ಯಪೂರ್ವಕವಾಗಿ ಸಾರುವ ಆಯೋಗವನ್ನು,
ಪೂರೈಸುತ್ತಾ ನನ್ನ ಬಾಳಿನ ಗುರಿಯನ್ನು ಮುಟ್ಟುವೆನಾದರೆ, ನನಗೆ ಅಷ್ಟೇ ಸಾಕಾಗಿದೆ. [25]ಇಗೋ, ಇಷ್ಟು
ದಿನ ದೇವರ ಸಾಮ್ರಾಜ್ಯವನ್ನು ಪ್ರಕಟಿಸುತ್ತಾ ನಿಮ್ಮ ಮಧ್ಯೆ ಸಂಚರಿಸಿದ ನನ್ನ ಮುಖವನ್ನು ಇನ್ನು ಮುಂದೆ
ನೀವು ಯಾರೂ ಕಾಣಲಾರಿರಿ ಎಂದು ನಾನು ಬಲ್ಲೆ. [26]ಇಂತಿರಲು ನಾನು ನಿಮಗೆ ಸಾರಿ ಹೇಳುವುದೇನೆಂದರೆ
– “ನಿಮ್ಮಲ್ಲಿ ಯಾರಾದರು ನಾಶವಾದರೆ, ಅದಕ್ಕೆ ನಾನು ಹೊಣೆಯಲ್ಲ. [27]ಏಕೆಂದರೆ, ದೈವ ಯೋಜನೆಯನ್ನು
ಕಿಂಚಿತ್ತೂ ಮರೆಮಾಚದೆ ತಿಳಿಯಪಡಿಸಿದ್ದೇನೆ. [28]ನೀವು ನಿಮ್ಮ ವಿಷಯದಲ್ಲಿ ಹಾಗೂ ಪವಿತ್ರಾತ್ಮ ನಿಮ್ಮ
ಪಾಲನೆಗೆ ವಹಿಸಿರುವ ಮಂದೆಯ ವಿಷಯದಲ್ಲಿ ಜಾಗರೂಕರಾಗಿರಿ. ಪ್ರಭು ತಮ್ಮ ಸ್ವಂತ ರಕ್ತಸುರಿಸಿ
ಸಂಪಾದಿಸಿದ ಧರ್ಮಸಭೆಗೆ ಉತ್ತಮ ಕುರಿಗಾಹಿಗಳಾಗಿರಿ. [29]ನಾನು ಹೋದ ಬಳಿಕ ಕ್ರೂರವಾದ ತೋಳಗಳು
ನಿಮ್ಮ ಮಧ್ಯೆ ನುಗ್ಗುವುವು ಎಂದು ನಾನು ಬಲ್ಲೆ. ಅವು ಮಂದೆಗೆ ಹಾನಿ ಮಾಡದೆ ಬಿಡವು. [30]ಇದಲ್ಲದೆ
ನಿಮ್ಮಲ್ಲೇ ಕೆಲವರು ಎದ್ದು ಭಕ್ತವಿಶ್ವಾಸಿಗಳನ್ನು ತಮ್ಮ ಕಡೆ ಸೆಳೆದುಕೊಳ್ಳಲು ಅಸತ್ಯವಾದವುಗಳನ್ನು
ಹೇಳುವರು. [31]ಆದುದರಿಂದ ಎಚ್ಚರಿಕೆ! ನಾನು ಮೂರು ವರ್ಷಗಳ ಕಾಲ ಹಗಲಿರುಳು ಕಣ್ಣೀರಿಡುತ್ತಾ
ಪ್ರತಿಯೊಬ್ಬನಿಗೂ ಬುದ್ಧಿ ಹೇಳಿದ್ದೇನೆಂಬುದನ್ನು ಮರೆಯಬೇಡಿ.

32 “ಈಗ ನಿಮ್ಮನ್ನು ದೇವರ ಕೈಗೂ, ಅವರ ಅನುಗ್ರಹ ಸಂದೇಶಕ್ಕೂ ಒಪ್ಪಿಸಿಕೊಡುತ್ತೇನೆ. ಅದು
ನಿಮ್ಮನ್ನು ಅಭಿವೃದ್ಧಿಗೊಳಿಸಬಲ್ಲದು. ಮಾತ್ರವಲ್ಲ, ಪಾವನಪುರುಷರ ಬಾಧ್ಯತೆಯಲ್ಲಿ ಭಾಗಿಗಳಾಗುವಂತೆ
ಮಾಡಬಲ್ಲದು. [33]ನಾನು ಯಾರ ಬೆಳ್ಳಿ ಬಂಗಾರಕ್ಕೂ ಬಟ್ಟೆಬರೆಗೂ ಆಶೆಪಟ್ಟವನಲ್ಲ. [34]ನನ್ನ ಹಾಗೂ ನನ್ನ
ಸಂಗಡಿಗರ ಅವಶ್ಯಕತೆಗಳನ್ನು ನೀಗಿಸಲು ಈ ಕೈಗಳೇ ದುಡಿದಿವೆಯೆಂಬುದು ನಿಮ್ಮೆಲ್ಲರಿಗೂ ತಿಳಿದಿದೆ. [35]ಹೀಗೆ
ಕಷ್ಟಪಟ್ಟು ದುಡಿದು, ದುರ್ಬಲರಿಗೆ ನೆರವಾಗಬೇಕೆಂದು ನಾನು ನಿಮಗೆ ಹಲವಾರು ವಿಧದಲ್ಲಿ
ತೋರಿಸಿಕೊಟ್ಟಿದ್ದೇನೆ. ‘ಕೊಳ್ಳುವ ಕೈಗಿಂತ ಕೊಡುವ ಕೈ ಧನ್ಯವಾದುದು’ ಎಂಬ ಯೇಸುಸ್ವಾಮಿಯ
ಮಾತುಗಳನ್ನು ನೆನಪಿನಲ್ಲಿಡಿ.”

36 ಇಷ್ಟು ಹೇಳಿದ ಮೇಲೆ ಪೌಲನು ಅವರೆಲ್ಲರ ಸಂಗಡ ಮೊಣಕಾಲೂರಿ ಪ್ರಾರ್ಥನೆ ಮಾಡಿದನು.
[37]ಅನಂತರ ಅವರು ಅವನನ್ನು ತಬ್ಬಿಕೊಂಡು ಮುದ್ದಿಟ್ಟು ಬೀಳ್ಕೊಟ್ಟರು. ಅವರ ಕಣ್ಣಲ್ಲಾದರೋ ನೀರು
ಧಾರಾಕಾರವಾಗಿ ಹರಿಯುತ್ತಿತ್ತು. [38]‘ಇನ್ನೆಂದೂ ನೀವು ನನ್ನ ಮುಖವನ್ನು ಕಾಣಲಾರಿರಿ,’ ಎಂಬ ಅವನ
ಮಾತು ಅವರನ್ನು ಅತೀವ ದುಃಖಕ್ಕೆ ಈಡು ಮಾಡಿತ್ತು. ಅವರು ಹಡಗಿನವರೆಗೂ ಹೋಗಿ ಅವನನ್ನು
ಬೀಳ್ಕೊಟ್ಟರು.

## ಜೆರುಸಲೇಮಿಗೆ ಪೌಲನ ಅಂತಿಮ ಪಯಣ

**21** ನಾವು ಅವರನ್ನು ಬಿಟ್ಟು ಅಗಲಿದ ಮೇಲೆ ನೇರವಾಗಿ ನೌಕಾಯಾನ ಮಾಡಿ ಕೋಸ್‍ದ್ವೀಪಕ್ಕೆ ಬಂದೆವು.
ಮರುದಿನ ನಾವು ರೋದ ಎಂಬ ಸ್ಥಳವನ್ನು ತಲುಪಿ ಅಲ್ಲಿಂದ ಪತಾರಕ್ಕೆ ಹೋದೆವು. 2ಅಲ್ಲಿ ಫೆನಿಷ್ಯಕ್ಕೆ
ಹೋಗುವ ಹಡಗನ್ನು ಕಂಡು ಅದನ್ನೇರಿ ಪ್ರಯಾಣ ಮಾಡಿದೆವು. 3ಸೈಪ್ರಸನ್ನು ಸಮೀಪಿಸಿದಾಗ ಅದನ್ನು
ಎಡಕ್ಕೆ ಬಿಟ್ಟು ಸಿರಿಯ ದೇಶದ ಕಡೆಗೆ ಸಾಗಿ, ಟೈರ್ ಎಂಬಲ್ಲಿ ಬಂದು ಇಳಿದೆವು. ಇಲ್ಲಿ ಹಡಗಿನ ಸರಕನ್ನು
ಇಳಿಸಬೇಕಾಗಿತ್ತು. 4ಅಲ್ಲಿಯ ಭಕ್ತಾದಿಗಳನ್ನು ಗುರುತುಹಚ್ಚಿ ಒಂದು ವಾರ ಅವರೊಂದಿಗೆ ಇದ್ದೆವು. ಇವರು
ಪವಿತ್ರಾತ್ಮ ಪ್ರೇರಣೆಯಿಂದ ಜೆರುಸಲೇಮಿಗೆ ಹೋಗಬಾರದೆಂದು ಪೌಲನಿಗೆ ತಿಳಿಸಿದರು. 5ಆದರೂ, ಆ
ದಿನಗಳು ಕಳೆದ ಮೇಲೆ, ಅವರನ್ನು ಬಿಟ್ಟು ನಮ್ಮ ಪ್ರಯಾಣವನ್ನು ಮುಂದುವರಿಸಲು ಅನುವಾದೆವು.
ಅವರಾದರೋ, ಮಡದಿ ಮಕ್ಕಳೊಡನೆ ಪಟ್ಟಣ ಬಿಟ್ಟು ಸಮುದ್ರ ತೀರದವರೆಗೂ ನಮ್ಮೊಡನೆ ಬಂದರು. ಅಲ್ಲಿ
ನಾವೆಲ್ಲರೂ ಮೊಣಕಾಲೂರಿ ಪ್ರಾರ್ಥನೆ ಮಾಡಿದೆವು. 6ಪರಸ್ಪರ ಬೀಳ್ಕೊಡುಗೆಯಾದ ಬಳಿಕ ಹಡಗನ್ನು
ಹತ್ತಿದೆವು. ಅವರು ತಮ್ಮ ತಮ್ಮ ಮನೆಗಳಿಗೆ ಹಿಂದಿರುಗಿದರು.

7 ಟೈರ್‌ನಿಂದ ಹೊರಟು ಪ್ತೊಲೆಮಾಯಾ ಎಂಬಲ್ಲಿಗೆ ಬಂದಿಳಿದೆವು. ಅಲ್ಲಿ ಭಕ್ತಾದಿಗಳನ್ನು
ವಂದಿಸಿ ಅವರೊಡನೆ ಒಂದು ದಿನ ಇದ್ದೆವು. 8ಮಾರನೆಯ ದಿನ ಅಲ್ಲಿಂದ ಹೊರಟು ಸೆಜರೇಯಕ್ಕೆ ಬಂದೆವು.
ಅಲ್ಲಿ ಶುಭಸಂದೇಶ ಪ್ರಚಾರಕ ಫಿಲಿಪ್ಪನ ಮನೆಗೆ ಹೋಗಿ ಅವನೊಡನೆ ತಂಗಿದೆವು. ಜೆರುಸಲೇಮಿನಲ್ಲಿ
ಆಯ್ಕೆಯಾದ ಏಳು ಮಂದಿಯಲ್ಲಿ ಇವನೂ ಒಬ್ಬನು. 9ಅವನಿಗೆ ನಾಲ್ಕುಮಂದಿ ಅವಿವಾಹಿತ
ಹೆಣ್ಣುಮಕ್ಕಳಿದ್ದರು. ಇವರೂ ದೇವರ ವಾಕ್ಯವನ್ನು ಪ್ರಚಾರಮಾಡುತ್ತಿದ್ದರು. 10ಅಲ್ಲಿ ನಾವು ಕೆಲವು ದಿನ
ಇದ್ದೆವು. ಆಗ ಅಗಬ ಎಂಬ ಪ್ರವಾದಿ ನಮ್ಮನ್ನು ನೋಡಲು ಜುದೇಯದಿಂದ ಬಂದನು. 11ಅವನು ಪೌಲನ
ಸೊಂಟಪಟ್ಟಿಯನ್ನು ತೆಗೆದುಕೊಂಡು ತನ್ನ ಕೈಕಾಲುಗಳನ್ನು ಬಿಗಿದುಕೊಂಡು, "ಪವಿತ್ರಾತ್ಮ ಹೀಗೆನ್ನುತ್ತಾರೆ:

'ಈ ಸೊಂಟಪಟ್ಟಿಯು ಯಾರದೋ ಅವನನ್ನು ಜೆರುಸಲೇಮಿನಲ್ಲಿ ಯೆಹೂದ್ಯರು ಹೀಗೆಯೇ ಕಟ್ಟಿ,
ಅನ್ಯಧರ್ಮೀಯರ ವಶಕ್ಕೆ ಒಪ್ಪಿಸುವರು'," ಎಂದನು. 12ಈ ಮಾತುಗಳನ್ನು ಕೇಳಿದ ನಾವೂ ಅಲ್ಲಿದ್ದವರೂ
ಪೌಲನನ್ನು ಜೆರುಸಲೇಮಿಗೆ ಹೋಗಬಾರದೆಂದು ಕಳಕಳಿಯಿಂದ ಕೇಳಿಕೊಂಡೆವು. 13ಅದಕ್ಕೆ ಅವನು
ಪ್ರತ್ಯುತ್ತರವಾಗಿ, "ನೀವು ಮಾಡುತ್ತಿರುವುದಾದರೂ ಏನು? ನಿಮ್ಮ ಅಳುವಿನಿಂದ ನನ್ನ ಹೃದಯವನ್ನು
ಸೀಳುತ್ತಿರುವಿರಾ? ನಾನು ಜೆರುಸಲೇಮಿನಲ್ಲಿ ಬಂಧಿತನಾಗುವುದಕ್ಕೆ ಮಾತ್ರವಲ್ಲ, ಪ್ರಭು ಯೇಸುವಿಗಾಗಿ
ಸಾಯುವುದಕ್ಕೂ ಸಿದ್ಧನಾಗಿದ್ದೇನೆ," ಎಂದನು. 14ಪೌಲನು ಸಮ್ಮತಿಸುವುದಿಲ್ಲವೆಂದು ನಮಗೆ ಸ್ಪಷ್ಟವಾದಾಗ
"ಪ್ರಭುವಿನ ಚಿತ್ತದಂತೆ ಆಗಲಿ," ಎಂದು ಸುಮ್ಮನಾದೆವು.

15 ಕೆಲವು ದಿನಗಳಾದ ಮೇಲೆ ನಾವು ಪ್ರಯಾಣ ಸಿದ್ಧತೆಗಳನ್ನು ಮಾಡಿಕೊಂಡು ಹೊರಟೆವು.
16ಸೆಜರೇಯ ಪಟ್ಟಣದಿಂದ ಕೆಲವು ಶಿಷ್ಯರು ನಮ್ಮೊಡನೆ ಬಂದರು. ನಾವು ತಂಗಲಿದ್ದ ಸೈಪ್ರಸಿನ ಮ್ನಾಸೋನ
ಎಂಬವನ ಮನೆಗೆ ಅವರು ನಮ್ಮನ್ನು ಕರೆದುಕೊಂಡು ಹೋದರು. ಈ ಮ್ನಾಸೋನನು ಆದಿಶಿಷ್ಯರಲ್ಲಿ
ಒಬ್ಬನಾಗಿದ್ದನು.

## ಕ್ರೈಸ್ತ ಹಿರಿಯರು ಪೌಲನಿಗೆ ಕೊಟ್ಟ ಸಲಹೆ

17 ನಾವು ಜೆರುಸಲೇಮಿಗೆ ಬಂದಾಗ ಅಲ್ಲಿನ ಸಹೋದರರು ನಮ್ಮನ್ನು ಸಂತೋಷದಿಂದ
ಸ್ವಾಗತಿಸಿದರು. 18ಮಾರನೆಯ ದಿನ ಪೌಲನು ನಮ್ಮನ್ನು ಕರೆದುಕೊಂಡು ಯಕೋಬನನ್ನು ನೋಡಲು
ಹೋದನು. ಧರ್ಮಸಭೆಯ ಹಿರಿಯರೆಲ್ಲರೂ ಅಲ್ಲಿ ಹಾಜರಿದ್ದರು. 19ಪೌಲನು ಅವರಿಗೆ ನಮಸ್ಕರಿಸಿ ತನ್ನ
ಸೇವೆಯ ಮೂಲಕ ದೇವರು ಯೆಹೂದ್ಯೇತರರ ಮಧ್ಯೆ ಮಾಡಿದ ಮಹತ್ಕಾರ್ಯಗಳನ್ನು ಒಂದೊಂದಾಗಿ
ವರದಿ ಮಾಡಿದನು. 20ಇದನ್ನು ಕೇಳಿದ ಅವರು ದೇವರನ್ನು ಕೊಂಡಾಡಿದರು. ಅನಂತರ ಅವರು ಪೌಲನಿಗೆ
ಹೀಗೆಂದರು: "ಸಹೋದರಾ, ನಿನಗೆ ತಿಳಿದಿರುವಂತೆ ಯೆಹೂದ್ಯರಲ್ಲಿ ಭಕ್ತವಿಶ್ವಾಸಿಗಳಾಗಿರುವವರು
ಸಾವಿರಾರು ಮಂದಿ ಇದ್ದಾರೆ; ಅವರೆಲ್ಲರೂ ಯೆಹೂದ್ಯ ಧರ್ಮಶಾಸ್ತ್ರದಲ್ಲಿ ಬಹಳ ಶ್ರದ್ಧೆ ಉಳ್ಳವರು. 21ನಿನ್ನ
ವಿಷಯ ಅವರಿಗೆ ತಿಳಿದುಬಂದಿದೆ. ಅದೇನೆಂದರೆ ನೀನು ಅನ್ಯಧರ್ಮೀಯರ ನಡುವೆ ವಾಸಿಸುತ್ತಿರುವ

ಯೆಹೂದ್ಯರೆಲ್ಲರಿಗೆ, 'ನೀವು ಮೋಶೆಯ ನೇಮನಿಯಮಗಳನ್ನು ಅನುಸರಿಸಬಾರದು, ನಿಮ್ಮ ಮಕ್ಕಳಿಗೆ
ಸುನ್ನತಿಯನ್ನು ಮಾಡಿಸಬಾರದು, ಯೆಹೂದ್ಯ ಸಂಪ್ರದಾಯಗಳನ್ನು ಆಚರಿಸಬಾರದು,' ಎಂದು
ಬೋಧಿಸುತ್ತಿರುವಿಯಂತೆ. 22ನೀನು ಇಲ್ಲಿಗೆ ಬಂದಿರುವುದು ಅವರಿಗೆ ಖಂಡಿತವಾಗಿ ತಿಳಿದೇ ತಿಳಿಯುತ್ತದೆ.
ಈಗ ಏನು ಮಾಡೋಣ? 23ಆದುದರಿಂದ ನಾವು ಹೇಳಿದಂತೆ ಮಾಡು; ನಮ್ಮಲ್ಲಿ ಹರಕೆಹೊತ್ತಿರುವವರು
ನಾಲ್ಕು ಮಂದಿ ಇದ್ದಾರೆ. 24ನೀನು ಅವರನ್ನು ಕರೆದುಕೊಂಡು ಹೋಗಿ ಅವರ ಜೊತೆಯಲ್ಲಿ ನೀನೂ
ಶುದ್ಧಾಚಾರ ವಿಧಿಯನ್ನು ಮಾಡಿಸಿಕೊ. ಅವರ ಖರ್ಚು ವೆಚ್ಚವನ್ನೆಲ್ಲಾ ನೀನೇ ವಹಿಸಿಕೋ; ಅವರು
ಮುಂಡನ ಮಾಡಿಸಿಕೊಳ್ಳಲಿ. ಹೀಗೆ ಮಾಡಿದರೆ, ನಿನ್ನ ಬಗ್ಗೆ ಅವರು ಕೇಳಿಸಿಕೊಂಡಿರುವ ವಿಷಯ
ನಿಜವಲ್ಲವೆಂದೂ ನೀನು ಕೂಡ ಮೋಶೆಯ ಧರ್ಮಶಾಸ್ತ್ರಕ್ಕೆ ಅನುಸಾರವಾಗಿ ನಡೆಯುತ್ತಿರುವೆ ಎಂದೂ
ಅವರೆಲ್ಲರಿಗೂ ಮನವರಿಕೆಯಾಗಿರುವುದು. 25ವಿಶ್ವಾಸಿಗಳಾಗಿರುವ ಯೆಹೂದ್ಯೇತರರಿಗಾದರೋ ನಾವೀಗಲೇ
ಪತ್ರವನ್ನು ಕಳುಹಿಸಿದ್ದೇವೆ. ಅದರಲ್ಲಿ ಅವರು ವಿಗ್ರಹಗಳಿಗೆ ಅರ್ಪಿಸಿದ ನೈವೇದ್ಯವನ್ನು ಸೇವಿಸಬಾರದು,
ಅನೈತಿಕತೆಯಿಂದ ದೂರವಿರಬೇಕು, ರಕ್ತವನ್ನಾಗಲೀ ಕುತ್ತಿಗೆ ಹಿಸುಕಿ ಕೊಂದ ಪ್ರಾಣಿಗಳನ್ನಾಗಲೀ
ತಿನ್ನಬಾರದು, ಎಂದು ತೀರ್ಮಾನ ಕೊಟ್ಟಿದ್ದೇವೆ," ಎಂದರು. 26ಅಂತೆಯೇ ಪೌಲನು ಮಾರನೆಯ ದಿನ ಆ
ನಾಲ್ವರೊಡನೆ ಹೋಗಿ ಶುದ್ಧಾಚಾರದ ವಿಧಿಯನ್ನು ನೆರವೇರಿಸಿದನು. ಅನಂತರ ಶುದ್ಧಾಚಾರ ಮುಗಿಯುವ
ದಿನವನ್ನು ತಿಳಿಸುವುದಕ್ಕಾಗಿ ಮಹಾದೇವಾಲಯಕ್ಕೆ ಹೋದನು. ಅವರಲ್ಲಿ ಪ್ರತಿಯೊಬ್ಬನಿಗಾಗಿ ಯಾವಾಗ
ಬಲಿಯರ್ಪಣೆಯಾಗುವುದೆಂದು ಅಲ್ಲಿ ಸೂಚಿಸಿದನು.

### ಪೌಲನ ಬಂಧನ

27 ಶುದ್ಧಾಚಾರದ ಏಳು ದಿನಗಳ ಅವಧಿ ಮುಗಿಯುತ್ತಿದ್ದಂತೆ ಏಷ್ಯದ ಕೆಲವು ಯೆಹೂದ್ಯರು
ಪೌಲನನ್ನು ದೇವಾಲಯದಲ್ಲಿ ಕಂಡರು. ಕೂಡಲೇ ಅವರು ಜನಸಮೂಹವನ್ನು ಉದ್ರೇಕಿಸಿ ಪೌಲನನ್ನು
ಹಿಡಿದರು. 28"ಇಸ್ರಯೇಲಿನ ಮಹಾಜನರೇ, ಬೇಗ ಬನ್ನಿ; ನಮ್ಮ ಜನಾಂಗಕ್ಕೂ ನಮ್ಮ ಧರ್ಮಶಾಸ್ತ್ರಕ್ಕೂ ಈ
ಮಹಾದೇವಾಲಯಕ್ಕೂ ವಿರುದ್ಧವಾಗಿ ಬೋಧಿಸುವ ವ್ಯಕ್ತಿ ಇವನೇ; ಎಲ್ಲೆಡೆಯಲ್ಲೂ ಎಲ್ಲರಿಗೂ ಇವನು
ನಮಗೆ ವಿರುದ್ಧವಾಗಿ ಬೋಧಿಸುತ್ತಾನೆ. ಅಷ್ಟು ಮಾತ್ರವಲ್ಲ, ಈ ಪವಿತ್ರಾಲಯದೊಳಕ್ಕೆ ಅನ್ಯಧರ್ಮೀಯರನ್ನು
ಕರೆತಂದು ಇದನ್ನು ಭ್ರಷ್ಟಗೊಳಿಸಿದ್ದಾನೆ," ಎಂದು ಕೂಗಿಕೊಂಡರು. 29ಎಫೆಸದ ತ್ರೊಫಿಮ ಎಂಬವನು
ಪೌಲನ ಸಂಗಡ ಪಟ್ಟಣದಲ್ಲಿ ಇದ್ದುದನ್ನು ಅವರು ನೋಡಿದ್ದರು. ಈಗ ಅವನನ್ನೂ ದೇವಾಲಯದೊಳಕ್ಕೆ
ಪೌಲನು ಕರೆದುಕೊಂಡು ಬಂದಿರಬಹುದೆಂದು ಅವರು ಭಾವಿಸಿದರು.

30 ಪಟ್ಟಣದಲ್ಲೆಲ್ಲಾ ಕೋಲಾಹಲವೆದ್ದಿತು. ಜನರು ನಾಲ್ಕು ದಿಕ್ಕುಗಳಿಂದಲೂ ಓಡಿ ಬಂದರು.
ಪೌಲನನ್ನು ದೇವಾಲಯದಿಂದ ಹೊರಗೆ ಎಳೆದುಹಾಕಿ ಮಹಾದೇವಾಲಯದ ದ್ವಾರಗಳನ್ನು ಮುಚ್ಚಿದರು.
31ಜನರ ಗುಂಪು ಪೌಲನನ್ನು ಕೊಲ್ಲಲು ಯತ್ನಿಸುತ್ತಿದ್ದಾಗ ಜೆರುಸಲೇಮಿನಾದ್ಯಂತ ಗಲಭೆಯುಂಟಾಗಿದೆ
ಎಂದು ಅಲ್ಲಿನ ರೋಮ್ ಸೈನ್ಯಾಧಿಪತಿಗೆ ವರದಿ ಬಂದಿತು. 32ಆ ಕ್ಷಣವೇ, ಅವನು ಕೆಲವು
ಶತಾಧಿಪತಿಗಳನ್ನೂ ಸೈನಿಕರನ್ನೂ ಕರೆದುಕೊಂಡು ಜನಸಮೂಹವಿದ್ದ ಕಡೆ ಧಾವಿಸಿದನು. ಸೈನಿಕರೊಡನೆ
ಬರುತ್ತಿರುವ ಸೈನ್ಯಾಧಿಪತಿಯನ್ನು ಕಂಡು ಜನರು ಪೌಲನನ್ನು ಹೊಡೆಯುವುದನ್ನು ನಿಲ್ಲಿಸಿದರು.
33ಸೈನ್ಯಾಧಿಪತಿ ಹತ್ತಿರಕ್ಕೆ ಬಂದು, ಪೌಲನನ್ನು ಬಂಧಿಸಿ ಎರಡು ಸರಪಣಿಗಳಿಂದ ಅವನನ್ನು ಕಟ್ಟುವಂತೆ
ಆಜ್ಞಾಪಿಸಿದನು. "ಇವನು ಯಾರು? ಇವನು ಮಾಡಿದ್ದೇನು?" ಎಂದು ವಿಚಾರಿಸಿದನು.
34ಜನಜಂಗುಳಿಯಲ್ಲಿ ಹಲವರು ಹಲವಿಧವಾಗಿ ಕೂಗಾಡತೊಡಗಿದರು. ಗದ್ದಲ ಹೆಚ್ಚಾಗಿದ್ದುದರಿಂದ
ಸೈನ್ಯಾಧಿಪತಿಗೆ ನಿಜಸ್ಥಿತಿಯನ್ನು ತಿಳಿಯಲಾಗಲಿಲ್ಲ. ಆದುದರಿಂದ ಪೌಲನನ್ನು ಕೋಟೆಯೊಳಕ್ಕೆ
ಕೊಂಡೊಯ್ಯುವಂತೆ ಆಜ್ಞಾಪಿಸಿದನು. 35ಪೌಲನನ್ನು ಮೆಟ್ಟಲುಗಳವರೆಗೆ ಕರೆದುಕೊಂಡು ಬರಲಾಯಿತು.
ಅನಂತರ ಜನರ ನೂಕುನುಗ್ಗಲಿನ ನಿಮಿತ್ತ ಅವನನ್ನು ಸೈನಿಕರು ಹೊತ್ತುಕೊಂಡು ಹೋಗಬೇಕಾಯಿತು.
36ಜನರು, "ಅವನನ್ನು ಕೊಲ್ಲಿ, ಕೊಲ್ಲಿ," ಎಂದು ಆರ್ಭಟಿಸುತ್ತಾ ಬೆನ್ನಟ್ಟಿ ಬರುತ್ತಿದ್ದರು.

## ಪೌಲನ ಸಮರ್ಥನೆ

37 ಪೌಲನನ್ನು ಕೋಟೆಯೊಳಕ್ಕೆ ಕೊಂಡು ಒಯ್ಯುತ್ತಿದ್ದಾಗ, ಅವನು ಸೈನ್ಯಾಧಿಪತಿಗೆ, "ನಾನು
ನಿಮ್ಮೊಡನೆ ಸ್ವಲ್ಪ ಮಾತಾಡಬಹುದೇ?" ಎಂದನು. ಅದಕ್ಕೆ ಅವನು, "ನಿನಗೆ ಗ್ರೀಕ್ ಭಾಷೆಯೂ
ಗೊತ್ತಿದೆಯಾ? 38ಹಾಗಾದರೆ ಕೆಲವು ಕಾಲದ ಹಿಂದೆ ಕ್ರಾಂತಿಯೆಬ್ಬಿಸಿ ನಾಲ್ಕು ಸಾವಿರ ಡಕಾಯಿತರನ್ನು
ಅಡವಿಗೆ ಕರೆದುಕೊಂಡು ಹೋದ ಈಜಿಪ್ಟಿನವನು ನೀನೇ ಅಲ್ಲವೇ?" ಎಂದು ಪ್ರಶ್ನಿಸಿದನು. 39ಪೌಲನು
ಪ್ರತ್ಯುತ್ತರವಾಗಿ, "ನಾನು ಯೆಹೂದ್ಯನು, ತಾರ್ಸದವನು. ಸಿಲಿಸಿಯ ಪ್ರಾಂತ್ಯದ ಪ್ರಖ್ಯಾತ ಪಟ್ಟಣದವನು. ಈ
ಜನರೊಡನೆ ಮಾತನಾಡಲು ದಯವಿಟ್ಟು ಅವಕಾಶಕೊಡಿ," ಎಂದು ಭಿನ್ನವಿಸಿದನು. 40ಸೈನ್ಯಾಧಿಪತಿ ಅಪ್ಪಣೆ
ಕೊಡಲು, ಪೌಲನು ಮೆಟ್ಟಲಿನ ಮೇಲೆ ನಿಂತು ಜನರನ್ನು ನೋಡಿ ಮೌನವಾಗಿರುವಂತೆ ಕೈಸನ್ನೆ ಮಾಡಿದನು.
ಆಗ ನಿಶ್ಶಬ್ದ ಉಂಟಾಯಿತು. ಅನಂತರ ಅವರನ್ನು ಸಂಬೋಧಿಸಿ ಹಿಬ್ರು ಭಾಷೆಯಲ್ಲಿ ಮಾತಾಡುತ್ತಾ
ಹೀಗೆಂದನು:

## ಪೌಲನ ಆತ್ಮಕಥನ

**22** "ಭ್ರಾತೃಗಳೇ, ಪಿತೃಗಳೇ, ಈಗ ನಾನು ಮಾಡಹೋಗುವ ನನ್ನ ಸಮರ್ಥನೆಗೆ ಕಿವಿಗೊಡಿ." 2ಪೌಲನು
ಹೀಗೆ ತಮ್ಮನ್ನು ಸಂಬೋಧಿಸಿ ಹಿಬ್ರು ಭಾಷೆಯಲ್ಲಿ ಮಾತನಾಡುವುದನ್ನು ಕೇಳಿದ್ದೇ ಅಲ್ಲಿದ್ದ ಜನರು ಇನ್ನೂ
ನಿಶ್ಶಬ್ದರಾದರು. ಅವನು ಮುಂದುವರಿಸುತ್ತಾ ಇಂತೆಂದನು: 3"ನಾನೊಬ್ಬ ಯೆಹೂದ್ಯನು, ಸಿಲಿಸಿಯದ
ತಾರ್ಸ ಎಂಬಲ್ಲಿ ಹುಟ್ಟಿದವನು. ಆದರೆ, ಇದೇ ಜೆರುಸಲೇಮಿನಲ್ಲಿ ಬೆಳೆದವನು. ಗಮಲಿಯೇಲನ
ಪಾದಸನ್ನಿಧಿಯಲ್ಲಿ ನಮ್ಮ ಪೂರ್ವಜರ ಧರ್ಮಶಾಸ್ತ್ರವನ್ನು ಕಟ್ಟುನಿಟ್ಟಾಗಿ ಕಲಿತವನು. ಇಲ್ಲಿ ಇಂದು
ನೆರೆದಿರುವ ನೀವೆಲ್ಲರೂ ದೈವಾಭಿಮಾನಿಗಳಾಗಿರುವಂತೆಯೇ ನಾನು ದೈವಾಭಿಮಾನಿಯಾಗಿದ್ದೆ.
4ಕ್ರಿಸ್ತಮಾರ್ಗವನ್ನು ಅನುಸರಿಸುವವರನ್ನು, ಸ್ತ್ರೀ ಪುರುಷರೆನ್ನದೆ ಬಂಧಿಸಿ, ಅವರನ್ನು ಸೆರೆಮನೆಗೆ ತಳ್ಳಿದೆ.
ಅವರನ್ನು ಮರಣ ಪರಿಯಂತರ ಪೀಡಿಸಿ ಹಿಂಸಿಸಿದೆ. 5ಇದಕ್ಕೆ ಪ್ರಧಾನ ಯಾಜಕರು ಮತ್ತು ಪ್ರಮುಖರ
ಇಡೀ ಸಭೆಯೇ ಸಾಕ್ಷಿ. ನಾನು ಅವರಿಂದಲೇ ದಮಸ್ಕಸಿನಲ್ಲಿರುವ ಯೆಹೂದ್ಯ ಬಾಂಧವರಿಗೆ ಪತ್ರಗಳನ್ನು
ಪಡೆದು, ಆ ಪಟ್ಟಣಕ್ಕೆ ಹೊರಟೆ. ಅಲ್ಲಿಂದ ಕ್ರೈಸ್ತರನ್ನು ಬಂಧಿಸಿ, ಜೆರುಸಲೇಮಿಗೆ ತಂದು ಶಿಕ್ಷಿಸಬೇಕೆಂಬುದೇ
ನನ್ನ ಉದ್ದೇಶವಾಗಿತ್ತು.

6 "ಹೀಗೆ ಪ್ರಯಾಣ ಮಾಡುತ್ತಾ ದಮಸ್ಕಸನ್ನು ಸಮೀಪಿಸಿದೆ. ಆಗ ಸುಮಾರು ನಡು ಮಧ್ಯಾಹ್ನ.
ಇದ್ದಕ್ಕಿದ್ದಂತೆ ಆಕಾಶದಿಂದ ಮಹಾ ಬೆಳಕೊಂದು ನನ್ನ ಸುತ್ತಲೂ ಮಿಂಚಿತು. 7ನಾನು ನೆಲಕ್ಕುರುಳಿದೆ. ಆಗ
'ಸೌಲನೇ, ಸೌಲನೇ, ನನ್ನನ್ನೇಕೆ ಹಿಂಸಿಸುತ್ತಿರುವೆ?' ಎಂಬ ವಾಣಿ ಕೇಳಿಸಿತು. 8ನಾನು 'ಪ್ರಭೂ, ನೀವಾರು?'
ಎಂದು ಕೇಳಿದೆ. 'ನೀನು ಹಿಂಸೆಪಡಿಸುತ್ತಿರುವ ನಜರೇತಿನ ಯೇಸುವೇ ನಾನು,' ಎಂದರು ಅವರು.
9ನನ್ನೊಡನೆ ಇದ್ದವರಿಗೆ ಬೆಳಕೇನೋ ಕಾಣಿಸಿತು, ಆದರೆ ನನ್ನೊಡನೆ ಮಾತಾಡುತ್ತಿದ್ದ ವಾಣಿ ಅವರಿಗೆ
ಕೇಳಿಸಲಿಲ್ಲ. 10'ನಾನೇನು ಮಾಡಬೇಕು ಪ್ರಭೂ?' ಎಂದು ಕೇಳಿದೆ. ಅದಕ್ಕೆ ಪ್ರಭು, 'ಏಳು, ದಮಸ್ಕಸಿಗೆ
ಹೋಗು, ನೀನು ಏನು ಮಾಡಬೇಕೆಂದು ನಿಶ್ಚಯಿಸಲಾಗಿದೆಯೋ ಅದೆಲ್ಲವನ್ನೂ ನಿನಗೆ ತಿಳಿಸಲಾಗುವುದು,'
ಎಂದು ಹೇಳಿದರು. 11ಬೆಳಕಿನ ಪ್ರಕಾಶದ ನಿಮಿತ್ತ ನಾನು ದೃಷ್ಟಿಹೀನನಾದೆ. ಜೊತೆಯಲ್ಲಿದ್ದವರು ನನ್ನನ್ನು
ದಮಸ್ಕಸಿಗೆ ಕೈ ಹಿಡಿದು ನಡೆಸಿಕೊಂಡು ಹೋದರು.

12 "ದಮಸ್ಕಸಿನಲ್ಲಿ ಅನನೀಯ ಎಂಬ ಒಬ್ಬ ವ್ಯಕ್ತಿ ಇದ್ದನು. ಅವನು ಧರ್ಮಶಾಸ್ತ್ರಕ್ಕೆ
ಪ್ರಾಮಾಣಿಕನಾಗಿ ಬಾಳಿದವನು. ಆ ಊರಿನ ಸಮಸ್ತ ಯೆಹೂದ್ಯರಿಂದ ಸನ್ಮಾನಿತನು. 13ಅವನು ಬಂದು
ನನ್ನ ಬಳಿ ನಿಂತು, 'ಸಹೋದರ ಸೌಲನೇ, ದೃಷ್ಟಿಯನ್ನು ಪಡೆ,' ಎಂದನು. ಆ ಕ್ಷಣವೇ ನಾನು ದೃಷ್ಟಿಪಡೆದು
ಅವನನ್ನು ನೋಡಿದೆ. 14ಆಗ ಅವನು, 'ನಮ್ಮ ಪೂರ್ವಜರ ದೇವರು ತಮ್ಮ ಚಿತ್ತವನ್ನು ನೀನು
ಅರಿಯಬೇಕೆಂದು, ತಮ್ಮ ಸತ್ಯ ಸ್ವರೂಪಿಯನ್ನು ನೀನು ನೋಡಬೇಕೆಂದು, ತಮ್ಮ ಕಂಠಸ್ವರವನ್ನು ನೀನು
ಕೇಳಬೇಕೆಂದು ನಿನ್ನನ್ನು ಆರಿಸಿಕೊಂಡಿದ್ದಾರೆ. 15ನೀನು ಕಂಡು ಕೇಳಿದ ವಿಷಯಗಳಿಗೆ ನೀನೇ ಎಲ್ಲ ಜನರಿಗೆ

ಅವರ ಪರವಾಗಿ ಸಾಕ್ಷಿಯಾಗಬೇಕು. [16]ಇನ್ನು ತಡಮಾಡುವುದೇಕೆ? ಏಳು, ಅವರ ನಾಮವನ್ನು ಜಪಿಸಿ, ದೀಕ್ಷಾಸ್ನಾನವನ್ನು ಪಡೆದು ನಿನ್ನ ಪಾಪಗಳನ್ನು ತೊಳೆದುಕೊ,' ಎಂದನು.

### ಅನ್ಯಧರ್ಮೀಯರಿಗೆ ಪ್ರಬೋಧಿಸಲು ಪೌಲನಿಗೆ ಆಹ್ವಾನ

17 "ನಾನು ಜೆರುಸಲೇಮಿಗೆ ಹಿಂದಿರುಗಿ ಒಂದು ದಿನ ಮಹಾದೇವಾಲಯದಲ್ಲಿ ಪ್ರಾರ್ಥನೆ ಮಾಡುತ್ತಾ ಧ್ಯಾನಪರವಶನಾದೆ. [18]ಆಗ ಪ್ರಭುವೇ ನನಗೆ ದರ್ಶನವಿತ್ತು, 'ತಡಮಾಡದೆ ನೀನು ಜೆರುಸಲೇಮಿನಿಂದ ಹೊರಟುಹೋಗು. ನನ್ನ ಬಗ್ಗೆ ನೀನು ಕೊಡುವ ಸಾಕ್ಷಿಯನ್ನು ಇಲ್ಲಿಯ ಜನರು ಸ್ವೀಕರಿಸುವುದಿಲ್ಲ,' ಎಂದರು. [19]ಅದಕ್ಕೆ ಪ್ರತ್ಯುತ್ತರವಾಗಿ ನಾನು, 'ಪ್ರಭೂ, ನಿಮ್ಮಲ್ಲಿ ವಿಶ್ವಾಸವಿಟ್ಟವರನ್ನು ನಾನು ಸೆರೆಹಿಡಿದೆ; ಪ್ರಾರ್ಥನಾಮಂದಿರಗಳಿಗೆ ಹೋಗಿ ಅವರನ್ನು ಚಾವಟಿಯಿಂದ ಹೊಡೆದೆ. [20]ನಿಮ್ಮ ಸಾಕ್ಷಿಯಾದ ಸ್ತೇಫನನ ಹತ್ಯೆ ನಡೆದಾಗ ನಾನೂ ಸಮ್ಮತಿಸಿ ಅಲ್ಲೇ ಇದ್ದೆ. ಅವನನ್ನು ಕೊಲೆಮಾಡುತ್ತಿದ್ದವರ ಬಟ್ಟೆಬರೆಗಳಿಗೆ ನಾನೇ ಕಾವಲು ನಿಂತೆ. ಇದೆಲ್ಲ ಅವರಿಗೆ ಚೆನ್ನಾಗಿ ಗೊತ್ತಿದೆ,' ಎಂದೆ. ಅದಕ್ಕೆ ಪ್ರಭು, [21]'ಹೋಗು, ನಾನು ನಿನ್ನನ್ನು ದೂರದಲ್ಲಿರುವ ಅನ್ಯಧರ್ಮೀಯರ ಬಳಿಗೆ ಕಳುಹಿಸುತ್ತೇನೆ,' ಎಂದರು.

22 ಇಲ್ಲಿಯವರೆಗೆ ಪೌಲನು ಹೇಳುತ್ತಿದ್ದನ್ನು ಜನರು ಕಿವಿಗೊಟ್ಟು ಕೇಳುತ್ತಿದ್ದರು. ಆಮೇಲೆ ಅವರು, "ಇವನು ಈ ಲೋಕದಿಂದಲೇ ತೊಲಗಬೇಕು; ಇಂಥವನು ಜೀವದಿಂದ ಇರಬಾರದು," ಎಂದು ಗಟ್ಟಿಯಾಗಿ ಕೂಗಾಡಲಾರಂಭಿಸಿದರು. [23]ಹೀಗೆ ಚೀರುತ್ತಾ, ತಮ್ಮ ವಸ್ತ್ರಗಳನ್ನು ಬೀಸುತ್ತಾ, ಮಣ್ಣನ್ನು ಬಾಚಿ ತೂರಲಾರಂಭಿಸಿದರು. [24]ಜನರು ಯಾವ ಕಾರಣದಿಂದ ಅವನ ವಿರುದ್ಧ ಹೀಗೆ ಮಾಡುತ್ತಿದ್ದಾರೆಂದು ಅರಿತುಕೊಳ್ಳಲು ಸಹಸ್ರಾಧಿಪತಿ ಪೌಲನನ್ನು ಕೋಟೆ ಒಳಕ್ಕೆ ಕೊಂಡೊಯ್ದು, ಚಾವಟಿಯಿಂದ ಹೊಡೆದು ವಿಚಾರಿಸುವಂತೆ ಆಜ್ಞಾಪಿಸಿದನು. [25]ಹೊಡೆಯುವುದಕ್ಕಾಗಿ ಅವನನ್ನು ಬಾರುಗಳಿಂದ ಕಟ್ಟುತ್ತಿದ್ದಾಗ ಪೌಲನು, ಹತ್ತಿರವೇ ನಿಂತಿದ್ದ ಶತಾಧಿಪತಿಯನ್ನು ನೋಡಿ, "ರೋಮಿನ ಪೌರನನ್ನು ಚಾವಟಿಯಿಂದ ಹೊಡೆಯುವುದು, ಅದೂ ವಿಚಾರಣೆಮಾಡದೆ ಹೊಡೆಯಿಸುವುದು, ನ್ಯಾಯಸಮ್ಮತವೋ?" ಎಂದು ಕೇಳಿದನು. [26]ಇದನ್ನು ಕೇಳಿದ್ದೇ, ಶತಾಧಿಪತಿಯು ಸೈನ್ಯಾಧಿಪತಿಯ ಬಳಿಗೆ ಬಂದು, "ನೀವು ಮಾಡಿಸುತ್ತಿರುವುದಾದರೂ ಏನು? ಆ ಮನುಷ್ಯ ರೋಮಿನ ಪೌರನು," ಎಂದು ತಿಳಿಸಿದನು. [27]ಆಗ ಸಹಸ್ರಾಧಿಪತಿ ಪೌಲನ ಬಳಿಗೆ ಬಂದು, "ನೀನು ರೋಮಿನ ಪೌರನೋ?" ಎಂದು ಕೇಳಿದನು. [28]ಅದಕ್ಕೆ ಪೌಲನು, "ಹೌದು," ಎಂದನು. "ನಾನು ರೋಮಿನ ಪೌರನಾಗುವ ಹಕ್ಕನ್ನು ಬಹಳ ಹಣತೆತ್ತು ಪಡೆಯಬೇಕಾಯಿತು," ಎಂದು ಸಹಸ್ರಾಧಿಪತಿ ಹೇಳಿದಾಗ, ಪೌಲನು, "ನಾನು ಹುಟ್ಟಿದಂದಿನಿಂದಲೇ ರೋಮಿನ ಪೌರನು," ಎಂದು ಉತ್ತರಿಸಿದನು. [29]ಪೌಲನನ್ನು ಪ್ರಶ್ನಿಸಲು ಬಂದಿದ್ದವರು ಆ ಕ್ಷಣವೇ ಅವನನ್ನು ಬಿಟ್ಟು ಅಗಲಿದರು. ರೋಮಿನ ಪೌರನೊಬ್ಬನನ್ನು ಬಂಧಿಸಿದುದು ಮನವರಿಕೆಯಾದಾಗ ಸಹಸ್ರಾಧಿಪತಿಗೂ ಭಯವಾಯಿತು.

### ನ್ಯಾಯಸಭೆಯ ಮುಂದೆ ಪೌಲ

30 ಯೆಹೂದ್ಯರು ಪೌಲನ ವಿರುದ್ಧ ತಂದ ಆಪಾದನೆ ಏನೆಂದು ಖಚಿತವಾಗಿ ತಿಳಿದುಕೊಳ್ಳಲು ಸಹಸ್ರಾಧಿಪತಿ ಅಪೇಕ್ಷಿಸಿದನು. ಮಾರನೆಯ ದಿನ ಪೌಲನನ್ನು ಬಿಡುಗಡೆ ಮಾಡಿದನು. ಮುಖ್ಯಯಾಜಕರು ಮತ್ತು ನ್ಯಾಯಸಭೆಯ ಪ್ರಮುಖರು ಕೂಡುವಂತೆ ಆಜ್ಞಾಪಿಸಿದನು. ಪೌಲನನ್ನು ಕರೆದುಕೊಂಡು ಹೋಗಿ ಆ ಸಭೆಯ ಮುಂದೆ ನಿಲ್ಲಿಸಿದನು.

### ಪೌಲನ ನ್ಯಾಯವಿಚಾರಣೆ

**23** ಪೌಲನು ಆ ನ್ಯಾಯಸಭೆಯ ಸದಸ್ಯರನ್ನು ದಿಟ್ಟಿಸಿನೋಡಿ, "ಬಂಧು ಭಾಂದವರೇ, ಈ ದಿನದವರೆಗೂ ನಾನು ದೇವರ ಸಮ್ಮುಖದಲ್ಲಿ ನನ್ನ ಮನಸ್ಸಾಕ್ಷಿಯ ಪ್ರಕಾರ ಬಾಳಿದ್ದೇನೆ," ಎಂದನು. [2]ಇದನ್ನು ಕೇಳಿದ್ದೇ, ಪ್ರಧಾನ ಯಾಜಕ ಅನನೀಯನು ಪೌಲನ ಬಾಯಮೇಲೆ ಹೊಡೆಯುವಂತೆ ಹತ್ತಿರದಲ್ಲೇ ನಿಂತಿದ್ದವರಿಗೆ

ಆಜ್ಞಾಪಿಸಿದನು. 3ಪೌಲನು ಅವನಿಗೆ, “ಸುಣ್ಣಬಳಿದ ಗೋಡೆ ನೀನು; ದೇವರು ನಿನ್ನನ್ನು ಹೊಡೆಯದೆ ಬಿಡರು;
ಧರ್ಮಶಾಸ್ತ್ರದ ಪ್ರಕಾರ ನ್ಯಾಯವಿಚಾರಣೆ ಮಾಡಲು ಕುಳಿತಿರುವ ನೀನು ಅದೇ ಧರ್ಮಶಾಸ್ತ್ರವನ್ನು
ಉಲ್ಲಂಘಿಸಿ ನನ್ನನ್ನು ಹೊಡೆಯುವಂತೆ ಆಜ್ಞಾಪಿಸುತ್ತಿರುವೆಯಾ?” ಎಂದನು. 4ಪಕ್ಕದಲ್ಲಿದ್ದವರು, “ದೇವರೇ
ನೇಮಿಸಿದ ಪ್ರಧಾನ ಯಾಜಕರನ್ನು ನಿಂದಿಸುತ್ತೀಯೋ?” ಎಂದರು. 5ಪ್ರತ್ಯುತ್ತರವಾಗಿ ಪೌಲನು,
“ಸಹೋದರರೇ, ಇವರು ಪ್ರಧಾನ ಯಾಜಕರೆಂದು ನನಗೆ ತಿಳಿಯದೆ ಹೋಯಿತು. ‘ನಿಮ್ಮ ಪ್ರಜಾಪಾಲನನ್ನು
ದೂಷಿಸಬೇಡ’ ಎಂದು ಪವಿತ್ರಗ್ರಂಥದಲ್ಲೇ ಬರೆದಿದೆ ಅಲ್ಲವೆ?” ಎಂದನು.
6 ಸಭೆ ಸೇರಿದ್ದವರಲ್ಲಿ ಕೆಲವರು ಸದ್ದುಕಾಯ ಪಂಥದವರು ಮತ್ತೆ ಕೆಲವರು ಫರಿಸಾಯ
ಪಂಥದವರು. ಇದನ್ನು ಗಮನಿಸಿದ ಪೌಲನು, “ಸಹೋದರರೇ, ನಾನೊಬ್ಬ ಫರಿಸಾಯ, ಫರಿಸಾಯರ
ವಂಶಜ. ಸತ್ತವರು ಪುನರುತ್ಥಾನ ಹೊಂದುತ್ತಾರೆ ಎಂಬ ನಮ್ಮ ನಿರೀಕ್ಷೆಯ ನಿಮಿತ್ತ ನಾನು ಇಲ್ಲಿ ವಿಚಾರಣೆಗೆ
ಗುರಿಯಾಗಿದ್ದೇನೆ,” ಎಂದು ಧ್ವನಿಯೆತ್ತಿ ಸಭೆಯಲ್ಲಿ ಹೇಳಿದನು. 7ಅವನು ಹೀಗೆ ಹೇಳಿದಾಕ್ಷಣವೇ,
ಫರಿಸಾಯರ ಮತ್ತು ಸದ್ದುಕಾಯರ ನಡುವೆ ವಾಗ್ವಾದ ಉಂಟಾಯಿತು. ಸಭೆಯಲ್ಲಿ ಭಿನ್ನಭೇದವುಂಟಾಯಿತು.
8ಏಕೆಂದರೆ, ಸದ್ದುಕಾಯರು ಪುನರುತ್ಥಾನವಾಗಲಿ, ದೇವದೂತರಾಗಲಿ, ದೇಹರಹಿತ ಆತ್ಮವಾಗಲಿ
ಇದೆಯೆಂದು ಒಪ್ಪುವುದಿಲ್ಲ. ಆದರೆ ಫರಿಸಾಯರು ಇವೆಲ್ಲಾ ಇವೆಯೆಂದು ನಂಬುತ್ತಾರೆ. 9ಆಗ ಅಲ್ಲಿ ದೊಡ್ಡ
ಕೂಗಾಟವೆದ್ದಿತು. ಫರಿಸಾಯ ಪಂಥಕ್ಕೆ ಸೇರಿದ ಕೆಲವು ಧರ್ಮಶಾಸ್ತ್ರಿಗಳು ಎದ್ದು ನಿಂತು, “ಈ ಮನುಷ್ಯನಲ್ಲಿ
ನಮಗೆ ಯಾವ ದೋಷವೂ ಕಾಣುವುದಿಲ್ಲ. ಒಂದು ಆತ್ಮವೋ ಅಥವಾ ಒಬ್ಬ ದೂತನೋ ಇವನೊಡನೆ
ಮಾತನಾಡಿದ್ದರೂ ಮಾತನಾಡಿರಬಹುದು,” ಎಂದು ವಾದಿಸಿದರು. 10ಈ ವಾಗ್ವಾದ ವಿಕೋಪಕ್ಕೆ
ಹೋದುದರಿಂದ ಪೌಲನನ್ನು ಅವರು ಖಂಡತುಂಡಾಗಿಸಬಹುದೆಂದು ಸಹಸ್ರಾಧಿಪತಿ ಹೆದರಿದನು. ಅವನು
ಸೈನಿಕರನ್ನು ಕಳುಹಿಸಿ ಪೌಲನನ್ನು ಸಭೆಯ ಮಧ್ಯದಿಂದ ಎತ್ತಿಕೊಂಡು ಕೋಟೆಗೆ ತರುವಂತೆ ಆಜ್ಞಾಪಿಸಿದನು.
11 ಪ್ರಭು ಅದೇ ರಾತ್ರಿ ಪೌಲನಿಗೆ ಹತ್ತಿರದಲ್ಲೇ ಕಾಣಿಸಿಕೊಂಡು, “ಧೈರ್ಯದಿಂದಿರು, ನೀನು
ಜೆರುಸಲೇಮಿನಲ್ಲಿ ನನಗೆ ಸಾಕ್ಷಿಕೊಟ್ಟಂತೆ ರೋಮಿನಲ್ಲೂ ನನಗೆ ಸಾಕ್ಷಿಕೊಡಬೇಕಾಗಿದೆ,” ಎಂದರು.

### ಪೌಲನನ್ನು ಕೊಲ್ಲಲು ಒಳಸಂಚು

12 ಮಾರನೆಯ ದಿನ ಬೆಳಿಗ್ಗೆ ಕೆಲವು ಯೆಹೂದ್ಯರು ಒಟ್ಟುಗೂಡಿ ಒಳಸಂಚು ಹೂಡಿದರು.
ಪೌಲನನ್ನು ಕೊಲ್ಲುವ ತನಕ ತಾವು ಅನ್ನಪಾನವೇನೂ ಮುಟ್ಟುವುದಿಲ್ಲವೆಂದು ಶಪಥ ಮಾಡಿದರು. 13ಈ
ಒಳಸಂಚು ಮಾಡಿದವರು ನಾಲ್ವತ್ತಕ್ಕೂ ಹೆಚ್ಚು ಮಂದಿ. 14ಇವರು ಮುಖ್ಯ ಯಾಜಕರ ಮತ್ತು ಪ್ರಮುಖರ
ಬಳಿಗೆ ಹೋಗಿ ಇಂತೆಂದರು: “ನಾವು ಪೌಲನನ್ನು ಕೊಲ್ಲುವ ತನಕ ಏನನ್ನೂ ತಿನ್ನುವುದಿಲ್ಲವೆಂದು ಕಠಿಣ
ಶಪಥಮಾಡಿಕೊಂಡಿದ್ದೇವೆ. 15ಆದುದರಿಂದ ನೀವು ನ್ಯಾಯಸಭೆಯವರೊಂದಿಗೆ ಸೇರಿ ಪೌಲನನ್ನು ನಿಮ್ಮ
ಬಳಿಗೆ ಕರೆದು ತರಬೇಕೆಂದು ಸಹಸ್ರಾಧಿಪತಿಗೆ ಹೇಳಿಕಳುಹಿಸಿರಿ. ಅವನ ಬಗ್ಗೆ ಇನ್ನೂ ಸೂಕ್ಷ್ಮವಾಗಿ
ಪರಿಶೀಲಿಸಬೇಕಾಗಿದೆಯೆಂದು ನಟಿಸಿರಿ. ನಾವು ಹೊಂಚುಹಾಕಿಕೊಂಡಿದ್ದು ಅವನು ಇಲ್ಲಿಗೆ ಬರುವ
ಮೊದಲೇ ಅವನನ್ನು ಸಂಹರಿಸಿ ಬಿಡುತ್ತೇವೆ,” ಎಂದರು.
16 ಈ ಒಳಸಂಚು ಪೌಲನ ಸೋದರಿಯ ಮಗನ ಕಿವಿಗೆ ಬಿದ್ದಿತು. ಅವನು ಕೋಟೆಯೊಳಗೆ
ಹೋಗಿ ಅದನ್ನು ಪೌಲನಿಗೆ ತಿಳಿಸಿದನು. 17ಪೌಲನು ಶತಾಧಿಪತಿಗಳಲ್ಲಿ ಒಬ್ಬನನ್ನು ಕರೆದು, ‘ಈ ಯುವಕನನ್ನು
ಸಹಸ್ರಾಧಿಪತಿಯ ಬಳಿಗೆ ಕರೆದುಕೊಂಡು ಹೋಗಿ; ಇವನು ಅವರಿಗೆ ತಿಳಿಸಬೇಕಾದ ವಿಷಯ ಒಂದಿದೆ,”
ಎಂದನು. 18ಅಂತೆಯೇ, ಶತಾಧಿಪತಿ ಅವನನ್ನು ಸಹಸ್ರಾಧಿಪತಿಯ ಬಳಿಗೆ ಕರೆದುಕೊಂಡು ಹೋಗಿ, “ಕೈದಿ
ಪೌಲನು, ನನ್ನನ್ನು ಕರೆದು, ಈ ಯುವಕನನ್ನು ನಿಮ್ಮಲ್ಲಿಗೆ ಕರೆದುಕೊಂಡು ಬರಲು ತಿಳಿಸಿದನು. ನಿಮಗೆ
ಹೇಳಬೇಕಾದ ವಿಷಯವೇನೋ ಇದೆಯಂತೆ,” ಎಂದನು. 19ಆಗ ಸಹಸ್ರಾಧಿಪತಿ ಆ ಯುವಕನ ಕೈಹಿಡಿದು,
ಪ್ರತ್ಯೇಕವಾಗಿ ಕರೆದುಕೊಂಡು ಹೋಗಿ, “ನೀನು ನನಗೆ ಹೇಳಬೇಕೆಂದು ಇರುವ ವಿಷಯವೇನು?” ಎಂದು
ವಿಚಾರಿಸಿದನು. 20ಅದಕ್ಕೆ ಆ ಯುವಕನು, “ಯೆಹೂದ್ಯರು ಒಂದುಗೂಡಿ ಒಂದು ತೀರ್ಮಾನ
ಕೈಗೊಂಡಿದ್ದಾರೆ. ಅದರ ಪ್ರಕಾರ ಪೌಲನ ಬಗ್ಗೆ ಇನ್ನೂ ಸೂಕ್ಷ್ಮವಾಗಿ ಪರಿಶೀಲಿಸಬೇಕಾಗಿದೆಯೆಂದು ನಟಿಸಿ,
ಅವನನ್ನು ನಾಳೆ ನ್ಯಾಯಸಭೆಯ ಮುಂದೆ ಹಾಜರುಪಡಿಸುವಂತೆ ಕೇಳಿಕೊಳ್ಳಲಿದ್ದಾರೆ. 21ಆದರೆ ನೀವು ಅವರ

ಮಾತನ್ನು ನಂಬಬೇಡಿ. ಏಕೆಂದರೆ, ನಾಲ್ವತ್ತಕ್ಕೂ ಹೆಚ್ಚು ಮಂದಿ ಅವನಿಗಾಗಿ ಹೊಂಚುಹಾಕಿ
ಕಾದುಕೊಂಡಿರುತ್ತಾರೆ. ತಾವು ಅವನನ್ನು ಕೊಲ್ಲುವ ತನಕ ಅನ್ನಪಾನವೇನೂ ಮುಟ್ಟುವುದಿಲ್ಲವೆಂದು ಶಪಥ
ಮಾಡಿದ್ದಾರೆ. ಈಗ ಅವರು ನಿಮ್ಮ ಅನುಮತಿಯನ್ನು ಎದುರುನೋಡುತ್ತಾ ಕಾಯುತ್ತಿದ್ದಾರೆ," ಎಂದನು.
22"ಈ ವಿಷಯವನ್ನು ನೀನು ನನಗೆ ವರದಿ ಮಾಡಿರುವುದಾಗಿ ತಿಳಿಸಬೇಡ," ಎಂದು ಸಹಸ್ರಾಧಿಪತಿ ಆ
ಯುವಕನಿಗೆ ಆಜ್ಞೆಮಾಡಿ ಅವನನ್ನು ಕಳುಹಿಸಿಬಿಟ್ಟನು.

## ರಾಜ್ಯಪಾಲ ಫೆಲಿಕ್ಸನ ಮುಂದೆ ಪೌಲ

23 ಅನಂತರ ಸಹಸ್ರಾಧಿಪತಿ ಇಬ್ಬರು ಶತಾಧಿಪತಿಗಳನ್ನು ಕರೆದು ಹೀಗೆಂದನು: "ಈ ರಾತ್ರಿ ಒಂಭತ್ತು
ಗಂಟೆಗೆ ಸೆಜರೇಯ ಪಟ್ಟಣಕ್ಕೆ ಹೊರಡಲು ಇನ್ನೂರು ಮಂದಿ ಸೈನಿಕರನ್ನೂ ಎಪ್ಪತ್ತು ಮಂದಿ ಕುದುರೆ
ಸವಾರರನ್ನೂ ಇನ್ನೂರು ಮಂದಿ ಭರ್ಜಿ ಆಳುಗಳನ್ನೂ ಸಿದ್ಧಗೊಳಿಸಿರಿ. 24ಕುದುರೆಗಳನ್ನು ಸಜ್ಜುಗೊಳಿಸಿ
ಪೌಲನನ್ನು ಏರಿಸಿ, ರಾಜ್ಯಪಾಲ ಫೆಲಿಕ್ಸರ ಬಳಿಗೆ ಭದ್ರವಾಗಿ ಕರೆದುಕೊಂಡು ಹೋಗಿರಿ," 25ಇದೂ ಅಲ್ಲದೆ
ಸಹಸ್ರಾಧಿಪತಿ ಬರೆದುಕೊಟ್ಟ ಪತ್ರ ಹೀಗಿತ್ತು:

26 "ಮಹಾಪ್ರಭುಗಳಾದ ರಾಜ್ಯಪಾಲ ಫೆಲಿಕ್ಸ್ ಅವರ ಸನ್ನಿಧಾನಕ್ಕೆ – ಕ್ಲಾಡಿಯ ಲೂಸಿಯನು
ಮಾಡುವ ಪ್ರಣಾಮಗಳು. 27ಈ ವ್ಯಕ್ತಿಯನ್ನು ಯೆಹೂದ್ಯರು ಹಿಡಿದು ಕೊಲ್ಲುವುದರಲ್ಲಿದ್ದರು. ಇವನು
ರೋಮಿನ ಪೌರನೆಂದು ತಿಳಿದು, ನಾನು ಸೈನಿಕರೊಡನೆ ಹೋಗಿ ಇವನನ್ನು ಬಿಡಿಸಿದೆ. 28ಇವನ ಮೇಲೆ
ಅವರು ಹೊರಿಸಿರುವ ಆಪಾದನೆಗಳು ಏನೆಂದು ತಿಳಿದುಕೊಳ್ಳುವ ಉದ್ದೇಶದಿಂದ ನಾನು ಇವನನ್ನು ಅವರ
ನ್ಯಾಯಸಭೆಯಲ್ಲಿ ಹಾಜರುಪಡಿಸಿದೆ. 29ಅಲ್ಲಿ ನನಗೆ ಕಂಡುಬಂದ ಪ್ರಕಾರ ಅವರ ಧರ್ಮಶಾಸ್ತ್ರಕ್ಕೆ
ಸಂಬಂಧಪಟ್ಟ ವಿಷಯಗಳಲ್ಲಿ ಇವನ ಮೇಲೆ ಆಪಾದನೆ ಹೊರಸಲಾಯಿತೇ ಹೊರತು
ಮರಣದಂಡನೆಗಾಗಲಿ, ಸೆರೆಮನೆಗಾಗಲಿ, ಇವನನ್ನು ಗುರಿಪಡಿಸಬಹುದಾದ ಅಪರಾಧವೇನೂ ಇರಲಿಲ್ಲ.
30ಆದರೂ ಇವನ ವಿರುದ್ಧ ಒಳಸಂಚು ನಡೆಯುತ್ತಲೇ ಇದೆಯೆಂದು ನನಗೆ ತಿಳಿದುಬಂದಿತು. ಕೂಡಲೇ
ನಾನು ಇವನನ್ನು ತಮ್ಮ ಬಳಿಗೆ ಕಳುಹಿಸಿದ್ದೇನೆ. ಇವನ ಮೇಲೆ ತಪ್ಪು ಹೊರಿಸುವವರು ತಮ್ಮ ಸನ್ನಿಧಾನದಲ್ಲೇ
ಬಂದು ಆ ಆಪಾದನೆಗಳನ್ನು ನಿವೇದಿಸಬಹುದೆಂದು ಅಪ್ಪಣೆಮಾಡಿದ್ದೇನೆ." 31ಸೈನಿಕರು ಈ ಆಜ್ಞೆಯನ್ನು
ಶಿರಸಾವಹಿಸಿ ಪೌಲನನ್ನು ಆ ರಾತ್ರಿ ಅಂತಿಪತ್ರಿಯ ಎಂಬ ಊರಿನವರೆಗೆ ಕರೆದುಕೊಂಡು ಹೋದರು.
32ಮರುದಿನ ಪೌಲನೊಂದಿಗೆ ಮುಂದೆಹೋಗಲು ಕುದುರೆ ಸವಾರರನ್ನು ಬಿಟ್ಟು, ಸೈನಿಕರು ಕೋಟೆಗೆ
ಹಿಂದಿರುಗಿದರು. 33ಸವಾರರು ಸೆಜರೇಯವನ್ನು ತಲುಪಿ ರಾಜ್ಯಪಾಲನಿಗೆ ಪತ್ರವನ್ನು ಕೊಟ್ಟು ಪೌಲನನ್ನು
ಅವನ ವಶಕ್ಕೊಪ್ಪಿಸಿದರು. 34ರಾಜ್ಯಪಾಲನು ಪತ್ರವನ್ನು ಓದಿ ಪೌಲನು ಯಾವ ಪ್ರಾಂತ್ಯದ ನಿವಾಸಿ ಎಂದು
ವಿಚಾರಿಸಿ ಅವನು ಸಿಲಿಸಿಯದಿಂದ ಬಂದವನೆಂದು ತಿಳಿದುಕೊಂಡನು. 35"ನಿನ್ನ ಮೇಲೆ ತಪ್ಪು
ಹೊರಿಸಿದವರು ಬಂದ ಮೇಲೆ ನಿನ್ನ ವಿಚಾರಣೆ ಮಾಡುತ್ತೇನೆ," ಎಂದು ಹೇಳಿ ಪೌಲನನ್ನು ಹೆರೋದನ
ಅರಮನೆಯಲ್ಲಿ ಕಾವಲಿನಲ್ಲಿ ಇಡಬೇಕೆಂದು ಆಜ್ಞಾಪಿಸಿದನು.

## ಪೌಲನ ಮೇಲೆ ಯೆಹೂದ್ಯರ ದೋಷಾರೋಪಣೆ

**24** ಐದು ದಿನಗಳ ನಂತರ ಪ್ರಧಾನ ಯಾಜಕ ಅನನೀಯನು, ಕೆಲವು ಪ್ರಮುಖರನ್ನೂ ತೆರ್ತುಲ್ಲ ಎಂಬ
ವಕೀಲನನ್ನೂ ಕರೆದುಕೊಂಡು ಬಂದನು. ಅವರು ರಾಜ್ಯಪಾಲ ಫೆಲಿಕ್ಸನ ಸನ್ನಿಧಾನದಲ್ಲಿ ಪೌಲನ ವಿರುದ್ಧ
ದೂರಿತ್ತರು. 2ಪೌಲನನ್ನು ಕರೆದುತಂದು ನಿಲ್ಲಿಸಿದಾಗ ತೆರ್ತುಲ್ಲನು ಅವನ ವಿರುದ್ಧ ಹೀಗೆಂದು
ವಾದಿಸಲಾರಂಭಿಸಿದನು: "ಮಹಾ ಪ್ರಭುವೇ, ನಿಮ್ಮ ಮುಖಂಡತ್ವದಲ್ಲಿ ನಾವು ಶಾಂತಿ ಸೌಭಾಗ್ಯವನ್ನು
ಸವಿಯುತ್ತಿದ್ದೇವೆ. ದೇಶ ಪ್ರಗತಿಗಾಗಿ ಆಗುತ್ತಿರುವ ಸುಧಾರಣೆಗಳಿಗೆ ತಮ್ಮ ಪರಾಮರಿಕೆಯೇ ಕಾರಣ.
3ಇದನ್ನು ನಾವು ಎಲ್ಲೆಲ್ಲೂ ಯಾವಾಗಲೂ ಪೂರ್ಣ ಕೃತಜ್ಞತೆಯಿಂದ ಸ್ಮರಿಸಿಕೊಳ್ಳುತ್ತೇವೆ. 4ನಾನು ತಮ್ಮ
ಸಮಯವನ್ನು ವ್ಯರ್ಥಮಾಡಲು ಇಚ್ಛಿಸುವುದಿಲ್ಲ. ಸಂಕ್ಷಿಪ್ತವಾಗಿ ನಾನು ತಮ್ಮ ಮುಂದಿಡುವ ಈ ವಾದವನ್ನು

ದಯೆಯಿಂದ ಆಲಿಸಬೇಕೆಂದು ವಿಜ್ಞಾಪಿಸುತ್ತೇನೆ. 5ಈ ವ್ಯಕ್ತಿ ಒಂದು ದೊಡ್ಡ ಪೀಡೆ. ಯೆಹೂದ್ಯರು ಜಗತ್ತಿನಲ್ಲಿ
ಎಲ್ಲೇ ಇರಲಿ, ಅಲ್ಲೆಲ್ಲಾ ಕಲಹವೆಬ್ಬಿಸುತ್ತಾನೆ. ಅಲ್ಲದೆ, 'ನಜರೇನ' ಎಂಬ ಕುಪ್ರಸಿದ್ಧ ಪಂಥದ ಒಬ್ಬ
ಮುಖಂಡನೂ ಆಗಿದ್ದಾನೆ. 6ಇವನು ಮಹಾದೇವಾಲಯವನ್ನು ಭ್ರಷ್ಟಗೊಳಿಸಲು ಪ್ರಯತ್ನಿಸಿದ. ಅಷ್ಟರಲ್ಲಿ
ನಾವು ಇವನನ್ನು ಬಂಧಿಸಿದೆವು. ನಮ್ಮ ಧರ್ಮಶಾಸ್ತ್ರಕ್ಕೆ ಅನುಸಾರವಾಗಿ ಇವನನ್ನು ವಿಚಾರಣೆಗೆ
ಒಳಪಡಿಸಬೇಕೆಂದಿದ್ದೆವು. 7ಆದರೆ, ಸಹಸ್ರಾಧಿಪತಿ ಲೂಸಿಯನು ಮಧ್ಯೆ ಬಂದು ಬಲಾತ್ಕಾರದಿಂದ ಇವನನ್ನು
ನಮ್ಮಿಂದ ಬಿಡಿಸಿಕೊಂಡನು. 8ಹಾಗೂ ಇವನ ಮೇಲೆ ತಪ್ಪು ಹೊರಿಸುವವರು ತಮ್ಮ ಮುಂದೆ ಬರಬೇಕೆಂದು
ಆಜ್ಞೆಯಿತ್ತನು; ತಾವೇ ಕೇಳಿನೋಡಿ; ನಾವು ಇವನ ವಿರುದ್ಧ ತಂದಿರುವ ದೂರುಗಳೆಲ್ಲಾ ಸತ್ಯವಾದುವು
ಎಂದು ಇವನಿಂದಲೇ ತಮಗೆ ವ್ಯಕ್ತ ಆಗುವುದು," ಎಂದನು. 9ಯೆಹೂದ್ಯರೂ ವಕೀಲನಿಗೆ ಬೆಂಬಲವಾಗಿ
ಅವನು ಹೇಳಿದ್ದೆಲ್ಲಾ ಸತ್ಯವೆಂದು ಸಾಧಿಸಿದರು.

### ಫೆಲಿಕ್ಸನ ಸಮ್ಮುಖದಲ್ಲಿ ಪೌಲನ ಪ್ರತಿವಾದ

10 ರಾಜ್ಯಪಾಲನು ಪೌಲನಿಗೆ ಸನ್ನೆಮಾಡಿ ಮಾತನಾಡುವಂತೆ ಅಪ್ಪಣೆ ಮಾಡಿದನು. ಆಗ ಪೌಲನು
ಹೀಗೆಂದನು: "ತಾವು ಅನೇಕ ವರ್ಷಗಳಿಂದ ಈ ನಾಡಿನ ನ್ಯಾಯಾಧೀಶರಾಗಿದ್ದೀರಿ. ಅದನ್ನು ಅರಿತು
ನಿರ್ಭಯನಾಗಿ ಪ್ರತಿವಾದವನ್ನು ತಮ್ಮ ಮುಂದಿಡುತ್ತೇನೆ. 11ನಾನು ಜೆರುಸಲೇಮಿಗೆ ದೈವಾರಾಧನೆಗೆಂದು
ಹೋಗಿ ಇಲ್ಲಿಗೆ ಹನ್ನೆರಡು ದಿನಗಳಿಗಿಂತ ಹೆಚ್ಚಾಗಿಲ್ಲ. ಇದನ್ನು ತಾವೇ ವಿಚಾರಿಸಿ ತಿಳಿದುಕೊಳ್ಳಬಹುದು.
12ನಾನು ದೇವಾಲಯದಲ್ಲಾಗಲಿ, ಪ್ರಾರ್ಥನಾಮಂದಿರದಲ್ಲಾಗಲಿ, ಪಟ್ಟಣದಲ್ಲಾಗಲಿ, ಯಾವ ವಾದವಿವಾದ
ನಡೆಸಿದ್ದನ್ನು ಅಥವಾ ಜನರನ್ನು ಪ್ರಚೋದಿಸಿದ್ದನ್ನು ಇವರಾರೂ ಕಂಡಿಲ್ಲ. 13ಇವರು ಈಗ ನನ್ನ ಮೇಲೆ
ಹೊರಿಸುವ ಆಪಾದನೆಗಳನ್ನು ತಮ್ಮ ಮುಂದೆ ಸಮರ್ಥಿಸಲು ಇವರಿಂದಾಗದು. 14ಇಷ್ಟನ್ನು ಮಾತ್ರ ನಾನು
ಒಪ್ಪಿಕೊಳ್ಳುತ್ತೇನೆ: ಇವರು ಕುಪ್ರಸಿದ್ಧವೆಂದು ನಿಂದಿಸುವ ಮಾರ್ಗವನ್ನು ಅನುಸರಿಸುವವನು ನಾನು. ಆ
ಮಾರ್ಗದ ಪ್ರಕಾರ ನಮ್ಮ ಪೂರ್ವಜರ ದೇವರನ್ನು ಆರಾಧಿಸುತ್ತೇನೆ. ಧರ್ಮಶಾಸ್ತ್ರದಲ್ಲೂ ಪ್ರವಾದಿಗಳ
ಗ್ರಂಥದಲ್ಲೂ ಬರೆದಿರುವುದನ್ನೆಲ್ಲ ನಂಬುತ್ತೇನೆ. 15ಮಾನವರು ಸಜ್ಜನರಾಗಿರಲಿ, ದುರ್ಜನರಾಗಿರಲಿ,
ಪುನರುತ್ಥಾನ ಹೊಂದುವರೆಂದು ಇವರಂತೆಯೇ ನಾನು ದೇವರಲ್ಲಿ ನಂಬಿಕೆಯುಳ್ಳವನಾಗಿದ್ದೇನೆ.
16ಅಂತೆಯೇ, ದೇವರ ಹಾಗೂ ಮಾನವರ ಮುಂದೆ ಶುದ್ಧ ಮನಸ್ಸಾಕ್ಷಿಯುಳ್ಳವನಾಗಿ ಬಾಳಲು
ಪ್ರಯತ್ನಿಸುತ್ತಿದ್ದೇನೆ. 17ಹಲವಾರು ವರ್ಷಗಳಿಂದ ದೂರವಿದ್ದ ನಾನು, ಈಗ ನನ್ನ ಸ್ವದೇಶಿಯರಿಗೆ
ದಾನಧರ್ಮ ತರಲೂ ಕಾಣಿಕೆಯನ್ನು ಅರ್ಪಿಸಲೂ ಜೆರುಸಲೇಮಿಗೆ ಬಂದೆ. 18ಶುದ್ಧಾಚಾರದ ವಿಧಿಯನ್ನು
ಮುಗಿಸಿಕೊಂಡು, ನನ್ನೀ ಕಾರ್ಯದಲ್ಲಿ ನಿರತನಾಗಿದ್ದಾಗ ಇವರು ನನ್ನನ್ನು ಮಹಾದೇವಾಲಯದಲ್ಲಿ ಕಂಡರು.
ಆಗ ನನ್ನೊಂದಿಗೆ ಜನರ ಗುಂಪೇನೂ ಇರಲಿಲ್ಲ; ಯಾವ ಗಲಭೆಗೂ ಅವಕಾಶವಿರಲಿಲ್ಲ. 19ಆದರೆ,
ಏಷ್ಯಾದಿಂದ ಬಂದಿದ್ದ ಯೆಹೂದ್ಯರು ಕೆಲವರು ಅಲ್ಲಿದ್ದರು. ನನ್ನ ಮೇಲೆ ಯಾವುದಾದರೂ
ಆಪಾದನೆಯನ್ನೂ ಹೊರಿಸಬೇಕೆಂದಿದ್ದರೆ, ಅವರೇ ಇಲ್ಲಿ ತಮ್ಮ ಮುಂದೆ ಹಾಜರಿರಬೇಕಾಗಿತ್ತು. 20ಅಥವಾ,
ನಾನು ನ್ಯಾಯಸಭೆಯ ಮುಂದೆ ನಿಂತಿದ್ದಾಗ ನನ್ನಲ್ಲಿ ಯಾವ ಅಪರಾಧಗಳು ಕಂಡು ಬಂದವೆಂದು, ಈ
ಜನರೇ ಹೇಳಲಿ. 21'ಸತ್ತವರು ಪುನರುತ್ಥಾನ ಹೊಂದುತ್ತಾರೆ, ಎಂಬ ವಿಷಯಕ್ಕಾಗಿ ನಾನು ಇಂದು ನಿಮ್ಮ
ಮುಂದೆ ವಿಚಾರಣೆಗೆ ಗುರಿಯಾಗಿದ್ದೇನೆ' ಎಂದು ನಾನು ಆ ಸಭೆಯ ಮುಂದೆ ಕೂಗಿ ಹೇಳಿದ್ದನ್ನು ಬಿಟ್ಟರೆ,
ಬೇರೆ ಏನನ್ನು ನನ್ನಲ್ಲಿ ಕಂಡರೆಂದು ಇವರೇ ಹೇಳಲಿ," ಎಂದನು.

22 ಕ್ರಿಸ್ತಮಾರ್ಗದ ಬಗ್ಗೆ ಚೆನ್ನಾಗಿ ಅರಿತುಕೊಂಡಿದ್ದ ಫೆಲಿಕ್ಸನು, "ಸಹಸ್ರಾಧಿಪತಿ ಲೂಸಿಯನು ಬಂದ
ಮೇಲೆ ನಾನು ಈ ವ್ಯಾಜ್ಯವನ್ನು ತೀರ್ಮಾನಿಸುತ್ತೇನೆ," ಎಂದು ಹೇಳಿ ವಿಚಾರಣೆಯನ್ನು ಮುಂದೂಡಿದನು.
23ಅನಂತರ ಪೌಲನನ್ನು ಕಾವಲಿನಲ್ಲಿ ಇಡಬೇಕೆಂದೂ ಆದರೆ ಕಟ್ಟುನಿಟ್ಟು ಬೇಕಿಲ್ಲವೆಂದೂ ಅವನಿಗೆ
ಸಂಬಂಧಪಟ್ಟವರು ಅವನಿಗೆ ಉಪಚಾರ ಮಾಡುವುದನ್ನು ತಡೆಯಬಾರದೆಂದೂ ಶತಾಧಿಪತಿಗೆ
ಆಜ್ಞೆಮಾಡಿದನು. 24ಕೆಲವು ದಿನಗಳ ನಂತರ ಫೆಲಿಕ್ಸನು ಯೆಹೂದ್ಯಳಾದ ತನ್ನ ಪತ್ನಿ ದ್ರುಸಿಲ್ಲಳೊಂದಿಗೆ
ಬಂದು ಪೌಲನನ್ನು ತನ್ನ ಬಳಿಗೆ ಕರೆಯಿಸಿದನು. ಕ್ರಿಸ್ತ ಯೇಸುವನ್ನು ವಿಶ್ವಾಸಿಸುವ ಬಗ್ಗೆ ಪೌಲನಾಡಿದ
ಮಾತುಗಳನ್ನು ಆಲೈಸಿದನು. 25ಆದರೆ ನೀತಿ ನಿಯಮ, ಇಂದ್ರಿಯನಿಗ್ರಹ, ಬರಲಿರುವ ದೈವತೀರ್ಪಿನ ದಿನ

ಇವುಗಳನ್ನು ಪ್ರಸ್ತಾಪಿಸಿದಾಗ ಫೆಲಿಕ್ಸನು ದಿಗಿಲುಗೊಂಡನು. "ಸದ್ಯಕ್ಕೆ, ನೀನು ಹೋಗಬಹುದು; ಸಮಯ
ಒದಗಿದಾಗ ನಿನ್ನನ್ನು ಕರೆಯಿಸುತ್ತೇನೆ," ಎಂದನು. 26ಇದಲ್ಲದೆ, ಪೌಲನು ತನಗೆ ಹಣವನ್ನು
ಕೊಡಬಹುದೆಂಬ ನಿರೀಕ್ಷೆ ಅವನದಾಗಿತ್ತು. ಈ ಕಾರಣದಿಂದಲೇ ಅವನನ್ನು ಪದೇ ಪದೇ ಕರೆಯಿಸಿ,
ಅವನೊಡನೆ ಮಾತುಕತೆ ನಡೆಸುತ್ತಿದ್ದನು. 27ಹೀಗೆ ಎರಡು ವರ್ಷಗಳು ಕಳೆದವು. ಪೋರ್ಸಿಯ ಫೆಸ್ತ
ಎಂಬವನು ಫೆಲಿಕ್ಸನ ಸ್ಥಾನದಲ್ಲಿ ರಾಜ್ಯಪಾಲನಾಗಿ ಬಂದನು. ಫೆಲಿಕ್ಸನು ಯೆಹೂದ್ಯರ ಮೆಚ್ಚುಗೆಯನ್ನು
ಗಳಿಸಿಕೊಳ್ಳುವ ಸಲುವಾಗಿ ಪೌಲನನ್ನು ಸೆರೆಮನೆಯಲ್ಲೇ ಬಿಟ್ಟು ಹೋದನು.

### ಚಕ್ರವರ್ತಿಗೆ ಪೌಲನ ಅಪೀಲು

**25** ಫೆಸ್ತನು ಅಧಿಕಾರ ವಹಿಸಿಕೊಂಡು ಮೂರು ದಿನಗಳಾದ ನಂತರ ಸೆಜರೇಯದಿಂದ ಜೆರುಸಲೇಮಿಗೆ
ಹೋದನು. 2ಅಲ್ಲಿ ಮುಖ್ಯ ಯಾಜಕರು ಮತ್ತು ಯೆಹೂದ್ಯರ ಮುಖಂಡರು ಪೌಲನ ವಿರುದ್ಧ ಅವನಿಗೆ
ದೂರಿತ್ತರು. 3ಅವರು ಫೆಸ್ತನನ್ನು ವಿನಂತಿಸಿ, ಪೌಲನನ್ನು ಜೆರುಸಲೇಮಿಗೆ ಕರೆತರಿಸುವ ಉಪಕಾರವನ್ನು
ಮಾಡಬೇಕೆಂದು ಕೇಳಿಕೊಂಡರು. ಏಕೆಂದರೆ, ಮಾರ್ಗದಲ್ಲೇ ಪೌಲನನ್ನು ಕೊಲ್ಲುವ ಸಂಚನ್ನು ಹೂಡಿದ್ದರು.
4ಫೆಸ್ತನು ಅವರಿಗೆ, "ಪೌಲನು ಸೆಜರೇಯದಲ್ಲಿ ಕೈದಿಯಾಗಿದ್ದಾನೆ. ನಾನು ಬೇಗನೆ ಅಲ್ಲಿಗೆ ಹಿಂದಿರುಗಲಿದ್ದೇನೆ.
5ಅವನಲ್ಲಿ ಏನಾದರೂ ತಪ್ಪಿದ್ದರೆ ನಿಮ್ಮ ಪ್ರಮುಖರು ನನ್ನ ಜೊತೆಯಲ್ಲೇ ಅಲ್ಲಿಗೆ ಬಂದು ಆಪಾದಿಸಲಿ,"
ಎಂದು ಹೇಳಿದನು.

6 ಫೆಸ್ತನು ಅವರೊಂದಿಗೆ ಎಂಟು-ಹತ್ತು ದಿನಗಳನ್ನು ಕಳೆದು, ಸೆಜರೇಯಕ್ಕೆ ಮರಳಿ ಬಂದನು.
ಮಾರನೆಯ ದಿನ ಅವನು ನ್ಯಾಯಸ್ಥಾನದಲ್ಲಿ ಕುಳಿತು ಪೌಲನನ್ನು ತನ್ನ ಮುಂದೆ ಕರೆದು ತರಬೇಕೆಂದು
ಆಜ್ಞಾಪಿಸಿದನು. 7ಪೌಲನು ಅಲ್ಲಿಗೆ ಬಂದಾಗ, ಜೆರುಸಲೇಮಿನಿಂದ ಆಗಮಿಸಿದ್ದ ಯೆಹೂದ್ಯರು ಅವನ
ಸುತ್ತಲೂ ನಿಂತು ಅವನ ವಿರುದ್ಧ ಹಲವಾರು ತೀವ್ರ ಆಪಾದನೆಗಳನ್ನು ಹೊರಿಸಿದರು. ಆದರೆ ಅವುಗಳನ್ನು
ರುಜುವಾತುಪಡಿಸಲು ಅವರಿಂದಾಗಲಿಲ್ಲ. 8ಪೌಲನು ತನ್ನ ಪರವಾಗಿ ತಾನೇ ವಾದಿಸುತ್ತಾ, "ನಾನು
ಯೆಹೂದ್ಯರ ಧರ್ಮಶಾಸ್ತ್ರಕ್ಕೆ ವಿರುದ್ಧವಾಗಲಿ, ಮಹಾದೇವಾಲಯಕ್ಕೆ ವಿರುದ್ಧವಾಗಲಿ, ಅಥವಾ ಚಕ್ರವರ್ತಿಗೆ
ವಿರುದ್ಧವಾಗಲಿ, ಏನನ್ನೂ ಮಾಡಿಲ್ಲ," ಎಂದನು. 9ಫೆಸ್ತನು ಯೆಹೂದ್ಯರ ಮೆಚ್ಚುಗೆಯನ್ನು ಗಳಿಸಿಕೊಳ್ಳುವ
ಸಲುವಾಗಿ ಪೌಲನಿಗೆ, "ನೀನು ಜೆರುಸಲೇಮಿಗೆ ಹೋಗಿ, ಅಲ್ಲಿ ನನ್ನ ಮುಂದೆ ಇವುಗಳ ವಿಷಯವಾಗಿ
ವಿಚಾರಣೆಗೆ ಒಳಗಾಗಲಿ ಇಷ್ಟಪಡುತ್ತೀಯಾ?" ಎಂದು ಕೇಳಿದನು. 10ಅದಕ್ಕೆ ಪೌಲನು, "ನಾನು ಚಕ್ರವರ್ತಿಯ
ನ್ಯಾಯಸ್ಥಾನದ ಮುಂದೆ ನಿಂತಿದ್ದೇನೆ. ಇಲ್ಲಿಯೇ ನನ್ನ ವಿಚಾರಣೆಯಾಗತಕ್ಕದ್ದು. ತಮಗೆ ಚೆನ್ನಾಗಿ
ತಿಳಿದಿರುವಂತೆ ನಾನು ಯೆಹೂದ್ಯರಿಗೆ ಯಾವ ಅನ್ಯಾಯವನ್ನೂ ಮಾಡಿಲ್ಲ. 11ಹಾಗೇನಾದರೂ ಮಾಡಿ,
ಮರಣದಂಡನೆಗೆ ಅರ್ಹನಾಗಿದ್ದರೆ, ಅದಕ್ಕೆ ಗುರಿಯಾಗಲು ಹಿಂಜರಿಯುವುದಿಲ್ಲ. ಆದರೆ ಅವರು ನನ್ನ
ವಿರುದ್ಧ ತಂದಿರುವ ಆಪಾದನೆಗಳು ಜೊಳ್ಳಾಗಿದ್ದ ಪಕ್ಷದಲ್ಲಿ, ಯಾರೂ ನನ್ನನ್ನು ಇವರ ಕೈಗೊಪ್ಪಿಸಲಾಗದು.
ನಾನು ಚಕ್ರವರ್ತಿಗೇ ಅಪೀಲು ಮಾಡಿಕೊಳ್ಳುತ್ತೇನೆ," ಎಂದನು. 12ಆಗ ಫೆಸ್ತನು ತನ್ನ ಸಲಹೆಗಾರರೊಡನೆ
ಸಮಾಲೋಚಿಸಿ, "ನೀನು ಅಪೀಲು ಮಾಡಿರುವುದು ಚಕ್ರವರ್ತಿಗೆ ಅಲ್ಲವೆ? ಚಕ್ರವರ್ತಿಯ ಬಳಿಗೇ ಹೋಗು,"
ಎಂದು ಉತ್ತರಿಸಿದನು.

### ರಾಜ್ಯ ಅಗ್ರಿಪ್ಪನ ಮುಂದೆ ಪೌಲ

13 ಕೆಲವು ದಿನಗಳಾದ ನಂತರ ರಾಜ ಅಗ್ರಿಪ್ಪನು ಬೆರ್ನಿಸಳೊಂದಿಗೆ ಫೆಸ್ತನನ್ನು ಅಭಿನಂದಿಸಲು
ಸೆಜರೇಯಕ್ಕೆ ಬಂದನು. 14ಅವರು ಹಲವು ದಿನಗಳವರೆಗೆ ಅಲ್ಲೇ ತಂಗಿದ್ದರು. ಫೆಸ್ತನು ಪೌಲನ ವಿಷಯವನ್ನು
ಅವನ ಮುಂದೆ ಪ್ರಸ್ತಾಪಿಸುತ್ತಾ, "ಫೆಲಿಕ್ಸನು ಕೈದಿಯಾಗಿ ಬಿಟ್ಟು ಹೋದ ಒಬ್ಬ ವ್ಯಕ್ತಿ ಇಲ್ಲಿದ್ದಾನೆ. 15ನಾನು
ಜೆರುಸಲೇಮಿಗೆ ಹೋಗಿದ್ದಾಗ ಯೆಹೂದ್ಯರ ಮುಖ್ಯಯಾಜಕರೂ ಪ್ರಮುಖರೂ ಅವನ ವಿರುದ್ಧ
ಆಪಾದನೆಗಳನ್ನು ತಂದರು. ಅವನಿಗೆ ದಂಡನೆ ವಿಧಿಸುವಂತೆ ಕೇಳಿಕೊಂಡರು. 16ನಾನು ಅವರಿಗೆ,

‘ಆಪಾದಿತನೂ ಆಪಾದಿಸುವವರೂ ಮುಖಾ ಮುಖಿಯಾಗಿ ನಿಲ್ಲಬೇಕು; ತನ್ನ ಮೇಲೆ ಹೊರಿಸಲಾದ
ಆಪಾದನೆಗಳ ವಿರುದ್ಧ ವಾದಿಸಲು ಆಪಾದಿತನಿಗೆ ಅವಕಾಶ ಕೊಡಬೇಕು. ಹಾಗೆ ಮಾಡದೆ ಅವರ
ಕೈಗೊಪ್ಪಿಸುವುದು ರೋಮನರ ಪದ್ಧತಿಯಲ್ಲ,’ ಎಂದು ಹೇಳಿದೆ. [17]ಆದುದರಿಂದ ಅವರು ನನ್ನೊಡನೆ ಇಲ್ಲಿಗೆ
ಬಂದರು. ನಾನು ತಡಮಾಡದೆ ಮರುದಿನವೇ ನ್ಯಾಯಸ್ಥಾನದಲ್ಲಿ ಕುಳಿತು ಅವನನ್ನು ನನ್ನ ಮುಂದೆ
ತರುವಂತೆ ಆಜ್ಞೆ ಮಾಡಿದೆ. [18]ಆಪಾದಿಸಿದವರು ಅವನ ವಿರುದ್ಧ ಎದ್ದುನಿಂತು ಮಾತನಾಡಿದಾಗ ನಾನು
ಭಾವಿಸಿದಂತಹ ಅಪರಾಧವೊಂದನ್ನೂ ಅವನ ಮೇಲೆ ಹೊರಿಸಲಿಲ್ಲ. [19]ಅವನೊಡನೆ ಅವರಿಗಿದ್ದ
ವಾದವಿವಾದ ಅವರ ಧರ್ಮಾಚರಣೆಗಳಿಗೆ ಸಂಬಂಧಪಟ್ಟಿತ್ತು. ಯೇಸು ಎಂಬ ಒಬ್ಬ ವ್ಯಕ್ತಿಯನ್ನು ಕುರಿತೂ
ವಿವಾದ ಇತ್ತು. ಯೇಸು ಸತ್ತಿದ್ದರೂ ಜೀವಂತನಾಗಿದ್ದಾನೆಂದು ಪೌಲನು ಸಾಧಿಸುತ್ತಿದ್ದನು. [20]ಈ ವಿಷಯಗಳ
ಬಗ್ಗೆ ಹೇಗೆ ವಿಚಾರಣೆಮಾಡುವುದೆಂದು ನನಗೆ ತೋಚಲಿಲ್ಲ. ಆದುದರಿಂದ, ‘ನೀನು ಜೆರುಸಲೇಮಿಗೆ
ಹೋಗಿ, ಅಲ್ಲಿ ಈ ವಿಷಯಗಳ ಬಗ್ಗೆ ವಿಚಾರಣೆಗೆ ಒಳಗಾಗಲು ಇಷ್ಟಪಡುತ್ತೀಯಾ?’ ಎಂದು ಪೌಲನನ್ನು
ಕೇಳಿದೆ. ಅದಕ್ಕೆ ಅವನು, ‘ಚಕ್ರವರ್ತಿಯೇ ನನ್ನ ವಾದವನ್ನು ತೀರ್ಮಾನಿಸಲಿ. ಅಲ್ಲಿಯವರೆಗೆ ನನಗೆ ರಕ್ಷಣೆ
ಬೇಕು,’ ಎಂದು ವಿನಂತಿಸಿದ. [21]ಅಂತೆಯೇ ಅವನನ್ನು ಚಕ್ರವರ್ತಿಯ ಬಳಿಗೆ ಕಳುಹಿಸಲಾಗುವ ತನಕ
ಕಾವಲಿನಲ್ಲಿ ಇಡಬೇಕೆಂದು ಆಜ್ಞೆ ಮಾಡಿದೆ,” ಎಂದನು. [22]ಆಗ ಅಗ್ರಿಪ್ಪನು ಫೆಸ್ತನಿಗೆ, “ಆ ಮನುಷ್ಯ
ಹೇಳುವುದನ್ನು ನಾನು ಖುದ್ದಾಗಿ ಕೇಳಲಾಶಿಸುತ್ತೇನೆ,” ಎಂದನು. “ನಾಳೆಯೇ ಅದಕ್ಕೆ ವ್ಯವಸ್ಥೆ ಮಾಡುತ್ತೇನೆ,”
ಎಂದು ಉತ್ತರವಿತ್ತನು ಫೆಸ್ತ.

23 ಮಾರನೆಯ ದಿನ ಅಗ್ರಿಪ್ಪ ಮತ್ತು ಬೆರ್ನಿಸ್ ಮಹಾ ಸಡಗರದಿಂದ ಆಗಮಿಸಿದರು.
ಸೇನಾಧಿಪತಿಗಳ ಹಾಗೂ ಪುರಪ್ರಮುಖರ ಸಮೇತ ಆಸ್ಥಾನವನ್ನು ಪ್ರವೇಶಿಸಿದರು. ಫೆಸ್ತನ ಆಜ್ಞೆಯ ಪ್ರಕಾರ
ಪೌಲನನ್ನು ಹಾಜರುಪಡಿಸಲಾಯಿತು. [24]ಆಗ ಫೆಸ್ತನು, “ಅಗ್ರಿಪ್ಪ ರಾಜರೇ, ಇಲ್ಲಿ ನೆರೆದಿರುವ ಮಹಾಜನರೇ,
ನೀವು ನೋಡುತ್ತಿರುವ ಈ ವ್ಯಕ್ತಿಯ ವಿರುದ್ಧ ಇಲ್ಲಿಯೂ ಜೆರುಸಲೇಮಿನಲ್ಲಿಯೂ ಯೆಹೂದ್ಯರೆಲ್ಲರೂ ನನ್ನಲ್ಲಿ
ಮನವಿ ಮಾಡಿಕೊಂಡಿದ್ದಾರೆ. ಇವನನ್ನು ಜೀವಸಹಿತ ಬಿಡಬಾರದೆಂದು ಕೂಗಾಡುತ್ತಿದ್ದಾರೆ. [25]ಇವನಿಗೆ
ಮರಣದಂಡನೆ ವಿಧಿಸುವಂಥ ಅಪರಾಧವೇನೂ ನನಗೆ ಕಂಡು ಬರಲಿಲ್ಲ. ಅಲ್ಲದೆ ಇವನು ಚಕ್ರವರ್ತಿಗೇ
ಅಪೀಲು ಮಾಡಿಕೊಂಡಿದ್ದಾನೆ. ಆದ್ದರಿಂದ ನಾನು ಇವನನ್ನು ಅವರಲ್ಲಿಗೆ ಕಳುಹಿಸಲು ನಿರ್ಧರಿಸಿದ್ದೇನೆ.
[26]ಆದರೆ ಇವನ ಬಗ್ಗೆ ಮಹಾಸನ್ನಿಧಿಗೆ ಬರೆಯಲು ನಿರ್ದಿಷ್ಟವಾದುದೇನೂ ನನಗೆ ತೋಚುವುದಿಲ್ಲ. ಒಂದು
ವಿಚಾರಣೆ ನಡೆಸಿದರೆ, ಅವರಿಗೆ ಬರೆಯಲು ಏನಾದರೂ ದೊರಕಬಹುದೆಂದು ತಿಳಿದು ಇವನನ್ನು ನಿಮ್ಮ
ಮುಂದೆ, ಮುಖ್ಯವಾಗಿ ಅಗ್ರಿಪ್ಪ ರಾಜರೇ, ತಮ್ಮ ಮುಂದೆ, ಹಾಜರು ಪಡಿಸಿರುತ್ತೇನೆ. [27]ಏಕೆಂದರೆ, ಒಬ್ಬ
ಕೈದಿಯ ವಿರುದ್ಧ ಇರುವ ಆಪಾದನೆಗಳನ್ನು ಸ್ಪಷ್ಟವಾಗಿ ಸೂಚಿಸದೆ ಅವನನ್ನು ಕಳುಹಿಸುವುದು
ಸರಿಯಲ್ಲವೆಂದು ನನಗೆ ಅನಿಸುತ್ತದೆ,” ಎಂದನು.

## ಅಗ್ರಿಪ್ಪನ ಮುಂದೆ ಪೌಲನ ಪ್ರತಿವಾದ

**26** ಅಗ್ರಿಪ್ಪನು ಪೌಲನಿಗೆ ಮಾತನಾಡಲು ಅಪ್ಪಣೆಕೊಡುತ್ತಾ, “ಈಗ ನಿನ್ನ ಪರವಾಗಿ ನೀನು
ಮಾತನಾಡಬಹುದು,” ಎಂದನು. ಪೌಲನು ಕೈಯೆತ್ತಿ ಹೀಗೆ ವಾದಿಸತೊಡಗಿದನು: [2]“ಅಗ್ರಿಪ್ಪ ರಾಜರೇ,
ಯೆಹೂದ್ಯರು ನನ್ನ ಮೇಲೆ ಹೊರಿಸಿರುವ ಎಲ್ಲಾ ಆಪಾದನೆಗಳಿಗೆ ಇಂದು ತಮ್ಮ ಮುಂದೆ ಪ್ರತಿವಾದ
ಮಾಡುವ ಅವಕಾಶ ದೊರೆತಿರುವುದು ನನ್ನ ಸೌಭಾಗ್ಯವೆಂದೇ ಎಣಿಸುತ್ತೇನೆ. [3]ಏಕೆಂದರೆ, ತಾವು ಯೆಹೂದ್ಯರ
ಆಚಾರ ವಿಚಾರಗಳನ್ನೂ ವಾದವಿವಾದಗಳನ್ನೂ ಚೆನ್ನಾಗಿ ಬಲ್ಲಿರಿ. ಆದುದರಿಂದ ನನ್ನ ಮಾತನ್ನು
ತಾಳ್ಮೆಯಿಂದ ಆಲಿಸಬೇಕೆಂದು ವಿನಂತಿಸುತ್ತೇನೆ: [4]ನಾನು ಚಿಕ್ಕಂದಿನಿಂದ ಯಾವ ರೀತಿ
ಜೆರುಸಲೇಮಿನಲ್ಲಿಯೇ ನನ್ನ ದೇಶೀಯರೊಡನೆ ಜೀವಿಸಿದೆಯೆಂಬುದು ಎಲ್ಲ ಯೆಹೂದ್ಯರಿಗೆ ತಿಳಿದ
ವಿಷಯ. [5]ನಮ್ಮ ಧರ್ಮದ ಅತಿ ಕಟ್ಟುನಿಟ್ಟಾದ ಪಂಥವೆಂದರೆ ಫರಿಸಾಯ ಪಂಥ. ಅದರ ಅನುಯಾಯಿ
ಆಗಿದ್ದೆ ನಾನು. ಇದನ್ನು ಮೊದಲಿನಿಂದ ಅರಿತಿರುವ ಅವರೇ ಮನಸ್ಸುಮಾಡಿದರೆ ಸಾಕ್ಷಿ ಹೇಳಬಲ್ಲರು. [6]ನಮ್ಮ

ಪೂರ್ವಜರಿಗೆ ದೇವರು ಮಾಡಿದ ವಾಗ್ದಾನದಲ್ಲಿ ನಂಬಿಕೆಯಿಟ್ಟುದಕ್ಕಾಗಿಯೇ ನಾನು ಇಂದು ಇಲ್ಲಿ ವಿಚಾರಣೆಗೆ ಗುರಿಯಾಗಿದ್ದೇನೆ. [7]ಹನ್ನೆರಡು ಗೋತ್ರಗಳ ನಮ್ಮ ಜನರು, ಹಗಲಿರುಳು ದೇವರನ್ನು ಆರಾಧಿಸುತ್ತಾ, ಆ ವಾಗ್ದಾನ ಈಡೇರಿಯೇ ತೀರುವುದೆಂದು ನಂಬಿದ್ದಾರೆ. ಈ ನಂಬಿಕೆಗಾಗಿಯೇ, ಓ ರಾಜರೇ, ಯೆಹೂದ್ಯರು ನನ್ನ ಮೇಲೆ ದೋಷಾರೋಪಣೆ ಮಾಡಿದ್ದಾರೆ. [8]ಸತ್ತವರನ್ನು ದೇವರು ಪುನರುತ್ಥಾನಗೊಳಿಸುತ್ತಾರೆಂಬುದನ್ನು ನಂಬಲು ಅಸಾಧ್ಯವೆಂದು ಇಲ್ಲಿರುವ ನೀವು ತಾನೇ ಭಾವಿಸುವುದೇಕೆ?

9 "ನನ್ನ ವಿಷಯದಲ್ಲಿ ಹೇಳುವುದಾದರೆ, ಒಮ್ಮೆ ನಾನು ಯೇಸುವಿನ ನಾಮವನ್ನೇ ನಿರ್ಮೂಲ ಮಾಡಬೇಕೆಂದಿದ್ದೆ; ಅದಕ್ಕೆ ಅಗತ್ಯವಾದುದನ್ನೆಲ್ಲ ಮಾಡುವುದು ನನ್ನ ಕರ್ತವ್ಯ ಎಂದು ಎಣಿಸಿದ್ದೆ. [10]ಅಂತೆಯೇ ಜೆರುಸಲೇಮಿನಲ್ಲೇ ಈ ಕಾರ್ಯವನ್ನು ಆರಂಭಿಸಿದೆ. ಮುಖ್ಯಯಾಜಕರಿಂದ ಅಧಿಕಾರಪಡೆದು ದೇವಜನರಲ್ಲಿ ಅನೇಕರನ್ನು ನಾನು ಸೆರೆಮನೆಗೆ ತಳ್ಳಿದೆ. ಅವರಿಗೆ ಮರಣದಂಡನೆ ವಿಧಿಸಿದಾಗ ನಾನೂ ಅದನ್ನು ಅನುಮೋದಿಸಿದೆ. [11]ಅನೇಕ ಬಾರಿ ನಾನು ಅವರನ್ನು ಪ್ರಾರ್ಥನಾ ಮಂದಿರಗಳಲ್ಲೆಲ್ಲಾ ಬಾಧೆಪಡಿಸಿದೆ. ಹೀಗೆ, ವಿಶ್ವಾಸಭ್ರಷ್ಟರಾಗುವಂತೆ ಬಲಾತ್ಕರಿಸಿದೆ. ನನ್ನ ಕೋಪೋದ್ರೇಕಕ್ಕೆ ಎಲ್ಲೆ ಇರಲಿಲ್ಲ. ಹೊರನಾಡಿನ ಊರುಗಳಿಗೂ ಅವರನ್ನು ಬೆನ್ನಟ್ಟಿಹೋಗಿ ಹಿಂಸೆ ಪಡಿಸಿದೆ.

### ಪೌಲನ ಪರಿವರ್ತನೆಯ ಮತ್ತೊಂದು ಕಥನ

12 "ಈ ಉದ್ದೇಶದಿಂದಲೇ ಒಮ್ಮೆ ಮುಖ್ಯಯಾಜಕರಿಂದ ಅಧಿಕಾರವನ್ನು ಹಾಗೂ ಆಯೋಗವನ್ನು ಪಡೆದು, ದಮಸ್ಕಸಿಗೆ ಹೊರಟೆ. [13]ದಾರಿಯಲ್ಲಿ, ನಡು ಮಧ್ಯಾಹ್ನದ ವೇಳೆಯಲ್ಲಿ, ಓ ರಾಜರೇ, ಸೂರ್ಯನಿಗಿಂತಲೂ ಪ್ರಕಾಶಮಾನವಾದ ಬೆಳಕೊಂದು ಆಕಾಶದಿಂದ ಹೊಳೆಯುವುದನ್ನು ಕಂಡೆ. ಅದು ನನ್ನ ಮತ್ತು ಸಹಪ್ರಯಾಣಿಕರ ಸುತ್ತಲೂ ಆವರಿಸಿತು. [14]ನಾವೆಲ್ಲರೂ ನೆಲಕ್ಕೆ ಉರುಳಿದೆವು. ಆಗ, 'ಸೌಲನೇ, ಸೌಲನೇ, ನನ್ನನ್ನೇಕೆ ಹಿಂಸಿಸುತ್ತಿರುವೆ? ಮುಳ್ಳುಗೋಲಿನ ಮೊನೆಯನ್ನು ಒದೆಯುವುದರಿಂದ ನಿನಗೇ ಹಾನಿಯಲ್ಲವೇ?' ಎಂಬ ವಾಣಿ ಹಿಬ್ರು ಭಾಷೆಯಲ್ಲಿ ನನಗೆ ಕೇಳಿಸಿತು. [15]'ಪ್ರಭೂ ನೀವಾರು?' ಎಂದು ನಾನು ಕೇಳಿದೆ. ಅದಕ್ಕೆ ಪ್ರಭು, 'ನೀನು ಹಿಂಸೆ ಪಡಿಸುತ್ತಿರುವ ಯೇಸುವೇ ನಾನು. [16]ಎದ್ದು ನಿಂತುಕೊ; ನಿನ್ನನ್ನು ನನ್ನ ದಾಸನನ್ನಾಗಿಯೂ ಸಾಕ್ಷಿಯನ್ನಾಗಿಯೂ ನೇಮಿಸಿಕೊಳ್ಳುವುದಕ್ಕಾಗಿ ನಿನಗೆ ದರ್ಶನವಿತ್ತಿದ್ದೇನೆ. ಈ ದರ್ಶನದಲ್ಲಿ ನನ್ನ ವಿಷಯವಾಗಿ ಕಂಡದ್ದನ್ನು ಮತ್ತು ಮುಂದಿನ ದರ್ಶನಗಳಲ್ಲಿ ನಾನು ನಿನಗೆ ತೋರಿಸಲಿರುವ ವಿಷಯಗಳನ್ನು ಕುರಿತು ಬೇರೆಯವರಿಗೆ ನೀನು ತಿಳಿಸಬೇಕು. [17]ಯೆಹೂದ್ಯರಿಂದಲೂ ಅನ್ಯಜನರಿಂದಲೂ ನಾನು ನಿನ್ನನ್ನು ಕಾಪಾಡುತ್ತೇನೆ. ಇವರ ಬಳಿಗೇ ನಾನು ನಿನ್ನನ್ನು ಕಳುಹಿಸುತ್ತಿದ್ದೇನೆ. [18]ನೀನು ಇವರ ಕಣ್ಣುಗಳನ್ನು ತೆರೆಯಬೇಕು; ಅಂಧಕಾರವನ್ನು ಬಿಟ್ಟು ಬೆಳಕಿಗೆ ಬರುವಂತೆ ಮಾಡಬೇಕು; ಸೈತಾನನ ಆಧಿಪತ್ಯವನ್ನು ತ್ಯಜಿಸಿ ದೇವರತ್ತ ತಿರುಗುವಂತೆ ಮಾಡಬೇಕು. ಹೀಗೆ, ಅವರು ನನ್ನಲ್ಲಿಡುವ ವಿಶ್ವಾಸದ ಪ್ರಯುಕ್ತ ಪಾಪವಿಮೋಚನೆಯನ್ನು ಪಡೆಯುವರು; ಆಯ್ಕೆಯಾದವರಿಗಿರುವ ಹಕ್ಕುಬಾಧ್ಯತೆಗಳಲ್ಲಿ ಭಾಗಿಗಳಾಗುವರು,' ಎಂದು ಹೇಳಿದರು.

### ಪೌಲನ ಆಯೋಗ

19 "ಇಂತಿರಲು, ಅಗ್ರಿಪ್ಪ ರಾಜರೇ, ನನಗೆ ಲಭಿಸಿದ ಈ ಸ್ವರ್ಗೀಯ ದರ್ಶನಕ್ಕೆ ಅವಿಧೇಯನಾಗಿ ನಡೆಯಲು ನನ್ನಿಂದಾಗಲಿಲ್ಲ. [20]ದಮಸ್ಕಸ್ ಮೊದಲ್ಗೊಂಡು ಜೆರುಸಲೇಮಿಗೂ ಮತ್ತು ಎಲ್ಲ ಜುದೇಯ ನಾಡಿಗೂ ಹಾಗೂ ಅನ್ಯಧರ್ಮೀಯರಲ್ಲಿಗೂ ಹೋಗಿ, ಜನರು ತಮ್ಮತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ದೈವಾಭಿಮುಖಿಗಳಾಗಬೇಕೆಂದು ಬೋಧಿಸಿದೆ; ಪಶ್ಚಾತ್ತಾಪ ಸೂಚಕ ಕಾರ್ಯಗಳನ್ನು ಕೈಗೊಳ್ಳುವಂತೆ ಘೋಷಿಸಿದೆ. [21]ಇದಕ್ಕಾಗಿಯೇ ಯೆಹೂದ್ಯರು ನನ್ನನ್ನು ಮಹಾದೇವಾಲಯದಲ್ಲಿ ಹಿಡಿದು ಕೊಲ್ಲಲು ಪ್ರಯತ್ನಿಸಿದರು. [22]ಆದರೆ, ಇಂದಿನವರೆಗೂ ದೇವರು ನನಗೆ ನೆರವಾಗುತ್ತಾ ಬಂದಿದ್ದಾರೆ. ಎಂದೇ ದೊಡ್ಡವರು ಚಿಕ್ಕವರೆನ್ನದೆ, ಎಲ್ಲರಿಗೂ ಕ್ರಿಸ್ತಯೇಸುವಿನ ಪರವಾಗಿ ಸಾಕ್ಷಿ ನೀಡುತ್ತಾ ನಿಮ್ಮ ಮುಂದೆ ನಿಂತಿರುತ್ತೇನೆ. ನಾನು ಹೇಳುತ್ತಿರುವುದು, ಪ್ರವಾದಿಗಳು ಮತ್ತು ಮೋಶೆಯು ಮುಂದೆ ಏನು ಸಂಭವಿಸುವುದೆಂದು ಹೇಳಿದ್ದರೋ, ಅದನ್ನೇ ಹೊರತು ಮತ್ತೇನನ್ನೂ ನಾನು ಹೇಳುತ್ತಿಲ್ಲ. [23]ಅದೇನೆಂದರೆ,

ಲೋಕೋದ್ಧಾರಕನು ಯಾತನೆಯನ್ನು ಅನುಭವಿಸಬೇಕು; ಸತ್ತು ಪುನರುತ್ಥಾನವಾದವರಲ್ಲಿ ಮೊತ್ತಮೊದಲಿಗನಾಗಿ ಯೆಹೂದ್ಯರಿಗೂ ಅನ್ಯಧರ್ಮೀಯರಿಗೂ ಪರಂಜ್ಯೋತಿಯನ್ನು ಪ್ರಕಟಿಸಬೇಕು," ಎಂದನು.

24 ಈ ರೀತಿ ಪೌಲನು ತನ್ನ ಪರವಾಗಿ ವಾದಿಸುತ್ತಿದ್ದಾಗ ಫೆಸ್ತನು, "ಪೌಲನೇ, ನಿನಗೆ ಹುಚ್ಚು ಹಿಡಿದಿದೆ; ಅಧಿಕ ಪಾಂಡಿತ್ಯ ನಿನ್ನನ್ನು ಹುಚ್ಚನನ್ನಾಗಿಸಿದೆ," ಎಂದು ಗಟ್ಟಿಯಾಗಿ ಕೂಗಿದನು. [25]ಅದಕ್ಕೆ ಪೌಲನು, "ನಾನು ಹುಚ್ಚನಲ್ಲ, ಫೆಸ್ತ ಮಹಾಪ್ರಭೂ, ನಾನು ಆಡುತ್ತಿರುವುದು ತಿಳಿಮನಸ್ಸಿನಿಂದಾಡುವ ಸತ್ಯ. [26]ಅಗ್ರಿಪ್ಪ ರಾಜರಿಗೆ ಈ ವಿಷಯಗಳು ತಿಳಿದೇ ಇವೆ. ಆದ್ದರಿಂದ ನಾನು ಅವರ ಮುಂದೆ ಧೈರ್ಯದಿಂದ ಮಾತನಾಡುತ್ತಿದ್ದೇನೆ. ನಾನು ಹೇಳಿದವುಗಳಲ್ಲಿ ಒಂದಾದರೂ ಅವರಿಗೆ ಮುಚ್ಚುಮರೆಯಾದುದಲ್ಲವೆಂದು ನಂಬಿದ್ದೇನೆ. ಏಕೆಂದರೆ, ಇದು ಯಾವುದೋ ಒಂದು ಅಜ್ಞಾತ ಮೂಲೆಯಲ್ಲಿ ನಡೆದ ಕಾರ್ಯವಲ್ಲ. [27]ಅಗ್ರಿಪ್ಪ ರಾಜರೇ, ತಮಗೆ ಪ್ರವಾದಿಗಳಲ್ಲಿ ನಂಬಿಕೆಯುಂಟೋ? ಉಂಟೆಂದು ನಾನು ಬಲ್ಲೆ," ಎಂದನು. [28]ಅದಕ್ಕೆ ಅಗ್ರಿಪ್ಪನು, "ಇಷ್ಟು ಅಲ್ಪಕಾಲದಲ್ಲೇ ನನ್ನನ್ನು ಕ್ರೈಸ್ತನನ್ನಾಗಿ ಮಾಡಬೇಕೆಂದು ಇಚ್ಛಿಸುತ್ತೀಯಾ?" ಎಂದನು. [29]ಪೌಲನು ಪ್ರತ್ಯುತ್ತರವಾಗಿ, "ಅಲ್ಪಕಾಲವಾಗಲಿ, ದೀರ್ಘಕಾಲವಾಗಲಿ, ನೀವು ಮಾತ್ರವಲ್ಲ, ಇಂದು ನನ್ನನ್ನು ಆಲಿಸುತ್ತಿರುವ ಎಲ್ಲರೂ ನನ್ನಂತೆಯೇ ಆಗಬೇಕೆಂಬುದೇ ದೇವರಲ್ಲಿ ನಾನು ಮಾಡುವ ಪ್ರಾರ್ಥನೆ. ಆದರೆ ಈ ಸಂಕೋಲೆಗಳು ಮಾತ್ರ ನಿಮಗೆ ಬೇಡ," ಎಂದನು.

30 ಅನಂತರ ರಾಜನೂ ರಾಜ್ಯಪಾಲನೂ ಬೆರ್ನಿಸಳೂ ಅವರ ಸಂಗಡ ಕುಳಿತಿದ್ದವರೆಲ್ಲರೂ ಮೇಲಕ್ಕೆದ್ದರು. [31]ಅಲ್ಲಿಂದ ಹೊರಕ್ಕೆ ಹೋಗಿ, "ಮರಣದಂಡನೆಗಾಗಲಿ ಅಥವಾ ಸೆರೆಮನೆವಾಸಕ್ಕಾಗಲಿ ಗುರಿಮಾಡುವಂಥ ಯಾವ ತಪ್ಪನ್ನೂ ಈ ಮನುಷ್ಯ ಮಾಡಿಲ್ಲ," ಎಂದು ಒಬ್ಬರಿಗೊಬ್ಬರು ಮಾತನಾಡಿಕೊಂಡರು. [32]ಅಗ್ರಿಪ್ಪನು ಫೆಸ್ತನಿಗೆ, "ಚಕ್ರವರ್ತಿಗೆ ನೇರವಾಗಿ ಇವನು ಅಪೀಲು ಮಾಡಿಕೊಳ್ಳದಿದ್ದರೆ, ಇವನನ್ನು ಬಿಡುಗಡೆ ಮಾಡಬಹುದಾಗಿತ್ತು," ಎಂದನು.

## ರೋಮಿಗೆ ಪೌಲನ ಪ್ರಯಾಣ

**27** ನಾವು ಇಟಲಿಗೆ ನೌಕಾಯಾನ ಮಾಡಬೇಕೆಂದು ತೀರ್ಮಾನವಾದ ಮೇಲೆ ಪೌಲನನ್ನೂ ಬೇರೆ ಕೆಲವು ಕೈದಿಗಳನ್ನೂ 'ಔಗುಸ್ತದಳ' ಎಂಬ ರೋಮಿನ ದಳಕ್ಕೆ ಸೇರಿದ ಜೂಲಿಯಸ್ ಎಂಬ ಶತಾಧಿಪತಿಯ ವಶಕ್ಕೆ ಒಪ್ಪಿಸಲಾಯಿತು. [2]ಆಗ ಅದ್ರಮಿತಿಯದಿಂದ ಬಂದು ಏಷ್ಯಾ ಪ್ರಾಂತ್ಯದ ಬಂದರುಗಳಿಗೆ ಹೋಗಲು ಸಿದ್ಧವಾಗಿದ್ದ ಹಡಗನ್ನು ಹತ್ತಿ ನಾವು ಪ್ರಯಾಣ ಬೆಳೆಸಿದೆವು. ಥೆಸಲೋನಿಕದಿಂದ ಬಂದ ಮಕೆದೋನಿಯದ ಅರಿಸ್ತಾರ್ಕ ನಮ್ಮ ಸಂಗಡ ಇದ್ದನು. [3]ಮಾರನೆಯ ದಿನ ನಾವು ಸಿದೋನಿಗೆ ಆಗಮಿಸಿದೆವು. ಪೌಲನು ತನ್ನ ಗೆಳೆಯರನ್ನು ಸಂದರ್ಶಿಸುವುದಕ್ಕೂ ಅವರಿಂದ ತನಗೆ ಅಗತ್ಯವಿದ್ದುದನ್ನು ಪಡೆಯುವುದಕ್ಕೂ ಜೂಲಿಯಸನು ಆದರದಿಂದ ಅನುಮತಿಯನ್ನು ಕೊಟ್ಟನು. [4]ನಾವು ಅಲ್ಲಿಂದ ಹೊರಟೆವು. ಎದುರುಗಾಳಿ ಬೀಸುತ್ತಿತ್ತು. ಆದುದರಿಂದ ಸೈಪ್ರಸ್ ದ್ವೀಪದ ಮರೆಗೆ ಸಾಗಿದೆವು. [5]ಸಿಲಿಸಿಯಕ್ಕೂ ಪಾಂಫೀಲಿಯಕ್ಕೂ ಎದುರಾಗಿರುವ ಸಮುದ್ರವನ್ನು ದಾಟಿ ಲುಸಿಯ ಪ್ರಾಂತ್ಯದಲ್ಲಿರುವ 'ಮುರ' ಎಂಬ ಊರಿಗೆ ಬಂದೆವು. [6]ಅಲ್ಲಿ, ಅಲೆಕ್ಸಾಂಡ್ರಿಯದಿಂದ ಬಂದು ಇಟಲಿಗೆ ಹೋಗುತ್ತಿದ್ದ ಹಡಗನ್ನು ಕಂಡು ಶತಾಧಿಪತಿ ನಮ್ಮನ್ನು ಅದಕ್ಕೆ ಹತ್ತಿಸಿದನು. [7]ನಾವು ಅನೇಕ ದಿನಗಳವರೆಗೆ ನಿಧಾನವಾಗಿ ಪ್ರಯಾಣಮಾಡಿದೆವು. ಅತಿ ಕಷ್ಟದಿಂದ 'ಸ್ನೀಡ' ಎಂಬ ಊರಿಗೆ ಎದುರಾಗಿ ಬಂದೆವು. ಆ ದಿಸೆಯಲ್ಲಿ ಪ್ರಯಾಣ ಮಾಡಲು ಎದುರುಗಾಳಿ ನಮ್ಮನ್ನು ಬಿಡಲಿಲ್ಲ. ಆದ್ದರಿಂದ ನಾವು ಸಾಲ್ಮೋನೆ ಭೂಶಿರವನ್ನು ದಾಟಿ, ಕ್ರೇಟ್ ದ್ವೀಪದ ಮರೆಯನ್ನು ಸೇರಿದೆವು. [8]ಆ ದ್ವೀಪದ ಕರಾವಳಿಯಲ್ಲೇ ಪ್ರಯಾಸದಿಂದ ಸಾಗುತ್ತಾ, ಲಸಾಯ ಊರಿನ ಸಮೀಪದಲ್ಲಿರುವ 'ಸುಗಮ ರೇವು' ಎಂಬ ಸ್ಥಳವನ್ನು ಸೇರಿದೆವು.

9 ಇಷ್ಟರಲ್ಲಿ ಬಹಳ ದಿನಗಳು ಕಳೆದಿದ್ದವು. ಉಪವಾಸದ ಮಹಾದಿನವೂ ಕಳೆದಿತ್ತು. ಈ ಕಾಲದಲ್ಲಿ ಸಮುದ್ರದಲ್ಲಿ ಮುಂದುವರಿಸುವುದು ಅಪಾಯಕರವಾಗಿತ್ತು. [10]ಆದುದರಿಂದ ಪೌಲನು, "ಮಿತ್ರರೇ, ಇಲ್ಲಿಂದ

ಮುಂದಕ್ಕೆ ಪ್ರಯಾಣ ಅಪಾಯಕರವಾಗಿರುವಂತೆ ತೋರುತ್ತದೆ. ಹಡಗು ಮತ್ತು ಅದರಲ್ಲಿರುವ ಸರಕು
ಸಾಮಗ್ರಿಗಳಿಗೆ ಮಾತ್ರವಲ್ಲ, ನಮ್ಮ ಪ್ರಾಣಕ್ಕೂ ಕಷ್ಟನಷ್ಟ ಸಂಭವಿಸಲಿದೆ," ಎಂದು ಎಚ್ಚರಿಸಿದನು. 11ಆದರೆ
ಶತಾಧಿಪತಿ ಪೌಲನನ್ನು ನಂಬದೆ, ನೌಕೆಯ ನಾಯಕನ ಹಾಗೂ ಅದರ ಯಜಮಾನನ ಮಾತುಗಳಿಗೆ
ಕಿವಿಗೊಟ್ಟನು. 12ಅಲ್ಲದೆ ಚಳಿಗಾಲವನ್ನು ಕಳೆಯಲು ಆ ಬಂದರು ಹಿತಕರವಾಗಿರಲಿಲ್ಲ. ಆದ್ದರಿಂದ ಅಲ್ಲಿಂದ
ಹೊರಟು, ಸಾಧ್ಯವಾದರೆ, ಫೆನಿಕ್ಸ್ ಎಂಬ ಊರನ್ನು ಸೇರಿ, ಅಲ್ಲೇ ಚಳಿಗಾಲವನ್ನು ಕಳೆಯಬಹುದೆಂದು
ಹೆಚ್ಚು ಮಂದಿ ಅಭಿಪ್ರಾಯ ವ್ಯಕ್ತಪಡಿಸಿದರು. ಫೆನಿಕ್ಸ್, ಕ್ರೇಟ್ ದ್ವೀಪದ ಒಂದು ಬಂದರು. ಇದು ಈಶಾನ್ಯ
ದಿಕ್ಕಿಗೂ ಆಗ್ನೇಯ ದಿಕ್ಕಿಗೂ ಅಭಿಮುಖವಾಗಿದೆ.

**ಭೀಕರ ಚಂಡಮಾರುತ**

13 ದಕ್ಷಿಣದಿಂದ ತೆಳುಗಾಳಿ ಬೀಸಲಾರಂಭಿಸಿತು. ಪ್ರಯಾಣಿಕರು ತಮ್ಮ ಉದ್ದೇಶ ಕೈಗೂಡಿತೆಂದು
ಭಾವಿಸಿದರು. ಅವರು ಹಡಗಿನ ಲಂಗರುಗಳನ್ನು ಎತ್ತಿ, ಕ್ರೇಟ್ ದ್ವೀಪವನ್ನು ಅನುಸರಿಸುತ್ತಾ, ತೀರದ
ಮಗ್ಗುಲಲ್ಲೇ ಪ್ರಯಾಣ ಹೊರಟರು. 14ಆದರೆ ಸ್ವಲ್ಪದರಲ್ಲೇ 'ಈಶಾನ್ಯ ಮಾರುತ' ಎಂಬ ಪ್ರಚಂಡಗಾಳಿ
ದ್ವೀಪದಿಂದ ಬೀಸತೊಡಗಿತು. 15ಅದರ ಹೊಡೆತಕ್ಕೆ ಹಡಗು ಸಿಕ್ಕಿಕೊಂಡಿತು. ಅದಕ್ಕೆ ಎದುರಾಗಿ ಚಲಿಸಲು
ಅಸಾಧ್ಯವಾಗಿ ಗಾಳಿ ಬೀಸಿದ ಕಡೆಯೇ ಹಡಗನ್ನು ತೇಲಬಿಟ್ಟೆವು. 16ಕ್ಲೌಡ ಎಂಬ ಪುಟ್ಟ ದ್ವೀಪದ ಮರೆಯಲ್ಲಿ
ಹಾದುಹೋಗುವಾಗ ಹಡಗಿನಲ್ಲಿ ಇದ್ದ ಚಿಕ್ಕ ದೋಣಿಯನ್ನು ಸುಭದ್ರ ಪಡಿಸಿಕೊಳ್ಳಲು ಸಾಧ್ಯವಾಯಿತು.
17ಹಡಗಿನವರು ಅದನ್ನು ಮೇಲಕ್ಕೆ ಎಳೆದು ಹಗ್ಗಗಳಿಂದ ಹಡಗಿನ ಅಡಿಭಾಗಕ್ಕೆ ಬಿಗಿಯಾಗಿ ಕಟ್ಟಿದರು.
ಅನಂತರ 'ಸುರ್ತಿಸ್' ಎಂಬ ಉಸುಬಿನಲ್ಲಿ ಹಡಗು ಎಲ್ಲಿ ಸಿಕ್ಕಿಕೊಳ್ಳುವುದೋ ಎಂಬ ಭಯ ಆವರಿಸಿತು.
ಆದುದರಿಂದ ಅವರು ಹಾಯಿಯನ್ನು ಇಳಿಸಿ, ಗಾಳಿ ಬೀಸುತ್ತಿದ್ದ ಕಡೆಯೇ ಹಡಗು ತೇಲಲೆಂದು ಬಿಟ್ಟರು.
18ಚಂಡಮಾರುತ ನಮ್ಮನ್ನು ಒಂದೇ ಸಮನೆ ಹೊಯ್ದಾಡಿಸುತ್ತಿದ್ದುದರಿಂದ ಮಾರನೆಯ ದಿನ ಸರಕು
ಸಾಮಗ್ರಿಗಳನ್ನು ಸಮುದ್ರಕ್ಕೆ ಎಸೆಯಲು ಆರಂಭಿಸಿದರು. 19ಮೂರನೆಯ ದಿನ ಅವರು ಹಡಗಿನ ಕೆಲವು
ಸಲಕರಣೆಗಳನ್ನು ಸ್ವತಃ ಎತ್ತಿ ಹೊರಗೆಸೆದರು. 20ಅನೇಕ ದಿನಗಳವರೆಗೆ ಸೂರ್ಯನನ್ನಾಗಲಿ ನಕ್ಷತ್ರಗಳನ್ನಾಗಲಿ
ನೋಡಲಾಗಲಿಲ್ಲ. ಗಾಳಿ ತೀವ್ರವಾಗಿತ್ತು. ಕಟ್ಟಕಡೆಗೆ ನಾವು ಬದುಕುವ ಆಶೆಯನ್ನೇ ತೊರೆಯಬೇಕಾಯಿತು.

21 ಬಹಳ ದಿನಗಳವರೆಗೆ ಅವರು ಊಟವಿಲ್ಲದೆ ಇದ್ದರು. ಆಗ ಪೌಲನು ಎದ್ದು ನಿಂತು,
"ಗೆಳೆಯರೇ, ನೀವು ನನ್ನ ಮಾತನ್ನು ಕೇಳಬೇಕಿತ್ತು. ಕ್ರೇಟ್ ದ್ವೀಪದಿಂದ ಮುಂದಕ್ಕೆ ಪ್ರಯಾಣ
ಮಾಡಬಾರದಿತ್ತು. ಆಗ ಇಷ್ಟೆಲ್ಲಾ ಕಷ್ಟನಷ್ಟವನ್ನು ತಡೆಯಬಹುದಿತ್ತು. 22ಈಗಲಾದರೂ
ಧೈರ್ಯದಿಂದಿರಬೇಕೆಂದು ನಿಮ್ಮನ್ನು ಕೇಳಿಕೊಳ್ಳುತ್ತೇನೆ. ಹಡಗು ನಾಶವಾಗುವುದೇ ಹೊರತು, ನಿಮ್ಮಲ್ಲಿ
ಯಾರಿಗೂ ಪ್ರಾಣಹಾನಿ ಆಗಲಾರದು. 23ನಾನು ಯಾವ ದೇವರ ಭಕ್ತನಾಗಿದ್ದೇನೋ, ಯಾವ ದೇವರನ್ನು
ಆರಾಧಿಸುತ್ತೇನೋ ಆ ದೇವರ ದೂತನು ನಿನ್ನೆ ರಾತ್ರಿ ದರ್ಶನವಿತ್ತನು: 24'ಪೌಲನೇ, ಭಯಪಡಬೇಡ. ನೀನು
ಚಕ್ರವರ್ತಿಯ ಸಮ್ಮುಖದಲ್ಲಿ ನಿಲ್ಲಲೇ ಬೇಕಾಗಿದೆ; ಇಗೋ, ನಿನ್ನ ಸಂಗಡ ಪ್ರಯಾಣ ಮಾಡುವ ಎಲ್ಲರ
ಪ್ರಾಣಗಳನ್ನು ದೇವರು ನಿನ್ನ ನಿಮಿತ್ತ ಉಳಿಸಿದ್ದಾರೆ,' ಎಂದು ಅಭಯವಿತ್ತನು. 25ಆದುದರಿಂದ ಗೆಳೆಯರೇ,
ಧೈರ್ಯದಿಂದಿರಿ. ನನಗೆ ದೇವರಲ್ಲಿ ವಿಶ್ವಾಸವಿದೆ; ನನಗೆ ತಿಳಿಸಿದಂತೆಯೇ ಎಲ್ಲವೂ ನಡೆದೇ ತೀರುವುದು.
26ನಾವೆಲ್ಲರೂ ಒಂದು ದ್ವೀಪವನ್ನು ತಲುಪಲಿದ್ದೇವೆ," ಎಂದನು.

27 ಅದು ಹದಿನಾಲ್ಕನೆಯ ರಾತ್ರಿ. ಬಿರುಗಾಳಿ ನಮ್ಮನ್ನು ಆದ್ರಿಯ ಸಮುದ್ರದಲ್ಲಿ ಅತ್ತಿತ್ತ
ಹೊಯ್ದಾಡಿಸುತ್ತಿತ್ತು. ಮಧ್ಯರಾತ್ರಿಯ ವೇಳೆಯಲ್ಲಿ ನಾವೊಂದು ಭೂಮಿಯನ್ನು ಸಮೀಪಿಸುತ್ತಿರುವ ಹಾಗೆ
ನಾವಿಕರಿಗೆ ಕಂಡುಬಂದಿತು. 28ನೀರಿನ ಆಳವನ್ನು ಪರೀಕ್ಷಿಸಿದಾಗ ಅದು ನಾಲ್ವತ್ತು ಮೀಟರು ಇರುವುದಾಗಿ
ತಿಳಿಯಿತು. ಇನ್ನೂ ಸ್ವಲ್ಪ ಮುಂದಕ್ಕೆ ಸಾಗಿ ಮತ್ತೆ ಆಳ ನೋಡಿದಾಗ ಮೂವತ್ತು ಮೀಟರು ಎಂದು
ತಿಳಿಯಿತು. 29ನಮ್ಮ ಹಡಗು ಕಲ್ಲು ಬಂಡೆಗಳನ್ನು ತಾಕಬಹುದೆಂಬ ದಿಗಿಲು ಉಂಟಾಯಿತು. ಆದುದರಿಂದ
ಅವರು ಹಡಗಿನ ಹಿಂಭಾಗದ ನಾಲ್ಕು ಲಂಗರುಗಳನ್ನು ಕೆಳಗಿಳಿಸಿ ಬೆಳಗಾಗಲೆಂದು ಹಾರೈಸಿಕೊಂಡಿದ್ದರು.
30ಅನಂತರ ನಾವಿಕರು ಹಡಗಿನ ಮುಂಭಾಗದಲ್ಲಿ ಕೆಲವು ಲಂಗರುಗಳನ್ನು ಹಾಕುವಂತೆ ನಟಿಸಿ,
ದೋಣಿಯನ್ನು ನೀರಿಗಿಳಿಸಿ, ಹಡಗನ್ನು ಬಿಟ್ಟು ಪಲಾಯನ ಮಾಡಬೇಕೆಂದಿದ್ದರು. 31ಆಗ ಪೌಲನು

ಶತಾಧಿಪತಿಯನ್ನು ಮತ್ತು ಸೈನಿಕರನ್ನು ಉದ್ದೇಶಿಸಿ, "ಈ ನಾವಿಕರು ಹಡಗಿನಲ್ಲೇ ಉಳಿಯದಿದ್ದರೆ ನಿಮ್ಮ ಪ್ರಾಣ ಉಳಿಯದು," ಎಂದು ಎಚ್ಚರಿಸಿದನು. [32]ಕೂಡಲೇ ಸೈನಿಕರು ದೋಣಿಯ ಹಗ್ಗಗಳನ್ನು ಕತ್ತರಿಸಿ ಅದು ಸಮುದ್ರದ ಪಾಲಾಗುವಂತೆ ಮಾಡಿದರು.

33–34 ಬೆಳಗಾಗುತ್ತಿದ್ದಂತೆ ಪೌಲನು ಅವರೆಲ್ಲರನ್ನು ಕುರಿತು ಇಂತೆಂದನು: "ನೀವೆಲ್ಲರು ಚಿಂತೆಯಿಂದ ಹದಿನಾಲ್ಕು ದಿನಗಳವರೆಗೆ ಏನನ್ನೂ ತಿನ್ನದೆ ಇದ್ದೀರಿ; ನಿಮ್ಮ ಪ್ರಾಣ ಉಳಿಸಿಕೊಳ್ಳಲು ಸ್ವಲ್ಪ ಆಹಾರವನ್ನಾದರೂ ತೆಗೆದುಕೊಳ್ಳಿ; ನಿಮ್ಮ ತಲೆಗೂದಲೊಂದೂ ಕೊಂಕಾಗದು" ಎಂದು ಹೇಳಿ ಊಟಮಾಡುವಂತೆ ಪ್ರೋತ್ಸಾಹಿಸಿದನು. [35]ಹೀಗೆ ಹೇಳಿದ ಮೇಲೆ ಪೌಲನು ರೊಟ್ಟಿಯನ್ನು ತೆಗೆದುಕೊಂಡು, ಎಲ್ಲರ ಮುಂದೆ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಿ, ಅದನ್ನು ಮುರಿದು ತಿನ್ನಲಾರಂಭಿಸಿದನು. [36]ಆಗ ಅವರೆಲ್ಲರೂ ಧೈರ್ಯತಂದುಕೊಂಡು ಆಹಾರವನ್ನು ಸೇವಿಸಿದರು. [37]ಹಡಗಿನಲ್ಲಿ ನಾವು ಒಟ್ಟು ಇನ್ನೂರ ಎಪ್ಪತ್ತಾರು ಮಂದಿ ಇದ್ದೆವು. [38]ಪ್ರತಿಯೊಬ್ಬನೂ ಸಾಕಷ್ಟು ತಿಂದ ಮೇಲೆ ಗೋದಿಯನ್ನು ಸಮುದ್ರಕ್ಕೆ ಎಸೆದು ಹಡಗನ್ನು ಹಗುರಗೊಳಿಸಿದರು.

### ನೌಕೆಯ ವಿನಾಶ

39 ಬೆಳಗಾದ ಮೇಲೆ, ದಡವಿರುವ ಕೊಲ್ಲಿಯೊಂದು ನಾವಿಕರಿಗೆ ಕಾಣಿಸಿತು. ಅದು ಯಾವ ತೀರವೆಂದು ಗುರುತು ಹಚ್ಚಲು ಅವರಿಂದಾಗಲಿಲ್ಲ. ಆದರೂ ಹಡಗನ್ನು ಸಾಧ್ಯವಾದರೆ ಆ ದಡಕ್ಕೆ ಮುಟ್ಟಿಸಬೇಕೆಂದು ಯೋಚಿಸಿದರು. [40]ಎಂದೇ ಹಗ್ಗಗಳನ್ನು ಕತ್ತರಿಸಿ ಲಂಗರುಗಳನ್ನು ಸಮುದ್ರದಲ್ಲೇ ಮುಳುಗಲೆಂದು ಬಿಟ್ಟರು. ಚುಕ್ಕಾಣಿಗಳಿಗೆ ಕಟ್ಟಲಾದ ಹಗ್ಗಗಳನ್ನು ಬಿಚ್ಚಿದರು. ಅನಂತರ ಹಾಯಿಯನ್ನು ಗಾಳಿಗೆ ಎತ್ತಿ ಕಟ್ಟಿ ಹಡಗನ್ನು ದಡದತ್ತ ಚಲಿಸಬಿಟ್ಟರು. [41]ಆದರೆ ಮಧ್ಯದಲ್ಲಿ ಹಡಗು ಮರಳು ದಿಬ್ಬಕ್ಕೆ ಢಿಕ್ಕಿಹೊಡೆದು ನೆಲ ಹತ್ತಿತ್ತು. ಹಡಗಿನ ಮುಂಭಾಗ ದಿಣ್ಣೆಗೆ ಸಿಲುಕಿ ಅಲ್ಲಾಡದೆ ನಿಂತಿತು; ಹಿಂಭಾಗ ಹುಚ್ಚು ಅಲೆಗಳ ಹೊಡೆತಕ್ಕೆ ಸಿಕ್ಕಿ ತುಂಡು ತುಂಡಾಯಿತು. [42]ಕೈದಿಗಳಲ್ಲಿ ಯಾರೂ ಈಜಿ ತಲೆತಪ್ಪಿಸಿಕೊಳ್ಳದಂತೆ ಅವರನ್ನು ಕೊಲ್ಲಬೇಕೆಂದು ಸೈನಿಕರು ಆಲೋಚನೆ ಮಾಡಿದರು. [43]ಆದರೆ ಪೌಲನನ್ನು ಕಾಪಾಡಬೇಕೆಂದಿದ್ದ ಶತಾಧಿಪತಿ ಹಾಗೆ ಮಾಡುವುದನ್ನು ತಡೆದನು. ಪ್ರತಿಯಾಗಿ ಈಜು ಬಲ್ಲವರು ಮೊದಲು ಹಡಗಿನಿಂದ ಧುಮುಕಿ ಈಜಿಕೊಂಡು ಹೋಗಬೇಕು ಎಂತಲೂ, [44]ಮಿಕ್ಕವರು ಹಲಗೆಗಳ ಅಥವಾ ಹಡಗಿನ ತುಂಡುಗಳ ಸಹಾಯದಿಂದ ದಡ ಸೇರಬೇಕೆಂತಲೂ ಆಜ್ಞೆಮಾಡಿದನು. ಹೀಗೆ ಎಲ್ಲರೂ ಸುರಕ್ಷಿತವಾಗಿ ದಡವನ್ನು ಸೇರಿದರು.

### ಮಾಲ್ಟ ದ್ವೀಪದಲ್ಲಿ ಪೌಲನ ಅನುಭವ

**28** ನಾವು ಸುರಕ್ಷಿತವಾಗಿ ದಡವನ್ನು ಸೇರಿದ ಮೇಲೆ ಅದು ಮಾಲ್ಟ ದ್ವೀಪವೆಂದು ತಿಳಿದು ಬಂದಿತು. [2]ಅಲ್ಲಿಯ ನಿವಾಸಿಗಳು ನಮಗೆ ವಿಶೇಷ ಸಹಾನುಭೂತಿಯನ್ನು ತೋರಿದರು. ಮಳೆ ಹೊಯ್ದು ಚಳಿಯಾಗುತ್ತಿದ್ದುದರಿಂದ ಅವರು ಬೆಂಕಿಮಾಡಿ ನಮ್ಮೆಲ್ಲರನ್ನು ಬರಮಾಡಿಕೊಂಡರು. [3]ಪೌಲನು ಒಂದು ಹೊರೆ ಕಟ್ಟಿಗೆಯನ್ನು ಕೂಡಿಸಿ ತಂದು ಬೆಂಕಿಯ ಮೇಲೆ ಹಾಕುತ್ತಿದಾಗ ಬೆಂಕಿಯ ಶಾಖಕ್ಕೆ ವಿಷಸರ್ಪವೊಂದು ಹೊರಬಂದು ಅವನ ಕೈಗೆ ಸುತ್ತಿಕೊಂಡಿತು. [4]ದ್ವೀಪದ ನಿವಾಸಿಗಳು ಪೌಲನ ಕೈಯಿಂದ ನೇತಾಡುತ್ತಿರುವ ಹಾವನ್ನು ಕಂಡು "ಇವನೊಬ್ಬ ಕೊಲೆಗಡುಕನೇ ಸರಿ; ಇವನು ಸಮುದ್ರದಿಂದ ತಪ್ಪಿಸಿಕೊಂಡು ಬಂದರೂ ವಿಧಿ ಇವನನ್ನು ಉಳಿಸಲಿಲ್ಲ," ಎಂದು ತಮ್ಮಲ್ಲೇ ಮಾತನಾಡಿಕೊಂಡರು. [5]ಆದರೆ ಪೌಲನು ಹಾವನ್ನು ಬೆಂಕಿಗೆ ಒದರಿಬಿಟ್ಟನು. ಅವನಿಗೆ ಯಾವ ಅಪಾಯವೂ ಆಗಲಿಲ್ಲ. [6]ಆ ಜನರು, "ಈಗ ಅವನ ಮೈ ಊದಿಕೊಳ್ಳತ್ತದೆ; ಈಗಲೇ ಅವನು ಫಕ್ಕನೆ ಸತ್ತುಬೀಳುತ್ತಾನೆ," ಎಂದು ಕಾದಿದ್ದರು. ಎಷ್ಟು ಹೊತ್ತು ಕಾದರೂ ಅವನಿಗೆ ಯಾವ ಹಾನಿಯೂ ಆಗಲಿಲ್ಲ. ಇದನ್ನು ಕಂಡ ಅವರು ತಮ್ಮ ಅಭಿಪ್ರಾಯವನ್ನು ಬದಲಿಸಿದರು. "ಇವನೊಬ್ಬ ದೇವರು," ಎಂದುಕೊಂಡರು.

7 ಆ ದ್ವೀಪದ ಮುಖ್ಯಸ್ಥನಾದ ಪೊಪ್ಲಿಯನ ಹೊಲಗದ್ದೆಗಳು ನಾವಿದ್ದ ಸ್ಥಳದ ಪಕ್ಕದಲ್ಲೇ ಇದ್ದವು.
ಅವನು ನಮ್ಮನ್ನು ಸ್ವಾಗತಿಸಿ ಮೂರು ದಿನಗಳವರೆಗೆ ಆದರದಿಂದ ಸತ್ಕರಿಸಿದನು. [8]ಪೊಪ್ಲಿಯನ ತಂದೆ
ಜ್ವರದಿಂದಲೂ ರಕ್ತಬೇಧಿಯಿಂದಲೂ ಹಾಸಿಗೆ ಹಿಡಿದಿದ್ದನು. ಪೌಲನು ಅವನ ಬಳಿಗೆ ಹೋಗಿ, ಪ್ರಾರ್ಥನೆ
ಮಾಡಿ, ತನ್ನ ಕರಗಳನ್ನು ಅವನ ಮೇಲಿಟ್ಟು, ಅವನನ್ನು ಗುಣಪಡಿಸಿದನು. [9]ಇದಾದ ನಂತರ ದ್ವೀಪದಲ್ಲಿದ್ದ
ಮಿಕ್ಕ ರೋಗಿಗಳೂ ಬಂದು ಪೌಲನಿಂದ ಆರೋಗ್ಯವನ್ನು ಪಡೆದರು. [10]ಅವರೆಲ್ಲರು ನಮ್ಮನ್ನು ಹಲವಾರು
ವಿಧದಲ್ಲಿ ಬಹುಮಾನಿಸಿದರು; ಮಾತ್ರವಲ್ಲ, ನಾವು ಅಲ್ಲಿಂದ ನಾಕಾಯಾನವನ್ನು ಮುಂದುವರಿಸಿದಾಗ,
ನಮಗೆ ಅವಶ್ಯವಾದುದೆಲ್ಲವನ್ನು ತಂದು ಹಡಗಿನಲ್ಲಿಟ್ಟರು.

## ಮಾಲ್ಟದಿಂದ ರೋಮಿಗೆ ಪ್ರಯಾಣ

11 ಈಗಾಗಲೇ ಮೂರು ತಿಂಗಳು ಕಳೆದಿದ್ದವು. ಅಲೆಕ್ಸಾಂಡ್ರಿಯಕ್ಕೆ ಸೇರಿದ 'ಅಶ್ವಿನಿ' ಎಂಬ
ಹಡಗೊಂದು ಚಳಿಗಾಲದ ನಿಮಿತ್ತ ಅಲ್ಲಿ ಲಂಗರು ಹಾಕಿತ್ತು. ನಾವು ಅದನ್ನು ಹತ್ತಿ ಪ್ರಯಾಣ
ಮುಂದುವರಿಸಿದೆವು. [12]ಸಿರಾಕೂಸ್ ಎಂಬ ಪಟ್ಟಣವನ್ನು ಸೇರಿ ಅಲ್ಲಿ ಮೂರು ದಿನ ತಂಗಿದೆವು. [13]ಅಲ್ಲಿಂದ
ಮುಂದುವರಿದು ರೇಗಿಯ ಪಟ್ಟಣಕ್ಕೆ ಬಂದೆವು. ಮಾರನೆಯ ದಿನ ತೆಂಕಣಗಾಳಿ ಬೀಸತೊಡಗಿತು. ಎರಡೇ
ದಿನಗಳಲ್ಲಿ ನಾವು ಪುತೋಲಿ ರೇವನ್ನು ಮುಟ್ಟಿದೆವು. [14]ಅಲ್ಲಿ ಕೆಲವು ಕ್ರೈಸ್ತ ಭಕ್ತಾದಿಗಳನ್ನು ಕಂಡೆವು.
ತಮ್ಮೊಡನೆ ಒಂದು ವಾರ ತಂಗಬೇಕೆಂದು ಅವರು ನಮ್ಮನ್ನು ಕೇಳಿಕೊಂಡರು. ತರುವಾಯ ನಾವು ರೋಮಿಗೆ
ಬಂದೆವು. [15]ಅಲ್ಲಿದ್ದ ಕ್ರೈಸ್ತಭಕ್ತಾದಿಗಳು ನಾವು ಬಂದ ವಿಷಯವನ್ನು ಕೇಳಿ ನಮ್ಮನ್ನು ಎದುರುಗೊಳ್ಳಲು
'ಅಪ್ಪಿಯಾ' ಮಾರುಕಟ್ಟೆಗೂ ತ್ರಿಛತ್ರದ ಬಳಿಗೂ ಬಂದರು. ಅವರನ್ನು ಕಂಡದ್ದೇ ಪೌಲನಿಗೆ ಪ್ರೋತ್ಸಾಹ
ಉಂಟಾಯಿತು. ಅವನು ದೇವರಿಗೆ ಸ್ತೋತ್ರ ಸಲ್ಲಿಸಿದನು.

## ರೋಮಿನಲ್ಲಿ ಪೌಲ

16 ನಾವು ರೋಮ್ ನಗರಕ್ಕೆ ಆಗಮಿಸಿದ ಮೇಲೆ, ತನ್ನನ್ನು ಕಾಯುತ್ತಿದ್ದ ಒಬ್ಬ ಸೈನಿಕನೊಂದಿಗೆ
ಪ್ರತ್ಯೇಕವಾಗಿರಲು ಪೌಲನಿಗೆ ಅಪ್ಪಣೆ ಕೊಡಲಾಯಿತು.

17 ಮೂರು ದಿನಗಳ ನಂತರ ಪೌಲನು ಸ್ಥಳೀಯ ಯೆಹೂದ್ಯ ಮುಖಂಡರು ತನ್ನ ಬಳಿಗೆ
ಬರುವಂತೆ ಹೇಳಿಕಳುಹಿಸಿದನು. ಅವರು ಬಂದಾಗ, "ನನ್ನ ಸೋದರ ಇಸ್ರಯೇಲರೇ, ನಾನು ನಮ್ಮ ಜನರಿಗೆ
ವಿರೋಧವಾಗಿಯಾಗಲಿ, ನಮ್ಮ ಪೂರ್ವಜರಿಂದ ಬಂದ ಸಂಪ್ರದಾಯಗಳಿಗೆ ವಿರೋಧವಾಗಿಯಾಗಲಿ,
ಏನನ್ನೂ ಮಾಡಿಲ್ಲ; ಆದರೂ ಜೆರುಸಲೇಮಿನಲ್ಲಿ ನನ್ನನ್ನು ಕೈದಿಯನ್ನಾಗಿಸಿ ರೋಮನರ ಕೈಗೆ
ಒಪ್ಪಿಸಲಾಯಿತು. [18]ಇವರು ನನ್ನನ್ನು ವಿಚಾರಣೆಗೆ ಒಳಪಡಿಸಿದರು. ಮರಣ ದಂಡನೆಗೆ ಗುರಿಮಾಡುವಂಥ
ಅಪರಾಧ ಏನನ್ನೂ ನನ್ನಲ್ಲಿ ಕಾಣಲಿಲ್ಲ. ಈ ಕಾರಣ ನನ್ನನ್ನು ಬಿಡುಗಡೆ ಮಾಡಬೇಕೆಂದಿದ್ದರು. [19]ಆದರೆ
ಯೆಹೂದ್ಯರು ಇದನ್ನು ಪ್ರತಿಭಟಿಸಿದರು. ಆಗ ನಾನು ಚಕ್ರವರ್ತಿಗೇ ಅಪೀಲುಮಾಡಬೇಕಾಯಿತು. ನನ್ನ
ಸ್ವದೇಶಿಯರ ಮೇಲೆ ದೋಷಾರೋಪಣೆ ಮಾಡಬೇಕೆಂದು ನಾನು ಹಾಗೆ ಮಾಡಲಿಲ್ಲ. [20]ಈ
ಕಾರಣದಿಂದಲೇ ನಿಮ್ಮನ್ನು ನೋಡಿ ಮಾತನಾಡಲು ಬಯಸಿದೆ. ಇಸ್ರಯೇಲ್ ಜನತೆ ಯಾರ ನಿರೀಕ್ಷೆಯಲ್ಲಿ
ಇದೆಯೋ ಅವರ ನಿಮಿತ್ತವೇ ನಾನು ಹೀಗೆ ಸರಪಣಿಗಳಿಂದ ಬಂಧಿತನಾಗಿದ್ದೇನೆ," ಎಂದನು. [21]ಅದಕ್ಕೆ
ಅವರು, "ನಿನ್ನ ವಿಷಯವಾಗಿ ಜುದೇಯದಿಂದ ಯಾವ ಪತ್ರವೂ ಬಂದಿಲ್ಲ. ಅಲ್ಲಿಂದ ಬಂದ ಸಹೋದರರು
ಯಾರೂ ಏನನ್ನೂ ವರದಿ ಮಾಡಿಲ್ಲ, ಯಾವ ದೋಷಾರೋಪಣೆಯನ್ನೂ ತಂದಿಲ್ಲ. [22]ಆದರೆ ನೀನು
ಅನುಸರಿಸುವ ಪಂಥದ ವಿರುದ್ಧ ಎಲ್ಲೆಲ್ಲೂ ಜನರು ಮಾತನಾಡುತ್ತಿದ್ದಾರೆಂದು ಬಲ್ಲೆವು. ಆದುದರಿಂದ ನಿನ್ನ
ಅಭಿಪ್ರಾಯವನ್ನು ನಿನ್ನ ಬಾಯಿಂದಲೇ ಕೇಳಬಯಸುತ್ತೇವೆ," ಎಂದರು.

23 ಅದಕ್ಕಾಗಿ ಒಂದು ದಿನವನ್ನು ಗೊತ್ತುಮಾಡಿದರು. ಅಂದು ಅವರೆಲ್ಲರು ಪೌಲನು
ವಾಸಮಾಡುತ್ತಿದ್ದ ಬಿಡಾರಕ್ಕೆ ಅಧಿಕ ಸಂಖ್ಯೆಯಲ್ಲಿ ಬಂದರು. ಪೌಲನು ಬೆಳಿಗ್ಗೆಯಿಂದ ಸಂಜೆಯವರೆಗೆ
ದೇವರ ಸಾಮ್ರಾಜ್ಯವನ್ನು ಕುರಿತ ಶುಭಸಂದೇಶವನ್ನು ವಿವರಿಸಿದನು; ಮೋಶೆಯ ಧರ್ಮಶಾಸ್ತ್ರದ ಹಾಗೂ
ಪ್ರವಾದಿಗಳ ಗ್ರಂಥಗಳ ಆಧಾರದ ಮೇಲೆ ಯೇಸುಸ್ವಾಮಿಯ ವಿಷಯವಾಗಿ ಅವರನ್ನು ಮನವೊಲಿಸಲು

ಪ್ರಯತ್ನಿಸಿದನು. [24]ಅವನು ಹೇಳಿದ್ದು ಕೆಲವರಿಗೆ ಮನದಟ್ಟಾಯಿತು; ಮತ್ತೆ ಕೆಲವರು ನಂಬದೆ ಹೋದರು.
[25]ಹೀಗೆ ಅವರು ತಮ್ಮತಮ್ಮೊಳಗೆ ಭಿನ್ನಾಭಿಪ್ರಾಯವುಳ್ಳವರಾಗಿ ಅಲ್ಲಿಂದ ಹೊರಟು ಹೋಗಲಾರಂಭಿಸಿದರು. ಆಗ ಪೌಲನು ಹೀಗೆಂದನು: "ಪವಿತ್ರಾತ್ಮ ಅವರು ಯೆಶಾಯ ಪ್ರವಾದಿಯ ಮುಖಾಂತರ ನಿಮ್ಮ ಪೂರ್ವಜರಿಗೆ ಎಷ್ಟೊಂದು ವಿಹಿತವಾಗಿ ಹೇಳಿದ್ದಾರೆ:

26 'ನೀನು ಆ ಜನರ ಬಳಿಗೆ ಹೋಗಿ ಅವರಿಗೆ
ಇಂತೆನ್ನು:
ಕೇಳಿ ಕೇಳಿಯೂ ಗ್ರಹಿಸರು,
ನೋಡಿ ನೋಡಿಯೂ ಕಾಣರೀ ಜನರು.
27 ಇವರ ಹೃದಯ ಕಲ್ಲಾಗಿದೆ,
ಕಿವಿ ಮಂದವಾಗಿದೆ,
ಕಣ್ಣು ಮಬ್ಬಾಗಿದೆ.
ಇಲ್ಲದಿರೆ ಇವರ ಕಣ್ಣು ಕಾಣುತ್ತಾ,
ಕಿವಿ ಕೇಳುತ್ತಾ ಹೃದಯ ಗ್ರಹಿಸುತ್ತಾ,
ನನ್ನತ್ತ ತಿರುಗುತ್ತಿದ್ದರು.
ದೇವರಾದ ನಾನಿವರನ್ನು ಸ್ವಸ್ಥಪಡಿಸುತ್ತಿದ್ದೆ.'

28 ಎಂದೇ ದೇವರಿಂದ ಬಂದಿರುವ ಜೀವ ಉದ್ಧಾರಕ ಸಂದೇಶವನ್ನು ಯೆಹೂದ್ಯೇತರರಿಗೆ ಕಳುಹಿಸಲಾಗಿದೆ. ಅವರು ಅದಕ್ಕೆ ಕಿವಿಗೊಡುವರು. ಇದು ನಿಮಗೆ ತಿಳಿದಿರಲಿ."

29 ಈ ಮಾತುಗಳನ್ನು ಕೇಳಿ ಆದಮೇಲೆ ಯೆಹೂದ್ಯರು ತಮ್ಮತಮ್ಮೊಳಗೆ ತೀವ್ರವಾಗಿ ಚರ್ಚಿಸುತ್ತಾ ಹೊರಟುಹೋದರು.

30 ಪೌಲನು ತಾನು ಬಾಡಿಗೆಗೆ ತೆಗೆದುಕೊಂಡಿದ್ದ ಮನೆಯಲ್ಲಿ ಎರಡು ವರ್ಷಗಳವರೆಗೆ ವಾಸವಾಗಿದ್ದನು. ತನ್ನನ್ನು ನೋಡಲು ಬಂದವರನ್ನೆಲ್ಲಾ ಆದರದಿಂದ ಬರಮಾಡಿಕೊಳ್ಳುತ್ತಿದ್ದನು.
[31]ಭಯಭೀತಿಯಿಲ್ಲದೆ ಹಾಗೂ ಅಡ್ಡಿಆತಂಕವಿಲ್ಲದೆ ದೇವರ ಸಾಮ್ರಾಜ್ಯವನ್ನು ಕುರಿತು ಪ್ರಬೋಧಿಸುತ್ತಿದ್ದನು; ಸ್ವಾಮಿ ಯೇಸುಕ್ರಿಸ್ತರ ವಿಷಯವಾಗಿ ಉಪದೇಶಿಸುತ್ತಿದ್ದನು.